ಸಂಪುಟ: 05 ಸಂಚಿಕೆ: 152 ಪುಟಗಳು: 08 ಗುರುವಾರ 14 ಆಗಸ್ಟ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ಸೋತೆ ಎಂದು ನೀ ಮುಂದಿಟ್ಟ ಹೆಜ್ಜೆ ಹಿಂದಿಡಬೇಡ.. ಏಕೆಂದರೆ ಯಾರಿಗೆ ಗೊತ್ತು ಆ ಹೆಜ್ಜೆ ನಿನ್ನ ಇತಿಹಾಸವನ್ನೇ ಸೃಷ್ಟಿ ಮಾಡುವ ಹೆಜ್ಜೆಯಾಗಿರಬಹುದು

# ಉದಯ ವಾಹಿನಿ

ರಾಜ್ಯದ ಪವಿತ್ರ ಕ್ಷೇತ್ರ ಧರ್ಮಸ್ಥಳದ ವಿರುದ್ಧ ವಿನಾಕಾರಣ ಅಪಪ್ರಚಾರ ನಡೆಸಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿ, ಧರ್ಮಸ್ಥಳದ ಭಕ್ತರು ರಾಜ್ಯಾದ್ಯಂತ ಬೃಹತ್ ಪ್ರತಿಭಟನೆ ನಡೆಸುತ್ತಿದ್ದಾರೆ. ಶ್ರೀ ಕ್ಷೇತ್ರ ಧರ್ಮಸ್ಥಳ, ಶ್ರೀ ಮಂಜುನಾಥೇಶ್ವರ ದೇವಸ್ಥಾನದ ವಿರುದ್ಧ ವಿನಾಕಾರಣ ಅಪಪ್ರಚಾರ ನಡೆಸಲಾಗುತ್ತಿದೆ. ಅಭಿವ್ಯಕ್ತಿ ಸ್ವಾತಂತ್ರ್ಯದ ನೆಪದಲ್ಲಿ ಕಿಡಿಗೇಡಿಗಳು ವ್ಯವಸ್ಥಿತವಾಗಿ ಷಡ್ಯಂತ್ರ ರೂಪಿಸಿ ಅಪಪ್ರಚಾರ ಮಾಡುತ್ತಿದ್ದು ಧಾರ್ಮಿಕ ನಂಬಿಕೆ, ಸಾಮಾಜಿಕ ಸಾಮರಸ್ಯ ಹಾಗು ಶಾಂತಿ ಕೆಡಿಸುತ್ತಿದ್ದಾರೆ. ಇಂಥವರ ವಿರುದ್ಧ ದೂರು ದಾಖಲಿಸಿಕೊಂಡು ಸೂಕ್ತ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂಬ ಒತ್ತಾಯ ಎಲ್ಲೆಡೆಯಿಂದ ಕೇಳಿಬರುತ್ತಿದೆ.

## ಮಾನನಷ್ಟ ಮೊಕದ್ದಮೆ: ಶಾಸಕ ಸುನಿಲ್ ಕುಮಾರ್ ಆರೋಪ ಮುಕ್ತ

• ಉದಯವಾಹಿನಿ, ಬೆಂಗಳೂರು

ಮಾನನಷ್ಟ ಆರೋಪ ಪ್ರಕರಣದಲ್ಲಿ ಶಾಸಕ ವಿ.ಸುನಿಲ್ ಕುಮಾರ್ ಅವರನ್ನು ಜನಪ್ರತಿನಿಧಿಗಳ ವಿಶೇಷ ಮ್ಯಾಜಿಸ್ಟ್ರೇಟ್ ನ್ಯಾಯಾಲಯ ಅಪರಾಧ ಮುಕ್ತಗೊಳಿಸಿ ಆದೇಶಿಸಿದೆ. ಸುನಿಲ್ ಕುಮಾರ್ ವಿರುದ್ಧ 'ಶ್ರೀರಾಮ ಸೇನೆ' ರಾಷ್ಟ್ರೀಯ ಅಧ್ಯಕ್ಷ ಪ್ರಮೋದ್ ಮುತಾಲಿಕ್ ದಾಖಲಿಸಿದ್ದ ಮಾನನಷ್ಟ ಮೊಕದ್ದಮೆ ವಿಚಾರಣೆ ನಡೆಸಿದ, 'ಶಾಸಕರು-ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ಮ್ಯಾಜಿಸ್ಟ್ರೇಟ್ ನ್ಯಾಯಾಲಯ ಈ ಕುರಿತಂತೆ ಆದೇಶಿಸಿದೆ. ಸುನಿಲ್ ಕುಮಾರ್ ಪರ ಹೈಕೋರ್ಟ್ ವಕೀಲ ಬಿ.ವಿನೋದ್ ಕುಮಾರ್ ವಾದ ಮಂಡಿಸಿದ್ದರು. ಕಾರ್ಕಳ ವಿಧಾನಸಭಾ ಕ್ಷೇತ್ರಕ್ಕೆ 2023ರಲ್ಲಿ ನಡೆದಿದ್ದ ಚುನಾವಣೆಯಲ್ಲಿ ವಿ.ಸುನಿಲ್ ಕುಮಾರ್ ಬಿಜೆಪಿಯಿಂದ ಸ್ಪರ್ಧಿಸಿ ಗೆಲುವು ಸಾಧಿಸಿದ್ದಾರೆ. ಅಂದು ತಮ್ಮ ಗೆಲುವಿನ ವಿಜಯೋತ್ಸವ ಆಚರಿಸುವಾಗ ಸುನಿಲ್ ಕುಮಾರ್ ಭಾಷಣ ಮಾಡಿದ್ದರು. ಈ ಭಾಷಣದಲ್ಲಿ 'ನನ್ನ ವಿರುದ್ಧ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಪ್ರಮೋದ್ ಮುತಾಲಿಕ್ ಒಬ್ಬ ಡೀಲ್ ಮಾಸ್ಟರ್. ಹಣ ಪಡೆದು ಸ್ಪರ್ಧೆ ಮಾಡುತ್ತಾರೆ ಎಂಬ ಹೇಳಿಕೆ ನೀಡಿದ್ದಾರೆ' ಎಂದು ಆರೋಪಿಸಿ ಪ್ರಮೋದ್ ಮುತಾಲಿಕ್ ಖಾಸಗಿ ದೂರು ಸಲ್ಲಿಸಿ ಮಾನನಷ್ಟ ಮೊಕದ್ದಮೆ ಹೂಡಿದ್ದರು.

## ರಸಗೊಬ್ಬರ ಕೊರತೆಗೆ ಕೇಂದ್ರವೇ ಕಾರಣ: ಕೃಷಿ ಸಚಿವ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸರ್ಕಾರದಿಂದ ಕರ್ನಾಟಕ ರಾಜ್ಯಕ್ಕೆ ಆಗಸ್ಟ್‌ವರೆಗೆ ಪೂರೈಕೆ ಆಗಬೇಕಾದ ಯೂರಿಯಾ ರಸಗೊಬ್ಬರ ಪ್ರಮಾಣದಲ್ಲಿ 2.74 ಲಕ್ಷ ಟನ್ ಬಾಕಿಯಿದ್ದು, ಕೇಂದ್ರದಿಂದ ಪೂರೈಕೆಯಲ್ಲಿ ಆಗಿರುವ ಕೊರತೆಯಿಂದ ಸಮಸ್ಯೆಯಾಗಿದೆ' ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಹೇಳಿದರು. ರಸಗೊಬ್ಬರ ಕೊರತೆ ಕುರಿತು ವಿಧಾನಸಭೆಯಲ್ಲಿ ನಡೆದ ಚರ್ಚೆಗೆ ಉತ್ತರಿಸಿದ ಕೃಷಿ ಸಚಿವರು, ರೈತರನ್ನು ಬಿಜೆಪಿಯವರು ಪ್ರಚೋದಿಸಿ ರಾಜಕಾರಣ ಮಾಡಿದ್ದರಿಂದ ಸಮಸ್ಯೆ ಉಲ್ಬಣಿಸಿದೆ' ಎಂದು ಆರೋಪಿಸಿದರು. ಆಗ ಬಿಜೆಪಿ, ಜೆಡಿಎಸ್ ಸದಸ್ಯರು, ಕೃಷಿ ಇಲಾಖೆಯ ಪೂರ್ವ ಸಿದ್ಧತೆ ಕೊರತೆ, ಜೊತೆಗೆ ನಿರ್ವಹಣೆಯಲ್ಲಿನ ವೈಫಲ್ಯದಿಂದ ರಸಗೊಬ್ಬರ ಪೂರೈಕೆಯಲ್ಲಿ ವ್ಯತ್ಯಯವಾಗಿ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ' ಎಂದು ದೂರಿ ಸಭಾತ್ಯಾಗ ಮಾಡಿದರು. ರಸಗೊಬ್ಬರ ಕೊರತೆ ಆಗದಂತೆ ಕೃಷಿ ಇಲಾಖೆ ಕೈಗೊಂಡಿರುವ ಕ್ರಮಗಳ ಬಗ್ಗೆ ವಿವರಿಸಿದ ಚಲುವರಾಯಸ್ವಾಮಿ, 'ಕೇಂದ್ರ ಸರ್ಕಾರದಿಂದ ಸಕಾಲದಲ್ಲಿ ರಸಗೊಬ್ಬರ ಪೂರೈಕೆಗೆ ಒತ್ತಡ ಹೇರಿ, ನೆರವಾಗಬೇಕು' ಎಂದೂ ಮನವಿ ಮಾಡಿದರು.

## ಒಳಮೀಸಲಾತಿಗೆ ಉಪ ಸಮಿತಿ ಬೇಡ: ಆಂಜನೇಯ ಆಗ್ರಹ

• ಉದಯವಾಹಿನಿ, ಬೆಂಗಳೂರು

ಒಳಮೀಸಲಾತಿ ಕುರಿತು ಕೆಲವರು ಅನಗತ್ಯವಾಗಿ ಗೊಂದಲ ಹುಟ್ಟುಹಾಕುತ್ತಿದ್ದಾರೆ. ಇವರ ಒತ್ತಡಕ್ಕೆ ಮನ್ನಣೆ ನೀಡಬಾರದು. ನ್ಯಾ. ನಾಗಮೋಹನದಾಸ್ ವರದಿ ಬಗ್ಗೆ ಸಚಿವ ಸಂಪುಟ ಉಪ ಸಮಿತಿ ರಚನೆ ಮಾಡಬಾರದು' ಎಂದು ಮಾಜಿ ಸಚಿವ ಎಚ್.ಆಂಜನೇಯ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಆಗ್ರಹಿಸಿದ್ದಾರೆ. ಯಾವುದೇ ಗೊಂದಲಕ್ಕೆ ಅಸ್ಪದ ಇಲ್ಲದಂತೆ ಆ.16ರಂದು ಒಳಮೀಸಲಾತಿ ಜಾರಿ ಮಾಡಬೇಕು. ವರದಿ ಜಾರಿ ಮಾಡದೇ ಇದ್ದರೆ ಮಾದಿಗ ಸಮುದಾಯ ಆತಂಕಕ್ಕೆ ಒಳಗಾಗಲಿದೆ. ಇದನ್ನು ಬೇರೆಯವರು ರಾಜಕೀಯ ಲಾಭಕ್ಕೆ ಬಳಸಿಕೊಳ್ಳುವ ಸಾಧ್ಯತೆ ಇದೆ ಎಂದು ಅವರು ಎಚ್ಚರಿಸಿದ್ದಾರೆ.

ಪರಿಶಿಷ್ಟ ಜಾತಿ ಗುಂಪಿನಲ್ಲಿ 101 ಜಾತಿಗಳ ಮಧ್ಯೆ ಒಳಮೀಸಲಾತಿ ಪಡೆಯಲು ಇನ್ನೂ ಅಶಕ್ತರಾಗಿರುವ ಮಾದಿಗ ಸಮುದಾಯದವರು ಒಳಮೀಸಲಾತಿ ಜಾರಿ ಹೋರಾಟ ಹುಟ್ಟು ಹಾಕಿದರು. ಈಗ ಮೀಸಲಾತಿ ವರ್ಗೀಕರಣ ಆಗುತ್ತಿರುವ ವೇಳೆ ಅನಗತ್ಯ ಗೊಂದಲವನ್ನುಂಟು ಮಾಡಲಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

## ಕೊಪ್ಪಳದ ಗವಿಸಿದ್ದಪ್ಪ ಹತ್ಯೆ ಪ್ರಕರಣ ಎನ್‌ಐಎಗೆ ವಹಿಸಲು ಬಿಜೆಪಿ ಆಗ್ರಹ

• ಉದಯವಾಹಿನಿ, ಬೆಂಗಳೂರು

ಕೊಪ್ಪಳದಲ್ಲಿ ವಾಲ್ಮೀಕಿ ಸಮಾಜದ ಯುವಕ ಗವಿ ಸಿದ್ದಪ್ಪ ಅವರನ್ನು ಹತ್ಯೆ ಮಾಡಿದ ಪ್ರಕರಣವನ್ನು ಎನ್‌ಐಎಗೆ ಒಪ್ಪಿಸುವಂತೆ ಬಿಜೆಪಿ ಶಾಸಕ ಬಿ.ವೈ.ವಿಜಯೇಂದ್ರ ಅವರು ಆಗ್ರಹಿಸಿದರು. ಶೂನ್ಯವೇಳೆಯಲ್ಲಿ ಈ ವಿಷಯ ಪ್ರಸ್ತಾಪಿಸಿದ ಅವರು, ಮುಸ್ಲಿಂ ಯುವತಿಯನ್ನು ಪ್ರೀತಿಸಿದ ಎಂಬ ಕಾರಣಕ್ಕೆ ಗವಿ ಸಿದ್ದಪ್ಪ ಅವರನ್ನು ಮಚ್ಚಿನಿಂದ ಕೊಚ್ಚಿ ಕೊಲೆ ಮಾಡಲಾಗಿದೆ ಎಂದು ಹೇಳಿದರು. ಸರ್ಕಾರ ತಕ್ಷಣವೇ ಉತ್ತರ ನೀಡಬೇಕು ಎಂದು ಬಿಜೆಪಿ ಮತ್ತು ಜೆಡಿಎಸ್ ಶಾಸಕರು ಒಕ್ಕೊರಲಿನಿಂದ ಆಗ್ರಹಿಸಿದರು. ಕೊಲೆಗಾರರು ಕೊಲೆ ಮಾಡುವುದಕ್ಕೂ ಮೊದಲೇ ಇನ್‌ಸ್ಟಾಗ್ರಾಂನಲ್ಲಿ ಕೊಲೆಯ ಬೆದರಿಕೆ ಹಾಕಿದ್ದರು. ಆದರೆ, ಪೊಲೀಸರು ಯಾವುದೇ ಕ್ರಮ ತೆಗೆದುಕೊಳ್ಳಲಿಲ್ಲ. ಗವಿಸಿದ್ದಪ್ಪ ಅವರದು ಬಡ ಕುಟುಂಬ. ಕೂಲಿ ಕೆಲಸ ಮಾಡುತ್ತಿದ್ದಾರೆ. ಆ ಕುಟುಂಬಕ್ಕೆ 50 ಲಕ್ಷ ಪರಿಹಾರ ನೀಡಬೇಕು. ಇವರ ಕುಟುಂಬದ ಒಬ್ಬ ವ್ಯಕ್ತಿಗೆ ಸರ್ಕಾರಿ ಉದ್ಯೋಗ ನೀಡಬೇಕು ಎಂದು ಒತ್ತಾಯಿಸಿದರು.

## ಧರ್ಮಸ್ಥಳದ ವಿರುದ್ಧ ಅಪಪ್ರಚಾರ
# ರಾಜ್ಯಾದ್ಯಂತ ಪ್ರತಿಭಟನೆ

**ಕಿಡಿಗೇಡಿಗಳ ವಿರುದ್ಧ ಕಠಿಣ ಕಾನೂನು ಕ್ರಮ**

# ಧರ್ಮಸ್ಥಳ ಕ್ಷೇತ್ರಕ್ಕೆ ಚ್ಯುತಿ
# ಸುಳ್ಳು ಬುರುಡೆಗಳನ್ನು ಬಂಧಿಸಿ

## ವಿಧಾನಸೌಧದಲ್ಲಿ ಹೆಣ ಇದೆ ಅಂದ್ರೆ ಅಗೆಯುತ್ತಾರಾ..?
# ಭುಗಿಲೆದ್ದ ಭಕ್ತರ ಆಕ್ರೋಶ





1 ಗದಗ ಜಿಲ್ಲೆಯಲ್ಲೂ ಆಕ್ರೋಶ

2 ಧರ್ಮಸ್ಥಳದ ಅಪಪ್ರಚಾರ ಖಂಡಿಸಿ ರಾಜ್ಯಾದ್ಯಂತ ಪ್ರತಿಭಟನೆ, ತೀವ್ರ ಆಕ್ರೋಶ

3 ಧರ್ಮಸ್ಥಳ ಪರ ಪ್ರತಿಭಟನೆಯಲ್ಲಿ ಮುಸ್ಲಿಂ ಮಹಿಳೆಯರೂ ಭಾಗಿ; ಎಲ್ಲೆಡೆ ಮೊಳಗುತ್ತಿದೆ ಪ್ರತಿಭಟನೆಯ ಕೂಗು

**ಸಾವಿರಾರು ಭಕ್ತರು ಬೀದಿಗಳಿದು ಪ್ರತಿಭಟನೆ**

• ಉದಯವಾಹಿನಿ, ಬೆಂಗಳೂರು

ಬೆಳಗಾವಿಯಲ್ಲಿಂದು ನೂರಾರು ಭಕ್ತರು ಬೀದಿಗಿಳಿದು ಬೃಹತ್ ಪ್ರತಿಭಟಿಸಿದರು. ಧರ್ಮಸ್ಥಳದ ಅಪಪ್ರಚಾರ ಮಾಡುತ್ತಿರುವವರ ವಿರುದ್ಧ ತನಿಖೆಗೆ ಮತ್ತೊಂದು ವಿಶೇಷ ತನಿಖಾ ದಳ (ಎಸ್‌ಐಟಿ) ರಚಿಸುವಂತೆ ಸರ್ಕಾರವನ್ನು ಆಗ್ರಹಿಸಿದರು. ಶ್ರೀ ಕ್ಷೇತ್ರ ಧರ್ಮಸ್ಥಳ ಅಭಿಮಾನಿಗಳ ವೇದಿಕೆ ಹೆಸರಿನಲ್ಲಿ ಪ್ರತಿಭಟಿಸಿದ ಸಾರ್ವಜನಿಕರು, ನಗರದ ರಾಣಿ ಚನ್ನಮ್ಮ ವೃತ್ತದಲ್ಲಿ ಮಾನವ ಸರಪಳಿ ರಚಿಸಿ ತೀವ್ರ ಆಕ್ರೋಶ ಹೊರಹಾಕಿದರು. ಪ್ರತಿಭಟನೆಗೆ ಹಲವು ಸ್ವಾಮೀಜಿಗಳು, ಹಿಂದೂಪರ ಸಂಘಟನೆಗಳು ಸಾಥ್ ಕೊಟ್ಟರು.

**ಧರ್ಮಸ್ಥಳದ ಪರ ದನಿ ಎತ್ತಿದ ಮುಸ್ಲಿಂ ಮಹಿಳೆಯರು:** ಪ್ರತಿಭಟನೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಭಾಗಿಯಾಗಿದ್ದರು. ಕೆಲವು ಮುಸ್ಲಿಂ ಮಹಿಳೆಯರೂ ಪಾಲ್ಗೊಂಡು ಧರ್ಮಸ್ಥಳದ ಪರ ಧ್ವನಿ ಎತ್ತಿದರು. ಚನ್ನಮ್ಮ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೂ ಪ್ರತಿಭಟನಾ ಮೆರವಣಿಗೆ ನಡೆಯಿತು. ಧರ್ಮರಕ್ಷಣೆ ನಮ್ಮೆಲ್ಲರ ಹೊಣೆ, ಕ್ಷೇತ್ರದೊಂದಿಗೆ ನಾವಿದ್ದೇವೆ, ಜೈ ಧರ್ಮಸ್ಥಳ, ಜೈ ಮಂಜುನಾಥ ಸ್ವಾಮಿ, ಜೈ ಅಣ್ಣಪ್ಪಸ್ವಾಮಿ ಎಂಬ ಬರಹಗಳಿರುವ ಫಲಕಗಳನ್ನು ಪ್ರದರ್ಶಿಸಿದ ಪ್ರತಿಭಟನಾಕಾರರು, ಶ್ರೀ ಕ್ಷೇತ್ರದ ವಿರುದ್ಧ ಷಡ್ಯಂತ್ರ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು. ಕ್ಷೇತ್ರದ ಭಕ್ತರಾದ ಮಂಜುನಾಥ ನಾಗೋಜಿ ಎಂಬವರು ಮಾಧ್ಯಮಗಳೊಂದಿಗೆ ಮಾತನಾಡಿ, ಶ್ರೀ ಕ್ಷೇತ್ರಕ್ಕೆ 800 ವರ್ಷಗಳ ಇತಿಹಾಸವಿದೆ. ಪ್ರತಿನಿತ್ಯ ಲಕ್ಷಾಂತರ ಭಕ್ತರು ಪವಿತ್ರ ಧರ್ಮಸ್ಥಳಕ್ಕೆ ಬಂದು, ಮಂಜುನಾಥ ದೇವರ ಆಶೀರ್ವಾದ ಪಡೆಯುತ್ತಾರೆ. ಇಂಥ ಸುಕ್ಷೇತ್ರದ ಹೆಸರಿಗೆ ಹಾನಿ ಮಾಡುವ ಕೆಲಸಗಳು ಆಗುತ್ತಿರುವುದು ಸರಿಯಲ್ಲ. ಆಡು ಮುಟ್ಟದ ಸೊಪ್ಪಿಲ್ಲ, ಕುವೆಂಪು ಕೈಯಾಡಿಸದ ಕೃತಿ ಇಲ್ಲ ಎಂಬ ನಾಣ್ಣುಡಿ ಇದೆ. ಸಮಾಜಘಾತುಕ ಶಕ್ತಿಗಳು ಯಾವುದೇ ಸಾಕ್ಷ್ಯಾಧಾರಗಳಿಲ್ಲದೇ ಸಾಮಾಜಿಕ ಜಾಲತಾಣದಲ್ಲಿ ಧರ್ಮಸ್ಥಳದ ಬಗ್ಗೆ ಅಪಪ್ರಚಾರ, ಅವಮಾನ ಮಾಡುತ್ತಿರುವುದು ನಮಗೆ ತೀವ್ರ ನೋವು ತಂದಿದೆ. ಹಾಗಾಗಿ, ಅಂಥವರ ವಿರುದ್ಧ ಕಾನೂನು ಪ್ರಕಾರ ಶಿಕ್ಷೆ ಕೊಡಿಸುವ ಕೆಲಸವನ್ನು ಮುಖ್ಯಮಂತ್ರಿಗಳು ಮಾಡಬೇಕು ಎಂದು ಒತ್ತಾಯಿಸಿದರು. ಅನಾಮಿಕ ವ್ಯಕ್ತಿ ಕೊಟ್ಟ ದೂರಿನ ಆಧಾರದ ಮೇಲೆ ಸರ್ಕಾರ ಎಸ್‌ಐಟಿ ರಚಿಸಿದ್ದು, ತನಿಖೆ ನಡೆಯುತ್ತಿದೆ. ತನಿಖೆಯ ಮಧ್ಯಂತರ ವರದಿ ಇನ್ನೂ ಸಲ್ಲಿಕೆ ಆಗಿಲ್ಲ. ಇಂಥ ಸಂದರ್ಭದಲ್ಲಿ ಧರ್ಮಸ್ಥಳದ ಬಗ್ಗೆ ಜಾಲತಾಣದಲ್ಲಿ ಕೆಲವರು ಅಪಪ್ರಚಾರ ಮಾಡುತ್ತಿರುವುದು ಭಕ್ತರ ಭಾವನೆಗಳಿಗೆ ಧಕ್ಕೆ ಆಗುತ್ತಿದೆ. ಹಾಗಾಗಿ, ಅಪಪ್ರಚಾರ ಮಾಡುತ್ತಿರುವವರ ಹಿನ್ನೆಲೆ, ಸುಳ್ಳು ಆರೋಪ ಮಾಡಲು ಅವರಿಗೆ ಪ್ರಚೋದನೆ ನೀಡುತ್ತಿರುವವರು, ಈ ತಂಡಕ್ಕೆ ಬರುತ್ತಿರುವ ಹಣಕಾಸಿನ ನೆರವಿನ ಬಗ್ಗೆ ಸೂಕ್ತ ತನಿಖೆ ನಡೆಸಲು ಮತ್ತೊಂದು ಎಸ್‌ಐಟಿ ತಂಡ ರಚಿಸಬೇಕು ಎಂದು ಮತ್ತೋರ್ವ ಭಕ್ತರಾದ ಗಂಗಾಧರ ಸೋನಾರ ಎಂಬವರು ಆಗ್ರಹಿಸಿದರು.

**ತುಮಕೂರಿನಲ್ಲಿ ಜೈನ ಸಂಘ, ವಿಶ್ವ ಹಿಂದೂ ಪರಿಷತ್ ಪ್ರತಿಭಟನೆ:** ಅಭಿವ್ಯಕ್ತಿ ಸ್ವಾತಂತ್ರ್ಯದ ನೆಪದಲ್ಲಿ ಕೆಲವು ಕಿಡಿಗೇಡಿಗಳು ವ್ಯವಸ್ಥಿತ ಷಡ್ಯಂತ್ರದಿಂದ ಶ್ರೀಕ್ಷೇತ್ರ ಬಗ್ಗೆ ಅಪಪ್ರಚಾರ ಮಾಡುತ್ತಿದ್ದಾರೆ. ಧಾರ್ಮಿಕ ನಂಬಿಕೆ, ಸಾಮಾಜಿಕ ಸಾಮರಸ್ಯ ಹಾಗು ಶಾಂತಿ ಕೆಡಿಸುತ್ತಿರುವವರ ವಿರುದ್ಧ ದೂರು ದಾಖಲಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ತುಮಕೂರಿನಲ್ಲಿಯೂ ಪ್ರತಿಭಟನೆ ನಡೆಯಿತು. ಜೈನ ಸಂಘ, ವಿಶ್ವ ಹಿಂದೂ ಪರಿಷತ್, ಬಜರಂಗದಳ ಸೇರಿದಂತೆ ವಿವಿಧ ಹಿಂದೂಪರ ಸಂಘಟನೆಗಳು ಬೃಹತ್ ಪ್ರತಿಭಟನೆ ಮೆರವಣಿಗೆ ನಡೆಸಿದವು. ನಗರದ ಟೌನ್ ಹಾಲ್ ವೃತ್ತದಿಂದ ಹೊರಟ ಪ್ರತಿಭಟನಾಕಾರರು, ಪ್ರಮುಖ ರಸ್ತೆಗಳಲ್ಲಿ ಸಾಗಿ ಜಿಲ್ಲಾಧಿಕಾರಿ ಕಚೇರಿಗೆ ತಲುಪಿದರು.

**ಚಿಕ್ಕಮಗಳೂರಿನಲ್ಲೂ ಪ್ರತಿಭಟನೆ**

ಅನಾಮಿಕ ವ್ಯಕ್ತಿಯನ್ನು ಬಳಸಿಕೊಂಡು ಶ್ರೀಕ್ಷೇತ್ರದ ಪಾವಿತ್ರ್ಯತೆಗೆ ಕಳಂಕ ತರಲಾಗುತ್ತಿದೆ ಎಂದು ಆರೋಪಿಸಿ ಚಿಕ್ಕಮಗಳೂರಲ್ಲೂ ಪ್ರತಿಭಟನೆ ನಡೆಯಿತು. 2000 ಸಾವಿರಕ್ಕೂ ಹೆಚ್ಚು ಭಕ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ಮೆರವಣಿಗೆ ಉದ್ದಕ್ಕೂ ಮೈಕಿನಲ್ಲಿ ಓಂ ನಮಃ ಶಿವಾಯ ಭಜಿಸಿ ಆಕ್ರೋಶ ವ್ಯಕ್ತಪಡಿಸಿದರು. 2 ಕಿ.ಮೀ. ಪ್ರತಿಭಟನಾ ಮೆರವಣಿಗೆ ಕೂಡ ನಡೆಸಿದರು. ಸುಳ್ಳಿನ ಮೃತದೇಹದ ಹಿಂದೆ ಧರ್ಮಸ್ಥಳಕ್ಕೆ ಕೆಟ್ಟ ಹೆಸರು ತರುವ ಹುನ್ನಾರ ಆಗಿದ್ದು, ಕುತಂತ್ರಿಗಳ ಷಡ್ಯಂತ್ರಕ್ಕೆ ಸರ್ಕಾರ ಬೆಂಬಲ ನೀಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ತಮಟೆ ಬಾರಿಸಿಕೊಂಡು ಎಂ.ಜಿ.ರಸ್ತೆಯಲ್ಲಿ ಪ್ರತಿಭಟನಾ ಮೆರವಣಿಗೆ ಸಾಗಿದ್ದು, ನೂರಾರು ಮಹಿಳೆಯರು ಭಾಗಿಯಾಗಿದ್ದರು. ಸುಳ್ಳು ಆರೋಪ ಹೊರಿಸುತ್ತಿರುವವರ ಮೇಲೆ ಸೂಕ್ತ ತನಿಖೆಯನ್ನು ಕೈಗೊಳ್ಳಬೇಕೆಂದು ಆಗ್ರಹಿಸಿದರು.

**ಧರ್ಮಸ್ಥಳ ಭಕ್ತರಿಂದ ಬೃಹತ್ ಪ್ರತಿಭಟನೆ**

ಶ್ರೀ ಕ್ಷೇತ್ರ ಧರ್ಮಸ್ಥಳದ ವಿರುದ್ಧ ಸುಮ್ಮನೆ ಅಪಪ್ರಚಾರ ನಡೆಸಲಾಗುತ್ತಿದೆ ಎಂದು ಆರೋಪಿಸಿ ಚಾಮರಾಜನಗರದಲ್ಲಿ ಶ್ರೀ ಧರ್ಮಸ್ಥಳ ಅಭಿಮಾನಿಗಳ ವೇದಿಕೆಯಡಿ ನೂರಾರು ಅಭಿಮಾನಿಗಳು, ಧರ್ಮಸ್ಥಳ ಸ್ವಸಹಾಯ ಸಂಘದ ಸದಸ್ಯರು, ಹಿಂದೂ ಸಂಘಟನೆ ಕಾರ್ಯಕರ್ತರು ಬೃಹತ್ ಪ್ರತಿಭಟನೆ ನಡೆಸಿ ಕಿಡಿ ಕಾರಿದರು. ಚಾಮರಾಜೇಶ್ವರ ದೇವಾಲಯದಿಂದ ಪ್ಲಕಾರ್ಡ್ ಹಿಡಿದು ಡಿಸಿ ಕಚೇರಿವರೆಗೆ ಜನಾಗ್ರಹ ಜಾಥಾ ನಡೆಸಿದ ಜನರು, ಕಿಡಿಗೇಡಿಗಳ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ಹೊರಹಾಕಿದರು. ಭುವನೇಶ್ವರಿ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಘೋಷಣೆ ಕೂಗಿದರು. ಇದೇ ರೀತಿ ಅಗೆಯುತ್ತಾ ಹೋದರೇ ಯಾವಾಗ ಕೊನೆ ಎಂದು ಪ್ರಶ್ನಿಸಿದರು.

**ಅಪಪ್ರಚಾರ ಮಾಡುವವರ ವಿರುದ್ಧ ಕ್ರಮಕ್ಕೆ ಒತ್ತಾಯಿಸಿ ಪ್ರತಿಭಟನೆ**

ಧರ್ಮಸ್ಥಳದ ಪಾವಿತ್ರ್ಯತೆಗೆ ಧಕ್ಕೆ ತರುತ್ತಿರುವ ದುಷ್ಟ ಶಕ್ತಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ, ಕರ್ನಾಟಕ ಸೇನೆ ಪಡೆಯಿಂದ ಹಳೇ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಲಾಯಿತು. ರಾಜ್ಯದ ಪ್ರಮುಖ ಧಾರ್ಮಿಕ ಕೇಂದ್ರ ಧರ್ಮಸ್ಥಳದಲ್ಲಿ ನಡೆಯುತ್ತಿರುವ ಬೆಳವಣಿಗೆಗಳು ರಾಜ್ಯದ ಭಕ್ತರನ್ನು ಕೆರಳಿಸಿದೆ. ನೂರಾರು ಶವಗಳನ್ನು ಹೂಳಲಾಗಿದೆ, ಶವ ಸಂಸ್ಕಾರ ಮಾಡಲಾಗಿದೆ ಎಂದು ಧರ್ಮಸ್ಥಳದಲ್ಲಿರುವ ಶ್ರೀಕ್ಷೇತ್ರ ಮಂಜುನಾಥಸ್ವಾಮಿ ವಿರುದ್ಧ ಅಪಪ್ರಚಾರ ಮಾಡುತ್ತಿರುವುದು ಅತ್ಯಂತ ನೋವಿನ ಸಂಗತಿ ಎಂದು ಪ್ರತಿಭಟನಾಕಾರರು ಕಿಡಿಕಾರಿದರು.

## ಪಂಚಾಯಿತಿಯಲ್ಲಿ ಪಕ್ಷಗಳ ಚಿಹ್ನೆ ಆಧಾರದಲ್ಲಿ ಚುನಾವಣೆಗೆ ಆಗ್ರಹ

• ಉದಯವಾಹಿನಿ, ಬೆಂಗಳೂರು

**ಸಮಿತಿ ರಚನೆಯ ಬಗ್ಗೆ ಚಿಂತನೆ**

ರಾಜಕೀಯ ಪಕ್ಷಗಳ ಚಿಹ್ನೆ ಆಧಾರದಲ್ಲಿ ಪಂಚಾಯಿತಿ ಚುನಾವಣೆಗಳ ನಡೆಸುವ ಸಾಧ್ಯ, ಸಾಧ್ಯತೆಗಳ ಬಗ್ಗೆ ಪರಿಶೀಲನೆ ನಡೆಸಲು ಸಮಿತಿ ರಚನೆ ಬಗ್ಗೆ ಚಿಂತನೆ ನಡೆಸಲಾಗುತ್ತಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ವಿಧಾನ ಪರಿಷತ್ತಿಗೆ ತಿಳಿಸಿದರು.

ಕಾಂಗ್ರೆಸ್ ಸದಸ್ಯ ಎಂ. ಮಂಜುನಾಥ ಭಂಡಾರಿ ಅವರ ಗಮನ ಸೆಳೆಯುವ ಸೂಚನೆಗೆ ಉತ್ತರ ನೀಡಿದ ಅವರು, ರಾಜಕೀಯ ಪಕ್ಷಗಳ ಚಿಹ್ನೆ ಆಧಾರದ ಮೇಲೆ ಚುನಾವಣೆ ನಡೆಸುವುದು ಅಷ್ಟು ಸುಲಭವಲ್ಲ. ಈ ವಿಚಾರದಲ್ಲಿ ಬೇರೆ ರಾಜ್ಯಗಳಲ್ಲಿ ಯಾವ ಪದ್ಧತಿಯಿದೆ ಎಂಬ ಬಗ್ಗೆ ಅಧ್ಯಯನ ಅಗತ್ಯವಿದೆ. ಹಾಗಾಗಿ ಸಮಿತಿ ರಚಿಸುವ ಬಗ್ಗೆ ಸ್ಥಳೀಯ ಸಂಸ್ಥೆಗಳನ್ನು ಪ್ರತಿನಿಧಿಸುವ ಪರಿಷತ್ ಸದಸ್ಯರ ಸಭೆ ಕರೆದು ಚರ್ಚಿಸ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದರು.

ಗ್ರಾಮ ಪಂಚಾಯಿತಿಗಳ ಅವಧಿ 2026ರ ಜನವರಿಗೆ ಮುಕ್ತಾಯವಾಗಲಿದ್ದು, ಅದರ ಜತೆಗೆ ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯಿತಿ ಚುನಾವಣೆಗಳನ್ನು ನಡೆಸಬೇಕೆಂಬುದು ಹಲವು ಸದಸ್ಯರ ಆಗ್ರಹವಾಗಿದೆ. ಆ ಬಗ್ಗೆಯೂ ಪರಿಶೀಲಿಸಲಾಗುವುದು. ಸದ್ಯ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆಗೆ ಯಾವುದೇ ಅಡ್ಡಿ ಇಲ್ಲ. ಮೀಸಲು ನಿಗದಿ ಪ್ರಕ್ರಿಯೆ ಜಾರಿಯಲ್ಲಿದ್ದು,



ಅದು ಎರಡು ತಿಂಗಳಲ್ಲಿ ಮುಕ್ತಾಯವಾಗಲಿದೆ, ಎಂದು ಮಾಹಿತಿ ನೀಡಿದರು. ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯಿತಿಗಳು ಅಸ್ತಿತ್ವದಲ್ಲಿ ಇಲ್ಲದ ಕಾರಣ ಅನುದಾನ ಕಡಿತವಾಗಿದೆ ಎಂಬುದನ್ನು ಮತ್ತು ಅಧಿಕಾರಿಗಳು ಸಾರ್ವಜನಿಕ ಸಮಸ್ಯೆಗಳಿಗೆ ಸ್ಪಂದಿಸುವುದಿಲ್ಲ ಎಂಬುದನ್ನು ನಾನೂ ಸಹ ಒಪ್ಪುತ್ತೇನೆ ಎಂದ ಅವರು, ಪಂಚಾಯತಿ ವ್ಯವಸ್ಥೆಯನ್ನು ಮತ್ತಷ್ಟು ಸರಳೀಕರಣ ಹಾಗೂ ಸಬಲೀಕರಣಗೊಳಿಸಲು ಸರಕಾರ ಬದ್ಧವಾಗಿದೆ,'' ಎಂದು ತಿಳಿಸಿದರು.

**ಮತ್ತೆ ಎಫ್‌ಡಿಗೆ ಮನವಿ:** ಗ್ರಾಮ ಪಂಚಾಯಿತಿ ಸದಸ್ಯರೂ ಸೇರಿದಂತೆ ಸ್ಥಳೀಯ ಸಂಸ್ಥೆಗಳ ಜನಪ್ರತಿನಿಧಿಗಳ ಗೌರವ ಧನ ಹೆಚ್ಚಳ ಕುರಿತ ಪ್ರಸ್ತಾವವನ್ನು ಹಿಂದೆ ಹಣಕಾಸು ಇಲಾಖೆ ತಿರಸ್ಕರಿಸಿತ್ತು. ಎಲ್ಲಾ ಸದಸ್ಯರ ಆಶಯದಂತೆ ಮತ್ತೆ ಹಣಕಾಸು ಇಲಾಖೆಗೆ ಮನವಿ ಸಲ್ಲಿಸಿ ಗೌರವ ಧನ ಹೆಚ್ಚಳಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಭರವಸೆ ನೀಡಿದರು. ಮಂಜುನಾಥ ಭಂಡಾರಿ ಅವರು, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿಗಳಿಗೆ ನಾಲ್ಕು ವರ್ಷಗಳಿಂದ ಜನಪ್ರತಿನಿಧಿಗಳಿಲ್ಲ. ಇದು ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿದೆ. ರಾಜಕೀಯ ಪಕ್ಷಗಳ ಚಿಹ್ನೆ ಆಧಾರದಲ್ಲಿ ಚುನಾವಣೆ ನಡೆಸಬೇಕು ಎಂದು ಆಗ್ರಹಿಸಿದರು. ಅದಕ್ಕೆ ಸದಸ್ಯರಾದ ಡಿ.ಎಸ್. ಅರುಣ್, ಕೆ.ಎಸ್. ನವೀನ್ ಮತ್ತಿತರರು ದನಿಗೂಡಿಸಿದರು.

## ಆಗುವ ಅಪಮಾನ ನೋಡಿಕೊಂಡು ಸುಮ್ಮನಿದ್ದರೆ ನನ್ನಂತಹ ನಾಲಾಯಕ್ ಇನ್ನೊಬ್ಬನಿಲ್ಲ

**■ ನಮ್ಮ ನಾಯಕ ಜಾರ್ಜ್ ಅವರಿಗೆ ಅಪಮಾನವಾದರೆ ಸಹಿಸುವುದಿಲ್ಲ ■ ಡಿಸಿಎಂ ಡಿ.ಕೆ. ಶಿವಕುಮಾರ್ ವಾಗ್ದಾಳಿ**

• ಉದಯವಾಹಿನಿ, ಬೆಂಗಳೂರು

ಕೆ ಜೆ ಜಾರ್ಜ್ ನಮ್ಮ ನಾಯಕರು, ಅವರಿಗೆ ಅಪಮಾನವಾದರೆ ಸಹಿಸುವುದಿಲ್ಲ. ಪಕ್ಷದ ಅಧ್ಯಕ್ಷನಾಗಿ ನಮ್ಮ ನಾಯಕನಿಗೆ ಆಗುವ ಅಪಮಾನ ನೋಡಿಕೊಂಡು ಸುಮ್ಮನಿದ್ದರೆ ನನ್ನಂತಹ ನಾಲಾಯಕ್ ನಾಯಕ ಬೇರೊಬ್ಬನಿರುವುದಿಲ್ಲ'' ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಗುಡುಗಿದರು. ವಿಧಾನಸಭೆ ಕಲಾಪ ವಾಗ್ವಾದ ಬಳಿಕ ಮತ್ತೆ ಆರಂಭವಾದಾಗ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಸದನವನ್ನು ಉದ್ದೇಶಿಸಿ ಬುಧವಾರ ( ಆಗಸ್ಟ್ 13) ಮಾತನಾಡಿದರು.

ಈಗಾಗಲೇ ನಾನು 10 ಚುನಾವಣೆಯನ್ನು ಎದುರಿಸಿದ್ದು 8 ಬಾರಿ ಶಾಸಕನಾಗಿ ಇಲ್ಲಿದ್ದೇನೆ. ರಾಮಕೃಷ್ಣ ಹೆಗಡೆ, ವೀರೇಂದ್ರ ಪಾಟೀಲ್, ದೇವೇಗೌಡರು, ಬೊಮ್ಮಾಯಿ, ಜೆ.ಹೆಚ್ ಪಟೇಲರು, ಯಡಿಯೂರಪ್ಪನವರು, ಎಸ್.ಎಂ ಕೃಷ್ಣ, ಬಂಗಾರಪ್ಪ, ಬಸವಲಿಂಗಪ್ಪ, ಕೆ.ಹೆಚ್ ರಂಗನಾಥ್, ಕೆ.ಹೆಚ್ ಪಾಟೀಲ್ ರಂತಹ ಮೇಧಾವಿಗಳ ಜೊತೆ ಕೆಲಸ ಮಾಡಿದ್ದೇನೆ. ವಿರೋಧ ಪಕ್ಷಗಳಲ್ಲಿ ಎಂ.ಸಿ. ನಾಣಯ್ಯ, ಚಂದ್ರೇಗೌಡರು ಸೇರಿದಂತೆ ಅನೇಕರು ಇದ್ದರು'' ಎಂದು ಡಿಕೆ ಶಿವಕುಮಾರ್ ಸ್ಮರಿಸಿದರು.

**ನಮಗೂ ಬಿಸಿ ರಕ್ತ ಇದೆ :** ನಮಲ್ಲೂ ಬಿಸಿರಕ್ತ ಇದೆ. ಆದರೆಅದನ್ನು ಎಲ್ಲಿ ಉಪಯೋಗಿಸಬೇಕೋ ಅಲ್ಲಿ ಬಳಸಬೇಕು. ಅದನ್ನು ಸದನದ ಹೊರಗೆ ಇಟ್ಟುಕೊಳ್ಳಬೇಕು. ಸಂಸದೀಯ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ



ಕೆಲಸ ಮಾಡುತ್ತಿದ್ದೇವೆ. ನಾನು ಆರಂಭದಲ್ಲಿ ಪದವೀಧರನಲ್ಲ. ನಾನು ಪದವಿ ಪಡೆದಿದ್ದು ನನ್ನ 47ನೇ ವಯಸ್ಸಿಗೆ ಎಂದು ಡಿಕೆ ಶಿವಕುಮಾರ್ ಹೇಳಿದರು.

**ಶಿಕ್ಷಣ ಸಂಸ್ಥೆಗಳು ಇರುವುದು ಸಮಾಜ ಸೇವೆಗೆ ಹೊರತು ಹಣ ಮಾಡಲು ಅಲ್ಲ**

ಇಲ್ಲಿಗೆ ಕೇವಲ ಹಣದ ಹಿನ್ನೆಲೆಯಿಂದ ಬರುವುದಕ್ಕೆ ಆಗುವುದಿಲ್ಲ. ನನ್ನ ಸ್ನೇಹಿತ ಶಿವಳ್ಳಿ ಆಶ್ರಯ ನಿವೇಶನದ ಮನೆಯಲ್ಲಿದ್ದ. ಆತ ಕೂಡ ಈ ಸದನದ ಸದಸ್ಯನಾಗಿದ್ದ. ಚಪ್ಪಲಿ ಹಾಕದೇ ಇರುವವರೂ ಇಲ್ಲಿಗೆ ಬಂದಿದ್ದಾರೆ. ಜನ ನಮ್ಮನ್ನು ಆರಿಸಿ ಈ ಸದನಕ್ಕೆ ಕಳುಹಿಸಿರುವುದು ನಮ್ಮ ಭಾಗ್ಯ. ಇಂತಹ ಸಂದರ್ಭದಲ್ಲಿ ಜನ ನಮ್ಮನ್ನು ನೋಡುತ್ತಿರುತ್ತಾರೆ ಎಂದು ಡಿಸಿಎಂ ಹೇಳಿದರು. ಸ್ಪೀಕರ್ ಅವರು ನ್ಯಾಯಾಧೀಶರ ಸ್ಥಾನದಲ್ಲಿ ಕೂತಿದ್ದು ನೀವು ಯಾರಿಗೆ ಆದರೂ ಕಠಿಣವಾಗಿ ಹೇಳಬಹುದು. ನ್ಯಾಯಧೀಶ ಸ್ಥಾನದಿಂದ ಅನ್ಯಾಯ ಆಗಬಾರದು. ನಾವು ತಪ್ಪು ಮಾಡಿದರೆ ನಮ್ಮನ್ನು ಸಸ್ಪೆಂಡ್ ಮಾಡಿ. ತೊಂದರೆ ಇಲ್ಲ. ಆದರೆ ಯಾರ ಆತ್ಮ ಗೌರವಕ್ಕೂ ಧಕ್ಕೆ ಆಗದಂತೆ ಕಾಪಾಡಿ ಎಂದು ಮನವಿ ಮಾಡುತ್ತೇನೆ ಎಂದು ಡಿಕೆ ಶಿವಕುಮಾರ್ ವಿನಂತಿಸಿದರು.

ನನಗೆ ದೊಡ್ಡ ಶಿಕ್ಷಣ ಹಿನ್ನಲೆ ಇಲ್ಲದಿದ್ದರೂ ಬೇರೆಯವರನ್ನು ನೋಡಿ, ಅನುಭವದಿಂದ ಕಲಿತಿದ್ದೇನೆ. ಅನುಭವದ ಮೇಲೆನಾವು ಇಲ್ಲಿಯವರೆಗೂ ಬಂದಿದ್ದೇವೆ. ಯಾವುದೇ ಮನುಷ್ಯ ತನ್ನ ಸ್ವಾಭಿಮಾನಕ್ಕೆ, ಆತ್ಮಗೌರವಕ್ಕೆ ಧಕ್ಕೆಯಾದಾಗ ಅದನ್ನು ಸಹಿಸುವುದಿಲ್ಲ ಎಂದು ಡಿಕೆ ಶಿವಕುಮಾರ್ ಹೇಳಿದರು.

ಸ್ಮಾರ್ಟ್ ಮೀಟರ್ ವಿಚಾರವಾಗಿ ಮಾತನಾಡಲು ನಿಮಗೆ ಧಮ್, ಯೋಗ್ಯತೆ ಇಲ್ಲ, ನೀವು ಅಸಮರ್ಥ ಎಂದು ಜಾರ್ಜ್ ವಿರುದ್ಧ ಬಿಜೆಪಿಯ ಡಾ. ಸಿಎನ್ ಅಶ್ವಥ್ ನಾರಾಯಣ ವಾಗ್ದಾಳಿ ನಡೆಸಿದ್ದರು. ಇದು, ಡಿಕೆಶಿ ಸಿಟ್ಟಿಗೆ ಕಾರಣವಾಗಿತ್ತು.

**ಪಕ್ಷದ ಅಧ್ಯಕ್ಷನಾಗಿ ನಮ್ಮ ನಾಯಕರ ಪರ ನಿಲ್ಲುವುದು ನನ್ನ ಕರ್ತವ್ಯ:** ನಾನು ಜಾರ್ಜ್ ಅವರ ಕೆಳಗೆ ಕೆಲಸ ಮಾಡಿದ್ದೇನೆ. ಅವರು ಅಧ್ಯಕ್ಷರಾಗಿದ್ದಾಗ ಅವರ ಜೊತೆ ಕೆಲಸ ಮಾಡಿದ್ದೇನೆ. ಅವರು ರಾಜ್ಯಾಧ್ಯಕ್ಷರಾಗಿದ್ದಾಗ ನಾನು ತಾಲ್ಲೂಕು ಅಧ್ಯಕ್ಷನಾಗಿದ್ದೆ. ಅವರು ನಮ್ಮ ನಾಯಕ. ನಾನು ಪಕ್ಷದ ಅಧ್ಯಕ್ಷನಾಗಿ ಅವರ ಪರ ನಿಲ್ಲುವುದು ನನ್ನ ಕರ್ತವ್ಯ. ಹೀಗಾಗಿ ನಾನು ಆವೇಶದಲ್ಲಿ ಮಾತನಾಡಬೇಕಾಯಿತು ಎಂದು ಡಿಕೆ ಶಿವಕುಮಾರ್ ವಿವರಿಸಿದರು. ನಾನು ಆಡಿರುವ ಮಾತುಗಳು ಸರಿಯಾಗಿರಬಹುದು ಅಥವಾ ತಪ್ಪಾಗಿರಬಹುದು.

ನನ್ನ ಆವೇಶ, ಭಾಷೆ ತಪ್ಪಾಗಿರಬಹುದು. ಅದನ್ನು ಸರಿ ಎಂದು ಸಮರ್ಥನೆ ಮಾಡಿಕೊಳ್ಳುವುದಿಲ್ಲ. ಆದರೆ ನಾನು ಕೂಡ ಮನುಷ್ಯ. ಸಾರ್ವಜನಿಕ ಜೀವನದಲ್ಲಿ ನನಗೆ ನನ್ನದೇ ಆದ ಸಾಮರ್ಥ್ಯವಿದೆ. ನನ್ನದೇ ಆದ ಸಂಘಟನೆ ಶಕ್ತಿ, ಮಾತಿನ ಕಲೆ, ಅನುಭವ ಇದೆ ಎಂದು ಡಿಸಿಎಂ ಒತ್ತಿ ಹೇಳಿದರು. ಹಾಗೆಂದ ಮಾತ್ರಕ್ಕೆ ನಾವು ದೊಡ್ಡವರಾಗಿರಲಿ, ಚಿಕ್ಕವರಾಗಿರಲಿ ಯಾರನ್ನೂ ನೋಯಿಸಬಾರದು. ವಿರೋಧ ಪಕ್ಷದಲ್ಲಿರುವವರು ಕೂಡ ತಮ್ಮದೇ ಆದ ಅನುಭವದಲ್ಲಿ ಸಾಧನೆ ಮಾಡಿ ಇಲ್ಲಿಗೆ ಬಂದಿರುತ್ತಾರೆ. ಈ ಸದನಕ್ಕೆ ಬಂದಿರುವ ಪ್ರತಿಯೊಬ್ಬ ಸದಸ್ಯರಿಗೂ ನಾವು ಸೂಕ್ತ ಗೌರವ ನೀಡಲೇಬೇಕು ಎಂದು ಡಿಕೆ ಶಿವಕುಮಾರ್ ಅಭಿಪ್ರಾಯ ಪಟ್ಟರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹10,135/Gram24ct ₹9,290/Gram22ct ಬೆಳ್ಳಿ: ₹115.00/Gram


# ಮನಸೂರೆ ಗೊಂಡ ಶ್ರೀರಾಘವೇಂದ್ರ ವೈಭವ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

ಶ್ರೀ ರಾಘವೇಂದ್ರ ಸ್ವಾಮಿಗಳ 354ನೇ ಆರಾಧನಾ ಮಹೋತ್ಸವದ ಸಂದರ್ಭದಲ್ಲಿ ಶ್ರೀ ರಾಘವೇಂದ್ರ ಚರಿತ್ರೆಯ ನೃತ್ಯ ನಾಟಕವನ್ನು ಪ್ರದರ್ಶಿಸಲಾಯಿತು. ರೇವಣಕರ್ ಸ್ಕೂಲ್ ಆಫ್ ಆರ್ಟ್ಸ್ ನೃತ್ಯ ಗುರು ಮೇಘನಾ ರೇವಣಕರ್ ಅವರ ನೇತೃತ್ವದಲ್ಲಿ ಶ್ರೀರಾಘವೇಂದ್ರ ವೈಭವ ನೃತ್ಯ ರೂಪಕ ಯಶಸ್ವಿಯಾಗಿ ಪ್ರದರ್ಶನ ಗೊಂಡು ಮನಸೂರೆಗೊಂಡಿತು, ಬೆಂಗಳೂರು ಚಾಮರಾಜಪೇಟೆಯ ರಾಘವೇಂದ್ರ ಕಾಲೋನಿಯಲ್ಲಿರುವ ಶ್ರೀಪಾದರಾಜ ಮಠದಲ್ಲಿ ಶ್ರೀ ರಾಘವೇಂದ್ರ ಸ್ವಾಮಿಯ 354ನೇ ಆರಾಧನೆ ಮಹೋತ್ಸವ ಅಂಗವಾಗಿ ನೆಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ನೃತ್ಯ ರೂಪಕ ನಡೆಯಿತು. ಈ ಸಂದರ್ಭದಲ್ಲಿ ಶ್ರೀ ಮಠದ ವ್ಯವಸ್ಥಾಪಕಿ ಭವಾನಿ ರವೀಂದ್ರ, ಫಣಿರಾಜ್, ಸುಧೀಂದ್ರ ರಾವ್ ಅವರು ನೃತ್ಯ ಪ್ರದರ್ಶನ ನೀಡಿದ ನೃತ್ಯ ಗುರು ಮೇಘನಾ ರೇವಣಕರ್ ಹಾಗು ಮಕ್ಕಳಿಗೆ ಅಭಿನಂದನಾ ಪತ್ರ ಮತ್ತು ಪ್ರಶಸ್ತಿ ಫಲಕವನ್ನು ನೀಡಿ ಗೌರವಿಸಿದರು.

# ಶ್ರೀ ರಾಘವೇಂದ್ರ ಗುರುಸಾರ್ವಭೌಮರ 354ನೇ ಆರಾಧನಾ ಮಹೋತ್ಸವ



• **ಉದಯವಾಹಿನಿ, ಬೆಂಗಳೂರು**

ಕಲಿಯುಗ ಕಲ್ಪವೃಕ್ಷ ಶ್ರೀ ರಾಘವೇಂದ್ರ ಗುರುಸಾರ್ವಭೌಮರ 354ನೇ ಆರಾಧನಾ ಮಹೋತ್ಸವದ ಪ್ರಯುಕ್ತ ಸುಬ್ರಹ್ಮಣ್ಯನಗರದ ಸೋಸಲೆ ಶ್ರೀ ವ್ಯಾಸರಾಜ ಮಠದಲ್ಲಿ ಶ್ರೀ ಶಿಶಿರ ಕೆ.ಪಿ. ಅವರು ಹರಿದಾಸ ಝೇಂಕಾರಎಂಬ ಶೀರ್ಷಿಕೆಯಲ್ಲಿ ಹರಿದಾಸರ ಪದಗಳನ್ನು ವಿಶೇಷ ರೀತಿಯಲ್ಲಿ ಪ್ರಸ್ತುತಪಡಿಸಿದರು. ಇವರ ಗಾಯನಕ್ಕೆ ಹಾರ್ಮೋನಿಯಂ ವಾದನದಲ್ಲಿ ಕು|| ಸಂಸ್ಕೃತಿ ಎಸ್. ಬಾಣಾವರ್, ಮೃದಂಗ ವಾದನದಲ್ಲಿ ಶ್ರೀ ಧ್ರುವ ಆಚಾರ್ಯ ಮತ್ತು ತಾಳದಲ್ಲಿ ಕು|| ಇಂಚರ ಎಸ್. ಆರ್. ಸಾಥ್ ನೀಡಿದರು.

# ಆ. 16, 17, 18ರಂದು ರಾಜಭವನ ವೀಕ್ಷಣೆಗೆ ಅವಕಾಶ

• **ಉದಯವಾಹಿನಿ, ಬೆಂಗಳೂರು**

79ನೇ ಸ್ವಾತಂತ್ರ್ಯ ದಿನಾಚರಣೆ ನಿಮಿತ್ತ ಆ. 16, 17, 18ರಂದು ರಾಜಭವನ ವೀಕ್ಷಣೆಗೆ ಸಂಜೆ 6 ರಿಂದ 7.30ರವರೆಗೆ ಸಾರ್ವಜನಿಕರಿಗೆ ಅವಕಾಶ ಕಲ್ಪಿಸಲಾಗಿದೆ. ವೀಕ್ಷಣೆಗೆ ಆಗಮಿಸುವವರು ಸರ್ಕಾರದಿಂದ ನೀಡಿರುವ ಗುರುತಿನ ಕಾರ್ಡ್ ಕಡ್ಡಾಯವಾಗಿ ತರಬೇಕು. ಆವರಣದೊಳಗೆ ವೀಕ್ಷಣೆಗೆ ಅವಕಾಶ ಮಾಡಿ ಕೊಟ್ಟಿರುವ ಸ್ಥಳಗಳನ್ನು ಬಿಟ್ಟು ಬೇರೆಡೆಗೆ ಪ್ರವೇಶಿಸಬಾರದು. ಭದ್ರತಾ ಸಿಬ್ಬಂದಿ ನೀಡುವ ಸೂಚನೆಗಳನ್ನು ಪಾಲಿಸಬೇಕು ಎಂದು ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಆರ್.ಪ್ರಭುಶಂಕರ್ ಸೂಚಿಸಿದ್ದಾರೆ.

# ಸಾರಿಗೆ ನೌಕರರ ಬೇಡಿಕೆ ಈಡೇರಿಸಲು ಆಗ್ರಹ

• **ಉದಯವಾಹಿನಿ, ಬೆಂಗಳೂರು**

ಮುಷ್ಕರದಲ್ಲಿ ಪಾಲ್ಗೊಂಡಿದ್ದಾರೆ ಎಂಬ ಕಾರಣಕ್ಕೆ ಸಾರಿಗೆ ನಿಗಮಗಳು 30,000 ನೌಕರರಿಗೆ ನೀಡಿರುವ ಆಪಾದನಾ ಪತ್ರ ಮತ್ತು ಕಾರಣ ಕೇಳಿರುವ ನೋಟಿಸ್‌ಗಳನ್ನು ಬೇಷರತ್ತಾಗಿ ರದ್ದು ಮಾಡಬೇಕು. ಸಾರಿಗೆ ನೌಕರರ ಬೇಡಿಕೆ ಈಡೇರಿಸಬೇಕು ಎಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ಆಗ್ರಹಿಸಿದೆ. ಹೈಕೋರ್ಟ್‌ನ ನಿರ್ದೇಶನದಂತೆ ಮುಷ್ಕರವನ್ನು ಕೈಬಿಟ್ಟಿದ್ದೇವೆ. ಮುಷ್ಕರ ವಿಫಲವಾಗಿದೆ ಎಂದು ಅಧಿಕಾರಿಗಳು ಭಾವಿಸಿ ನೌಕರರನ್ನು ಅಗೌರವದಿಂದ ನಡೆಸಿಕೊಳ್ಳಬಾರದು. ಮುಷ್ಕರಕ್ಕೂ ಮುಂಚೆ ಅಥವಾ ಮುಷ್ಕರದ ಸಮಯದಲ್ಲಿ ನೌಕರರ ಇಷ್ಟಕ್ಕೆ ವಿರುದ್ಧವಾಗಿ ವರ್ಗಾವಣೆ ಮಾಡಿದ್ದರೆ, ವರ್ಗಾವಣೆ ರದ್ದುಪಡಿಸಬೇಕು ಎಂದು ಒತ್ತಾಯಿಸಿದೆ. ಇತರ ಬೇಡಿಕೆಗಳನ್ನು ಆಡಳಿತ ವರ್ಗದ ಮಟ್ಟದಲ್ಲಿ ಸಂಧಾನ ನಡೆಸಿ ಬಗೆಹರಿಸಬೇಕು ಎಂದು ಕೆಎಸ್‌ಆರ್‌ಟಿಸಿ ಸ್ಟಾಫ್ ವರ್ಕರ್ಸ್‌ರ ಫೆಡರೇಷನ್ ಅಧ್ಯಕ್ಷ ಎಚ್.ವಿ. ಅನಂತಸುಬ್ಬರಾವ್, ಅಖಿಲ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಮಹಾ ಮಂಡಳಿ ಅಧ್ಯಕ್ಷ ಬಿ. ಜಯದೇವರಾಜೇ ಅರಸು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಫೆಡರೇಷನ್ (ಸಿಐಟಿಯು) ಅಧ್ಯಕ್ಷ ಎಚ್.ಡಿ. ರೇವಪ್ಪ, ಕೆಎಸ್‌ಆರ್‌ಟಿಸಿ ಎಸ್‌ಸಿ, ಎಸ್‌ಟಿ ಎಂಪ್ಲಾಯಿಸ್ ಯೂನಿಯನ್ ಅಧ್ಯಕ್ಷ ವೆಂಕಟರಮಣಪ್ಪ, ಪರಿಶಿಷ್ಟ ಜಾತಿ/ಪಂಗಡಗಳ ಅಧಿಕಾರಿಗಳು ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಆರ್. ಮೋಹನ್‌ರಾಜ್, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಸಂಘದ ಅಧ್ಯಕ್ಷ ಜಗದೀಶ್ ಕೆ.ಆರ್.ಆಗ್ರಹಿಸಿದ್ದಾರೆ.

# ಕೆ.ಆರ್. ಮಾರುಕಟ್ಟೆಯಲ್ಲಿ ಸ್ಮಾರ್ಟ್ ಪಾರ್ಕಿಂಗ್: ತಿಂಗಳ ಪಾಸ್‌ಗೆ ಅವಕಾಶ

• **ಉದಯವಾಹಿನಿ, ಬೆಂಗಳೂರು**

ಅಭಿವೃದ್ಧಿ, ಕಾರ್ಯಾಚರಣೆ ಮತ್ತು ನಿರ್ವಹಣೆ ಯೋಜನೆಯಡಿ ಕೆ.ಆರ್. ಮಾರುಕಟ್ಟೆಯಲ್ಲಿ ಸ್ಮಾರ್ಟ್ ಪಾರ್ಕಿಂಗ್ ವ್ಯವಸ್ಥೆಯನ್ನು ಒದಗಿಸಲು ಬಿಬಿಎಂಪಿ ಮುಂದಾಗಿದೆ. ಕೆ.ಆರ್. ಮಾರುಕಟ್ಟೆಯ ಕಟ್ಟಡದ ಬೇಸ್‌ಮೆಂಟ್‌ನಲ್ಲಿ ಒಂದು ಲಕ್ಷ ಚದರ ಅಡಿಯಷ್ಟು ಪ್ರದೇಶದಲ್ಲಿ ಸ್ಮಾರ್ಟ್ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲಾಗುತ್ತಿದ್ದು, ಆ್ಯಪ್ ಅಥವಾ ಪೋರ್ಟಲ್ ಮೂಲಕ ವಾಹನ ಸವಾರರು ಸ್ಥಳವನ್ನು ಕಾಯ್ದಿರಿಸಬಹುದು.

ಚಾಮರಾಜಪೇಟೆ ವಿಧಾನಸಭೆ ಕ್ಷೇತ್ರ ವ್ಯಾಪ್ತಿಯಲ್ಲಿರುವ ಕೆ.ಆರ್. ಮಾರುಕಟ್ಟೆಯಲ್ಲಿರುವ ಕಟ್ಟಡದ ನೆಲಮಹಡಿಯಲ್ಲಿ ಸ್ಮಾರ್ಟ್ ಪಾರ್ಕಿಂಗ್‌ಗಾಗಿ 10 ವರ್ಷಗಳಿಗೆ ರೂ.4.32 ಕೋಟಿ ಮೊತ್ತಕ್ಕೆ ಟೆಂಡರ್ ಆಹ್ವಾನಿಸಲಾಗಿದೆ. ಆಗಸ್ಟ್ 28ರಂದು ಟೆಂಡರ್ ತೆರೆಯಲಾಗುತ್ತಿದೆ. ವಾಹನಗಳು ನಿಲುಗಡೆಗೆ ಬಂದಾಗ ಕ್ಯೂಆರ್ ಕೋಡ್ ಟಿಕೆಟ್ ಅಥವಾ ಅದಕ್ಕೂ ಅತ್ಯುನ್ನತ ವ್ಯವಸ್ಥೆ ಅಳವಡಿಸಿಕೊಳ್ಳಬೇಕು. ಮೊಬೈಲ್ ಆ್ಯಪ್ ಅಥವಾ ಸ್ಮಾರ್ಟ್ ವೆಬ್ ಪೋರ್ಟಲ್ ಮೂಲಕ ಪ್ರೀ ಬುಕಿಂಗ್‌ಗೆ ಅವಕಾಶ ನೀಡಬೇಕು. ತಿಂಗಳ ಪಾಸ್‌ಗಳನ್ನು ನೀಡಬೇಕು. ರಾತ್ರಿ ವೇಳೆ ಪಾರ್ಕಿಂಗ್‌ಗೆ ಪಾಸ್ ನೀಡಬೇಕು. 12 ಗಂಟೆಯಿಂದ 24 ಗಂಟೆಯವರೆಗಿನ ನಿಲುಗಡೆಗೆ ದ್ವಿಚಕ್ರ ವಾಹನಕ್ಕೆ ರೂ.175 ಕಾರಿಗೆ ರೂ.275 ಶುಲ್ಕ ನಿಗದಿಪಡಿಸಲಾಗಿದೆ. 24 ಗಂಟೆಯೂ ಭದ್ರತಾ ಸಿಬ್ಬಂದಿ ಇರಬೇಕು, ಸಿಸಿ ಟಿವಿ ಕ್ಯಾಮೆರಾಗಳನ್ನು ಅಳವಡಿಸಬೇಕು ಎಂಬ ಷರತ್ತು ವಿಧಿಸಲಾಗಿದೆ.

# ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ

## ಅಧಿವೇಶನದಲ್ಲಿ ಸಕ್ರಿಯವಾಗಿ ಭಾಗವಹಿಸಿ, ವಿಪಕ್ಷಗಳ ಸಮರ್ಥವಾಗಿ ಎದುರಿಸಿ; ಸಿಎಂ ಸೂಚನೆ

• **ಉದಯವಾಹಿನಿ, ಬೆಂಗಳೂರು**


ಉದಯವಾಹಿನಿ ಚಿತ್ರ

ವಿಧಾನಮಂಡಲ ಮುಂಗಾರು ಅಧಿವೇಶನದಲ್ಲಿ ಸಕ್ರಿಯವಾಗಿ ಭಾಗವಹಿಸಿ, ವಿರೋಧ ಪಕ್ಷಗಳ ಆಧಾರರಹಿತ ಆರೋಪಗಳು ಹಾಗೂ ಸುಳ್ಳುಗಳನ್ನು ಸಮರ್ಥವಾಗಿ ಎದುರಿಸುವಂತೆ ಪಕ್ಷದ ಶಾಸಕರಿಗೆ ಮುಖ್ಯಮಂತ್ರಿ, ಸಿಎಲ್‌ಪಿ ನಾಯಕ ಸಿದ್ದರಾಮಯ್ಯ ಅವರು ಸೂಚನೆ ನೀಡಿದ್ದಾರೆ.

ನಗರದ ಖಾಸಗಿ ಹೋಟೆಲ್‌ನಲ್ಲಿ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆದಿದ್ದು, ಸಭೆಯಲ್ಲಿ ಮಾಜಿ ಸಚಿವ ಕೆ.ಎನ್. ರಾಜಣ್ಣ ಅವರು ಗೈರು ಹಾಜರಾಗಿದ್ದರು ಎಂದು ತಿಳಿದಬಂದಿದೆ. ಆದರೆ, ಅವರ ಪುತ್ರ, ಎಂಎಲ್‌ಸಿ ರಾಜೇಂದ್ರ, ರಾಜಣ್ಣ ಅವರು ಹಾಜರಾಗಿದ್ದರು ಎಂದು ಮೂಲಗಳು ತಿಳಿಸಿವೆ. ಸಭೆಯಲ್ಲಿ ಶಾಸಕರು ಅಧಿವೇಶನದಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ, ಸರ್ಕಾರದ ನೀತಿಗಳನ್ನು ಸಮರ್ಥಿಸಿಕೊಳ್ಳಲು ಉದ್ದೇಶಿಸಿರುವ ಮಸೂದೆಗಳ ಅಂಗೀಕಾರ ಖಚಿತ ಪಡಿಸಿಕೊಳ್ಳಲು ಸದನದಲ್ಲಿ ಹಾಜರಿರುವಂತೆ ಸಿದ್ದರಾಮಯ್ಯ ಅವರು ಸೂಚಿಸಿದ್ದಾರೆಂದು ತಿಳಿದುಬಂದಿದೆ. ಇತರ ಕಾರ್ಯಕ್ರಮಗಳಿಗೆ ಹಾಜರಾಗುವ ನೆಪದಲ್ಲಿ ಶಾಸಕರು ಸದನಕ್ಕೆ ಗೈರು ಹಾಜರಾಗುವಂತಿಲ್ಲ ಎಂದು ಖಡಕ್ ಸೂಚನೆ ನೀಡಿದ್ದಾರೆಂದು ತಿಳಿದುಬಂದಿದೆ.

ಇದೇ ವೇಳೆ ಜೂನ್ 4 ರಂದು ಎಂ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತ ವಿಚಾರವನ್ನು ಸಿದ್ದರಾಮಯ್ಯ ಅವರು ಉಲ್ಲೇಖಿಸಿದ್ದಾರೆನ್ನಲಾಗಿದೆ. ಬಳಿಕ ನಾನು ಪೊಲೀಸ್ ಆಯುಕ್ತರನ್ನು ವಿಚಾರಿಸಿದರೆ ಆಗ ಅವರು ಸಾವು ಖಚಿತ ಪಡಿಸಿದರು. ಆಗಲೂ ನನಗೆ ಸರಿಯಾದ ಸಾವಿನ ಸಂಖ್ಯೆ ನೀಡಿರಲಿಲ್ಲ. ಹೀಗಾಗಿ ಪೊಲೀಸ್ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಬೇಕಾಯಿತು ಎಂದು ವಿವರಣೆ ನೀಡಿದರು ಎಂದು ಮೂಲಗಳು ತಿಳಿಸಿವೆ.

**ಶಾಸಕರಿಗೆ ಸಿಎಂ ಸಲಹೆ**

ಸಭೆಯಲ್ಲಿ ಸದನದಲ್ಲಿ ವಿಪಕ್ಷಗಳ ಮಣಿಸುವ ಕುರಿತಂತೆಯೂ ಕಾರ್ಯತಂತ್ರ ರೂಪಿಸಲಾಗಿದ್ದು, ಮತ್ತು ಸುಳ್ಳುಗಳನ್ನು ದಾಖಲೆ ಮತ್ತು ಅಂಕಿಅಂಶಗಳ ಸಹಿತ ಎದುರಿಸುವಂತೆ ಶಾಸಕರಿಗೆ ಸಿದ್ದರಾಮಯ್ಯ ಅವರು ಸಲಹೆ ನೀಡಿದ್ದಾರೆಂದು ತಿಳಿದುಬಂದಿದೆ. ದತ್ತಾಂಶವನ್ನು ಸ್ಪಷ್ಟವಾಗಿ ಪ್ರಸ್ತುತಪಡಿಸಿ, ಆತ್ಮವಿಶ್ವಾಸದಿಂದ ಪ್ರತಿಕ್ರಿಯಿಸಿ ಎಂದು ಶಾಸಕರಿಗೆ ತಿಳಿಸಿದ್ದಾರೆಂದು ವರದಿಗಳು ತಿಳಿಸಿವೆ. ಜಿಲ್ಲೆಗಳಲ್ಲಿ ಉಸ್ತುವಾರಿ ಸಚಿವರು, ಶಾಸಕರ ನಡುವೆ ಉಂಟಾಗುತ್ತಿದ್ದ ಗೊಂದಲ ಬಗೆಹರಿಸಲು ಇತ್ತೀಚೆಗೆ ಹಿರಿಯ ನಾಯಕರು ಸಭೆ ನಡೆಸಿದರು.

ಶಾಸಕರು, ಉಸ್ತುವಾರಿ ಸಚಿವರ ನಡುವೆ ಆಗಾಗ್ಗೆ ಸಮಸ್ಯೆ, ಬರುತ್ತಲೇ ಇರುತ್ತವೆ. ಹೀಗಾಗಿ ಸಿದ್ದರಾಮಯ್ಯ ಅವರು ತಮ್ಮ ನೇತೃತ್ವದಲ್ಲಿ ಸಭೆ ನಡೆಸುತ್ತಿರಬೇಕು. ಕನಿಷ್ಟ 2-3 ತಿಂಗಳಿಗೊಮ್ಮೆ ಸಭೆಗೆ ಒತ್ತಾಯಿಸಿದರು ಎನ್ನಲಾಗಿದೆ.

ಇದೇ ವೇಳೆ ತಮ್ಮ ಕ್ಷೇತ್ರಗಳಿಗೆ ತಲಾ 250 ಕೋಟಿ ಅನುದಾನ ನೀಡಿರುವುದಕ್ಕೆ ಸಭೆಯಲ್ಲಿ ಸದಸ್ಯರು ಮುಖ್ಯಮಂತ್ರಿಗಳಿಗೆ ಅಭಿನಂದನೆ ಸಲ್ಲಿಸಿದರು ಎನ್ನವಾಗಿದೆ, ಇದೇ ವೇಳೆ ಎಂಎಲ್‌ಸಿಗಳು ಹೆಚ್ಚುವರಿ ಅನುದಾನ ನೀಡಬೇಕು ಎಂದು ಮನವಿ ಮಾಡಿದ್ದು, ಮುಂದಿನ ವಾರದ ಬಳಿಕ ಸಭೆ ನಡೆಸಿ ಚರ್ಚಿಸೋಣ ಎಂದು ಸಿಎಂ ಹೇಳಿದರು ಎನ್ನಲಾಗಿದೆ.

**ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಕಾಲ್ತುಳಿತ ಆಗಿರುವ ಬಗ್ಗೆ ಹಾಗೂ ಸಾವು ಸಂಭವಿಸಿರುವ ಬಗ್ಗೆ ಅಧಿಕಾರಿಗಳು ನಮಗೆ ಮಾಹಿತಿ ನೀಡಿರಲಿಲ್ಲ. ಮೊದಲ ಸಾವು ಸಂಭವಿಸಿದಾಗಲೇ ಮಾಹಿತಿ ನೀಡಿದ್ದರೆ ವಿಧಾನಸೌಧ ಭವ್ಯ ಮೆಟ್ಟಿಲ ಮೇಲಿನ ಕಾರ್ಯಕ್ರಮ ರದ್ದು ಮಾಡುತ್ತಿದ್ದೆವು. ಕಾರ್ಯಕ್ರಮ ಮುಗಿದ ಬಳಿಕವೂ ನಮಗೆ ಸಾವಿನ ಬಗ್ಗೆ ಮಾಹಿತಿ ಇರಲಿಲ್ಲ. ಸಂಜೆ 5.30ಕ್ಕೆ ಎ.ಎಸ್. ಪೊನ್ನಣ್ಣ ಮಾಹಿತಿ ನೀಡಿದರು.**

**ಸಭೆ ವೇಳೆ ಮಾತನಾಡಿರುವ ಕಾಂಗ್ರೆಸ್ ಶಾಸಕ ಬಿ.ಆರ್. ಪಾಟೀಲ್ ಅವರು, ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಶಾಸಕರ ನಡುವೆ ಸಮಸ್ಯೆ ಉಂಟಾಗುತ್ತಿರಬಹುದು. ಹೀಗಾಗಿ ಕಾಲಕಾಲಕ್ಕೆ ಉಸ್ತುವಾರಿ ಸಚಿವರು ಹಾಗೂ ಶಾಸಕರೊಂದಿಗೆ ಪ್ರತ್ಯೇಕವಾಗಿ ಸಭೆ ನಡೆಸಿ ಸಮಸ್ಯೆ ಬಗೆಹರಿಸಬೇಕು ಎಂದು ಹೇಳಿದ್ದಾರೆಂದು ತಿಳಿದುಬಂದಿದೆ.**

# ವಿಲಕ್ಷಣ ಸರೀಸೃಪಗಳ ಕಳ್ಳಸಾಗಣೆ ವಿಮಾನ ನಿಲ್ದಾಣದಲ್ಲಿ ವಶಕ್ಕೆ ಪಡೆದ ಅಧಿಕಾರಿಗಳು



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಕಸ್ಟಮ್ಸ್ ಅಧಿಕಾರಿಗಳು ಬ್ಯಾಂಕಾಕ್‌ನಿಂದ ಆಗಮಿಸಿದ ಪ್ರಯಾಣಿಕರೊಬ್ಬರಿಂದ ಹಾವುಗಳು ಸೇರಿದಂತೆ ಹಲವಾರು ವಿಲಕ್ಷಣ ಮತ್ತು ಸಂರಕ್ಷಿತ ಸರೀಸೃಪಗಳನ್ನು ವಶಪಡಿಸಿಕೊಂಡಿರುವುದಾಗಿ ತಿಳಿಸಿದ್ದಾರೆ. ತಪಾಸಣೆ ಸಮಯದಲ್ಲಿ ಪ್ರಯಾಣಿಕರ ಲಗೇಜ್ ಒಳಗೆ ಅಡಗಿಸಿಟ್ಟ ಪೆಟ್ಟಿಗೆಗಳಲ್ಲಿ ಪ್ಯಾಕ್ ಮಾಡಲಾದ ಹಲವಾರು ಸರೀಸೃಪಗಳು ಪತ್ತೆಯಾಗಿವೆ ಮತ್ತು ಅವುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಕಸ್ಟಮ್ಸ್ ಅಧಿಕಾರಿಗಳು ಬುಧವಾರ ತಿಳಿಸಿದ್ದಾರೆ. ಅಕ್ರಮವಾಗಿ ದೇಶಕ್ಕೆ ಕಳ್ಳಸಾಗಣೆ ಮಾಡಲಾಗಿದ್ದ ಸರೀಸೃಪಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದ್ದು, ಪ್ರಯಾಣಿಕನ ವಿರುದ್ಧ ತನಿಖೆ ನಡೆಯುತ್ತಿದೆ. ವಶಪಡಿಸಿಕೊಂಡ ಸರೀಸೃಪಗಳನ್ನು ಮುಂದಿನ ಕ್ರಮಕ್ಕಾಗಿ ಅರಣ್ಯ ಇಲಾಖೆಗೆ ಹಸ್ತಾಂತರಿಸಲಾಗಿದೆ ಎಂದು ಅವರು ಹೇಳಿದರು.

# ಶಾಸಕರ ಭವನದ ಹೊರಗೆ ಬರಲು ಆಗ್ತಿಲ್ಲ ಸ್ವಾಮಿ, ಬೀದಿ ನಾಯಿಗಳನ್ನು ಓಡಿಸಿ! ಸ್ಪೀಕರ್‌ಗೆ ಬಂತು ಮನವಿ

• **ಉದಯವಾಹಿನಿ, ಬೆಂಗಳೂರು**


ಉದಯವಾಹಿನಿ ಚಿತ್ರ

ಬೀದಿ ನಾಯಿಗಳ ಕಾಟ ಹೆಚ್ಚಾದ ಹಿನ್ನೆಲೆಯಲ್ಲಿ ಸುಪ್ರೀಂ ಕೋರ್ಟ್ ಆದೇಶದ ಬೆನ್ನಲ್ಲೇ ಕರ್ನಾಟಕ ವಿಧಾನಸಭೆಯಲ್ಲೂ ಬೀದಿ ನಾಯಿಗಳ ಕಾಟದ ಬಗ್ಗೆ ಚರ್ಚೆ ನಡೆಯಿತು. ಶೂನ್ಯವೇಳೆಗೆ ಹೋಗುವ ಮುನ್ನ ಜೆಡಿಎಸ್ ಸದಸ್ಯ ಸುರೇಶ್ ಬಾಬು ಈ ವಿಚಾರವನ್ನು ಪ್ರಸ್ತಾಪಿಸಿದರು. ಬೀದಿ ನಾಯಿಗಳಿಂದ ಸಮಸ್ಯೆ ಆಗ್ತಿದೆ. ಇದಕ್ಕೆ ಕಡಿವಾಣ ಹಾಕಿ ಎಂದು ಮನವಿ ಮಾಡಿದರು.

ಸ್ಪೀಕರ್ ಯು.ಟಿ ಖಾದರ್ ಅವರಿಗೆ ಮನವಿ ಮಾಡಿದ ಸುರೇಶ್ ಬಾಬು ಬೀದಿ ನಾಯಿಗಳ ಕಾಟ ತಡೆಗಟ್ಟುವ ನಿಟ್ಟಿನಲ್ಲಿ ಸುಪ್ರೀಂ ಕೋರ್ಟ್ ಆದೇಶ ಮಾಡಿದೆ. ಈ ಹಿನ್ನೆಲೆಯಲ್ಲಿ ನಮ್ಮ ರಾಜ್ಯದ ಪಾಲಿಕೆಗಳಿಗೆ ಆದೇಶ ಮಾಡಿ ಬೀದಿ ನಾಯಿಗಳಿಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು. ಮಕ್ಕಳ ಮೇಲೆ ಸಮಸ್ಯೆ ಆಗುತ್ತಿದೆ. ಈ ನಿಟ್ಟಿನಲ್ಲಿ ಸೂಚನೆ ಕೊಡಬೇಕು ಎಂದು ಮನವಿ ಮಾಡಿದರು. ಈ ವೇಳೆ ಮಧ್ಯಪ್ರವೇಶ ಮಾಡಿದ ಬಿಜೆಪಿ ಸದಸ್ಯ ಸುರೇಶ್ ಕುಮಾರ್ ಸುಪ್ರೀಂ ಆದೇಶ ದೇಶದಾದ್ಯಂತ ಅನ್ವಯ ಆಗುತ್ತದೆ. ಕಳೆದ 6 ತಿಂಗಳಲ್ಲಿ ಬೆಂಗಳೂರಿನಲ್ಲಿ ನಾಯಿ ಕಚ್ಚಿದ 18,000 ಪ್ರಕರಣ ವರದಿಯಾಗಿದೆ. 18 ಮಂದಿಗೆ ರೇಬಿಸ್ ಸೋಂಕು ಕಾಣಿಸಿಕೊಂಡಿದೆ. ಈ ನಿಟ್ಟಿನಲ್ಲಿ ಬೆಂಗಳೂರು, ಮಂಗಳೂರು, ಮೈಸೂರಿನಲ್ಲೂ ಇದನ್ನು ಜಾರಿಗೆ ಬರಬೇಕು ಎಂದು ಒತ್ತಾಯಿಸಿದರು.

ಅಶ್ವತ್ಥ ನಾರಾಯಣ ಇದಕ್ಕೆ ಧ್ವನಿಗೂಡಿಸಿ ರಾಜ್ಯದಲ್ಲಿ ಎರಡು ಲಕ್ಷ ನಾಯಿ ಕಡಿತ ಆಗಿದೆ. ಇದು ಗಂಭೀರ ಸಮಸ್ಯೆ. ನಾಯಿ ಪ್ರೇಮಿಗಳ ಮನೆಗೆ ಬೇಕಾದರೆ ಬೀದಿ ನಾಯಿಗಳನ್ನು ಕೊಡೋಣ. ಸಿಎಂ ತಮ್ಮ ಟ್ವೀಟ್ ನಲ್ಲಿ ಬೀದಿ ನಾಯಿಗಳಿಗೆ ಕಡಿವಾಣ ಹಾಕುವ ಬಗ್ಗೆ ಉಲ್ಲೇಖ ಮಾಡಿದ್ದಾರೆ. ಸರ್ಕಾರ ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

**ಶಾಸಕರ ಭವನಕ್ಕೂ ನಾಯಿ ಕಾಟ**

**ವಿಧಾನಸೌಧದ ಪಕ್ಕದಲ್ಲೇ ಇರುವ ಶಾಸಕರ ಭವನಕ್ಕೂ ನಾಯಿ ಕಾಟ ಇದೆ ಎಂದು ಬಿಜೆಪಿ ಸದಸ್ಯ ಉಮನಾಥ್ ಕೋಟ್ಯಾನ್ ಗಮನ ಸೆಳೆದರು. ಶಾಸಕರ ಭವನದ ಹೊರಗೆ ಬರಲು ಆಗ್ತಿಲ್ಲ. ಮ್ಯಾಟ್‌ನಲ್ಲೇ ನಾಯಿಗಳು ಮಲಗಿರುತ್ತವೆ. ಅಲ್ಲೇ ಮಲ ವಿಸರ್ಜನೆ ಮಾಡುತ್ತವೆ. ಇದರ ಬಗ್ಗೆ ಗಮನ ಹರಿಸಿ. ಶಾಸಕರ ಭವನ ನಿಮ್ಮ ವ್ಯಾಪ್ತಿಗೆ ಬರುತ್ತದೆ. ಅಲ್ಲಿರುವ ಬೀದಿ ನಾಯಿಗಳನ್ನು ಓಡಿಸಿ ಎಂದು ಮನವಿ ಮಾಡಿದರು.**

## ಮೆಟ್ರೋ ಕಾಮಗಾರಿ, ರಸ್ತೆ ಅಗಲೀಕರಣ ಎಫೆಕ್ಟ್:

# 141 ಹಾಪ್‌ಕಾಮ್ಸ್ ಮಳಿಗೆಗಳು ಬಂದ್!



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

ರಸ್ತೆ ಅಗಲೀಕರಣ. ಬೆಂಗಳೂರಿನಲ್ಲಿ ಮೆಟ್ರೋ ಕಾಮಗಾರಿಯಿಂದಾಗಿ 141 ತೋಟಗಾರಿಕೆ ಉತ್ಪಾದಕರ ಸಹಕಾರಿ ಮಾರುಕಟ್ಟೆ, ಸಂಸ್ಕರಣಾ ಸಂಘ ಹಾಪ್‌ಕಾಮ್ಸ್ ಮಳಿಗೆಗಳು ಮುಚ್ಚಲ್ಪಟ್ಟಿವೆ ಎಂದು ತೋಟಗಾರಿಕೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಮಾಹಿತಿ ನೀಡಿದರು.

ವಿಧಾನ ಪರಿಷತ್ತಿನ ಪ್ರಶ್ನೋತ್ತರ ವೇಳೆದಲ್ಲಿ ಜೆಡಿಎಸ್ ಸದಸ್ಯ ಗೋವಿಂದರಾಜು ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ರಾಜ್ಯದಲ್ಲಿ ಹಾಪ್ ಕಾಮ್ಸ್ ಮಳಿಗೆಗಳ ಸಂಖ್ಯೆಯಲ್ಲಿ ಇಳಿಕೆಯಾಗಿದೆ. ರಸ್ತೆ ಅಗಲೀಕರಣ, ಮೆಟ್ರೋ ಸೇರಿದಂತೆ ಅಭಿವೃದ್ಧಿ ಕಾರ್ಯಗಳಿಂದಾಗಿ ಮಳಿಗೆಗಳು ಬಂದ್ ಆಗಿವೆ. ಬೀದಿ ಬದಿ ವ್ಯಾಪಾರಿಗಳ ತೀವ್ರ ಪೈಪೋಟಿಗಳಿಂದ ಹಾಪ್ ಕಾಮ್ಸ್‌ಗಳಲ್ಲಿ ವ್ಯಾಪಾರ ಕುಸಿತವಾಗಿದೆ. ಹೀಗಾಗಿ 557 ಮಳಿಗೆಗಳ ಪೈಕಿ 416 ಮಳಿಗೆಗಳು ಮಾತ್ರ ಕಾರ್ಯನಿರ್ವಹಿಸುತ್ತಿವೆ ಎಂದು ಹೇಳಿದರು.

**ಹಾಪ್ ಕಾಮ್ಸ್ ಸಂಸ್ಥೆಗೆ ವಾರ್ಷಿಕ ಶೇ.10.25ರ ಬಡ್ಡಿ ದರದಲ್ಲಿ 15 ಕೋಟಿ ರೂ. ಸಾಲ ನೀಡಲಾಗಿದೆ. ಹಾಪ್ ಕಾಮ್ಸ್ ಗಳಲ್ಲಿ ಮಾರಾಟ ಹೆಚ್ಚಿಸಲು ಹಣ್ಣು-ತರಕಾರಿ ಜೊತೆಗೆ ಇನ್ನಿತರ ಅಗತ್ಯ ವಸ್ತುಗಳ ಮಾರಾಟಕ್ಕೆ ಬೈಲಾದಲ್ಲಿ ತಿದ್ದುಪಡಿ ತರಲಾಗಿದೆ ಎಂದು ತಿಳಿಸಿದರು. ದೈನಂದಿನ ವಹಿವಾಟು ಹೆಚ್ಚಿಸಲು ಹೋಟೆಲ್, ಕಾರ್ಖಾನೆಗಳು, ಸಂಘ-ಸಂಸ್ಥೆಗಳಿಗೆ ಸಗಟು ದರದಲ್ಲಿ ಹಣ್ಣು-ತರಕಾರಿ ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗಿದೆ. ಮೊಬೈಲ್ ವಾಹನಗಳ ಮೂಲಕ ಅಪಾರ್ಟ್‌ಮೆಂಟ್‌ಗಳಿಗೆ ತೆರಳಿ ವ್ಯಾಪಾರ ಹೆಚ್ಚಿಸಲು ಮುಂದಾಗಿದ್ದೇವೆ ಎಂದು ಮಾಹಿತಿ ನೀಡಿದರು.**

ಹಾಪ್‌ಕಾಮ್ಸ್‌ಗಳಲ್ಲಿ ಮಂಜೂರಾದ 782 ಹುದ್ದೆಗಳ ಪೈಕಿ 438 ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದಾರೆ. 384 ಹುದ್ದೆಗಳು ಖಾಲಿಯಿವೆ. ಇದರ ನಿರ್ವಹಣೆಗಾಗಿ ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳಲಾಗಿದೆ.

# ಡೇಟಾ ಸೆಂಟರ್ ಮೇಲೆ ಸಿಸಿಬಿ ದಾಳಿ

• **ಉದಯವಾಹಿನಿ, ಬೆಂಗಳೂರು**


ಉದಯವಾಹಿನಿ ಚಿತ್ರ

ಸೈಬರ್ ವಂಚನೆಗೆ ಒಳಗಾದವರಿಗೆ ಕಾನೂನು ಸೇವೆ ಒದಗಿಸಿ ಕೊಡುವುದಾಗಿ ನಂಬಿಸಿ ಹಣ ಪಡೆದು ವಂಚಿಸುತ್ತಿದ್ದ ಬೃಹತ್ ಸೈಬರ್ ವಂಚನೆ ಜಾಲ ಪ್ರಕರಣದ ತನಿಖೆ ಮುಂದುವರಿಸಿರುವ ಸಿಸಿಬಿ ಪೊಲೀಸರು, ವಂಚನೆ ನಡೆಸಲು ಬಳಸುತ್ತಿದ್ದ 10 ಲಕ್ಷ ಮೌಲ್ಯದ ಉಪಕರಣ ಗಳನ್ನು ಜಪ್ತಿ ಮಾಡಿದ್ದಾರೆ. ಆಗಸ್ಟ್ 2ರಂದು ಸೈಬರ್ ಅಪರಾಧ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಆ ಪ್ರಕರಣ ಆಧರಿಸಿ, ವೈಟ್‌ಫೀಲ್ಡ್‌ನ ಡೇಟಾ ಸೆಂಟರ್ ಮೇಲೆ ಸಿಸಿಬಿ ಪೊಲೀಸರು ದಾಳಿ ನಡೆಸಿ, ಆರು ಸಿಮ್ ಬಾಕ್ಸ್‌ಗಳು, 133 ಸಿಮ್ ಕಾರ್ಡ್‌ಗಳು, 12 ಡೇಟಾ ಸ್ಟೋರೇಜ್ ಸರ್ವರ್ (ಐಪಿಬಿಎಕ್ಸ್, ಅಪ್ಲಿಕೇಶನ್, ಡೇಟಾಬೇಸ್) ಒಂದು ನೆಟ್ ವರ್ಕ್ ರೌಟರ್ ಅನ್ನು ಜಪ್ತಿ ಮಾಡಿಕೊಂಡಿದ್ದಾರೆ.

ಕಳೆದ ವಾರ ನಡೆದಿದ್ದ ಕಾರ್ಯಾಚರಣೆಯಲ್ಲಿ ತಮಿಳುನಾಡಿನ ಬಿ.ಇ ಪದವೀಧರ ತುಫೈಲ್ ಅಹಮದ್ (37) ಎಂಬಾತನನ್ನು ಬಂಧಿಸಲಾಗಿತ್ತು. ಆತನನ್ನು ಬಾಡಿ ವಾರಂಟ್ ಮೇಲೆ ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಹಲವು ಮಾಹಿತಿ ನೀಡಿದ್ದ. ಆ ಮಾಹಿತಿ ಆಧರಿಸಿ ಡೇಟಾ ಸೆಂಟರ್ ಮೇಲೆ ದಾಳಿ ನಡೆಸಲಾಯಿತು ಎಂದು ನಗರ ಪೊಲೀಸ್ ಕಮಿಷನರ್ ಸೀಮಂತ್ ಕುಮಾರ್ ಸಿಂಗ್ ಪತ್ರಿಕಾಗೋಷ್ಠಿಯಲ್ಲಿ ಮಂಗಳವಾರ ಮಾಹಿತಿ ನೀಡಿದರು.

ಈ ಪ್ರಕರಣದಲ್ಲಿ ಒಬ್ಬ ಆರೋಪಿಯನ್ನು ಮಾತ್ರ ಬಂಧಿಸಲಾಗಿದೆ. ಮತ್ತಿಬ್ಬರು ವಿದೇಶದಲ್ಲಿ ನೆಲಸಿರುವ ಶಂಕೆಯಿದ್ದು ಅವರನ್ನು ಪತ್ತೆಹಚ್ಚುವ ಕೆಲಸ ನಡೆಯುತ್ತಿದೆ' ಎಂದು ತಿಳಿಸಿದರು.

**ರೂ.10 ಲಕ್ಷ ಮೌಲ್ಯದ ಉಪಕರಣ ಜಪ್ತಿ**

ವೊಡಾಫೋನ್ ಲಿಮಿಟೆಡ್‌ನ ನೋಂದಣಿ ಅಧಿಕಾರಿಯೊಬ್ಬರು ಸೈಬರ್ ಅಪರಾಧ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಗ್ರೀಮ್ ಗ್ಲೋಬಲ್ ಸರ್ವೀಸಸ್ ಹೆಸರಿನಲ್ಲಿ ಸಿಮ್‌ಗಳನ್ನು ಖರೀದಿಸಿ, ಅವುಗಳನ್ನು ವೈಟ್ ಫೀಲ್ಡ್ ಐರನ್ ಮೌಂಟನ್ ಡೇಟಾ ಸೆಂಟರ್‌ನಲ್ಲಿ ಅಕ್ರಮವಾಗಿ ಅಳವಡಿಸಿದ ಸಿಮ್ ಬಾಕ್ಸ್ ಬಳಸಲಾಗುತ್ತಿದೆ.

ಅಂತರರಾಷ್ಟ್ರೀಯ ಕರೆಗಳನ್ನು ಅಕ್ರಮವಾಗಿ ಸ್ಥಳೀಯ ಕರೆಗಳನ್ನಾಗಿ ಪರಿವರ್ತಿಸಲಾಗುತ್ತಿದೆ. ರಾಷ್ಟ್ರೀಯ ಭದ್ರತೆಗೆ ಧಕ್ಕೆ ಉಂಟು ಮಾಡಲಾಗುತ್ತಿದೆ. ಅಲ್ಲದೇ ಸರ್ಕಾರ, ಟೆಲಿಕಾಂ ಸಂಸ್ಥೆಗೂ ಆರ್ಥಿಕ ನಷ್ಟ ಉಂಟು ಮಾಡಲಾಗುತ್ತಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿತ್ತು. ಆರೋಪಿಯನ್ನು ಬಾಡಿ ವಾರಂಟ್ ಮೇಲೆ ವಶಕ್ಕೆ ಪಡೆದುಕೊಂಡು ವಿಚಾರಣೆ ನಡೆಸಿದಾಗ, ಡೇಟಾ ಸೆಂಟರ್‌ನಲ್ಲಿ ಸಿಮ್ ಬಾಕ್ಸ್ ಅಳವಡಿಸಿಕೊಂಡು ಕರೆಗಳನ್ನು ಪರಿವರ್ತನೆ ಮಾಡುತ್ತಿರುವುದಾಗಿ ಒಪ್ಪಿಕೊಂಡಿದ್ದ. ಮತ್ತಿಬ್ಬರು ವಿದೇಶದಲ್ಲಿದ್ದು, ಅವರ ಸಂಪರ್ಕದಲ್ಲಿ ಕೃತ್ಯ ಎಸಗುತ್ತಿರುವುದಾಗಿ ತಿಳಿಸಿದ್ದ. ವಿದೇಶದಲ್ಲಿರುವ ವ್ಯಕ್ತಿಗಳ ಮಾರ್ಗದರ್ಶನದಲ್ಲಿ ವೊಡಾಫೋನ್ ಸಿಮ್‌ಗಳನ್ನು ಖರೀದಿಸಿ ನಕಲಿ ಕಂಪನಿಗಳ ಹೆಸರಿನಲ್ಲಿ ಐಪಿಬಿಎಕ್ಸ್ ಸರ್ವರ್‌ಗಳು ಹಾಗೂ ಸಿಮ್ ಬಾಕ್ಸ್‌ಗಳನ್ನು ಅಳವಡಿಸಿರುವುದಾಗಿ ತಿಳಿಸಿದ್ದ. ಆ ಮಾಹಿತಿ ಆಧರಿಸಿ ವೈಟ್‌ಫೀಲ್ಡ್‌ನಲ್ಲಿದ್ದ ಸೆಂಟರ್ ಮೇಲೆ ದಾಳಿ ನಡೆಸಲಾಯಿತು' ಎಂದು ಪೊಲೀಸರು ಹೇಳಿದರು.

**ಕರೆಗಳ ಪರಿವರ್ತನೆ ಅಪರಾಧ**

**ಐಎಸ್‌ಡಿ ಕರೆಗಳನ್ನು ಸ್ಥಳೀಯ ಕರೆಯಾಗಿ ಪರಿವರ್ತಿಸುವುದು ಅಪರಾಧ. ಬೇರೆ ದೇಶಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನೆಲಸಿರುವ ಭಾರತೀಯರು, ತಮ್ಮ ಕುಟುಂಬದವರ ಜತೆಗೆ ಮಾತನಾಡಲು ಐಎಸ್‌ಡಿ ಕರೆಗಳನ್ನು ಬಳಸಬೇಕು. ಈ ಕರೆಗಳ ದರ ಸ್ಥಳೀಯ ಕರೆಗಳಿಗಿಂತ ದುಬಾರಿ. ಕರೆಗಳನ್ನು ಪರಿವರ್ತಿಸುವುದರಿಂದ ಸ್ಥಳೀಯ ಕರೆಗಳ ದರದಲ್ಲೇ ಅಂತರರಾಷ್ಟ್ರೀಯ ಕರೆಗಳನ್ನು ಮಾಡಬಹುದು. ಎರಡೂ ದೇಶಗಳಲ್ಲಿ ಒಂದೇ ತಂತ್ರಜ್ಞಾನ ಬಳಸಿದಾಗ ಮಾತ್ರ ಇದು ಸಾಧ್ಯ. ಈ ಉದ್ದೇಶದಿಂದ ಆರೋಪಿಗಳು ದುಬಾರಿ ಕರೆಗಳನ್ನು ಸ್ಥಳೀಯ ಕರೆಗಳನ್ನಾಗಿ ಬದಲಾಯಿಸುತ್ತಿದ್ದರು. ಕೃತ್ಯಕ್ಕೆ ಸಹಕಾರ ನೀಡಿದ ಸ್ಥಳೀಯರಿಗೆ ಹವಾಲದ ಮೂಲಕ ಹಣ ಸಂದಾಯ ಮಾಡುತ್ತಿದ್ದರು' ಎಂದೂ ಪೊಲೀಸರು ಹೇಳಿದರು.**

# ಕೆಂಪೇಗೌಡ ಬಡಾವಣೆ ವಿಸ್ತರಣೆಗೆ ಬಿಡಿಎ ಸಿದ್ಧತೆ

## ಮೈಸೂರು ರಸ್ತೆ, ಮಾಗಡಿ ರಸ್ತೆ ನಡುವೆ ಮತ್ತು ನೈಸ್ ರಸ್ತೆ ಪಕ್ಕದ 17 ಹಳ್ಳಿಗಳಲ್ಲಿ ಭೂ ಸ್ವಾಧೀನ

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ಇತ್ತೀಚೆಗಷ್ಟೆ ರಾಜಧಾನಿಯ ಉತ್ತರ ವಲಯದಲ್ಲಿ ಹೆಚ್ಚುವರಿ 3000 ಎಕರೆಗೆ ಡಾ. ಶಿವರಾಮ ಕಾರಂತ ಬಡಾವಣೆಯನ್ನು ವಿಸ್ತರಿಸಲು ನಿರ್ಧರಿಸಿದ್ದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಇದೀಗ ಪಶ್ಚಿಮದಲ್ಲಿಯೂ ನಾಡಪ್ರಭು ಕೆಂಪೇಗೌಡ ಬಡಾವಣೆಯನ್ನು 5755 ಎಕರೆ 32 ಗುಂಟೆಗೆ ವಿಸ್ತರಿಸಲು ಮುಂದಾಗಿದೆ.

ಈಗಾಗಲೇ ರೂಪಿಸಿರುವ ನಾಡಪ್ರಭು ಕೆಂಪೇಗೌಡ ಬಡಾವಣೆಯಲ್ಲಿ 29000 ನಿವೇಶನಗಳನ್ನು ಹಂಚಿಕೆ ಮಾಡಿರುವ ಬಿಡಿಎ, ಇನ್ನೂ ಮೊದಲ ಹಂತದ ವಿನ್ಯಾಸ ಮತ್ತು ಮೂಲ ಸೌಕರ್ಯಗಳನ್ನು ಒದಗಿಸಲು ಹೆಣಗಾಡುತ್ತಿರುವುದರ ಮಧ್ಯೆಯೇ ಬಡಾವಣೆ ವಿಸ್ತರಣೆಗೆ ಭೂಮಿ ಗುರುತಿಸಿದೆ. ಈ ಭೂಮಿಯು ಮೈಸೂರು ರಸ್ತೆ, ಮಾಗಡಿ ರಸ್ತೆ ನಡುವೆ ಮತ್ತು ನೈಸ್ ರಸ್ತೆ ಆಚೆ ಇರುವ 17 ಹಳ್ಳಿಗಳನ್ನು ಒಳಗೊಳ್ಳಲಿದ್ದು, ಈ ಪೈಕಿ ಒಂದು ಗ್ರಾಮ ಮಾಗಡಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದೆ. 5755 ಎಕರೆ 32 ಗುಂಟೆ ಹೊಸ ಸ್ವತ್ತಿನ ಸ್ವಾಧೀನಕ್ಕೆ ಮಂಡಳಿಯಲ್ಲಿ ಅನುಮೋದನೆ ಸಿಕ್ಕಿದ್ದು, ಈಗಾಗಲೇ ಬಿಡಿಎ ಭೂಸ್ವಾಧೀನ ಅಧಿಕಾರಿಗಳ 5 ಪ್ರತ್ಯೇಕ ತಂಡಗಳು ಸಮೀಕ್ಷೆ ನಡೆಸಿ, ನೀಲನಕ್ಷೆ ಸಿದ್ಧಪಡಿಸಿವೆ ಎಂದು ಬಿಡಿಎ ಮೂಲಗಳು ತಿಳಿಸಿವೆ.

**4,040 ಎಕರೆ ಭೂಮಿ ಸ್ವಾಧೀನಕ್ಕೆ ಅಧಿಸೂಚನೆ**

**ಪರಿಷ್ಕೃತ ಮಾಸ್ಟರ್ ಪ್ಲಾನ್ ಪ್ರಕಾರ, ರಸ್ತೆಗಳ ನಿರ್ಮಾಣಕ್ಕೆ 38 ಎಕರೆ ಭೂಮಿ, ಹಿಂದೆ ಸ್ವಾಧೀನದಿಂದ ಹೊರಗುಳಿದ 1,317 ಎಕರೆ ಭೂಮಿ, ಲೇಔಟ್‌ಗೆ ಹೊಂದಿಕೊಂಡಿರುವ ನಾಲ್ಕು ಹಳ್ಳಿಗಳಲ್ಲಿ ಸುಮಾರು 1,868 ಎಕರೆ ಭೂಮಿ ಸ್ವಾಧೀನಕ್ಕೆ ಗುರುತಿಸಲಾಗಿದೆ ಎಂದು ಬಿಡಿಎ ಅಧಿಕಾರಿಗಳು ತಿಳಿಸಿದ್ದಾರೆ.**

**3,200 ಎಕರೆ ಸ್ವಾಧೀನಕ್ಕೂ ಪ್ರಸ್ತಾವ:** ಈಗಾಗಲೇ ಕೆಂಗೇರಿ ಹೋಬಳಿಯ ಮಾರಗೊಂಡನಹಳ್ಳಿ, ಮಾಲಿಗೊಂಡನಹಳ್ಳಿ, ಹಾಮೋಹಳ್ಳಿ, ತಾವರೆಕೆರೆ ಹೋಬಳಿಯ ಚಿಕ್ಕೆಲ್ಲೂರು, ರಾಂಪುರ, ಕೊಲ್ಲೂರು, ನಂಜುಂಡಾಪುರ, ಗುರುನಾಯಕಪುರ, ಕೇತೋಹಳ್ಳಿ, ರಾಮಪುರ, ನರಸೀಪುರ, ಶೇಷಗಿರಿಪುರ, ಕಣಿಮಿಣಿಕೆ, ಕೊಡಿಗೇಹಳ್ಳಿ, ಶೀಗೆಹಳ್ಳಿ ಮುದ್ದಿನಪಾಳ್ಯದಿಂದ 5755 ಎಕರೆ 32 ಎಕರೆ ಭೂಮಿಗೆ ಅಧಿಸೂಚನೆ ಹೊರಡಿಸಿ, ಸ್ವಾಧೀನಕ್ಕೆ ಪ್ರಕ್ರಿಯೆ ಆರಂಭಿಸಲಾಗಿದೆ. ಅಲ್ಲದೆ, 40:60ರ ಅನುಪಾತದಲ್ಲಿ ಅಭಿವೃದ್ಧಿಪಡಿಸಿದ ನಿವೇಶನವನ್ನು ಭೂ ಮಾಲೀಕರಿಗೆ ಪರಿಹಾರವಾಗಿ ನೀಡಲು ಚಿಂತಿಸಿದೆ. 5755 ಎಕರೆ ಭೂಮಿ ಹೊರತುಪಡಿಸಿ, ಬಿಡಿಎ ಸುಮಾರು 3,200 ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಕೂಡ ಉದ್ದೇಶಿಸಿದೆ. ಈ ಹಿಂದೆ ಅಧಿಸೂಚನೆ ನಂತರ ಸ್ವಾಧೀನದಿಂದ ಕೈಬಿಡಲಾಗಿದ್ದ ಭೂಮಿ ಇದರಲ್ಲಿ ಸೇರಿದೆ.

**ಹೊಸ ಬಡಾವಣೆಗಳಿಗೆ 6217 ಎಕರೆ:** ಒಂದೆಡೆ ಎರಡು ಪ್ರತಿಷ್ಠಿತ ಬಡಾವಣೆಗಳ ವಿಸ್ತರಣೆಗೆ ಮುಂದಾಗಿರುವ ಬಿಡಿಎ, ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ (ಪಿಆರ್‌ಆರ್-2) ಸುತ್ತಮುತ್ತ 6 ಹೊಸ ಬಡಾವಣೆ ನಿರ್ಮಾಣಕ್ಕೆ ತಯಾರಿ ನಡೆಸಲು ಸರಕಾರದ ಅನುಮತಿ ಸಿಕ್ಕಿದೆ. ಹೊಸೂರು ರಸ್ತೆಯಿಂದ ಬನ್ನೇರುಘಟ್ಟ ರಸ್ತೆ, ಕನಕಪುರ ರಸ್ತೆ ಮೂಲಕ ಮೈಸೂರು ರಸ್ತೆವರೆಗೆ ಪಿಆರ್‌ಆರ್-2ಕ್ಕೆ ಹೊಂದಿಕೊಂಡಂತೆ ಆರು ಬಡಾವಣೆಗಳನ್ನು ನಿರ್ಮಿಸಲು 6217 ಎಕರೆ 3.88 ಗುಂಟೆ ಭೂಮಿ ಸ್ವಾಧೀನಕ್ಕೆ ಪ್ರಾಥಮಿಕ ಅಧಿಸೂಚನೆ ಹೊರಡಿಸಲು ನಗರಾಭಿವೃದ್ಧಿ ಇಲಾಖೆ, ಬಿಡಿಎಗೆ ಅನುಮತಿ ನೀಡಿದೆ. ಜಮೀನು ಕಳೆದುಕೊಳ್ಳುವ ಭೂ ಮಾಲೀಕರಿಗೆ 40:60 ಅನುಪಾತದಲ್ಲಿ ಅಭಿವೃದ್ಧಿಪಡಿಸಿದ ನಿವೇಶನ ಅಥವಾ ನಗದು ಪರಿಹಾರ ನೀಡಲು ನಿರ್ಧರಿಸಿದೆ.

**ಮೊದಲ ಹಂತದಲ್ಲಿ ಕೇವಲ 2650 ಎಕರೆ ಸ್ವಾಧೀನ**

**ಬಿಡಿಎ 2010ರಲ್ಲಿ ನಾಡಪ್ರಭು ಕೆಂಪೇಗೌಡ ಬಡಾವಣೆ ಅಭಿವೃದ್ಧಿ ಕೆಲಸ ಪ್ರಾರಂಭಿಸಿತು. ಸುಮಾರು 29000 ನಿವೇಶನಗಳು ಹಂಚಿಕೆಯಾಗಿದ್ದು, ಮೂಲಸೌಕರ್ಯಗಳ ಕೊರತೆಯಿಂದಾಗಿ ಕೇವಲ 50 ಮನೆಗಳು ಮಾತ್ರ ತಲೆಯೆತ್ತಿವೆ. ಸದ್ಯ ಸುಮಾರು 250 ಮನೆಗಳ ನಿರ್ಮಾಣ ಹಾಗೂ ರಸ್ತೆ ಡಾಂಬರೀಕರಣ ಪ್ರಗತಿಯಲ್ಲಿದೆ. ವಿದ್ಯುತ್ ಮತ್ತು ನೀರಿನ ಸಂಪರ್ಕ ಇನ್ನೂ ಸಿಕ್ಕಿಲ್ಲ. ಅಲ್ಲದೆ, ಬಿಡಿಎ ಆರಂಭದಲ್ಲಿ(ಮೊದಲ ಹಂತದಲ್ಲಿ) ಸುಮಾರು 4,040 ಎಕರೆ ಭೂಮಿ ಸ್ವಾಧೀನಕ್ಕೆ ಅಧಿಸೂಚನೆ ಹೊರಡಿಸಿದ್ದರೂ, ಇದುವರೆಗೂ ಇಲ್ಲಿ ಕೇವಲ 2,200 ಎಕರೆ ಭೂಮಿಯನ್ನು ಮಾತ್ರ ಸ್ವಾಧೀನಪಡಿಸಿಕೊಂಡಿದೆ.**

# ಧರ್ಮಸ್ಥಳ ಪ್ರಕರಣ: ಧರ್ಮಾಧಿಕಾರಿಗಳ ಪರ ನಾವಿದ್ದೇವೆ, ಮೈಸೂರಲ್ಲಿ ಹೋರಾಟ

• ಉದಯವಾಹಿನಿ. ಮೈಸೂರು

ನಾಡಿನ ಸುಪ್ರಸಿದ್ಧ ಧಾರ್ಮಿಕ ಕ್ಷೇತ್ರ, ಧರ್ಮಸ್ಥಳದ ಹೆಸರಿಗೆ ಕೆಲ ಕಿಡಿಗೇಡಿಗಳು ಕೆಟ್ಟ ಹೆಸರು ತರಲು ಯತ್ನಿಸುತ್ತಿದ್ದಾರೆಂದು ಆರೋಪಿಸಿ ಮೈಸೂರಿನ ಹಳೆ ಜಿಲ್ಲಾಧಿಕಾರಿ ಕಚೇರಿ ಬಳಿ ಕರ್ನಾಟಕ ಸೇನಾಪಡೆ ಸಂಘಟನೆ ಪ್ರತಿಭಟನೆ ನಡೆಸಿತು. ಧರ್ಮಸ್ಥಳ ನಾಡಿನ ಪ್ರಮುಖ ಧಾರ್ಮಿಕ ಕ್ಷೇತ್ರವಾಗಿದ್ದು ದೇಶ ವಿದೇಶಗಳಿಂದ ಭಕ್ತರು ಆಗಮಿಸುತ್ತಾರೆ. ಇಂತಹ ಪವಿತ್ರ ಕ್ಷೇತ್ರಕ್ಕೆ ಕಳಂಕ ತರಲು ವ್ಯವಸ್ಥಿತ ಷಡ್ಯಂತ್ರ ನಡೆಯುತ್ತಿದೆ. ಧರ್ಮಸ್ಥಳ ಕ್ಷೇತ್ರದ ಬಗ್ಗೆ ಅಪಪ್ರಚಾರ ಮಾಡುತ್ತಿರುವವರನ್ನು ಮಂಪರು ಪರೀಕ್ಷೆಗೆ ಒಳಪಡಿಸಿ ಸತ್ಯಾಂಶ ಬಯಲಿಗೆಳೆಯಬೇಕು. ಇತ್ತೀಚೆಗೆ ಬೆಂಗಳೂರಿನ ಗಾಳಿ ಆಂಜನೇಯ ಸ್ವಾಮಿ ದೇಗುಲವನ್ನು ರಾಜ್ಯ ಸರ್ಕಾರ ತನ್ನ ಸುಪರ್ದಿಗೆ ತೆಗೆದುಕೊಂಡಿದೆ.


ಉದಯವಾಹಿನಿ ಚಿತ್ರ

ಇದೇ ರೀತಿ ಧರ್ಮಸ್ಥಳದ ಮಂಜುನಾಥಸ್ವಾಮಿ ದೇಗುಲವನ್ನು ಸಹ ರಾಜ್ಯ ಸರ್ಕಾರದ ವಶಕ್ಕೆ ಪಡೆಯುವ ಹುನ್ನಾರ ನಡೆದಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದ್ದಾರೆ. ಪೂಜ್ಯರೊಂದಿಗೆ

**ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರ ಕುಟುಂಬಕ್ಕೆ ಕಳಂಕ ತರುವುದನ್ನು ನಿಲ್ಲಿಸಬೇಕು. ಶ್ರೀ ಕ್ಷೇತ್ರ ಧರ್ಮಸ್ಥಳದ ಮಂಜುನಾಥಸ್ವಾಮಿ ದೇವಾಲಯಕ್ಕೆ ಅವಮಾನ ಮಾಡುವುದನ್ನು ನಿಲ್ಲಿಸಬೇಕು. ಎಸ್ಐಟಿ ತನಿಖೆ ಪಾರದರ್ಶನವಾಗಿ ನಡೆಯಲು ಸಹಕಾರ ಕೊಡಬೇಕು. ಅಪಪ್ರಚಾರ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂಬುದು ಸೇರಿದಂತೆ ಇನ್ನೂ ಹಲವು ಹಕ್ಕೊತ್ತಾಯಗಳನ್ನು ಒಳಗೊಂಡ ಮನವಿ ಪತ್ರವನ್ನು ಅಪರ ಜಿಲ್ಲಾಧಿಕಾರಿ ಶಿವರಾಜ್‌ಗೆ ಸಲ್ಲಿಸಲಾಯಿತು.**

ನಾವಿದ್ದೇವೆ ಎಂದು ಪ್ರತಿಭಟನಾಕಾರರು ಹೇಳಿದ್ದಾರೆ. ಹೋರಾಟದಲ್ಲಿ ಸಾವಿರಾರು ಮಹಿಳಾ ಭಕ್ತರು ಭಾಗಿಯಾಗಿದ್ದರು. ಮೈಸೂರಿನ ಹಳೆ ಡೈರಿ ಸರ್ಕಲ್‌ನಿಂದ ಜಿಲ್ಲಾಧಿಕಾರಿ ಕಚೇರಿಯವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಲಾಯಿತು.

ಕೈಯಲ್ಲಿ ಭಿತ್ತಿಪತ್ರ ಹಿಡಿದು ಪ್ರತಿಭಟನೆ ನಡೆಸಲಾಯಿತು. ಧರ್ಮಸ್ಥಳ ಪುಣ್ಯಕ್ಷೇತ್ರವಾಗಿದ್ದು, ಅದಕ್ಕೆ ಅಪಮಾನ ಮಾಡುವುದು ಸರಿಯಲ್ಲ. ಎಸ್ಐಟಿ ತನಿಖೆ ಪಾರದರ್ಶಕವಾಗಿ ಇರುವಂತೆ ನೋಡಿಕೊಳ್ಳಬೇಕು. ಧರ್ಮಸ್ಥಳ ಕ್ಷೇತ್ರದ ಬಗ್ಗೆ ಅಪಪ್ರಚಾರ ಮಾಡುತ್ತಿರುವವರ ಹೆಡೆಮುರಿ ಕಟ್ಟಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ನೂರಾರು ಮುಸ್ಲಿಂ ಮಹಿಳೆಯರು ಭಾಗಿಯಾಗಿದ್ದರು. ಹಿಂದು ದೇವಾಲಯಗಳನ್ನು ರಕ್ಷಿಸಬೇಕೆಂದು ಆಗ್ರಹಿಸಿದರು.

## ಕನಿಷ್ಠ 10 ಸಾವಿರ ಗೌರವ ಧನ ಕೊಡಿ: ಆಶಾ ಕಾರ್ಯಕರ್ತೆಯರ ಅಹೋರಾತ್ರಿ ಧರಣಿ

• ಉದಯವಾಹಿನಿ, ಚಾಮರಾಜನಗರ

ಮಾಸಿಕ ಕನಿಷ್ಠ 10,000 ಗೌರವ ಧನ ನೀಡಬೇಕು, ಅಂಗನವಾಡಿ, ಬಿಸಿಯೂಟ ಕಾರ್ಯಕರ್ತೆಯರಿಗೆ ನೀಡಿದಂತೆ 1,000 ಪ್ರೋತ್ಸಾಹ ಧನ ಹೆಚ್ಚಳ ಮಾಡಬೇಕು ಸೇರಿದಂತೆ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ನೂರಾರು ಆಶಾ ಕಾರ್ಯಕರ್ತೆಯರು ಸೋಮವಾರದಿಂದ ಅಹೋರಾತ್ರಿ ಧರಣಿ ಆರಂಭಿಸಿದರು. ಇದಕ್ಕೂ ಮುನ್ನ ಚಾಮರಾಜೇಶ್ವರ ದೇವಸ್ಥಾನದ ಆವರಣದಿಂದ ಪ್ರತಿಭಟನಾ ಮೆರವಣಿಗೆ ಆರಂಭಿಸಿದ ಆಶಾ ಕಾರ್ಯಕರ್ತೆಯರು, ಕೈಯಲ್ಲಿ ಬೇಡಿಕೆಗಳ ಫಲಕಗಳನ್ನು ಹಿಡಿದು ಸಾಗಿ ಭುವನೇಶ್ವರಿ ವೃತ್ತ, ಬಿ.ರಾಚಯ್ಯ ಜೋಡಿ ರಸ್ತೆ ಮಾರ್ಗವಾಗಿ ಜಿಲ್ಲಾಡಳಿತ ಭವನದ ಆವರಣ ತಲುಪಿದರು. ಸರ್ಕಾರಗಳ



ಉದಯವಾಹಿನಿ ಚಿತ್ರ

ತಾರತಮ್ಯ ನೀತಿ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿದರು.

ಜನವರಿಯಲ್ಲಿ 42 ಸಾವಿರಕ್ಕೂ ಹೆಚ್ಚು ಆಶಾ ಕಾರ್ಯಕರ್ತೆಯರು ಫ್ರೀಡಂ ಪಾರ್ಕ್‌ನಲ್ಲಿ ಸತತ 4 ದಿನಗಳ ಹೋರಾಟ ನಡೆಸಿದ ಸಂದರ್ಭ ಕೇಂದ್ರದ ಭಾಗಶಃ ಪ್ರೋತ್ಸಾಹಧನದೊಂದಿಗೆ ರಾಜ್ಯದ ಗೌರವಧನ ಸೇರಿಸಿ ಮಾಸಿಕ 10,000 ನೀಡುವುದಾಗಿ ಸರ್ಕಾರ ಭರವಸೆ ನೀಡಿತ್ತು. 7 ತಿಂಗಳು ಕಳೆದರೂ ಬೇಡಿಕೆ ಈಡೇರಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ರಾಜ್ಯದಲ್ಲಿ ತಾಯಿ ಮರಣ ಪ್ರಮಾಣ ತಗ್ಗಿಸುವಲ್ಲಿ ಶ್ರಮಿಸುತ್ತಿರುವ ಆಶಾ ಕಾರ್ಯಕರ್ತೆಯರ ಬೇಡಿಕೆಗಳಿಗೆ ಸ್ಪಂದಿಸದಿರುವುದು ಬೇಸರದ ವಿಚಾರ. ಕಾರ್ಯಕರ್ತೆಯರನ್ನು ಕಾರ್ಮಿಕರು ಎಂದು ಪರಿಗಣಿಸಿ ಕನಿಷ್ಠ ವೇತನ, ಪಿಎಫ್, ಇಎಸ್ಐ, ಗ್ರಾಚ್ಯುಟಿ ಸೌಲಭ್ಯ ನೀಡಬೇಕು, ಉದ್ಯೋಗ ಭದ್ರತೆ ಒದಗಿಸಬೇಕು ಎಂದರು. ನಿವೃತ್ತ ಆಶಾ ಕಾರ್ಯಕರ್ತೆಯರಿಗೆ ಪಶ್ಚಿಮ ಬಂಗಾಳ ಮಾದರಿಯಲ್ಲಿ ಇಡುಗಂಟು ನೀಡಬೇಕು. ನಗರ ಪ್ರದೇಶದಲ್ಲಿ ಕಾರ್ಯ ನಿರ್ವಹಿಸುವ ಕಾರ್ಯಕರ್ತೆಯರಿಗೆ ಮಾಸಿಕ ಗೌರವ ಧನವನ್ನು 2 ಸಾವಿರ ಹೆಚ್ಚಿಸಬೇಕು. ಜನಸಂಖ್ಯೆಯ ಮಿತಿ ಹೆಸರಿನಲ್ಲಿ ಕೆಲಸದಿಂದ ತೆಗೆಯಬಾರದು. ಅವೈಜ್ಞಾನಿಕ ಮೌಲ್ಯಮಾಪನ ಪ್ರಕ್ರಿಯೆ ಕೈಬಿಡಬೇಕು ಎಂದು ಒತ್ತಾಯಿಸಿದರು.

# ಮನರೇಗಾ ಕಾಮಗಾರಿಗಳಲ್ಲಿ ಅಕ್ರಮ ಆರೋಪ

## ಪಾರದರ್ಶಕತೆ ಹೆಚ್ಚಿಸಲು ಎನ್‌ಎಂಎಂಎಸ್ ಆ್ಯಪ್ ಮತ್ತಷ್ಟು ಬಲಶಾಲಿ

• ಉದಯವಾಹಿನಿ, ಕೋಲಾರ

ಮನರೇಗಾ ಕಾಮಗಾರಿಗಳಲ್ಲಿ ನಡೆಯುವ ಅಕ್ರಮಗಳಿಗೆ ಕಡಿವಾಣ ಹಾಕಲು ಜಾರಿಗೊಳಿಸಿದ ಎನ್‌ಎಂಎಂಎಸ್ ಮೊಬೈಲ್ ಆ್ಯಪ್ ಅನ್ನು ಮತ್ತಷ್ಟು ಸುಧಾರಿಸಿರುವ ಸರಕಾರ, ಕಾಮಗಾರಿಗಳಲ್ಲಿ ಪಾರದರ್ಶಕತೆ ಹೆಚ್ಚಿಸಲು ಮುಂದಾಗಿದೆ. ಮನರೇಗಾ ಕಾಮಗಾರಿಗಳನ್ನು ಯಂತ್ರೋಪಕರಣಗಳ ಮೂಲಕ ಕೂಲಿಕಾರರ ಹೆಸರಿನಲ್ಲಿ ಲಕ್ಷಾಂತರ ರೂಪಾಯಿ ಬಿಲ್ ಮಾಡುತ್ತಿರುವ ಬಗ್ಗೆ ವ್ಯಾಪಕ ಆರೋಪಗಳು ಕೇಳಿ ಬಂದಿದ್ದವು. ಆ ಹಿನ್ನೆಲೆಯಲ್ಲಿ ಅಕ್ರಮಗಳಿಗೆ ಕಡಿವಾಣ ಹಾಕಲು ಆ್ಯಪ್ ಜಾರಿಗೊಳಿಸಲಾಗಿತ್ತು. ಆದರೆ, ಆ್ಯಪ್‌ನಲ್ಲಿರುವ ಲೋಪದೋಷಗಳನ್ನು ಲಾಭವಾಗಿಸಿಕೊಂಡ ಕೆಲವರು ನಕಲಿ ಫೋಟೊಗಳನ್ನು ಅಪ್‌ಲೋಡ್ ಮಾಡುವುದು, ನಕಲಿ ಕಾರ್ಮಿಕರ ಫೋಟೊಗಳನ್ನು ಅಪ್‌ಲೋಡ್ ಮಾಡುತ್ತಿರುವ ಬಗ್ಗೆ ದೂರುಗಳು ಕೇಳಿಬಂದಿದ್ದವು. ಅಕ್ರಮಗಳ ತಡೆಗೆ ಮುಂದಾಗಿರುವ ಕೇಂದ್ರ ಸರಕಾರ ಆ್ಯಪ್‌ನ್ನು ಮತ್ತಷ್ಟು ಸುಧಾರಣೆಗೊಳಿಸಿದೆ.

ಅದರಂತೆ ಕಾಮಗಾರಿ ಸ್ಥಳದಲ್ಲಿ ಕೆಲಸ ಮಾಡುವಂತಹ ಕೂಲಿಕಾರರ ನೈಜತೆ ಪರಿಶೀಲನೆ ವೇಳೆ ಹಲವು ಬದಲಾವಣೆಗಳನ್ನು ಜಾರಿಗೊಳಿಸಲಾಗಿದೆ. ಈ ಹಿಂದೆ ಗ್ರಾಪಂ ಮಟ್ಟದಲ್ಲಿ ನಡೆಯುತ್ತಿದ್ದ ಪರಿಶೀಲನೆ ಇನ್ನು ಮುಂದೆ ಕಾರ್ಯ ತಾಲ್ಲೂಕು, ಜಿಲ್ಲಾಮಟ್ಟದಲ್ಲಿಯೂ ನಡೆಯಲಿದೆ. ಗ್ರಾಪಂ ಮಟ್ಟದಲ್ಲಿ ಪಿಡಿಒಗಳು ಪರಿಶೀಲಿಸಿದ ಬಳಿಕ ತಾಲ್ಲೂಕು ಮಟ್ಟದ ಅನುಷ್ಠಾನಾಧಿಕಾರಿಗಳು, ಬಳಿಕ ಜಿಲ್ಲಾಮಟ್ಟದದಲ್ಲಿ ಪರಿಶೀಲನೆಯಾದ ನಂತರ ರಾಜ್ಯದಿಂದ ಕೇಂದ್ರರ ಸರಕಾರಕ್ಕೆ ಪ್ರತಿ ದಿನದ ವರದಿ ನೀಡುವ ವ್ಯವಸ್ಥೆಯನ್ನು ಆ್ಯಪ್‌ನಲ್ಲಿ ನೀಡಲಾಗಿದೆ.

**ಅಕ್ರಮಗಳಿಗೆ ಅಧಿಕಾರಿಗಳೇ ನೇರ ಹೊಣೆ:** ಮನರೇಗಾ ಕಾಮಗಾರಿಗಳಲ್ಲಿ ತೊಡಗಿಕೊಳ್ಳುವ ಕೂಲಿಕಾರರ ಹಾಜರಾತಿಯಲ್ಲಿ ವ್ಯತ್ಯಾಸ, ಅಕ್ರಮ ನಡೆದಿರುವುದು ಕಂಡುಬಂದರೆ ನೇರವಾಗಿಗ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮಕ್ಕೆಗೊಳ್ಳುವ ಅಧಿಕಾರವನ್ನು ಜಿಪಂ ಸಿಇಒ ಅವರಿಗೆ ಕೊಡಲಾಗಿದೆ. ಮೂರು ಹಂತಗಳಲ್ಲಿ ಪರಿಶೀಲನೆ ಆಗುವುದರಿಂದ ಗ್ರಾಪಂ, ತಾಪಂ ಹಾಗೂ ಜಿಪಂ ಅಧಿಕಾರಿಗಳನ್ನು ಜವಾಬ್ದಾರರನ್ನಾಗಿಸಲಾಗಿದೆ.

**ಕಂಡುಬಂದ ಲೋಪಗಳೇನು?:** ಅಪ್ರಸ್ತುತ, ಸಂಬಂಧವಿಲ್ಲದ ಫೋಟೊಗಳನ್ನು ಅಪ್‌ಲೋಡ್ ಮಾಡಿರುವುದು ಲೈವ್ ಫೋಟೊ ಬದಲು ಫೋಟೊ ಮೇಲೆ ಫೋಟೊ ಸೆರೆ ಹಿಡಿದಿರುವುದು ಕೆಲಸಗಾರರ ಎಣಿಕೆಯಲ್ಲಿ ವ್ಯತ್ಯಾಸವಾಗುತ್ತಿರುವುದು ಮಹಿಳೆ ಮತ್ತು ಪುರುಷ ಕೆಲಸಗಾರರ ಎಣಿಕೆಯಲ್ಲಿ ವ್ಯತ್ಯಾಸ ಕೆಲಸಗಾರರು ಒಂದಕ್ಕಿಂತ ಹೆಚ್ಚಿನ ಮಸ್ಟರ್ ರೋಲ್‌ನಲ್ಲಿರುವುದು ಬೆಳಗಿನ, ಮಧ್ಯಾಹ್ನದ ಫೋಟೊಗಳಲ್ಲಿ ಬೇರೆ ಬೇರೆ ಕೆಲಸಗಾರರಿರುವುದು ಮಧ್ಯಾಹ್ನದ ಫೋಟೊ ಅಪ್‌ಲೋಡ್ ಮಾಡದಿರುವುದು ಮನರೇಗಾ ಕಾಮಗಾರಿಗಳಲ್ಲಿ ಪಾರದರ್ಶಕತೆ ತರಲು ಜಾರಿಗೊಳಿಸಿರುವ ಎನ್‌ಎಂಎಂಎಸ್ ಆ್ಯಪ್‌ನಲ್ಲಿ ಹಲವು ಸುಧಾರಣೆಗಳನ್ನು ತರಲಾಗಿದ್ದು, ಕಾಮಗಾರಿಗಳಿಗೆ ಸಂಬಂಧಿಸಿದ ಫೋಟೊಗಳ ಪರಿಶೀಲನೆಗಾಗಿ ಗ್ರಾಪಂ, ತಾಪಂ, ಜಿಪಂನಲ್ಲಿ ಮೇಲ್ವಿಚಾರಣಾ ಕೋಶವನ್ನು ರಚಿಸಲಾಗಿದ್ದು, ಬೆಳಗ್ಗೆ, ಮಧ್ಯಾಹ್ನ ಕಡ್ಡಾಯವಾಗಿ ಫೋಟೊಗಳನ್ನು ಅಪ್‌ಲೋಡ್ ಮಾಡುವಂತೆ ಸೂಚನೆ ನೀಡಲಾಗಿದೆ ಎಂದು ಕೋಲಾರದ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಟಿಕೆ ರಮೇಶ್ ಹೇಳಿದರು.


ಉದಯವಾಹಿನಿ ಚಿತ್ರ

- ಡಿಜಿಟಲ್ ಹಾಜರಾತಿಯಲ್ಲಿ ಸುಧಾರಣೆ, ಬೆಳಗ್ಗೆ ಹಾಗೂ ಮಧ್ಯಾಹ್ನ ಹಾಜರಾತಿ ಕಡ್ಡಾಯ
- ಕೂಲಿ ಕಾರ್ಮಿಕರ ಹೆಸರಲ್ಲಿ ಹೆಚ್ಚಿನ ಹಣಕ್ಕೆ ಬಿಲ್ಲಿಂಗ್
- ಆ್ಯಪ್‌ನಲ್ಲಿರುವ ದೋಷ ಪತ್ತೆ ಹಚ್ಚಿ ಮೋಸ

### ಕೂಲಿ ಕಾರ್ಮಿಕರಿಗೆ ಜಾಗೃತಿ

**ಜಿಲ್ಲೆಯ 154 ಗ್ರಾಪಂಗಳಲ್ಲಿ ಡಿಜಿಟಲ್ ಹಾಜರಾತಿಯ ಕುರಿತಂತೆ ರೋಜ್‌ಗಾರ್ ದಿವಸ್ ಕಾರ್ಯಕ್ರಮಗಳಲ್ಲಿ ಮಾಹಿತಿ ನೀಡಲಾಗುತ್ತಿದ್ದು, ಆ್ಯಪ್ ಸಮರ್ಥವಾಗಿ ಬಳಕೆ ಮಾಡುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಕಾಯಕ ಬಂಧುಗಳಿಗೆ ಫೋಟೊ ಸೆರೆ ಹಿಡಿಯುವ ಬಗ್ಗೆ ಕಾರ್ಯಾಗಾರದಲ್ಲಿ ತರಬೇತಿ ನೀಡಲಾಗಿದ್ದು, ನಕಲಿ ಫೋಟೊಗಳನ್ನು ಅಪ್‌ಲೋಡ್ ಮಾಡಿದರೆ ಆಗುವ ಕ್ರಮದ ಬಗ್ಗೆಯೂ ತಿಳಿಸಿಕೊಡಲಾಗಿದೆ ಎಂದು ಜಿಪಂ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.**

## ಮಿನಿ ನ್ಯೂಸ್

### ಹೃದಯಾಘಾತದಿಂದ ಎಂಜಿನಿಯರಿಂಗ್ ವಿದ್ಯಾರ್ಥಿ ಸಾವು

• ಉದಯವಾಹಿನಿ, ಮಂಡ್ಯ



ಹೃದಯಾಘಾತದಿಂದ ಎಂಜಿನಿಯರಿಂಗ್ ವಿದ್ಯಾರ್ಥಿ ಸಾವನ್ನಪ್ಪಿದ್ದಾನೆ. ಜಿಲ್ಲೆಯ ಕೆಆರ್ ಪೇಟೆ ತಾಲ್ಲೂಕಿನ ಕರೋಟಿ ಗ್ರಾಮದ ನವೀನ್ (21) ಮೃತ ಎಂಜಿನಿಯರಿಂಗ್ ವಿದ್ಯಾರ್ಥಿ. ನವೀನ್ ಬೆಂಗಳೂರಿನ ಕಾಲೇಜುವೊಂದರಲ್ಲಿ ಎಂಜಿನಿಯರಿಂಗ್ ವ್ಯಾಸಂಗ ಮಾಡುತ್ತಿದ್ದು ರಜೆ ಇದ್ದ ಹಿನ್ನೆಲೆಯಲ್ಲಿ ಮನೆಗೆ ಬಂದಿದ್ದನು. ಮನೆಯಲ್ಲಿ ಹಠಾತ್ ಹೃದಯಾಘಾತವಾಗಿ ನವೀನ್ ಕುಸಿದು ಬಿದ್ದಿದ್ದಾನೆ. ತಕ್ಷಣ ಪೋಷಕರು ಕಿಕ್ಕೇರಿ ಆಸ್ಪತ್ರೆಗೆ ಕರೆದುಕೊಂಡು ಹೋದಾಗ ಸರ್ಕಾರಿ ಆಸ್ಪತ್ರೆಯ ಸಿಬ್ಬಂದಿ ಚನ್ನರಾಯಪಟ್ಟಣಕ್ಕೆ ಕರೆದುಕೊಂಡು ಹೋಗಲು ತಿಳಿಸಿದ್ದಾರೆ.

ಚನ್ನರಾಯಪಟ್ಟಣಕ್ಕೆ ಕರೆದುಕೊಂಡು ಹೋಗುತ್ತಿದ್ದ ಮಾರ್ಗಮಧ್ಯೆ ನವೀನ್ ಸಾವನ್ನಪ್ಪಿದ್ದಾನೆ. ಕಿಕ್ಕೇರಿ ಆಸ್ಪತ್ರೆಯಲ್ಲಿ ಸೂಕ್ತ ಚಿಕಿತ್ಸೆ ನೀಡಿದ್ದರೆ ನನ್ನ ಮಗ ಉಳಿಯುತ್ತಿದ್ದ, ಆಸ್ಪತ್ರೆಯ ಸಿಬ್ಬಂದಿ ಪ್ರಾಥಮಿಕ ಚಿಕಿತ್ಸೆ ನೀಡದೇ ಇರುವುದು ಮಗನ ಸಾವಿಗೆ ಕಾರಣ ಎಂದು ಪೋಷಕರು ತಮ ಆಕ್ರೋಶವನ್ನು ಹೊರಹಾಕಿದ್ದಾರೆ. ಮಗನ ಹಠಾತ್ ನಿಧನದಿಂದ ಕುಟುಂಬಸ್ಥರ ಆಕ್ರಂದನ ಮುಗಿಲುಮುಟ್ಟಿತ್ತು.

### ಯೋಗೇಶ್ವರ್ ಸಹಾಯಕ, ಕೈಮುಖಂಡ ಬೈದಾಟ: ಹರಿದಾಡಿದ ಆಡಿಯೋ

• ಉದಯವಹಿನಿ, ಚನ್ನಪಟ್ಟಣ


ಶಾಸಕ ಸಿ.ಪಿ.ಯೋಗೇಶ್ವರ್ ಅವರ ಆಪ್ತ ಸಹಾಯಕ ರಮೇಶ್, ಕಾಂಗ್ರೆಸ್ ಮುಖಂಡ ಇಗ್ಗಲೂರು ಕುಮಾರ್ ಅವರು ಮೊಬೈಲ್ ಕರೆಯಲ್ಲಿ ಪರಸ್ಪರ ಬೈದಾಡಿಕೊಂಡಿದ್ದು, ಈ ಆಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ಇಗ್ಗಲೂರು ಕುಮಾರ್ ತಮ್ಮ ಸಂಬಂಧಿಕರೊಬ್ಬರ ಆರೋಗ್ಯ ಸಮಸ್ಯೆಗೆ ಶಾಸಕರ ಆಪ್ತ ಸಹಾಯಕರು ಸೂಕ್ತವಾಗಿ ಸ್ಪಂದಿಸುತ್ತಿಲ್ಲ ಎಂದು ಆರೋಪ ಮಾಡಿದ್ದರು.

ಈ ವಿಚಾರದ ಬಗ್ಗೆ ವಿವರಣೆ ಪಡೆಯಲು ರಮೇಶ್, ಕುಮಾರ್‌ಗೆ ಕರೆ ಮಾಡಿ ಪ್ರಶ್ನಿಸಿದ್ದಾರೆ. ಆಗ ಕುಮಾರ್, ರಮೇಶ್ ವಿರುದ್ಧ ಹರಿಹಾಯ್ದಿದ್ದಾರೆ. ಇದರಿಂದ ಏಕಾಏಕಿ ರಮೇಶ್ ಕೂಡ ಗರಂ ಆಗಿದ್ದಾರೆ. ಇಬ್ಬರ ನಡುವಿನ ಮೊಬೈಲ್ ಸಂಭಾಷಣೆ ವೇಳೆ ವಾಗ್ವಾದ ನಡೆದಿದೆ. ರಮೇಶ್ ಅವಾಚ್ಯ ಶಬ್ದಗಳಿಂದ ಇಗ್ಗಲೂರು ಕುಮಾರ್ ಅವರನ್ನು ನಿಂದಿಸಿದ್ದಾರೆ. ನಂತರ ಪರಸ್ಪರ ಬೈದಾಡಿಕೊಂಡ ಇಗ್ಗಲೂರು ಕುಮಾರ್, ಈ ವಿಚಾರವನ್ನು ಯೋಗೇಶ್ವರ್‌ಗೆ ಹೇಳುತ್ತೇನೆ. ನೀನೊಬ್ಬ 420 ಎಂದು ಗರಂ ಆಗಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿರುವ ರಮೇಶ್, ನನ್ನ ಇನ್ನೊಂದು ಮುಖ ನೋಡಿಲ್ಲ ನೀನು ಎಂದು ಬೆದರಿಕೆ ಹಾಕಿದ್ದಾರೆ.

### ಶಾಲಾ ಕಾಂಪೌಂಡ್ ನಿರ್ಮಾಣಕ್ಕೆ ಒತ್ತಾಯ: ಶಾಲೆಗೆ ಹೋಗದ ಬಾಲಕಿ

• ಉದಯವಾಹಿನಿ, ತುಮಕೂರು

ತಾಲ್ಲೂಕಿನ ಬೆಳಧರ ಸರ್ಕಾರಿ ಶಾಲೆಗೆ ಕಾಂಪೌಂಡ್ ನಿರ್ಮಿಸುವಂತೆ ಒತ್ತಾಯಿಸಿ 11 ದಿನಗಳಿಂದ ಶಾಲೆಗೆ ತೆರಳದೆ ಪ್ರತಿಭಟಿಸುತ್ತಿದ್ದ ವಿದ್ಯಾರ್ಥಿನಿ ಸಿಮ್ರಾ ಸನೋಬರ್ ಮನೆಗೆ ಮಂಗಳವಾರ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನ್ಯಾಯಾಧೀಶರಾದ ನೂರುನ್ನೀಸಾ ಭೇಟಿ ನೀಡಿ ಸಮಸ್ಯೆ ಆಲಿಸಿದರು. ಸಿಮ್ರಾ ನಾಲ್ಕನೇ ತರಗತಿಯಲ್ಲಿ ಓದುತ್ತಿದ್ದಾರೆ. ಶಾಲೆಗೆ ಕಾಂಪೌಂಡ್ ನಿರ್ಮಿಸುವ ತನಕ ಶಾಲೆಗೆ ಹೋಗುವುದಿಲ್ಲ, ಕಾಂಪೌಂಡ್‌ಗೆ ವ್ಯವಸ್ಥೆ ಮಾಡುವಂತೆ ಕೋರಿ ಪ್ರಧಾನಿ, ಮುಖ್ಯಮಂತ್ರಿಗೆ ಕಳೆದ 10 ದಿನಗಳ ಹಿಂದೆ ಪತ್ರ ಬರೆದಿದ್ದರು.


ಉದಯವಾಹಿನಿ ಚಿತ್ರ

ವಿಚಾರ ತಿಳಿದ ನೂರುನ್ನೀಸಾ ಮನೆಗೆ ಭೇಟಿ ನೀಡಿ ವಿಚಾರಿಸಿದರು. ನಮ್ಮ ಶಾಲೆಗೆ ಕಾಂಪೌಂಡ್ ಇಲ್ಲ. ಹೀಗಾಗಿ ಕಾಂಪೌಂಡ್ ನಿರ್ಮಿಸುವ ತನಕ ನಾನು ಶಾಲೆಗೆ ಬರುವುದಿಲ್ಲ ಎಂದು 2024ರಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗೆ ಪತ್ರ ಬರೆದಿದ್ದರು. ಬಿಇಒ ಕಾಂಪೌಂಡ್ ನಿರ್ಮಾಣದ ಆಶ್ವಾಸನೆ ನೀಡಿದ್ದರು. ಒಂದು ವರ್ಷ ಕಳೆದರೂ ಯಾವುದೇ ಬೆಳವಣಿಗೆಯಾಗಿಲ್ಲ. ಇದೀಗ ಪ್ರಧಾನಮಂತ್ರಿ, ಮುಖ್ಯಮಂತ್ರಿಗೆ ಪತ್ರ ಬರೆದು ಶಾಲೆಗೆ ಗೈರಾಗಿದ್ದಾರೆ. ವಿದ್ಯಾರ್ಥಿನಿ ಶಾಲೆಗೆ ಹೋಗದೆ 11 ದಿನಗಳಾದರೂ ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳು ಸ್ಪಂದಿಸಿಲ್ಲ. ಕಾಂಪೌಂಡ್ ನಿರ್ಮಾಣಕ್ಕೆ ಪರ್ಯಾಯ ವ್ಯವಸ್ಥೆ ಮಾಡಬಹುದಿತ್ತು. ಶಾಲೆಯ ಆವರಣದಲ್ಲಿ ವಾಹನಗಳನ್ನು ನಿಲ್ಲಿಸದಂತೆ ಕ್ರಮವಹಿಸಬಹುದಿತ್ತು. ಅಧಿಕಾರಿ ವರ್ಗ ಸಂಪೂರ್ಣವಾಗಿ ನಿರ್ಲಕ್ಷ್ಯ ವಹಿಸಿದೆ ಎಂದು ನೂರುನ್ನೀಸಾ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

## ಸ್ವಾತಂತ್ರ್ಯ ದಿನಾಚರಣೆ: ಮನೆ ಮನೆಯಲ್ಲೂ ತ್ರಿವರ್ಣ ಧ್ವಜ

• ಉದಯವಾಹಿನಿ, ರಾಮನಗರ

ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ ರಾಷ್ಟ್ರ ಪ್ರೇಮವನ್ನು ಅಭಿವ್ಯಕ್ತಿಗೊಳಿಸಲು ಜಿಲ್ಲೆಯ ಪ್ರತಿ ಮನೆ ಮನೆಯಲ್ಲಿಯೂ ಆ. 15ರವರೆಗೆ ರಾಷ್ಟ್ರಧ್ವಜವನ್ನು ಹಾರಿಸಬೇಕು. ಹರ್ ಘರ್ ತಿರಂಗಾ ಅಭಿಯಾನದಡಿ ಇದನ್ನು ಅನುಷ್ಠಾನಗೊಳಿಸಬೇಕು ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸ್ವಾತಂತ್ರ್ಯ ದಿನಾಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿಮಾತನಾಡಿದ ಅವರು, ಸ್ವಾತಂತ್ರ್ಯದ ಅಮೃತ ಮಹೋತ್ಸವದ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಅಭಿಯಾನ ಅನುಷ್ಠಾನಗೊಳಿಸಬೇಕಿದೆ. ಅಭಿಯಾನದಡಿ ತೆಗೆಯಲಾದ ಸೆಲ್ಫಿ ಭಾವಚಿತ್ರ, ವಿಡಿಯೋಗಳನ್ನು harghartiranga.com ಜಾಲತಾಣದಲ್ಲಿ ಅಪ್ಲೋಡ್ ಮಾಡಬೇಕು ಎಂದರು.


ಉದಯವಾಹಿನಿ ಚಿತ್ರ

ಪ್ರತಿ ಮನೆ, ಸರ್ಕಾರಿ, ಅರೆ ಸರ್ಕಾರಿ ಕಚೇರಿಗಳು, ನಿಗಮ ಮಂಡಳಿಗಳು, ಸ್ವಸಹಾಯ ಗುಂಪುಗಳು, ಸಾರ್ವಜನಿಕ ಉದ್ಯಮ ಸಂಸ್ಥೆಗಳು, ಸಂಘ-ಸಂಸ್ಥೆಗಳು, ನಾಗರಿಕ ಸೇವಾ ಸಂಸ್ಥೆಗಳು, ಶಾಲಾ-ಕಾಲೇಜುಗಳು, ವಿದ್ಯಾರ್ಥಿಗಳು, ಸಾರ್ವಜನಿಕರೆಲ್ಲರೂ ಸ್ವಯಂ ಪ್ರೇರಿತರಾಗಿ ಆ.15ರವರೆಗೆ ರಾಷ್ಟ್ರಧ್ವಜ ಹಾರಿಸಬೇಕು ಎಂದು ಹೇಳಿದರು.

ಜಿಲ್ಲೆಯ ಶಾಲಾ ಹಾಗೂ ಕಾಲೇಜು ಮಟ್ಟದಲ್ಲಿ ಆಯೋಜಿಸುವ ತಿರಂಗಾ ಸಂಗೀತೋತ್ಸವದಲ್ಲಿ ದೇಶಭಕ್ತಿ ಕುರಿತಾದ, ಬಾವುಟದ ಘನತೆ ಹೆಚ್ಚಿಸುವ ಸಂಗೀತ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ತಿರಂಗಾ ಜನಯಾತ್ರೆ ಹಾಗೂ ತಿರಂಗಾ ಬಟ್ಟೆಗಳನ್ನು ಧರಿಸಿ ಮಾನವ ಸರಪಳಿ ನಿರ್ಮಿಸಬೇಕು ಎಂದು ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

> **ಜಿಲ್ಲಾ ಖಾದಿ ಗ್ರಾಮೋದ್ಯೋಗ ಇಲಾಖೆ ಅಧಿಕಾರಿಗಳು ತಿರಂಗಾ ಯೋಜನೆಯಡಿ ಆಹಾರ, ಹಾರ, ದೀಪ ಇತ್ಯಾದಿ ಕರಕುಶಲ ವಸ್ತುಗಳ ಉತ್ಪನ್ನಗಳ ಮಾರಾಟ ಮತ್ತು ತಿರಂಗಾ ವಸ್ತು ಪ್ರದರ್ಶನ ಹಮ್ಮಿಕೊಳ್ಳಬೇಕು. ಕ್ರೀಡಾ ಮತ್ತು ಯುವ ಸಬಲೀಕರಣ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಬೈಕ್, ಸೈಕಲ್ ಜನಯಾತ್ರೆಗಳನ್ನು ಆಯೋಜಿಸಬೇಕು.**
> - ಆರ್. ಚಂದ್ರಯ್ಯ, ಜಿಲ್ಲಾಧಿಕಾರಿ

## ಬಾಕಿ ಇರುವ ಸಾಗುವಳಿ ಚೀಟಿ ವಿವರ ಪಡೆದ ಶಾಸಕ

• ಉದಯವಾಹಿನಿ, ಬಾಗೇಪಲ್ಲಿ

ಬಾಗೇಪಲ್ಲಿ, ಚೇಳೂರು, ಗುಡಿಬಂಡೆ ತಾಲ್ಲೂಕುಗಳಲ್ಲಿ ನಮೂನೆ 50 ಮತ್ತು 53 ರಡಿ ರೈತರ ಸಾಗುವಳಿ ಚೀಟಿ ಬಾಕಿ ಇರುವ ಪ್ರಕರಣ ಎಷ್ಟಿವೆ, ಯಾವ ಕಾಲಮಿತಿಯೊಳಗೆ ರೈತರಿಗೆ ಅನುಕೂಲ ಮಾಡಿಕೊಡುತ್ತೀರಿ ಎಂದು ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ವಿಧಾನಸಭಾ ಕಲಾಪದಲ್ಲಿ ಕಂದಾಯ ಸಚಿವ ಕೃಷ್ಣಬೈರೇಗೌಡರಿಗೆ ಪ್ರಶ್ನೆ ಕೇಳಿದ್ದಾರೆ. ಸಚಿವ ಕೃಷ್ಣಬೈರೇಗೌಡ ಉತ್ತರ ನೀಡಿ, ಬಾಗೇಪಲ್ಲಿ, ಚೇಳೂರು, ಗುಡಿಬಂಡೆ ತಾಲ್ಲೂಕುಗಳಲ್ಲಿ ನಮೂನೆ 50ರಲ್ಲಿ 3,214. ನಮೂನೆ 53ರಲ್ಲಿ 73, ಗುಡಿಬಂಡೆ ತಾಲ್ಲೂಕಿನಲ್ಲಿ ನಮೂನೆ 50, 53ರಲ್ಲಿ ತಲಾ ಒಂದೊಂದು ಪ್ರಕರಣ ಬಾಕಿ ಇವೆ ಎಂದು ತಿಳಿಸಿದ್ದಾರೆ.

ಮಂಜೂರಾತಿ 76 ಪ್ರಕರಣದಲ್ಲಿ ಮಂಜೂರಿ ಕಡತ ಲಭ್ಯ ಇಲ್ಲದೇ ಇರುವುದು ಕಂಡುಬಂದಿದೆ. ಪ್ರಸ್ತುತ ಭೂ ಸುರಕ್ಷಾ ತಂತ್ರಾಂಶದಲ್ಲಿ ಸ್ಕ್ಯಾನಿಂಗ್ ಕಾರ್ಯ ನಡೆಯುತ್ತಿದೆ. ಪೂರ್ಣಗೊಂಡ ಕೂಡಲೇ ಮೂಲ ಕಡತ ಲಭ್ಯವಾಗದ ಪಕ್ಷದಲ್ಲಿ ಈ ಮಂಜೂರಾತಿಯ ನೈಜತೆಗೆ ಸಂಬಂಧಪಟ್ಟಂತೆ ಕಚೇರಿಯಲ್ಲಿ ಇರುವ ಅರ್ಜಿ ಸ್ವೀಕೃತಿ ವಹಿ, ಸಭಾ ನಡಾವಳಿ ಮತ್ತು ಸಾಗುವಳಿ ಚೀಟಿ ವಿತರಣಾ ವಹಿ ಪರಿಶೀಲಿಸಿ ಖಾತೆಗೆ ಕ್ರಮವಹಿಸಲಾಗುವುದು ಎಂದು ಉತ್ತರಿಸಿದ್ದಾರೆ. ಮಂಜೂರಾತಿಯ 713 ಜಮೀನುಗಳು ಅಧಿಸೂಚಿತ ಮೀಸಲು ಅರಣ್ಯ, ಡೀಮ್ಡ್ ಅರಣ್ಯ ಪ್ರದೇಶದಲ್ಲಿ ಬರುತ್ತದೆ. ಅರಣ್ಯ ಇಲಾಖೆಯ ನಿರಾಕ್ಷೇಪಣಾ ಪತ್ರ ನೀಡುವ ಹಂತದಲ್ಲಿ 210 ಪ್ರಕರಣ ಕಂಡುಬಂದಿವೆ.

14 ಪ್ರಕರಣಗಳಿಗೆ ಸಂಬಂಧಿಸಿ ಕಂದಾಯ, ಅರಣ್ಯ ಇಲಾಖೆ ಜಂಟಿ ಸ್ಥಳ ತನಿಖೆ ಮಾಡಿ ನಿರಾಕ್ಷೇಪಣಾ ಪತ್ರ ಸಲ್ಲಿಸಿರುವ ಪ್ರಕರಣಕ್ಕೆ ಖಾತೆ ಮಾಡಲಾಗಿದೆ ಎಂದು ತಿಳಿಸಿದರು. 90 ಮಂಜೂರಾತಿ ಪ್ರಕರಣಗಳಲ್ಲಿ ಪೌರ ಸರಹದ್ದಿನ ಒಳಗಡೆ ನಿರ್ಬಂಧಿಸಿದ ಅಂತರದಲ್ಲಿ ಮಂಜೂರಾತಿ ನೀಡಿದ್ದು ಕಂಡುಬಂದಿದೆ. ಇವುಗಳನ್ನು ವಜಾ ಮಾಡಲು ಕ್ರಮ ವಹಿಸಲಾಗುತ್ತಿದೆ. 26 ಪ್ರಕರಣಗಳಲ್ಲಿ ಮಂಜೂರಾತಿ ಮಾಡಿದ್ದು, ಸಮಿತಿಯ ಮುಂದೆ ಮಂಡಿಸಿ, ಸ್ಥಿರೀಕರಿಸಲು ಬಾಕಿ ಇದೆ. ಮುಂದಿನ ಬಗರ್ ಹುಕಂ ಸಮಿತಿ ಮುಂದೆ ಮಂಡಿಸಿ ಇತ್ಯರ್ಥಪಡಿಸಲಾಗುವದು ಎಂದರು.

## ಬಸ್ ನಿಲ್ದಾಣದಲ್ಲಿ ಮರಿಚಿಕೆಯಾದ ಸ್ವಚ್ಛತೆ

• ಉದಯವಾಹಿನಿ, ಕೆಜಿಎಫ್

ರಾಬರ್ಟಸನ್‌ಪೇಟೆ ಬಸ್ ನಿಲ್ದಾಣದಲ್ಲಿ ಅಸಮರ್ಪಕ ಕಸ ವಿಲೇವಾರಿಯಿಂದಾಗಿ ಬಸ್ ನಿಲ್ದಾಣದ ವರ್ತಕರು ಮತ್ತು ಪ್ರಯಾಣಿಕರು ಸಂಕಷ್ಟಕ್ಕೆ ಒಳಗಾಗಿದ್ದಾರೆ. ರಾಬರ್ಟಸನ್‌ಪೇಟೆ ಬಸ್ ನಿಲ್ದಾಣದಲ್ಲಿ ಖಾಸಗಿ ಮತ್ತು ಕೆಎಸ್‌ಆರ್‌ಟಿಸಿ ಬಸ್‌ಗಳು ಸಂಚರಿಸುತ್ತವೆ. ಪ್ರತಿನಿತ್ಯ ಸಾವಿರಾರು ಪ್ರಯಾಣಿಕರು ಪ್ರಯಾಣಿಸುತ್ತಾರೆ. ಇಂತಹ ಬಸ್ ನಿಲ್ದಾಣವನ್ನು ಸ್ವಚ್ಛ ಮತ್ತು ಸುಂದರವಾಗಿಡುವ ಬದಲು ದುರ್ವಾಸನೆಯಿಂದ ಕೂಡಿದ ಪರಿಸ್ಥಿತಿ ನಿರ್ಮಾಣವಾಗಿದೆ. ಬಸ್ ನಿಲ್ದಾಣದಲ್ಲಿ ಸ್ವಚ್ಛತೆ ಕಾಪಾಡಿಕೊಂಡು ಬರಬೇಕೆಂದು ನಗರಸಭೆ ಈಚೆಗೆ ಬಸ್ ನಿಲ್ದಾಣದ ವರ್ತಕರಿಗೆ ನೋಟಿಸ್ ನೀಡಿತ್ತು.


ಉದಯವಾಹಿನಿ ಚಿತ್ರ

ಕಸವನ್ನು ನಿಗದಿತ ಜಾಗದಲ್ಲಿ ಇಡಬೇಕು. ನಗರಸಭೆಯ ತ್ಯಾಜ್ಯ ವಿಲೇವಾರಿ ಮಾಡುವ ವಾಹನದಲ್ಲಿಯೇ ಹಾಕಬೇಕು ಎಂದು ಸೂಚನೆ ನೀಡಲಾಗಿತ್ತು. ಬಸ್ ನಿಲ್ದಾಣದಲ್ಲಿರುವ ಮದ್ಯದ ಅಂಗಡಿಗಳಿಗಾ ವಿಶೇಷವಾಗಿ ಒಂದು ಆಟೊ ಕಳಿಸಲಾಗುತ್ತಿತ್ತು. ಆದರೆ, ಕೆಲ ವರ್ತಕರು ಸೂಚನೆಯನ್ನು ಪಾಲಿಸದೆ, ಎಲ್ಲೆಂದರಲ್ಲಿ ಕಸ ಹಾಕುತ್ತಿದ್ದಾರೆ.

ಬಸ್ ನಿಲ್ದಾಣಕ್ಕಾಗಿಯೇ ನಾಲ್ವರು ಪೌರ ಕಾರ್ಮಿಕರನ್ನು ಆಯೋಜಿಸಲಾಗಿದೆ ಎಂದು ನಗರಸಭೆ ಆಯುಕ್ತ ಆಂಜನೇಯಲು ಹೇಳುತ್ತಾರೆ. ಬಸ್ ನಿಲ್ದಾಣದಲ್ಲಿ ಬೆಳಗ್ಗೆ ಪೌರ ಕಾರ್ಮಿಕರು ಕಸ ಸ್ವಚ್ಛ ಮಾಡುತ್ತಾರೆ.


ಅದನ್ನು ತೆಗೆದುಕೊಂಡು ಹೋಗುವ ಬದಲು ಸಂಜೆವರೆಗೂ ಬಸ್ ನಿಲ್ದಾಣದ ಒಂದು ಜಾಗದಲ್ಲಿ ಗುಡ್ಡೆ ಮಾಡುತ್ತಾರೆ. ಸಂಜೆ ವೇಳೆಗೆ ಅದನ್ನು ತೆಗೆದುಕೊಂಡು ಹೋಗುತ್ತಾರೆ. ಅಕಸ್ಮಾತ್ ಮಳೆ ಬಂದರೆ ಅದು ಕೂಡ ಸ್ವಚ್ಛವಾಗುವುದಿಲ್ಲ ಎಂದು ಪ್ರಯಾಣಿಕರು ದೂರಿದರು.

## ಮುನಿಯಪ್ಪ ರಾಜೀನಾಮೆ; ದಲಿತರು ನೆನಪಾಗಲಿಲ್ಲವೇ

• ಉದಯವಾಹಿನಿ, ಚಿಕ್ಕಬಳ್ಳಾಪುರ

ದಲಿತ ನಾಯಕ, ಮಾಜಿ ಶಾಸಕ ಎಸ್.ಎಂ.ಮುನಿಯಪ್ಪ ನಿಮ್ಮ ಕಾಟ ತಾಳದೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದರು. ಆಗ ಅವರು ದಲಿತರು ಎನ್ನುವ ಪರಿಜ್ಞಾನ ಶಾಸಕ ಪ್ರದೀಪ್ ಈಶ್ವರ್ ಅವರಿಗೆ ಇರಲಿಲ್ಲವೇ ಎಂದು ಮಹಾನಾಯಕ ಅಂಬೇಡ್ಕರ್ ಸೇನೆ ಅಧ್ಯಕ್ಷ ನಾರಾಯಣಸ್ವಾಮಿ ಆಕ್ರೋಶ ವ್ಯಕ್ತಪಡಿಸಿದರು. ನಗರದಲ್ಲಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ನಾನು ದಲಿತರ ಪರ ಎಂದು ಅಂಬೇಡ್ಕರ್ ಭಾವಚಿತ್ರ ಹಿಡಿದು ಶಾಸಕರು ಮೆರವಣಿಗೆ ನಡೆಸುವರು.

ಆದರೆ ಒಳಗೊಂದು ಹೊರಗೊಂದು ಎನ್ನುವಂತೆ ಇದ್ದಾರೆ. ನೀವು ಕಾಂಗ್ರೆಸ್‌ಗೆ ಬಂದು ಎಷ್ಟು ವರ್ಷವಾಯಿತು ಕಾಂಗ್ರೆಸ್ ಯುವ ಘಟಕದ ರಾಜ್ಯ ಪದಾಧಿಕಾರಿಯಾಗಿದ್ದ ಮುನಿಯಪ್ಪ ಅವರ ಪುತ್ರ, ಎಸ್.ಎಂ.ಜಗದೀಶ್ ಮೇಲೆ ಇಲ್ಲಸಲ್ಲದ ಆರೋಪ ಮಾಡಿದಿರಿ ಎಂದರು.


ಉದಯವಾಹಿನಿ ಚಿತ್ರ

ನಾವು ಕಾಂಗ್ರೆಸ್ ಅಥವಾ ಬಿಜೆಪಿ ಪರವಲ್ಲ. ಸಮುದಾಯಕ್ಕಾಗಿ ಹೋರಾಟ ನಡೆಸುವವರು. ಜಗದೀಶ್ ಪರವಾಗಿ ನಾವು ಹೋರಾಟ ನಡೆಸಿದಾಗ ದಲಿತರ ಮೇಲೆ ಸುಳ್ಳು ಪ್ರಕರಣ ದಾಖಲಿಸುತ್ತಿರಿ. ಪರಿಶಿಷ್ಟರನ್ನು ಪರಿಶಿಷ್ಟರ ವಿರುದ್ಧವೇ ಎತ್ತಿಕಟ್ಟುವಿರಿ. ನೀವು ದಲಿತರ ಪರವೇ ಎಂದು ಪ್ರಶ್ನಿಸಿದರು.

ನಿಮ್ಮಾಕಲಕುಂಟೆಯಲ್ಲಿ ಎಸ್‌ಟಿ ಸಮುದಾಯದ ವ್ಯಕ್ತಿಯೊಬ್ಬರ 400 ಗಿಡಗಳನ್ನು ನಿಮ್ಮ ಹಿಂಬಾಲಕರು ಕಿತ್ತು ಹಾಕಿದರು. ಆಗ ದಲಿತರು ಕಾಣಿಸಲಿಲ್ಲವೇ ಎಂದು ಪ್ರಶ್ನಿಸಿದರು. ಪರಿಶಿಷ್ಟ ಜಾತಿ, ಪಂಗಡದ ಮೀಸಲಾತಿ ವಿಚಾರವಾಗಿ ಶಾಸಕರ ಮನೆ ಎದುರು ತಮಟೆ ಚಳವಳಿ ಮಾಡಿ ಮನವಿ ಸಲ್ಲಿಸಿದೆವು. ಸಿ.ಎಂ ಅವರ ಜೊತೆ ಮಾತನಾಡಿ ಎಂದು ಕೋರಿದೆವು. ಆದರೆ ನೀವು ಆ ಕೆಲಸ ಮಾಡಲಿಲ್ಲ ಎಂದರು. ಮೃತ ಚಾಲಕ ಬಾಬು ಅವರ ಕುಟುಂಬಕ್ಕೆ ನ್ಯಾಯ ಕೊಡಿಸೋಣ. ಅದನ್ನು ಬಿಟ್ಟು ದಲಿತರ ಹೆಸರಿನಲ್ಲಿ ರಾಜಕೀಯ ಮಾಡುತ್ತಿದ್ದೀರಿ ಎಂದು ಕಿಡಿಕಾರಿದರು.

### ಕೈ ನಾಯಕರೇ ಮೂಲೆಗುಂಪು

**ಪ್ರದೀಪ್ ಈಶ್ವರ್ ಅವರನ್ನು ಗೆಲ್ಲಿಸಲು ಹೋರಾಟ ನಡೆಸಿದವರು ಈಗ ಅವರ ಜೊತೆಯಲ್ಲಿ ಯಾರೂ ಇಲ್ಲ. ಕಾಂಗ್ರೆಸ್‌ನ ಹಿರಿಯರು ಮತ್ತು ಮೂಲ ಕಾಂಗ್ರೆಸ್ ನಾಯಕರು ಮೂಲೆಗುಂಪಾಗಿದ್ದಾರೆ ಎಂದು ನಾರಾಯಣಸ್ವಾಮಿ ತಿಳಿಸಿದರು. ಕೆಲವೇ ಮಂದಿ ಮಾತ್ರ ನಿಮ್ಮ ಜೊತೆ ಇದ್ದಾರೆ. ನಿಜವಾದ ಕಾಂಗ್ರೆಸ್ ಕಾರ್ಯಕರ್ತರು ಮೂಲೆಗುಂಪಾಗಿದ್ದಾರೆ ಎಂದರು.**

### ಮೈಸೂರು ಜಿಲ್ಲೆಯ ಹೊರ ಗುತ್ತಿಗೆ ನೌಕರರ ನೆರವಿಗೆ ಸಹಕಾರ ಸಂಘ: ಸಂತೋಷ್ ಲಾಡ್ ಸೂಚನೆ

# ಗುತ್ತಿಗೆ ನೌಕರರನ್ನು ಇನ್ಮುಂದೆ ಸಹಕಾರ ಸಂಘದ ಮೂಲಕ ನೇಮಕ

• ಉದಯವಾಹಿನಿ, ಮೈಸೂರು

**ಜನ ಮಾತ್ರ ಹಿಂದೆ ಬಿದ್ದಿಲ್ಲ**

ಜಿಲ್ಲೆಯಲ್ಲಿ ಹೊರ ಗುತ್ತಿಗೆ ನೌಕರರ ನೇಮಕಕ್ಕೆ ಸಹಕಾರ ಸಂಘ ಸ್ಥಾಪನೆಯಾಗಲಿದೆ. ಖಾಸಗಿ ಏಜೆನ್ಸಿಗಳ ಮೂಲಕ ಸರಕಾರದ ನಾನಾ ಇಲಾಖೆ, ಕಚೇರಿಗಳಿಗೆ ನೇಮಕಗೊಳ್ಳುತ್ತಿದ್ದ ಗುತ್ತಿಗೆ ನೌಕರರನ್ನು ಇನ್ಮುಂದೆ ಸಹಕಾರ ಸಂಘದ ಮೂಲಕ ನೇಮಕ ಮಾಡಿಕೊಳ್ಳಲು ಜಿಲ್ಲಾಡಳಿತ ಮುಂದಾಗಿದೆ. ಖಾಸಗಿ ಏಜೆನ್ಸಿಗಳ ಮೂಲಕ ಗುತ್ತಿಗೆ ನೌಕರರಿಗೆ ಆಗುತ್ತಿದ್ದ ತೊಂದರೆಯನ್ನು ತಪ್ಪಿಸಲು ಕಾರ್ಮಿಕ ಇಲಾಖೆ ಈ ಕ್ರಮ ಕೈಗೊಂಡಿದ್ದು, ಶೀಘ್ರದಲ್ಲಿಯೇ ಸೊಸೈಟಿ ಆರಂಭವಾಗಲಿದೆ.

ಕಾರ್ಮಿಕ ಇಲಾಖೆಯಿಂದ ಮೈಸೂರು ಜಿಲ್ಲೆಯಲ್ಲಿ ಹೊರ ಗುತ್ತಿಗೆ ನೌಕರರ ಸಹಕಾರ ಸಂಘ ಸ್ಥಾಪನೆಯಾಗಲಿದ್ದು, ಹೊರ ಗುತ್ತಿಗೆ ನೌಕರರ ಕಲ್ಯಾಣಕ್ಕೆ ಯೋಜನೆ ರೂಪಿಸಲಾಗಿದೆ. ಕಾರ್ಮಿಕ ಇಲಾಖೆ ಸಚಿವ ಸಂತೋಷ್ ಲಾಡ್ ಅವರ ಸೂಚನೆ ಮೇರೆಗೆ ಸ್ಥಾಪಿಸಲಾಗುತ್ತಿದೆ. ಮೈಸೂರು ನಗರ ಸೇರಿದಂತೆ



ಜಿಲ್ಲೆಯಲ್ಲಿ ನಾಲ್ಕು ಸಾವಿರಕ್ಕೂ ಹೆಚ್ಚು ಮಂದಿ ಹೊರ ಗುತ್ತಿಗೆ ನೌಕರರಿದ್ದು, ನಗರದಲ್ಲಿಯೇ ಮೂರು ಸಾವಿರ ಮಂದಿ ಇದ್ದಾರೆ. ಇವರು ಖಾಸಗಿ ಏಜೆನ್ಸಿಗಳ ಮೂಲಕ ನೇಮಕಗೊಂಡು ಕಾರ್ಯ ನಿರ್ವಹಿಸುತ್ತಿದ್ದಾರೆ. ಇವರಿಗೆ ಸರಕಾರದ ಕಡೆಯಿಂದ ನೀಡುವ ವೇತನ ನೇರವಾಗಿ ಖಾಸಗಿ ಏಜೆನ್ಸಿಗಳಿಗೆ ತಲುಪುತ್ತಿದ್ದು, ಖಾಸಗಿ ಏಜೆನ್ಸಿಗಳು ವೇತನ ನೀಡುತ್ತಿವೆ. ಸರಕಾರದ ನಾನಾ ಇಲಾಖೆಗಳು, ಪ್ರಾಕಾರ, ನಿಗಮ ಮಂಡಳಿ, ಆಸ್ಪತ್ರೆಗಳಲ್ಲಿ ಖಾಸಗಿ ಏಜೆನ್ಸಿಗಳ ಮೂಲಕ ಹೊರ ಗುತ್ತಿಗೆ ನೌಕರರನ್ನು ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳಲಾಗುತ್ತಿದೆ. ಈ ರೀತಿ ನೇಮಕಗೊಂಡ ನೌಕರರಿಗೆ ಸಕಾಲದಲ್ಲಿ ವೇತನ ಸಿಗುವುದಿಲ್ಲ. ಜತೆಗೆ ಭದ್ರತೆ ಕೂಡ ಇರುವುದಿಲ್ಲ ಜತೆಗೆ ಖಾಸಗಿ ಏಜೆನ್ಸಿಗಳಿಂದ ಇಎಸ್ಐ, ಪಿಎಫ್ ವಂತಿಗೆಯನ್ನು ಪಾವತಿಸದೇ ವಂಚನೆ ಮಾಡಿರುವುದು ಸಾಕಷ್ಟು ನಡೆಯುತ್ತಿದೆ.

> **ಹೊರ ಗುತ್ತಿಗೆ ನೌಕರರ ನೇಮಕಕ್ಕಾಗಿ ಮೈಸೂರು ಜಿಲ್ಲೆಯಲ್ಲಿ ಸಹಕಾರ ಸಂಘವನ್ನು ಸ್ಥಾಪಿಸಲಾಗುತ್ತಿದೆ. ಸರಕಾರಿ ನಾನಾ ಇಲಾಖೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗುತ್ತಿಗೆ ನೌಕರರು ಸಂಘದ ಸದಸ್ಯರಾಗಬಹುದಾಗಿದ್ದು, ಕಾರ್ಮಿಕ ಇಲಾಖೆಯಿಂದ ಸಹಕಾರ ಸಂಘ ಸ್ಥಾಪನೆಯಾಗಲಿದೆ.**
> -ಚೇತನ್ ಕುಮಾರ್, ಜಿಲ್ಲಾಕಾರ್ಮಿಕ ಅಧಿಕಾರಿ.

ಕೆಲವೊಮ್ಮೆ ಶೋಷಣೆ ವಿರುದ್ಧ ದನಿ ಎತ್ತಿದ ನೌಕರರನ್ನು ವಜಾ ಗೊಳಿಸಲಾಗುತ್ತದೆ ಎಂಬ ಆರೋಪ ಕೂಡ ಕೇಳಿ ಬರುತ್ತಿದೆ. ಈ ಹಿನ್ನೆಲೆಯಲ್ಲಿ ಹೊರ ಗುತ್ತಿಗೆ ನೌಕರರ ನೇಮಕಕ್ಕೆ ಸಹಕಾರ ಸಂಘ ಸ್ಥಾಪನೆ ಮಾಡಲಾಗುತ್ತಿದೆ, ಎನ್ನುತ್ತಾರೆ ಜಿಲ್ಲಾ ಕಾರ್ಮಿಕ ಅಧಿಕಾರಿ ಚೇತನ್ ಕುಮಾರ್.

**ನೇಮಕ:** ಸರಕಾರದ ನಾನಾ ಇಲಾಖೆಗಳು ತಮಗೆ ಅಗತ್ಯವಿರುವ ಹೊರ ಗುತ್ತಿಗೆ ನೌಕರರ ಮಾಹಿತಿಯನ್ನು ಸೊಸೈಟಿಗೆ ನೀಡಿದರೆ ಸೊಸೈಟಿಯಲ್ಲಿನ ಅಧಿಕಾರಿಗಳು, ಅರ್ಹರನ್ನು ಗುರುತಿಸಿ ಸಂಬಂಧಪಟ್ಟ ಇಲಾಖೆಯಲ್ಲಿ ಕಾರ್ಯ ನಿರ್ವಹಿಸಲು ಕಳುಹಿಸಿಕೊಡುತ್ತಾರೆ. ನೌಕರರಿಗೆ ನೀಡುವ ವೇತನವನ್ನು ಸೊಸೈಟಿಯೇ ಸ್ವೀಕರಿಸಿ ಅಲ್ಲಿಂದ ನೌಕರರಿಗೆ ವೇತನ ಸೇರಿದಂತೆ ಇತರೆ ಸೌಲಭ್ಯಗಳನ್ನು ನೀಡಲಾಗುತ್ತದೆ. ಇದಕ್ಕೆ ನೌಕರರು ಸೊಸೈಟಿಗೆ ಕನಿಷ್ಠ ಸೇವಾ ಶುಲ್ಕ ಪಾವತಿ ಮಾಡಿದರೆ ಸಾಕು ಎನ್ನುತ್ತಾರೆ ಕಾರ್ಮಿಕ ಇಲಾಖೆಯ ಅಧಿಕಾರಿಗಳು.

### ಸಂಘದ ಸದಸ್ಯರಾಗಬಹುದು

**ಸೊಸೈಟಿಯ ಮೂಲಕ ಹೊರ ಗುತ್ತಿಗೆ ನೌಕರರಾಗಿ ನೇಮಕಗೊಂಡವರು ಸಂಘದ ಸದಸ್ಯರಾಗಲಿದ್ದು, ಸಂಘದಲ್ಲಿ ಷೇರುಗಳನ್ನು ಖರೀದಿಸಿ ಹಣ ಹೂಡಿಕೆ ಮಾಡುವುದರೊಂದಿಗೆ ನಾನಾ ಸೌಲಭ್ಯಗಳನ್ನು ಪಡೆಯಬಹುದು.**

### ಹೊರಗುತ್ತಿಗೆ ನೌಕರರಿಗೆ ಸಿಹಿಸುದ್ದಿ

**ಮೈಸೂರು ಜಿಲ್ಲೆಯ ಹೊರಗುತ್ತಿಗೆ ನೌಕರರಿಗೆ ಸಿಹಿಸುದ್ದಿ. ಮೈಸೂರು ಜಿಲ್ಲೆಯ ಹೊರಗುತ್ತಿಗೆ ನೌಕರರ ನೇಮಕಕ್ಕೆ ಸಹಕಾರ ಸಂಘ ಸ್ಥಾಪನೆಗೆ ಕಾರ್ಮಿಕ ಸಚಿವ ಸಂತೋಷ್ ಲಾಡ್ ಸೂಚನೆ ನೀಡಿದ್ದಾರೆ. ಹೊರಗುತ್ತಿಗೆ ನೌಕರರ ನೇಮಕಾತಿ, ವೇತನ ಸಮಸ್ಯೆ ಸೇರಿದಂತೆ ಇತರ ಸಮಸ್ಯೆಗಳಿಗೆ ಈ ಕ್ರಮ ಅಂತ್ಯ ಹಾಡಲಿದೆ. ನೌಕರರಿಗೆ ನೆರವಾಗಲಿದೆ.**

## ಅರಣ್ಯ ಇಲಾಖೆಗೆ ಭೂಮಿ ಹಸ್ತಾಂತರಿಸದಂತೆ ಪ್ರತಿಭಟನೆ

• ಉದಯವಾಹಿನಿ, ಸೋಮವಾರಪೇಟೆ

ಸಿ, ಡಿ ದರ್ಜೆ ಭೂಮಿಯನ್ನು ಅರಣ್ಯ ಇಲಾಖೆಗೆ ಹಸ್ತಾಂತರಿಸಬಾರದು ಹಾಗೂ ಈ ಭೂಮಿಯಲ್ಲಿ ಸಾಗುವಳಿ ಮಾಡುತ್ತಿರುವ ರೈತರಿಗೆ ಹಕ್ಕುಪತ್ರ ನೀಡಬೇಕು ಎಂದು ಒತ್ತಾಯಿಸಿ ತಾಲ್ಲೂಕು ರೈತ ಹೋರಾಟ ಸಮಿತಿ ಮತ್ತು ರೈತ ಸಂಘ ಕರೆ ನೀಡಿದ್ದ ತಾಲ್ಲೂಕು ಬಂದ್ ಯಶಸ್ವಿಯಾಯಿತು. ಎಲ್ಲೆಡೆ ಅಂಗಡಿ ಮುಂಗಟ್ಟುಗಳನ್ನು ಬಂದ್ ಮಾಡಲಾಗಿತ್ತು. ವಾಹನ ಸಂಚಾರ ಸ್ಥಗಿತಗೊಂಡಿತ್ತು. ಬ್ಯಾಂಕ್ ಸೇರಿ ಕೆಲವು ಸರ್ಕಾರಿ ಕಚೇರಿಗಳು ಕಾರ್ಯನಿರ್ವಹಿಸಲಿಲ್ಲ. ಒಂದೆರಡು ಖಾಸಗಿ ಶಾಲೆಗಳನ್ನು ಹೊರತುಪಡಿಸಿ ಉಳಿದ ಶಾಲೆಗಳು ಒಂದು ದಿನ ಮೊದಲೇ ರಜೆ ಘೋಷಣೆ ಮಾಡಿದ್ದವು. ಸರ್ಕಾರಿ ಶಾಲೆಗಳು ಎಂದಿನಂತೆ ತೆರೆದಿದ್ದರೂ ವಾಹನ ಸೌಲಭ್ಯವಿಲ್ಲದೆ ವಿದ್ಯಾರ್ಥಿಗಳು ಶಾಲೆಯತ್ತ ಸುಳಿಯಲಿಲ್ಲ. ಪಟ್ಟಣದ ಚನ್ನಬಸಪ್ಪ ಸಭಾಂಗಣ, ವಿವೇಕಾನಂದ ವೃತ್ತ ಹಾಗೂ ಬಾಣಾವಾರ ರಸ್ತೆಯಲ್ಲಿ ಪ್ರತಿಭಟನಕಾರರು ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

ವಿವೇಕಾನಂದ ವೃತ್ತದ ಬಳಿಯಲ್ಲಿ ಸೇರಿದ್ದ ನೂರಾರು ಪ್ರತಿಭಟನಕಾರರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಈ ವೇಳೆ ಸ್ಥಳಕ್ಕೆ ಬಂದ ತಹಶೀಲ್ದಾರ್ ಕೃಷ್ಣಮೂರ್ತಿ ಮತ್ತು ವಲಯ ಅರಣ್ಯಾಧಿಕಾರಿ ಶೈಲೇಂದ್ರ ಕುಮಾರ ಅವರನ್ನು ಸುತ್ತುವರೆದ ಹೋರಾಟಗಾರರು 'ಸಿ' ಮತ್ತು 'ಡಿ' ಜಾಗಕ್ಕೆ ಸಂಬಂಧಿಸಿ ವಾಗ್ವಾದ ನಡೆಸಿದರು.


ಉದಯವಾಹಿನಿ ಚಿತ್ರ

ರೈತ ಹೋರಾಟ ಸಮಿತಿಯ ಅಧ್ಯಕ್ಷ ಕೆ.ಬಿ.ಸುರೇಶ್ ಮಾತನಾಡಿ, ತಾಲ್ಲೂಕಿನಲ್ಲಿ ರೈತರು ಹಲವು ದಶಕಗಳಿಂದ ಕೃಷಿ ಮಾಡಿಕೊಂಡಿರುವ ಸಿ ಮತ್ತು ಡಿ ಜಾಗವನ್ನು ಕಳೆದುಕೊಳ್ಳುವ ಭೀತಿಯಲ್ಲಿದ್ದಾರೆ. ಅರಣ್ಯ ಇಲಾಖೆಯವರು ಕೃಷಿ ಭೂಮಿಯನ್ನೇ ಸಿ ಮತ್ತು ಡಿ ಎಂದು ಸೆಕ್ಷನ್ -4ರ ಸರ್ವೆಗೆ ಮುಂದಾಗಿದ್ದಾರೆ. ಕೃಷಿ ಭೂಮಿಯನ್ನು ಅರಣ್ಯ ಇಲಾಖೆಗೆ ಸೇರಿಸಿದರೆ, ರೈತರು ಆತ್ಮಹತ್ಯೆ ಮಾಡಿಕೊಳ್ಳಬೇಕಾಗುತ್ತದೆ' ಎಂದರು.

**ತಾಲ್ಲೂಕಿನ ವಿವಿಧೆಡೆ ಬಂದ್ ಯಶಸ್ವಿ:** ಸೋಮವಾರಪೇಟೆ ಮಡಿಕೇರಿ ರಸ್ತೆಯ ಮಾದಾಪುರ ಮತ್ತು ಹಟ್ಟಿಹೊಳೆಯಲ್ಲಿ ಪ್ರತಿಭಟನಕಾರರು ರಸ್ತೆ ಬಂದ್ ಮಾಡುವ ಮೂಲಕ ವಾಹನ ಸಂಚಾರ ತಡೆದರು. ಅಂಗಡಿ ಮುಂಗಟ್ಟುಗಳು ಮುಚ್ಚಿದ್ದವು. ಕೃಷಿ ಪತ್ತಿನ ಸಹಕಾರ ಸಂಘ, ಕೆನರಾ ಬ್ಯಾಂಕ್, ಡಿಸಿಸಿ ಬ್ಯಾಂಕ್ ರಜೆ ಘೋಷಣೆ ಮಾಡಿದ್ದವು.

# ಅಂತರಾಳದಿಂದ..


EDITORIAL

## ಸಂಪುಟದಿಂದ ಕೆ.ಎನ್.ರಾಜಣ್ಣ ವಜಾ: ಸ್ವಯಂ ಆಹ್ವಾನಿಸಿಕೊಂಡ ತಲೆದಂಡ

ಸಿದ್ದರಾಮಯ್ಯ ಅವರ ಆಪ್ತವಲಯದ ಮುಂಚೂಣಿ ನೇತಾರನೆಂದೇ ಗುರುತಿಸಿಕೊಂಡಿದ್ದ ಕೆ.ಎನ್. ರಾಜಣ್ಣ ಅವರು, ಮತ ಕಳವು ಆರೋಪಕ್ಕೆ ಸಂಬಂಧಿಸಿದಂತೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಯವರ ಮಾತಿಗೆ ವ್ಯತಿರಿಕ್ತ ಹೇಳಿಕೆ ನೀಡಿದ್ದ ಕಾರಣಕ್ಕಾಗಿ ಸಚಿವ ಸ್ಥಾನ ಕಳೆದುಕೊಂಡಿದ್ದಾರೆ. ಕೇಂದ್ರ ಚುನಾವಣಾ ಆಯೋಗವನ್ನು ದುರ್ಬಳಕೆ ಮಾಡಿಕೊಂಡು ಬಿಜೆಪಿ ಅಧಿಕಾರ ಹಿಡಿಯುತ್ತಿದೆ ಎಂಬ ಗಂಭೀರವಾದ ಆರೋಪ ಮಾಡಿರುವ ರಾಹುಲ್ ಗಾಂಧಿಯವರು, ಅದಕ್ಕೆ ಪೂರಕವಾಗಿ ಕರ್ನಾಟಕದ ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ 2024ರ ಲೋಕಸಭಾ ಚುನಾವಣೆಗೆ ಬಳಸಿದ್ದ ಮತದಾರರ ಪಟ್ಟಿಗೆ ಸಂಬಂಧಿಸಿದ ಹಲವು ದಾಖಲೆಗಳನ್ನು ಬಹಿರಂಗಪಡಿಸಿದ್ದರು. ಕೇಂದ್ರದಲ್ಲಿ ಅಧಿಕಾರದಲ್ಲಿರುವ ಎನ್‌ಡಿಎ ಮೈತ್ರಿಕೂಟದ ನೇತೃತ್ವ ವಹಿಸಿರುವ ಬಿಜೆಪಿಯು ಕೇಂದ್ರ ಚುನಾವಣಾ ಆಯೋಗವನ್ನು ದುರ್ಬಳಕೆ ಮಾಡಿಕೊಂಡು ವಿರೋಧ ಪಕ್ಷಗಳನ್ನು ಚುನಾವಣೆಗಳಲ್ಲಿ ಸೋಲಿಸುತ್ತಿದೆ ಎಂಬ ಆರೋಪವನ್ನು ಮುಂದಿಟ್ಟುಕೊಂಡು ದೇಶವ್ಯಾಪಿ ಪ್ರಬಲವಾದ ಹೋರಾಟವೊಂದನ್ನು ರೂಪಿಸಲು ರಾಹುಲ್ ಗಾಂಧಿ ಮುಂದಾಗಿದ್ದಾರೆ. ಈ ಪ್ರಯತ್ನಕ್ಕೆ ಕಾಂಗ್ರೆಸ್ ನೊಂದಿಗೆ ವಿರೋಧ ಪಕ್ಷಗಳನ್ನು ಒಳಗೊಂಡಿರುವ ಇಂಡಿಯಾ' ಮೈತ್ರಿಕೂಟವೂ ದನಿಗೂಡಿಸಿದೆ. ಈ ಸಂದರ್ಭದಲ್ಲಿ ತಮ್ಮ ನಾಯಕನ ಮಾತಿಗೆ ವಿರುದ್ಧವಾದ ಹೇಳಿಕೆ ನೀಡುವ ಮೂಲಕ ರಾಜಣ್ಣ ಅಪಾಯ ತಂದುಕೊಂಡಿದ್ದಾರೆ. ರಾಹುಲ್ ಆರೋಪದಿಂದ ಇಕ್ಕಟ್ಟಿಗೆ ಸಿಲುಕಿದ್ದ ಬಿಜೆಪಿಗೆ ರಾಜಣ್ಣ ಹೇಳಿಕೆ ವರದಾನವಾಗಿತ್ತು. ಅದನ್ನೇ ಮುಂದಿಟ್ಟುಕೊಂಡು ಕಾಂಗ್ರೆಸ್‌ನಾಯಕರನ್ನು ಮುಜುಗರಕ್ಕೆ ಈಡುಮಾಡಲು ಬಿಜೆಪಿ ತಂತ್ರಗಾರಿಕೆ ರೂಪಿಸತೊಡಗಿತ್ತು. ಇದು ಕಾಂಗ್ರೆಸ್ ನಾಯಕತ್ವವು ರಾಜಣ್ಣ ಅವರನ್ನು ಕಠಿಣವಾಗಿ ಶಿಕ್ಷಿಸಲು ಎಡೆ ಮಾಡಿಕೊಟ್ಟಿತು. ಸಾಮಾನ್ಯ ಸಂದರ್ಭಗಳಲ್ಲಿ ಪಕ್ಷದ ನಾಯಕತ್ವವು ರಾಜೀನಾಮೆ ಪಡೆಯುವ ಮಾರ್ಗವನ್ನು ಆಯ್ದುಕೊಳ್ಳುತ್ತದೆ. ಆದರೆ, ಅದಕ್ಕೆ ಅವಕಾಶವನ್ನೇ ನೀಡದೆ ಕೆ.ಎನ್. ರಾಜಣ್ಣ ಅವರನ್ನು ಸಂಪುಟದಿಂದ ವಜಾ ಮಾಡಲಾಗಿದೆ.


ರಾಜ್ಯ ಕಾಂಗ್ರೆಸ್ ಉಸ್ತುವಾರಿಯಾಗಿರುವ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಸಚಿವರು, ಶಾಸಕರ ಜೊತೆ ನಡೆಸಿದ್ದ ಸಭೆಗೆ ಗೈರಾಗಿದ್ದಲ್ಲದೇ, ಸುರ್ಜೇವಾಲಾ ವಿರುದ್ಧ ಬಹಿರಂಗವಾಗಿಯೇ ಹರಿಹಾಯ್ದಿದ್ದರು. ಇದು ಕಾಂಗ್ರೆಸ್ ನಾಯಕತ್ವವನ್ನು ರಾಷ್ಟ್ರ ಮಟ್ಟದಲ್ಲಿ ಮುಜುಗರಕ್ಕೆ ಸಿಲುಕಿಸಿತ್ತು. ಸಚಿವ ಸ್ಥಾನವು ಸಾಮೂಹಿಕ ಜವಾಬ್ದಾರಿಯನ್ನು ಒಳಗೊಂಡಿರುತ್ತದೆ. ಸಚಿವರೊಬ್ಬರು ಆಡುವ ಮಾತು ಸರ್ಕಾರ, ಆಡಳಿತ ಪಕ್ಷವನ್ನು ಪ್ರತಿನಿಧಿಸುತ್ತದೆ. ಸಚಿವರ ಮಾತಿಗೆ ಸರ್ಕಾರ, ಆಡಳಿತ ಪಕ್ಷ ಉತ್ತರದಾಯಿ ಆಗಬೇಕಾಗುತ್ತದೆ. ಸಾಮೂಹಿಕ ಹೊಣೆಗಾರಿಕೆಯನ್ನು ಮರೆತವರಂತೆ ರಾಜಣ್ಣ ಹೇಳಿಕೆಗಳನ್ನು ನೀಡುತ್ತಿದ್ದರು. ಸರ್ಕಾರ ಮತ್ತು ಪಕ್ಷದಲ್ಲಿನ ಚೌಕಟ್ಟು, ನಿಯಮಗಳು ತನಗೆ ಅನ್ವಯವಾಗುವುದಿಲ್ಲ ಎಂಬಂತೆ ಧಾರ್ಷ್ಟ್ಯದಿಂದ ನಡೆದುಕೊಳ್ಳುತ್ತಿದ್ದರು. ಇಲಾಖೆಗೆ ಸಂಬಂಧಿಸಿದ ವಿಷಯಗಳಿಗಿಂತಲೂ ಹೆಚ್ಚಾಗಿ ವಿವಾದಾತ್ಮಕ ರಾಜಕೀಯ ಹೇಳಿಕೆಗಳಿಂದಲೇ ಸದಾ ಸದ್ದು ಮಾಡುತ್ತಿದ್ದರು. ಸಿದ್ದರಾಮಯ್ಯ ಅವರ ಆಪ್ತವಲಯದಲ್ಲಿ ರಾಜಣ್ಣ ಇದ್ದಾರೆ ಎಂಬ ಕಾರಣಕ್ಕಾಗಿಯೇ ಕಾಂಗ್ರೆಸ್ ಹೈಕಮಾಂಡ್ ಅವರ ವಿರುದ್ಧ ಕ್ರಮ ಜರುಗಿಸುವ ಪ್ರಯತ್ನ ಮಾಡಿರಲಿಲ್ಲ. ಆದರೆ, ಈಗ ರಾಹುಲ್ ಗಾಂಧಿಯವರ ನಡೆಯ ವಿರುದ್ಧವೇ ರಾಜಣ್ಣ ಹೇಳಿಕೆ ನೀಡಿದ್ದರಿಂದ ಪಕ್ಷದ ಹೈಕಮಾಂಡ್ ಸಚಿವ ಸ್ಥಾನ ಕಿತ್ತುಕೊಳ್ಳುವ ಅತಿ ಕಠಿಣ ಕ್ರಮದ ಅಸ್ತ್ರ ಝಳಪಿಸಿದೆ. ಕಾಂಗ್ರೆಸ್ ಹೈಕಮಾಂಡ್ ಈ ಹಿಂದೆಯೇ ಶಿಸ್ತುಕ್ರಮದ ಹೆಜ್ಜೆ ಇಟ್ಟಿದ್ದರೆ, ವಿಧಾನಮಂಡಲ ಅಧಿವೇಶನದ ಆರಂಭದ ದಿನವೇ ಸಚಿವರೊಬ್ಬರನ್ನು ಸಂಪುಟದಿಂದ ವಜಾಗೊಳಿಸಬೇಕಾದ ಇಕ್ಕಟ್ಟಿಗೆ ಸಿಲುಕುತ್ತಿರಲಿಲ್ಲ. ರಾಜಣ್ಣ ಅವರನ್ನು ಸಚಿವ ಸ್ಥಾನದಿಂದ ಕಿತ್ತುಹಾಕಿದ ಬೆನ್ನಲ್ಲೇ ಕಾಂಗ್ರೆಸ್ ಪಕ್ಷದಲ್ಲಿನ ಆಂತರಿಕ ಪ್ರಜಾಪ್ರಭುತ್ವದ ಕುರಿತ ಚರ್ಚೆಯೂ ಜೋರಾಗಿದೆ. ರಾಜಣ್ಣ ಅವರನ್ನು ಸಂಪುಟದಿಂದ ವಜಾಗೊಳಿಸಿರುವ ತೀರ್ಮಾನ ರಾಹುಲ್ ಗಾಂಧಿಯವರು ಪ್ರತಿಪಾದಿಸುವ ಅಂತರಿಕ ಪ್ರಜಾಪ್ರಭುತ್ವದ ನಿಲುವಿಗೆ ವಿರುದ್ಧವಾದುದು ಎಂಬ ಆಕ್ಷೇಪವೂ ವ್ಯಕ್ತವಾಗಿದೆ.

**26 ತಿಂಗಳಿನಿಂದ ಸಚಿವರಾಗಿದ್ದ ರಾಜಣ್ಣ ಅವರು, ಪದೇ ಪದೇ ಲಕ್ಷ್ಮಣ ರೇಖೆಯನ್ನು ಮೀರಿ ಮಾತನಾಡಿ, ವಿವಾದಗಳನ್ನು ಸೃಷ್ಟಿಸುತ್ತಲೇ ಇದ್ದರು. ಅಧಿಕಾರ ಹಂಚಿಕೆ, ಕೆಪಿಸಿಸಿ ಅಧ್ಯಕ್ಷರ ಬದಲಾವಣೆ, ಹೆಚ್ಚುವರಿ ಉಪ ಮುಖ್ಯಮಂತ್ರಿಗಳ ಹುದ್ದೆ ಸೃಷ್ಟಿ, ಹೀಗೆ ಹಲವು ವಿಷಯಗಳಲ್ಲಿ ವಿವಾದಾತ್ಮಕ ಹೇಳಿಕೆ ನೀಡಿದ್ದರು. ಸೆಪ್ಟೆಂಬರ್ ತಿಂಗಳಲ್ಲಿ ರಾಜ್ಯ ರಾಜಕಾರಣದಲ್ಲಿ ಕ್ರಾಂತಿ ಆಗಲಿದೆ ಎಂಬ ಹೇಳಿಕೆ ನೀಡಿ ಕಾಂಗ್ರೆಸ್ ಪಕ್ಷದೊಳಗೆ ತಲ್ಲಣ ಸೃಷ್ಟಿಸಿದ್ದರು.**



ಸಂಪುಟದಿಂದ ವಜಾಗೊಳಿಸುವ ಮುನ್ನ ತಮ್ಮ ವಿರುದ್ಧದ ಆರೋಪದ ಕುರಿತು ಸಮಜಾಯಿಷಿ ನೀಡುವ ಒಂದು ಅವಕಾಶವನ್ನಾದರೂ ಅವರಿಗೆ ನೀಡಬೇಕಿತ್ತು. ಈ ಹಂತದಲ್ಲಿ ರಾಜಣ್ಣ ಅವರನ್ನು ಶಿಕ್ಷಿಸುವ ನಿರ್ಧಾರದ ಹಿಂದೆ ಪಕ್ಷದೊಳಗಿನ ಅವರ ವಿರೋಧಿಗಳ ಪ್ರಯತ್ನವೂ ಫಲಿಸಿರಬಹುದು. ಆದರೆ, ವಾಚಾಳಿತನ, ಪಕ್ಷದ ನಾಯಕತ್ವವನ್ನೇ ಧಿಕ್ಕರಿಸಿ ಹೇಳಿಕೆ ನೀಡುವಂತಹ ಸ್ವಯಂಕೃತ ತಪ್ಪುಗಳಿಗೆ ರಾಜಣ್ಣ ಬೆಲೆ ತೆತ್ತಿದ್ದಾರೆ. ಇದು ಮಾತಿನ ಮೂಲಕವೇ ಸದ್ದು ಮಾಡಬೇಕೆನ್ನುವ ಚಾಳಿ ಹೊಂದಿರುವ ರಾಜಕಾರಣಿಗಳಿಗೆ ಪಾಠವಾಗಬಲ್ಲ ನಿದರ್ಶನದಂತಿದೆ.

# ರಾಮಾಯಣ



## ಅನಸೂಯಾ ಸೀತಾದೇವಿಯರ ಸಂಭಾಷಣೆ

• ಹಿಂದಿನ ಸಂಚಿಕೆಯಿಂದ

### 116 ನೆಯ ಅಧ್ಯಾಯ

ಸೀತಾದೇವಿ, ಪತಿಯ ಮಾತನ್ನು ಕೇಳದೆ ಆತನ ಮಾತಿಗೆ ಪ್ರತ್ಯುತ್ತರವನ್ನು ಕೊಡುವ ಸ್ತ್ರೀಯು ಅಪಕೀರ್ತಿಗೊಳಗಾಗಿ ನರಕವನ್ನೊದುವಳು. ನಿನ್ನಂಥ ಕಲ್ಯಾಣ ಗುಣಸಂಪತ್ತಿಯುಳ್ಳ ಪತಿವ್ರತಾಸ್ತ್ರೀಯು ಪತಿವ್ರತಾಧರ್ಮದಿಂದ ಪತಿಸಹಿತವಾಗಿ ಸ್ವರ್ಗಲೋಕವನ್ನೋದುವಳು. ನೀನು ನಿನ್ನ ಪತಿಯಾದ ಶ್ರೀರಾಮನ ಸಂಗಡ ಸಂಚಾರಮಾಡಿ ಲೋಕದಲ್ಲಿ ಅಧಿಕವಾದ ಕೀರ್ತಿಯನ್ನು ಪಡೆದು ಈ ಲೋಕದಲ್ಲಿ ಸುಖವನ್ನನುಭವಿಸಿ ಪರಲೋಕದಲ್ಲಿ ಉತ್ತಮವಾದ ಸದ್ಗತಿಯನ್ನು ಪಡೆಯುವೆ ಎಂದಳು. ಆಮೇಲೆ ಸೀತಾದೇವಿಯು ಅನಸೂಯಾದೇವಿಯನ್ನು ಕುರಿತು ಮೆಲ್ಲಗೆ ಹೀಗೆ ನುಡಿದಳು: ದೇವಿ, ನೀನು ಹೇಳಿದ ಸದಾಚಾರವು ಪತಿವ್ರತಾಸ್ತ್ರೀಯರಿಗೆ ಸ್ವಧರ್ಮವೇ ಸರಿ. ಸ್ತ್ರೀಯರಿಗೆ ಪತಿಯೇ ಗುರು. ಪತಿಯೇ ದೈವ. ಆದಕಾರಣ ಸ್ತ್ರೀಯರು ಪತಿಯ ಸೇವೆಯನ್ನೇ ಮಾಡಬೇಕು. ಸ್ತ್ರೀಯಾದವಳು ಪುರುಷನ ಅರ್ಧಶರೀರವು. ಆದ್ದರಿಂದ ಪುರುಷನ ಚರಿತ್ರವು ಸ್ತ್ರೀಯರಿಗೂ ಬರುವುದು.

ಲೋಕೋತ್ತರನಾಗಿಯೂ ಗುಣೋತ್ತರನಾಗಿಯೂ ಅತ್ಯಂತ ಧರ್ಮಲೋಲುಪ್ತಿ ಯುಳ್ಳವನಾಗಿಯೂ ಜಿತೇಂದ್ರಿಯನಾಗಿಯೂ ಸ್ಥಿರವಾದ ಪ್ರತಿಜ್ಞೆಯುಳ್ಳವನಾಗಿಯೂ ಧರ್ಮಾತ್ಮನಾಗಿಯೂ ಮಾತಾಪಿತೃಗಳಲ್ಲಿ ಅತ್ಯಂತ ಪ್ರೀತಿಯುಳ್ಳವನಾಗಿಯೂ ಇರುವ ಶ್ರೀರಾಮನು ತನ್ನ ತಾಯಿಯಾದ ಕೌಸಲ್ಯಾದೇವಿಯಲ್ಲಿ ಹೇಗೆ ಮಾತೃಭಕ್ತಿಯಿಂದ ನಡೆದುಕೊಳ್ಳುವನೋ ಆ ರೀತಿಯಲ್ಲಿಯೇ ದಶರಥರಾಯನ ಉಳಿದ ಪತ್ನಿಯರಲ್ಲಿಯೂ ಅತಿವಿಶ್ವಾಸದಿಂದ ನಡೆದುಕೊಳ್ಳುವನು. ಅವರನ್ನು ತನ್ನ ತಾಯಿಯರಂತೆ ಕಾಣುವನು. ಸ್ತ್ರೀಯರಲ್ಲಿ ಯಾವ ಸ್ತ್ರೀಯರನು ದೃಷ್ಟಿಸಿದರೂ ಆ ಸ್ತ್ರೀಯರನ್ನು ತನ್ನ ತಾಯಿಯಂತೆಯೇ ತಿಳಿದು ಮರ್ಯಾದೆಯಿಂದ ಕಾಣುತ್ತಿರುವನು. ಅನಸೂಯಾದೇವಿ, ನಾನು ಶ್ರೀರಾಮನೊಡನೆ ವನಕ್ಕೆ ಬರುವಾಗ ನನ್ನ ಅತ್ತೆಯಾದ ಕೌಸಲ್ಯಾದೇವಿಗೆ ಅಭಿನಂದಿಸಲು ಆ ದೇವಿಯು ನಿನ್ನಂತೆಯೇ ಬುದ್ಧಿ ಹೇಳಿದಳು. ಅದು ನನ್ನ ಮನಸ್ಸಿನಲ್ಲಿ ಸ್ಥಿರವಾಗಿ ನಿಂತಿದೆ. ಅದಲ್ಲದೆ ನನ್ನ ತಂದೆಯಾದ ಜನಕಮಹಾರಾಜನು ನನ್ನನ್ನು ಅಗ್ನಿಸಾಕ್ಷಿಕವಾಗಿ ಶ್ರೀರಾಮನಿಗೆ ವಿವಾಹಮಾಡುವಾಗ ನನ್ನ ತಾಯಿಯೂ ನಿನ್ನಂತೆಯೇ ನುಡಿದಳು. ಆ ಮಾತು ನನ್ನ ಅಂತರಂಗದಲ್ಲಿ ನೆಲೆಗೊಂಡಿದೆ. ಲೋಕದಲ್ಲಿ ಸ್ತ್ರೀಯರಿಗೆ ಪತಿಸೇವೆಗಿಂತಲೂ ಅಧಿಕವಾದ ತಪಸ್ಸಿಲ್ಲ. ಸಾವಿತ್ರಿಯೆಂಬ ಪತಿವ್ರತಾಸ್ತ್ರೀಯು ಪತಿಸೇವೆಯಿಂದ ಸ್ವರ್ಗವನ್ನೈದಿದಂತೆ ನೀನು ಪಾತಿವ್ರತ್ಯದ ಮಹಿಮೆಯಿಂದ ಸ್ವರ್ಗವನ್ನು ಪಡೆಯುವೆ. ಈ ಪ್ರಕಾರದಲ್ಲಿ ಪತಿವ್ರತಾಸ್ತ್ರೀಯರು ತಮ್ಮ ಪುರುಷರಲ್ಲಿ ದೃಢಭಕ್ತಿ ಯುಳ್ಳವರಾಗಿ ಆ ಪುಣ್ಯದಿಂದ ಸ್ವರ್ಗಲೋಕವನ್ನೈದಿದವರನೇಕರುಂಟು ಎಂದು ಹೇಳಿದಳು. ಅನಸೂಯಾದೇವಿಯು ಆನಂದದಿಂದ ಸೀತಾದೇವಿಯನ್ನು ಆಲಿಂಗಿಸಿ ಆಕೆಯ ಶಿರಸ್ಸನ್ನು ಆಘ್ರಾಣಿಸಿ ಮೈಯನ್ನು ಸವರಿ ಸೀತೆ, ನಾನು ವ್ರತೋಪವಾಸಗಳಿಂದ ಸಂಪಾದಿಸಿದ ಪುಣ್ಯವು ಬೇಕಾದಷ್ಟಿದೆ. ಅದರ ಬಲದಿಂದ ನಿನಗೆ ಏನು ಬೇಕಾದರೂ ಕೊಡಬಲ್ಲೆನು. ನಿನಗೆ ಏನು ಬೇಕು ಎಂದು ಕೇಳಿದಳು.

ಮುಂದುವರಿಯುವುದು...

# ಭವ್ಯ ಭಾರತದ ಭವಿಷ್ಯದ ಬಗ್ಗೆ ನನ್ನ ಕನಸುಗಳು


ವಿಶ್ವಾಸ್.ಡಿ.ಗೌಡ



ನನ್ನ ಕನಸಿನ ಪ್ರಕಾರ ಭಾರತದ ಬಗ್ಗೆ ಕನಸು ಮಹಿಳಾ ಸಬಲೀಕರಣ, ಉದ್ಯೋಗಾವಕಾಶಗಳು, ಜಾತಿ ತಾರತಮ್ಯ, ಭ್ರಷ್ಟಾಚಾರ, ಉತ್ತಮ ಮೂಲಸೌಕರ್ಯ ಮತ್ತು ನೈರ್ಮಲ್ಯ, ಇವುಗಳ ಮೂಲಕ ನನ್ನ ಕನಸಿನ ಭಾರತದ ಸಾದನೆ ಹೇಗಾಗುತ್ತದೆ ಎಂಬುದರ ಬಗ್ಗೆ ತಿಳಿಸಲು ಬಯಸುತ್ತೇನೆ. ಪ್ರತಿಯೊಬ್ಬರೂ ತಮ್ಮ ದೇಶವನ್ನು ದೊಡ್ಡದಾಗಿ ಮತ್ತು ಪ್ರಜಾಸತ್ತಾತ್ಮಕವಾಗಿ ಯಶಸ್ವಿಯಾಗಲು ಕನಸುಗಳನ್ನು ಹೊಂದಿರುತ್ತಾರೆ. ಎಲ್ಲಾ ಕ್ಷೇತ್ರಗಳಲ್ಲಿ ಮತ್ತು ಎಲ್ಲಾ ಲಿಂಗಗಳಿಗೆ ಸಮಾನತೆ ಇರುವ ದೇಶವು ಪ್ರಗತಿಗೆ ಸಾಕ್ಷಿಯಾಗಿದೆ. ಇತರರಂತೆ, ನನಗೂ ನನ್ನ ಭಾರತ ಮತ್ತು ಅದು ಹೇಗಿರಬೇಕೆಂಬ ಕನಸು ಇದೆ. ಇದಲ್ಲದೆ, ಜಾತಿ, ಬಣ್ಣ, ಲಿಂಗ ಮತ್ತು ಆರ್ಥಿಕ ಸ್ಥಿತಿಯ ಯಾವುದೇ ತಾರತಮ್ಯವಿಲ್ಲದ ದೇಶವು ಅಭಿವೃದ್ಧಿಯನ್ನು ನಿಜವಾದ ಅರ್ಥದಲ್ಲಿ ನೋಡುತ್ತದೆ. ನನ್ನ ಕನಸಿನ ಭಾರತವು ಮಹಿಳೆಯರು ಸುರಕ್ಷಿತವಾಗಿ ಮತ್ತು ರಸ್ತೆಯಲ್ಲಿ ಮುಕ್ತವಾಗಿ ನಡೆಯುವ ದೇಶವಾಗಲಿದೆ. ಅಲ್ಲದೆ, ಇದು ಎಲ್ಲರಿಗೂ ಸಮಾನತೆಯ ಸ್ವಾತಂತ್ರ್ಯವನ್ನು ಹೊಂದಿರುವ ಸ್ಥಳವಾಗಿದೆ, ಪ್ರತಿಯೊಬ್ಬರೂ ಅದನ್ನು ತಮ್ಮ ನಿಜವಾದ ಅರ್ಥದಲ್ಲಿ ಆನಂದಿಸಬಹುದು. ಇದಲ್ಲದೆ, ಇದು ಜಾತಿ, ಬಣ್ಣ, ಲಿಂಗ, ಪಂಥ, ಸಾಮಾಜಿಕ ಅಥವಾ ಆರ್ಥಿಕ ಸ್ಥಿತಿ, ಜನಾಂಗದ ಯಾವುದೇ ತಾರತಮ್ಯದ ಸ್ಥಳವಾಗಿದೆ. ಜೊತೆಗೆ, ನಾನು ಅಭಿವೃದ್ಧಿ ಮತ್ತು ಬೆಳವಣಿಗೆಯ ಸಮೃದ್ಧಿಯನ್ನು ನೋಡುವ ಸ್ಥಳವಾಗಿ ನೋಡುತ್ತೇನೆ.

**ಮಹಿಳಾ ಸಬಲೀಕರಣ :** ಮಹಿಳೆಯರ ವಿರುದ್ಧ ಸಾಕಷ್ಟು ತಾರತಮ್ಯವಿದೆ. ಆದರೆ, ಈಗ ಮಹಿಳೆಯರು ಮನೆಯಿಂದ ಹೊರಬಂದು ವಿವಿಧ ಕ್ಷೇತ್ರಗಳಲ್ಲಿ ಮತ್ತು ಸಮಾಜದಲ್ಲಿ ಛಾಪು ಮೂಡಿಸುತ್ತಿದ್ದಾರೆ. ಜೊತೆಗೆ ಹೆಣ್ಣು ಭ್ರೂಣಹತ್ಯೆಯೇ ಅಥವಾ ಮನೆಯ ಕೆಲಸಗಳಿಗೆ ಸೀಮಿತಗೊಳಿಸಬೇಕೆನ್ನುವ ಕೆಲಸಗಳು ಬಹಳಷ್ಟಿವೆ. ಇದಲ್ಲದೆ, ಅನೇಕ ಎನ್‌ಜಿಒ, ಸಾಮಾಜಿಕ ಗುಂಪುಗಳು ಮಹಿಳಾ ಸಬಲೀಕರಣವನ್ನು ಉತ್ತೇಜಿಸಲು ಮುಂದೆ ಬಂದಿವೆ. ಆದರೆ, ಸಮಾಜದ ಮನಸ್ಥಿತಿಯನ್ನು ಬದಲಾಯಿಸಲು ನಾವು ಶ್ರಮಿಸಬೇಕು.

ನಾನು ಭಾರತವನ್ನು ಮಹಿಳೆಯರನ್ನು ತನ್ನ ಆಸ್ತಿಯಾಗಿ ನೋಡುವ ದೇಶವಾಗಿ ಕನಸು ಕಾಣುತ್ತೇನೆ, ಹೊಣೆಗಾರಿಕೆಯಾಗಿ ಅಲ್ಲ. ಅಲ್ಲದೆ, ನಾನು ಪುರುಷರಂತೆ ಮಹಿಳೆಯರನ್ನು ಸಮಾನ ಮಟ್ಟದಲ್ಲಿ ಇರಿಸಲು ಬಯಸುತ್ತೇನೆ. ಶಿಕ್ಷಣವನ್ನು ಉತ್ತೇಜಿಸಲು ಸರ್ಕಾರವು ಅನೇಕ ಉಪಕ್ರಮಗಳನ್ನು ಹೊಂದಿದರೂ ಆದರೆ ಅದರ ನಿಜವಾದ ಪ್ರಾಮುಖ್ಯತೆಯನ್ನು ಅರ್ಥಮಾಡಿಕೊಳ್ಳದ ಅನೇಕ



### ಭ್ರಷ್ಟಾಚಾರ

**ರಾಷ್ಟ್ರದ ಬೆಳವಣಿಗೆಗೆ ಅಡ್ಡಿಯಾಗುತ್ತಿರುವ ಪ್ರಮುಖ ಕಾರಣಗಳಲ್ಲಿ ಭ್ರಷ್ಟಾಚಾರವೂ ಒಂದು. ಅಧಿಕಾರಿಗಳು ಮತ್ತು ರಾಜಕಾರಣಿಗಳು ದೇಶದ ಬೆಳವಣಿಗೆಗೆ ಸೇವೆ ಸಲ್ಲಿಸುವ ಬದಲು ತಮ್ಮ ಜೇಬು ತುಂಬಿಸಿಕೊಳ್ಳುವುದರಲ್ಲಿ ನಿರತರಾಗಿದ್ದಾರೆ. ಹಾಗಾಗಿ, ಸಚಿವರು ಮತ್ತು ಅಧಿಕಾರಿಗಳು ತಮ್ಮ ಕೆಲಸಕ್ಕೆ ಮತ್ತು ಸಂಪೂರ್ಣವಾಗಿ ದೇಶದ ಅಭಿವೃದ್ಧಿಗೆ ಸಮರ್ಪಿತರಾಗಿರುವ ಭಾರತದ ಕನಸು ಕಾಣುತ್ತಿದ್ದೇನೆ.**

ಜನರಿದ್ದಾರೆ. ನನ್ನ ಕನಸಿನ ಭಾರತವು ಎಲ್ಲರಿಗೂ ಶಿಕ್ಷಣವನ್ನು ಕಡ್ಡಾಯಗೊಳಿಸುವ ಸ್ಥಳವಾಗಲಿದೆ.

**ಉದ್ಯೋಗಾವಕಾಶಗಳು:** ಭಾರತದಲ್ಲಿ ಸಾಕಷ್ಟು ವಿದ್ಯಾವಂತರಿದ್ದರೂ. ಆದರೆ, ಭ್ರಷ್ಟಾಚಾರ, ಇತರ ಹಲವು ಕಾರಣಗಳಿಂದ ಅವರು ಯೋಗ್ಯವಾದ ಉದ್ಯೋಗವನ್ನು ಪಡೆಯಲು ಸಾಧ್ಯವಾಗುತ್ತಿಲ್ಲ. ಇದಲ್ಲದೆ, ದೇಶದಲ್ಲಿ ಹಲವಾರು ಉದ್ಯೋಗಾವಕಾಶಗಳಿವೆ ಆದರೆ ಅವು ಸೀಮಿತವಾಗಿವೆ ಅಥವಾ ಸಾಕಷ್ಟು ಪಾವತಿಸುವುದಿಲ್ಲ. ದೇಶದ ದುರ್ಬಲ ಕೈಗಾರಿಕಾ ಬೆಳವಣಿಗೆಯೂ ಇದಕ್ಕೆ ಒಂದು ಕಾರಣ. ಜೊತೆಗೆ, ಮೀಸಲಾತಿಯು ಈ ಹಾದಿಯಲ್ಲಿ ಅಡ್ಡಿಯಾಗಿದೆ ಏಕೆಂದರೆ ಹೆಚ್ಚಿನ ಅರ್ಹ ಅಭ್ಯರ್ಥಿಗಳು ಅದರಿಂದ ತಮ್ಮ ಉತ್ತಮ ಅವಕಾಶವನ್ನು ಕಳೆದುಕೊಳ್ಳುತ್ತಾರೆ. ಈ ಅರ್ಹ ಅಭ್ಯರ್ಥಿಗಳಲ್ಲಿ ಹೆಚ್ಚಿನವರು ವಿದೇಶಕ್ಕೆ ಹೋಗುತ್ತಾರೆ ಮತ್ತು ಇತರ ದೇಶಗಳ ಆರ್ಥಿಕ ಬೆಳವಣಿಗೆಗಾಗಿ ಕೆಲಸ ಮಾಡುತ್ತಾರೆ.

**ಜಾತಿ ತಾರತಮ್ಯ :** ಭಾರತಕ್ಕೆ 1947ರಲ್ಲಿ ಸ್ವಾತಂತ್ರ್ಯ ಸಿಕ್ಕರೂ ಇಂದಿಗೂ ಜಾತಿ, ಧರ್ಮ, ಪಂಥದ ತಾರತಮ್ಯದಿಂದ ಸಂಪೂರ್ಣ ಸ್ವಾತಂತ್ರ್ಯ ಪಡೆಯಲು ಸಾಧ್ಯವಾಗಿಲ್ಲ. ದೇಶದ ಕೆಲವು ಭಾಗಗಳಲ್ಲಿ ಸಮಾಜದ ಕೆಳವರ್ಗದ ಜನರಿಗೆ ಮೂಲಭೂತ ಹಕ್ಕುಗಳನ್ನು ಹೇಗೆ ನಿರಾಕರಿಸಲಾಗಿದೆ ಎಂಬುದನ್ನು ನೋಡುವುದು ನಾಚಿಕೆಗೇಡಿನ ಸಂಗತಿಯಾಗಿದೆ. ಆದಾಗ್ಯೂ, ಅವರ ಹಕ್ಕುಗಳಿಗಾಗಿ ಮಾತನಾಡುವ, ಈ ದಬ್ಬಾಳಿಕೆಯನ್ನು ವಿರೋಧಿಸಲು ಸಹಾಯ ಮಾಡುವ ವಿವಿಧ ಸಾಮಾಜಿಕ ಗುಂಪುಗಳಿವೆ. ಅಲ್ಲದೆ, ಯಾವುದೇ ರೀತಿಯ ತಾರತಮ್ಯ ಇಲ್ಲದ ಭಾರತದ ಕನಸು ಕಾಣುತಿದೇನೆ.

**ಉತ್ತಮ ಮೂಲಸೌಕರ್ಯ ಮತ್ತು ನೈರ್ಮಲ್ಯ**

ಉತ್ತಮ ಮೂಲಸೌಕರ್ಯ ನೈರ್ಮಲ್ಯವನ್ನು ಹೊಂದಿರುವ ಭಾರತದ ಬಗ್ಗೆ ನಾನು ಕನಸು ಕಾಣುತ್ತೇನೆ.

ಕಳಪೆ ನೈರ್ಮಲ್ಯ ಮತ್ತು ಮೂಲಸೌಕರ್ಯ ಕೊರತೆಯಿರುವ ಹಲವು ಗ್ರಾಮಗಳಿವೆ. ಭಾರತ ಸರ್ಕಾರವು ಇವುಗಳ ಮೇಲೆ ಕೆಲಸ ಮಾಡಬೇಕಾಗಿದೆ, ಆದ್ದರಿಂದ ಜನರು ಅರ್ಹವಾದದ್ದನ್ನು ಪಡೆಯುತ್ತಾರೆ. ಸಾಕಷ್ಟು ನೈರ್ಮಲ್ಯ ಬಹಳ ಮುಖ್ಯ ಇದು ಹಳ್ಳಿಯ ಜನರಿಗೆ, ವಿಶೇಷವಾಗಿ ಮಹಿಳೆಯರಿಗೆ, ತೆರೆದ ಸ್ಥಳಗಳಿಗೆ ಹೋಗುವುದನ್ನು ತಪ್ಪಿಸಲು ಮತ್ತು ಆರೋಗ್ಯ ಸಮಸ್ಯೆಗಳನ್ನು ಎದುರಿಸಲು ಸಹಾಯ ಮಾಡುತ್ತದೆ.

**ಉಪ ಸಂಹಾರ :** ಕೊನೆಯಲ್ಲಿ ನನ್ನ ಕನಸಿನ ಭಾರತವು ಪ್ರತಿಯೊಬ್ಬ ಪ್ರಜೆಯೂ ಸಮಾನವಾಗಿರುವ ಆದರ್ಶ ದೇಶವಾಗಿರುತ್ತದೆ. ಅಲ್ಲದೆ, ಯಾವುದೇ ರೀತಿಯ ತಾರತಮ್ಯವಿಲ್ಲ. ಜತೆಗೆ ಹೆಣ್ಣನ್ನು ಪುರುಷರಿಗೆ ಸಮಾನವಾಗಿ ಕಾಣುವ ಹಾಗೂ ಸಮಾನವಾಗಿ ಗೌರವಿಸುವ ತಾಣವಾಗಲಿದೆ. ನನ್ನ ಕನಸಿನಜತೆಗೆ ಹೆಣ್ಣನ್ನು ಪುರುಷರಿಗೆ ಸಮಾನವಾಗಿ ಕಾಣುವ, ಸಮಾನವಾಗಿ ಗೌರವಿಸುವ ತಾಣವಾಗಲಿದೆ. ನನ್ನ ಕನಸಿನ ಭಾರತ ಆದರ್ಶ ದೇಶವಾಗಬೇಕು, ನಾನು ಹೆಮ್ಮೆಪಡಬಹುದು ಮತ್ತು ಆತ್ಮವಿಶ್ವಾಸದಿಂದ ಬದುಕಬಹುದು. ಮುಂಬರುವ ಪೀಳಿಗೆಯು ಉತ್ತಮ ಜೀವನವನ್ನು ಹೊಂದಲು ಮತ್ತು ಈ ದೇಶದಲ್ಲಿ ವಾಸಿಸಲು ಅರ್ಹವಾದ ಎಲ್ಲವನ್ನೂ ಪಡೆಯಬೇಕೆಂದು ನಾನು ಬಯಸುತ್ತೇನೆ

# ಭಾರತೀಯ ಅಂಚೆ ಇಲಾಖೆಯಿಂದ ವಿಶೇಷ ಮೈ ಸ್ಟಾಂಪ್ ಬಿಡುಗಡೆ




• ಉದಯವಾಹಿನಿ, ಬೆಂಗಳೂರು

ಭಾರತದ ಅತ್ಯಂತ ವಿಶ್ವಾಸಾರ್ಹ ರಿಯಲ್ ಎಸ್ಟೇಟ್ ಸಂಸ್ಥೆಗಳಲ್ಲಿ ಒಂದಾದ ಪುರವಂಕರ ಲಿಮಿಟೆಡ್, ತನ್ನ 50 ವರ್ಷಗಳ ಮೈಲಿಗಲ್ಲನ್ನು ಸ್ಮರಿಸಲು ಭಾರತ ಸರ್ಕಾರದ ಅಂಚೆ ಇಲಾಖೆ ಬಿಡುಗಡೆ ಮಾಡಿದ ವಿಶೇಷ ಮೈ ಸ್ಟಾಂಪ್ ಅನ್ನು ಅನಾವರಣಗೊಳಿಸಿದೆ. 1975ರಿಂದ ನಂಬಿಕೆ ಮತ್ತು ಪಾರದರ್ಶಕತೆಯೊಂದಿಗೆ ಅಂತರರಾಷ್ಟ್ರೀಯ ಗುಣಮಟ್ಟದ ಮನೆಗಳನ್ನು ನಿರ್ಮಿಸುತ್ತಿರುವ ಕಂಪನಿಯ ಭವ್ಯ ಪರಂಪರೆಗೆ ಗೌರವ ಸಲ್ಲಿಸುವ ಈ ಯೋಜನೆಯು ಸಂಸ್ಥೆಯ ಪಯಣದಲ್ಲಿ ಒಂದು ಮಹತ್ವದ ಕ್ಷಣವಾಗಿದೆ. ಈ ಅಂಚೆಚೀಟಿಯನ್ನು ಕರ್ನಾಟಕ ಅಂಚೆ ವೃತ್ತದ ಚೀಫ್ ಪೋಸ್ಟ್‌ಮಾಸ್ಟರ್ ಜನರಲ್ ಶ್ರೀ ಕೆ. ಪ್ರಕಾಶ್ ಅವರು ಅಧಿಕೃತವಾಗಿ ಅನಾವರಣಗೊಳಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಅಂಚೆ ಚೀಟಿಗಳು ಕೇವಲ ಸೂಕ್ಷ್ಮ ಕಲಾಕೃತಿಗಳಲ್ಲ, ಅವು ಇತಿಹಾಸ, ಸಾಧನೆಗಳು ಮತ್ತು ಸಂಸ್ಕೃತಿಯ ಪ್ರತೀಕ. ಭಾರತೀಯ ಅಂಚೆ ಇಲಾಖೆಯು ಯಾವಾಗಲೂ ಜನರ ಸೇವೆಗೆ ಬದ್ಧವಾಗಿದೆ. ಮೈ ಸ್ಟಾಂಪ್ ನಂತಹ ಉಪಕ್ರಮಗಳ ಮೂಲಕ, ಭಾರತದ ಭವಿಷ್ಯವನ್ನು ರೂಪಿಸುವಲ್ಲಿ ಕಂಪನಿಗಳ ಕೊಡುಗೆಗಳನ್ನು ನಾವು ಸ್ಮರಿಸುತ್ತೇವೆ ಎಂದು ಹೇಳಿದರು.

**ಪುರವಂಕರ ಸಂಸ್ಥೆಯ 50ನೇ ವರ್ಷಾಚರಣೆ**

ಈ ಸುವರ್ಣ ಮಹೋತ್ಸವದ ಮೈ ಸ್ಟಾಂಪ್, ಪುರವಂಕರ ಸಂಸ್ಥೆಯ ಕಥೆಯನ್ನು ಹೇಳುತ್ತದೆ. 1975ರಲ್ಲಿ ಮುಂಬೈನಲ್ಲಿ ಪ್ರಾರಂಭವಾದ ಕನಸು, ನಂತರ ಬೆಂಗಳೂರಿನಲ್ಲಿ ತನ್ನ ನೆಲೆಯನ್ನು ಕಂಡುಕೊಂಡು, ಅಲ್ಲಿಂದ ದೇಶದ ಒಂಬತ್ತು ನಗರಗಳಿಗೆ ವಿಸ್ತರಿಸಿತು. ಈ ಅಂಚೆ ಚೀಟಿಯ ವಿನ್ಯಾಸವು 1975ರಿಂದ 2025ರ ಸಾಧನೆಯ ಮೈಲಿಗಲ್ಲನ್ನು ಗುರುತಿಸುತ್ತದೆ ಮತ್ತು ಮುಂಬೈ ಹಾಗೂ ಬೆಂಗಳೂರಿನ ಸಾಂಪ್ರದಾಯಿಕ ಕಟ್ಟಡಗಳ ಚಿತ್ರಗಳೊಂದಿಗೆ ಪುರವಂಕರ ಹೆಸರನ್ನು ಹೆಮ್ಮೆಯಿಂದ ಪ್ರದರ್ಶಿಸುತ್ತದೆ. ಇದು ಸಂಸ್ಥೆಯ ಗತ ಮತ್ತು ಭವಿಷ್ಯವನ್ನು ರೂಪಿಸಿದ ನಗರಗಳಿಗೆ ಸಲ್ಲಿಸುವ ಗೌರವವಾಗಿದೆ. ಈ ಸಂದರ್ಭದಲ್ಲಿ ಮಾತನಾಡಿದ ಪುರವಂಕರ ಲಿಮಿಟೆಡ್ನ ಸಂಸ್ಥಾಪಕ ಮತ್ತು ಅಧ್ಯಕ್ಷರಾದ ರವಿ ಪುರವಂಕರ, ಇದು ನಮಗೆಲ್ಲರಿಗೂ ಹೆಮ್ಮೆ ಮತ್ತು ಅವಲೋಕನದ ಕ್ಷಣವಾಗಿದೆ. ಭಾರತೀಯ ಅಂಚೆ ಇಲಾಖೆಯಿಂದ ಮೈ ಸ್ಟಾಂಪ್ ಬಿಡುಗಡೆಯಾಗಿರುವುದು ನಮ್ಮ 50 ವರ್ಷಗಳ ಪಯಣವನ್ನು ಆಚರಿಸುವುದಲ್ಲದೆ ಈ ಅದ್ಭುತ ಪರಂಪರೆಯ ಭಾಗವಾಗಿರುವ ಉದ್ಯೋಗಿಗಳು, ಪಾಲುದಾರರು ಮತ್ತು ಗ್ರಾಹಕರಿಗೆ ಸಲ್ಲಿಸುವ ಗೌರವವಾಗಿದೆ. ಮುಂಬೈನಲ್ಲಿನ ನಮ್ಮ ವಿನಮ್ರ ಆರಂಭದಿಂದ ಹಿಡಿದು ರಾಷ್ಟ್ರಮಟ್ಟದಲ್ಲಿ ಅತ್ಯಂತ ವಿಶ್ವಾಸಾರ್ಹ ಹಾಗೂ ಗೌರವಾನ್ವಿತ ಬ್ರ್ಯಾಂಡ್ ಆಗಿ ಬೆಳೆಯುವವರೆಗೆ, ನಮ್ಮ ಅಡಿಪಾಯವು ಯಾವಾಗಲೂ ನಂಬಿಕೆ, ಪಾರದರ್ಶಕತೆ ಮತ್ತು ಸಮಯೋಚಿತ ವಿತರಣೆಯ ಮೇಲೆ ನಿರ್ಮಾಣವಾಗಿದೆ. ಭವಿಷ್ಯದತ್ತ ನೋಡುತ್ತಿರುವ ನಾವು, ನಾವೀನ್ಯತೆ ಮತ್ತು ಸುಸ್ಥಿರತೆಗೆ ಬದ್ಧರಾಗಿದ್ದೇವೆ, ಎಂದರು.

**ಪುರವಂಕರ ಲಿಮಿಟೆಡ್ನ ನಿರ್ದೇಶಕರಾದ ಅಮಂಡಾ ಪುರವಂಕರ, ಮೈ ಸ್ಟಾಂಪ್ ಕೇವಲ ಒಂದು ಸ್ಮರಣೆಯಲ್ಲ; ಇದು ನಾವು ಐದು ದಶಕಗಳಿಂದ ಪೋಷಿಸಿಕೊಂಡು ಬಂದಿರುವ ಗ್ರಾಹಕ ಕೇಂದ್ರಿತತೆ, ಗುಣಮಟ್ಟ ಮತ್ತು ಶಾಶ್ವತ ಸಂಬಂಧಗಳಂತಹ ಮೌಲ್ಯಗಳ ಸಂಕೇತ. ಇದು ಭವಿಷ್ಯಕ್ಕಾಗಿ ನಮ್ಮ ಪ್ರತಿಜ್ಞೆಯೂ ಆಗಿದೆ. ನಾವು ಹೊಸ ತಂತ್ರಜ್ಞಾನಗಳು, ಹಸಿರು ಪದ್ಧತಿಗಳು ಉತ್ತಮ ವಿನ್ಯಾಸವನ್ನು ಅಳವಡಿಸಿಕೊಳ್ಳುವ ಮೂಲಕ ಮನೆ ಖರೀದಿದಾರರ ವಿಕಸಿಸುತ್ತಿರುವ ಆಕಾಂಕ್ಷೆಗಳನ್ನು ಪೂರೈಸುತ್ತಿದ್ದೇವೆ, ಎಂದು ಹೇಳಿದರು.**

ಈ ಕಾರ್ಯಕ್ರಮದಲ್ಲಿ ಭಾರತೀಯ ಅಂಚೆ ಇಲಾಖೆಯ ಹಿರಿಯ ಅಧಿಕಾರಿಗಳಾದ ಬೆಂಗಳೂರು ಕೇಂದ್ರ ಕಚೇರಿಯ ಪೋಸ್ಟ್ ಮಾಸ್ಟರ್ ಜನರಲ್ (ಹೆಚ್ಚುವರಿ ಪ್ರಭಾರ) ಶ್ರೀ ಸಂದೇಶ್ ಮಹದೇವಪ್ಪ, ಬೆಂಗಳೂರು ಬಿಜಿ ಕೇಂದ್ರ ಕಚೇರಿಯ ಅಂಚೆ ಸೇವೆಗಳ ನಿರ್ದೇಶಕರಾದ ಶ್ರೀಮತಿ ವಿ. ತಾರಾ, ಪುರವಂಕರ ಲಿಮಿಟೆಡ್ನ ನಿರ್ದೇಶಕರಾದ ಶ್ರೀಮತಿ ಅಮಂಡಾ ಪುರವಂಕರ, ಸಿಇಒ (ದಕ್ಷಿಣ) ಶ್ರೀ ಮಲ್ಲಣ್ಣ ಸಾಸಲು, ಸಿಇಒ (ಪಶ್ಚಿಮ ಮತ್ತು ವಾಣಿಜ್ಯ ಆಸ್ತಿಗಳು) ಶ್ರೀ ರಜತ್ ರಸ್ತೋಗಿ ಅವರೊಂದಿಗೆ ಪುರವಂಕರ ಸಂಸ್ಥೆಯ ಹಿರಿಯ ಆಡಳಿತ ಮಂಡಳಿ ಹಾಗೂ ಸಂಸ್ಥೆಯ ಐದು ದಶಕಗಳ ಪಯಣದಲ್ಲಿ ಭಾಗಿಯಾದ ಗೌರವಾನ್ವಿತ ಪಾಲುದಾರರು ಉಪಸ್ಥಿತರಿದ್ದರು.

# ಹೃದಯಾಘಾತ: ತುರ್ತು ಪರಿಸ್ಥಿತಿಯಲ್ಲಿ ಸಿಪಿಆರ್ ಮಾಡುವುದು ಹೇಗೆ? ಇಲ್ಲಿದೆ ನೋಡಿ ಮಾಹಿತಿ

ಹೃದಯಾಘಾತದ ಸಂದರ್ಭದಲ್ಲಿ, ಸಿಪಿಆರ್ ನೀಡುವ ಮೂಲಕ ರೋಗಿಯ ಜೀವವನ್ನು ಉಳಿಸಬಹುದು. ಸಿಪಿಆರ್‌ನ ಸರಿಯಾದ ವಿಧಾನವನ್ನು ವಿವರಿಸಲು ಭೋಪಾಲ್‌ನ ಏಮ್ಸ್‌ನಲ್ಲಿ ಅಣಕು ಅಭ್ಯಾಸವನ್ನು ಆಯೋಜಿಸಲಾಗಿತ್ತು. ಈ ಸಮಯದಲ್ಲಿ, ವೈದ್ಯರು ಜನರಿಗೆ ಸಿಪಿಆರ್ ನೀಡುವ ಸರಿಯಾದ ವಿಧಾನವನ್ನು ಹೇಳಿದ್ದಾರೆ.



**ಹೃದಯಾಘಾತ ಗೆ ಸಿಪಿಆರ್:** ಇತ್ತೀಚಿನ ವರ್ಷಗಳಲ್ಲಿ, ಹೃದಯಾಘಾತ, ಅದರಿಂದ ಉಂಟಾಗುವ ಸಾವುಗಳ ಪ್ರಕರಣಗಳಲ್ಲಿ ತ್ವರಿತ ಏರಿಕೆ ಕಂಡುಬಂದಿದೆ. ಈಗ ಚಿಕ್ಕ ವಯಸ್ಸಿನಲ್ಲಿ, 20 ವರ್ಷ ವಯಸ್ಸಿನವರು ಸಹ ಹೃದಯಾಘಾತಕ್ಕೆ ಬಲಿಯಾಗುತ್ತಿದ್ದಾರೆ, ಆದರೆ ಅದರಿಂದ ಉಂಟಾಗುವ ಸಾವಿನ ಸುದ್ದಿಗಳು ಸಹ ಹೆಚ್ಚಾಗಿ ಸುದ್ದಿಯಲ್ಲಿವೆ. ವಿಶ್ವ ಆರೋಗ್ಯ ಸಂಸ್ಥೆ ಪ್ರಕಾರ, ಪ್ರತಿ ವರ್ಷ ವಿಶ್ವಾದ್ಯಂತ ಸುಮಾರು 18 ಮಿಲಿಯನ್ ಜನರು ಹೃದಯ ಸಂಬಂಧಿತ ಕಾಯಿಲೆಗಳಿಂದ ಸಾಯುತ್ತಾರೆ, ಇದಕ್ಕೆ ಹೃದಯಾಘಾತವು ಒಂದು ಪ್ರಮುಖ ಕಾರಣವಾಗಿದೆ. ಭಾರತದಲ್ಲಿ ಇದರ ಅಪಾಯವೂ ವೇಗವಾಗಿ ಹೆಚ್ಚಾಗಿದೆ. ಗಂಭೀರ ವಿಷಯವೆಂದರೆ ಅನೇಕ ಸಂದರ್ಭಗಳಲ್ಲಿ ರೋಗಿಗಳು ಆಸ್ಪತ್ರೆ ತಲುಪುವ ಮೊದಲೇ ಸಾಯುತ್ತಾರೆ.

ಹೃದಯಾಘಾತವು ಯಾವಾಗಲೂ ಮಾರಕವಲ್ಲ ಎಂದು ಆರೋಗ್ಯ ತಜ್ಞರು ಹೇಳುತ್ತಾರೆ, ಸಮಯಕ್ಕೆ ಸರಿಯಾಗಿ ಸಿಪಿಆರ್ ನೀಡಿದರೆ ಜನರ ಜೀವಗಳನ್ನು ಉಳಿಸಬಹುದು. ಇದು ಪ್ರತಿ ಯೊಬ್ಬರೂ ತಿಳಿದು ಕೊಳ್ಳಬೇಕಾದ ಜೀವ ಉಳಿಸುವ ತಂತ್ರವಾಗಿದ್ದು, ಅಗತ್ಯವಿದ್ದಾಗ ಇದನ್ನು ಬಳಸುವ ಮೂಲಕ ಜನರ ಜೀವಗಳನ್ನು ಉಳಿಸಬಹುದು. ಈ ಬಗ್ಗೆ ಜನರಿಗೆ ಅರಿವು ಮೂಡಿಸಲು ಮತ್ತು ಸಿಪಿಆರ್‌ನ ಸರಿಯಾದ ವಿಧಾನವನ್ನು ವಿವರಿಸಲು ಭೋಪಾಲ್‌ನ ಏಮ್ಸ್‌ನಲ್ಲಿ ಅಣಕು ಪ್ರದರ್ಶನವನ್ನು ಆಯೋಜಿಸಲಾಗಿತ್ತು.

**ಸಿಪಿಆರ್ ಬಗ್ಗೆ ಸರಿಯಾದ ಜ್ಞಾನ ಅಗತ್ಯ**

ಪ್ರತಿಯೊಬ್ಬ ನಾಗರಿಕರಿಗೂ ಜೀವ ಉಳಿಸುವ ತಂತ್ರಗಳ ಮಾಹಿತಿ ಯನ್ನು ಹರಡುವುದು ನಮ್ಮ ಕರ್ತವ್ಯ ಎಂದು ವೈದ್ಯರು ಹೇಳಿದರು. ಇದು ಒಂದು ಸಣ್ಣ ಪ್ರಯತ್ನ ಆದರೆ ಹೃದಯಾಘಾತದ ಸಂದರ್ಭದಲ್ಲಿ ಜೀವಗಳನ್ನು ಉಳಿಸಲು ನಾವು ಸಹಾಯ ಮಾಡುವ ದೊಡ್ಡ ಉಪಕ್ರಮ. ಅಣಕು ಅಭ್ಯಾಸದ ಸಮಯದಲ್ಲಿ, ಡಾ. ಸಂಜಯ್ ಮಾಂಡ್ಲೋಯ್ ಅನೇಕ ಪ್ರಮುಖ ವಿಷಯಗಳನ್ನು ಹಂಚಿಕೊಂಡರು,



### ಹೃದಯಾಘಾತದ ಸಮಯದಲ್ಲಿ ಸುವರ್ಣ ಸಮಯ

**ವೈದ್ಯರು ಹೇಳುವಂತೆ, ಹೃದಯಾಘಾತದ ಸಂದರ್ಭದಲ್ಲಿ ಸುವರ್ಣ ಸಮಯ ಬಹಳ ಮುಖ್ಯ. ಹೃದಯಾಘಾತದ ನಂತರದ ಮೊದಲ 30 ನಿಮಿಷಗಳು ಇವು, ಇದರಲ್ಲಿ ತಕ್ಷಣದ ವೈದ್ಯಕೀಯ ಸಹಾಯ ಪಡೆಯು ವುದು ಅತ್ಯಂತ ಮುಖ್ಯ. ಹೃದಯಾಘಾತ-ಹೃದಯ ಸ್ತಂಭನದ ಸಂದರ್ಭದಲ್ಲಿ, ಸಮಯಕ್ಕೆ ಸರಿಯಾಗಿ ರೋಗಲಕ್ಷಣಗಳನ್ನು ಗುರುತಿಸಿ ಮತ್ತು ತಕ್ಷಣವೇ CPR ನೀಡುವ ಮೂಲಕ, ಜೀವ ಉಳಿಸುವ ಸಾಧ್ಯತೆಗಳು ಶೇಕಡಾ 60-70 ರಷ್ಟು ಹೆಚ್ಚಾಗುತ್ತವೆ.**

ಸಿಪಿಆರ್ ನೀಡುವಾಗ ಇದನ್ನು ನೆನಪಿನಲ್ಲಿಡುವುದು ಬಹಳ ಮುಖ್ಯ. ವೈದ್ಯರು ಹೇಳುತ್ತಾರೆ, ಹೃದಯಾಘಾತವಾದಾಗ, ಮೊದಲು ನಿಮ್ಮ ಕಿವಿಯನ್ನು ರೋಗಿಯ ಮೂಗಿನ ಬಳಿ ಇರಿಸಿ ಅವರು ಉಸಿರಾಡಲು ಸಾಧ್ಯವಾಗುತ್ತಿದ್ದಾರೆಯೇ ಅಥವಾ ಇಲ್ಲವೇ ಎಂದು ಪರೀಕ್ಷಿಸಿ ಉಸಿರಾಡಲು ಯಾವುದೇ ತೊಂದರೆ ಇದ್ದರೆ, ತಕ್ಷಣ CPR ನೀಡಿ.

**ವೈದ್ಯರು ಏನು ಹೇಳುತ್ತಾರೆ?:** ಡಾ. ಸಂಜಯ್ ಹೇಳುತ್ತಾರೆ, ಹೃದಯ ಎಡಭಾಗದಲ್ಲಿರುವುದರಿಂದ, ಸಿಪಿಆರ್ ಅನ್ನು ಎಡಭಾಗಕ್ಕೂ ನೀಡಬೇಕೆಂದು ಜನರು ಹೆಚ್ಚಾಗಿ ಭಾವಿಸುತ್ತಾರೆ, ಆದಾಗ್ಯೂ, ಇದು ನಿಜವಲ್ಲ.

ನೀವು ಎದೆಯ ಮಧ್ಯದಲ್ಲಿ ಒತ್ತಡವನ್ನು ಅನ್ವಯಿಸಬೇಕು. ಸಿಪಿಆರ್ ನೀಡುವಾಗ, ಎದೆಯ ಮೇಲೆ ಒತ್ತಡ ಸರಿಯಾಗಿ ಅನ್ವಯ ವಾಗುವಂತೆ ನಿಮ್ಮ ಕೈಗಳನ್ನು ನೇರವಾಗಿ ಇರಿಸಿ. ಸಿಪಿಆರ್ ನೀಡುವಾಗ, 30ರವರೆಗೆ ಎಣಿಸಿ ಮತ್ತು ಸಿಪಿಆರ್ ಸಹಾಯದಿಂದ ಎದೆಯನ್ನು ನಿರಂತರವಾಗಿ ಒತ್ತುತ್ತಿರಿ.


ಎದೆಯ ಮೇಲೆ 30 ಬಾರಿ ಒತ್ತಡ ಹೇರಿದ ನಂತರ ರೋಗಿಗೆ ಒಮ್ಮೆ ಬಾಯಿಯ ಮೂಲಕ ಉಸಿರನ್ನು ನೀಡಿ ಮತ್ತು ಮತ್ತೊಮ್ಮೆ ಉಸಿರಾಟವನ್ನು ಪರಿಶೀಲಿಸಿ. ರೋಗಿಯು ಇನ್ನೂ ಉಸಿರಾಡದಿದ್ದರೆ, ಮತ್ತೆ 30 ಬಾರಿ ಸಿಪಿಆರ್ ನೀಡಿ ಮತ್ತು ಒಮ್ಮೆ ಬಾಯಿಯ ಮೂಲಕ ಉಸಿರಾಡಿ.

# ಹಬ್ಬದ ಸೀಸನ್‌ನಲ್ಲಿ ಮಾಡಿ ರುಚಿ ರುಚಿ ಸುಕ್ಕಿನುಂಡೆ: ಮಾಡೋದು ಹೇಗೆ?

ಹಬ್ಬಗಳು ಆರಂಭವಾದಾಗ ನೀವು ಹಲವು ಬಗೆಯ ತಿಂಡಿಗಳ ಮಾಡಿ ಸವಿಯುವುದು ಸಾಮಾನ್ಯ. ಅದರಂತೆ ಬಹಳ ರುಚಿ ರುಚಿಯ ಹಾಗೆ ವಿಶೇಷವಾಗಿ ಮಾಡುವಂತಹ ಹಲವು ತಿಂಡಿಗಳನ್ನು ನೀವುಯಾವಾಗಲು ಮಾಡಿ ಸವಿಯಲು ಇಷ್ಟಪಡುತ್ತೀರಿ. ಹಬ್ಬದ ಸಮಯದಲ್ಲಿ ಎಲ್ಲರಿಗೂ ಇಷ್ಟವಾಗುವ ಹಾಗೆ ಒಂದಿಷ್ಟು ದಿನ ಇಟ್ಟ ಸವಿಯಬಹುದಾದ ತಿಂಡಿಗಳ ಮಾಡೋದು ಕಾಮನ್. ಇಂತಹ ಸಮಯದಲ್ಲಿ ಅದರಲ್ಲೂ ಕೃಷ್ಣ ಜನ್ಮಾಷ್ಟಮಿ ಹಾಗೆ ಗಣೇಶ ಚತುರ್ಥಿ ಹಿನ್ನಲೆಯಲ್ಲಿ ಯಾವುದಾದರು ರುಚಿ ರುಚಿಯ ಹಾಗೆ ಅಪರೂಪದ ತಿಂಡಿಗಳ ಮಾಡಿ ಸವಿಯುವ ಮನಸ್ಸು ಮಾಡಿದರೆ ನಿಮಗಾಗಿ ನಾವಿಂದು ಸುಕ್ಕಿನುಂಡೆ ಮಾಡುವ ಕುರಿತು ಹೇಳಲಿದ್ದೇವೆ. ಈ ಸುಕ್ಕಿನುಂಡೆ ತಿಂಡಿಯು ಹಬ್ಬದ ಸಂಭ್ರಮ ಹೆಚ್ಚಿಸಲು ಹಾಗೆ ಎಲ್ಲರಿಗೂ ಇಷ್ಟವಾಗಲಿದೆ. ಸುಕ್ಕಿನುಂಡೆ ಹಲವು ಕಾಳುಗಳ ಬಳಸಿ ಮಾಡಲಾಗುವ ತಿಂಡಿ ಆಗಿರೋದ್ರಿಂದ ಆರೋಗ್ಯಕ್ಕೂ ಇದು ಉತ್ತಮ ಎನ್ನಬಹುದು, ಹಾಗೆ ರುಚಿಯಾದ ಈ ತಿಂಡಿಯನ್ನು ನೈವೇದ್ಯ ಉದ್ದೇಶವಾಗಿಯೂ ಬಳಸಬಹುದು. ಹಾಗಾದ್ರೆ ಈ ಸುಕ್ಕಿನುಂಡೆ ಮಾಡುವುದು ಹೇಗೆ ಅನ್ನೋದನ್ನು ನಾವಿಂದು ತಿಳಿದುಕೊಳ್ಳೋಣ. ಸುಕ್ಕಿನುಂಡೆ ಮಾಡಲು

### ಸುಕ್ಕಿನುಂಡೆ ಮಾಡಲು ಯಾವೆಲ್ಲಾ ವಸ್ತುಗಳು ಬೇಕು?

- ಇಡಿ ಕಡಲೆ
- ಹೆಸರು ಕಾಳು
- ಕಡಲೆ ಹಿಟ್ಟು
- ಅಕ್ಕಿ ಹಿಟ್ಟು
- ಬೆಲ್ಲ
- ಏಲಕ್ಕಿ ಪುಡಿ
- ತುಪ್ಪ
- ಅರಶಿಣ
- ತೆಂಗಿನಕಾಯಿ ತುರಿ



ಯಾವೆಲ್ಲಾ ಪದಾರ್ಥಗಳು ಬೇಕು?, ಮಾಡುವ ವಿಧಾನವೇನು, ಎಷ್ಟು ಸಮಯ ಹಿಡಿಯಲಿದೆ ಎಂಬುದನ್ನು ನಾವಿಂದು ತಿಳಿದುಕೊಳ್ಳೋಣ.

**ಸುಕ್ಕಿನುಂಡೆ ಮಾಡುವ ವಿಧಾನವೇನು?:** ಮೊದಲು ಒಂದು ಬಾಣಲೆ ಒಲೆ ಮೇಲೆ ಇಟ್ಟು ಕಡಲಗಳ ಹಾಕಿಕೊಂಡು ಹುರಿದುಕೊಳ್ಳಬೇಕು. ಅಳತೆ ಕಪ್‌ನಲ್ಲಿ ಅರ್ಧ ಕಪ್ ಇಡಿಗಡಲೆ ಹಾಕಿ ಹುರಿದುಕೊಳ್ಳಿ. ನಂತರ ತೆಗೆದು ಒಂದು ಪ್ಲೇಟ್‌ಗೆ ಹಾಕಿಟ್ಟುಕೊಳ್ಳಿ. ನಂತರ ಅದೇ ಬಾಣಲೆಗೆ ಅರ್ಧ ಕಪ್ ಹೆಸರು ಕಾಳು ಹಾಕಿಕೊಂಡು ಹುರಿದುಕೊಳ್ಳಬೇಕು. ನಂತರ ಇದನ್ನು ಕೂಡ ತೆಗೆದು ಬೌಲ್‌ಗೆ ಹಾಕಿಟ್ಟುಕೊಳ್ಳಿ. ಈ ಎರಡೂ ಕಾಳುಗಳು ತಣ್ಣಗಾದ ಬಳಿಕ ಒಂದು ಮಿಕ್ಸಿ ಜಾರ್‌ಗೆ ಹಾಕಿಕೊಂಡು ತರಿತರಿಯಾಗಿ ಪುಡಿ ಮಾಡಿಕೊಳ್ಳಿ. ಈಗ ಒಲೆ ಮೇಲೆ ಒಂದು ಪಾತ್ರೆ ಇಟ್ಟು ಅದಕ್ಕೆ ಒಂದೂವರೆ ಕಪ್ ಬೆಲ್ಲ ಹಾಕಿ ಕಾಲು ಕಪ್ ನೀರು ಹಾಕಿ ಕರಗಲು ಬಿಡಿ. ಬೆಲ್ಲದ ಪಾಕ ಮಾಡಬೇಡಿ, ಕರಗಿದರೆ ಸಾಕು. ನಂತರ ಈ ನಿರನ್ನು ಒಲೆ ಮೇಲೆ ಬಾಣಲೆ ಇಟ್ಟು ಅದಕ್ಕೆ ಹಾಕಿಕೊಂಡು ಒಂದೆಳೆ ಪಾಕ ಮಾಡಿಕೊಳ್ಳಿ. ಈಗ ಈ ಬೆಲ್ಲಕ್ಕೆ 2 ಸ್ಪೂನ್ ತುಪ್ಪ, ಏಲಕ್ಕಿ ಪುಡಿ, 1 ಕಪ್ ತೆಂಗಿನಕಾಯಿ ಪುಡಿ, ತರಿ ತರಿಯಾಗಿ ಪುಡಿ ಮಾಡಿದ್ದ ಕಾಳಿನ ಪುಡಿಯನ್ನು ಸಹ ಇದಕ್ಕೆ ಹಾಕಿಕೊಳ್ಳಿ. ನಂತರ ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳಿ. ನಂತರ ಒಲೆ ಆಫ್ ಮಾಡಿ, ಇದು ಸ್ವಲ್ಪ ಅಂಟು ಅಂಟಾಗಿ ಬಂದಾಗ ಇಳಿಸಿಕೊಳ್ಳಿ. ಈಗ ಒಂದು ಬೌಲ್‌ಗೆ ಇಂದು ಕಪ್ ಕಡಲೆ ಹಿಟ್ಟು ಅರ್ಧ ಕಪ್ ಅಕ್ಕಿ ಹಿಟ್ಟು, ಅರಶಿಣ ಪುಡಿ ಹಾಕಿಕೊಂಡು ಬೋಂಡಾ ಹಿಟ್ಟಿನಂತೆ ಹದ ಮಾಡಿಕೊಳ್ಳಿ. ಈಗ ಮೊದಲು ಮಾಡಿಕೊಂಡಿದ್ದ ಹಿಟ್ಟನ್ನು ತೆಗೆದುಕೊಂಡು ನಿಂಬೆ ಹಣ್ಣಿನ ಗಾತ್ರದಂತೆ ಉಂಡೆ ಕಟ್ಟಿಕೊಳ್ಳಿ. ನಂತರ ಈ ಉಂಡೆಯನ್ನು ಕಡಲೆ ಹಿಟ್ಟಿನಲ್ಲಿ ಅದ್ದಿಕೊಳ್ಳಿ. ನಂತರ ತೆಗೆದು ಒಲೆ ಮೇಲೆ ಇಟ್ಟಿರುವ ಬಾಣಲೆಯಲ್ಲಿನ ಎಣ್ಣೆಗೆ ಬಿಡಬೇಕು. ಇದೇ ವಿಧಾನವಾಗಿ ಎಲ್ಲಾ ಉಂಡೆಗಳನ್ನು ಎಣ್ಣೆಯಲ್ಲಿ ಹಾಕಿ ಕರಿದುಕೊಳ್ಳಿ. ಇಷ್ಟಾದರೆ ನಿಮ್ಮ ಮುಂದೆ ರುಚಿ ರುಚಿಯ ಸುಕ್ಕಿನುಂಡೆ ಸವಿಯಲು ಸಿದ್ದವಾಗಲಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ:** ಈ ರಾಶಿ ಚಕ್ರದ ಜನರು ತಮಗಾಗಿ ಸಮಯ ತೆಗೆದುಕೊಳ್ಳುವುದು ಬಹಳ ಅಗತ್ಯವಾಗಿದೆ. ನೀವು ಅದನ್ನು ಮಾಡದಿದ್ದರೆ ನೀವು ಮಾನಸಿಕ ತೊಂದರೆಗೊಳಗಾಗಬಹುದು.

**ವೃಷಭ:** ನಿಮ್ಮ ಪ್ರೇಮಿಯಿಂದ ದೂರವುಳಿಯಲು ತುಂಬಾ ಕಷ್ಟವಾಗುತ್ತದೆ. ಇಂದು, ನೀವು ಮತ್ತು ನಿಮ್ಮ ಪ್ರೀತಿ ಸಂಗಾತಿ ಪ್ರೀತಿಯ ಸಾಗರದಲ್ಲಿ ತೇಲುತ್ತೀರಿ ಮತ್ತು ಪ್ರೀತಿಯ ಔನ್ನತ್ಯವನ್ನು ಅನುಭವಿಸುತ್ತೀರಿ.

**ಮಿಥುನ:** ನಿವ್ವಳ ತ್ವರಿತ ಹಣ ಪಡೆಯುವ ಬಯಕೆ ಹೊಂದಿರುತ್ತೀರಿ. ಸಂತೋಷದ ಚೈತನ್ಯದಾಯಕ - ಪ್ರಿಯವಾದ ಚಿತ್ತದ - ನಿಮ್ಮ ಖುಷಿಯ ಸ್ವಭಾವ ನಿಮ್ಮ ಸುತ್ತಲಿನವರಿಗೆ ಸಂತೋಷ ಮತ್ತು ಖುಷಿಯನ್ನು ತರುತ್ತದೆ.

**ಕರ್ಕಾಟಕ:** ಮಾನಸಿಕ ಕಾಯಿಲೆಗಳಾಗುವ ಮೊದಲೇ ಅವುಗಳನ್ನು ನಾಶಮಾಡಬೇಕು. ನಿಮಗೆ ಸಂಪೂರ್ಣ ಮಾನಸಿಕ ತೃಪ್ತಿ ನೀಡುವ ದಾನ ಧರ್ಮ ಕಾರ್ಯಗಳಲ್ಲಿ ನಿಮ್ಮನ್ನು ತೊಡಗಿಸಿಕೊಂಡು ಅವುಗಳನ್ನು ತೊಡೆದುಹಾಕಬಹುದು.

**ಸಿಂಹ:** ಪ್ರವಾಸ-ಪಾರ್ಟಿಗಳು ಮತ್ತು ಆನಂದ ವಿಹಾರಗಳು ಇಂದು ನಿಮ್ಮನ್ನು ಉತ್ತಮ ಮೂಡ್‌ನಲ್ಲಿಡುತ್ತವೆ. ಇಂದು ಸುಮ್ಮನೆ ಕುಳಿತುಕೊಳ್ಳುವ ಬದಲು - ಏನೆ ಏನನ್ನಾದರೂ ಮಾಡಬಾರದು.

**ಕನ್ಯಾ:** ನಿಮ್ಮ ನಿರಂತರ ಸಕಾರಾತ್ಮಕ ಚಿಂತನೆಯನ್ನು ಪ್ರಶಂಸಿಸಲಾಗುತ್ತದೆ. ನಿಮ್ಮ ಪ್ರಯತ್ನದಲ್ಲಿ ನೀವು ಯಶಸ್ವಿಯಾಗಬಹುದು. ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ.

**ತುಲಾ:** ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು ಮತ್ತು ನೀವು ಹಣದಿಂದ ಲಾಭ ಪಡೆಯಬಹುದು. ನಿಮ್ಮಲ್ಲಿ ಹೆಚ್ಚುವರಿ ಹಣ ಇದ್ದರೆ ಅದನ್ನು ಗೃಹಬಳಕೆಯ ಸಾಧನಗಳನ್ನು ಖರೀದಿಸುವ ಸಾಧ್ಯತೆಗಳಿವೆ.

**ವೃಶ್ಚಿಕ:** ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನಗೊಳಿಸುತ್ತದೆ. ನೀವು ಇದರಲ್ಲಿ ಭಾಗವಹಿಸುತ್ತೀರಿ ಮತ್ತು ಕೇವಲ ಮೂಕ ಪ್ರೇಕ್ಷಕರಾಗಿ ಮಾತ್ರ ಉಳಿಯುವುದಿಲ್ಲವೆಂದು ಖಚಿತಪಡಿಸಿಕೊಳ್ಳಿ.

**ಧನಸ್ಸು:** ನೀವು ವಿರಾಮದ ಸಂತೋಷವನ್ನು ಅನುಭವಿಸಲಿದ್ದೀರಿ. ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ.

**ಮಕರ:** ಇಂದು ನೀವು ಈ ಪ್ರಪಂಚದ ಎಲ್ಲಾ ಹಾಡುಗಳನ್ನು ಮರೆಯುವಂತೆ ಮಾಡುತ್ತದೆ. ನೀವೇನೇ ಮಾಡಿದರೂ ನೀವು ಅಧಿಕಾರಯುತ ಸ್ಥಾನದಲ್ಲಿರುತ್ತೀರಿ. ನಿಮ್ಮ ಭಾರೀ ಆತ್ಮವಿಶ್ವಾಸದ ಲಾಭ ತೆಗೆದುಕೊಳ್ಳಿ.

**ಕುಂಭ:** ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ. ಬುದ್ಧಿವಂತ ಹೂಡಿಕೆಗಳು ಮಾತ್ರ ಆದಾಯಗಳನ್ನು ನೀಡುತ್ತವೆ.

**ಮೀನ:** ಮನೆಯ ಸಮಸ್ಯೆಗಳಿಗೆ ತಕ್ಷಣ ಗಮನ ನೀಡುವ ಅಗತ್ಯವಿರುತ್ತದೆ. ದೀರ್ಘಕಾಲದ ನಂತರ ನಿಮ್ಮ ಸ್ನೇಹಿತರಿಗೆ ಸಂಧಿಸುವ ವಿಚಾರ ನಿಮ್ಮ ಮನಸ್ಸಿನೆಲ್ಲೆಡೆ ತುಂಬಿರುತ್ತದೆ.

● ಧರ್ಮಸ್ಥಳದ ವಿರುದ್ಧ ಅಪಪ್ರಚಾರ ಖಂಡಿಸಿ ಜಿಲ್ಲಾ ವಕೀಲರ ಸಂಘದಿಂದ ಪ್ರತಿಭಟನೆ

# ಧರ್ಮಸ್ಥಳ ಪ್ರಕರಣ: ಪರಿಸ್ಥಿತಿ ಹದಗೆಟ್ಟರೆ ಸರ್ಕಾರವೇ ಹೊಣೆ

• ಉದಯವಾಹಿನಿ ಹಾಸನ

ಸಾಮಾಜಿಕ ಜಾಲತಾಣಗಳಲ್ಲಿ ಧರ್ಮಸ್ಥಳ ಕ್ಷೇತ್ರದ ಪಾವಿತ್ರ್ಯಕ್ಕೆ ಧಕ್ಕೆ ತರುವ ಅಪಪ್ರಚಾರ ವಿರೋಧಿಸಿ ಶ್ರೀಕ್ಷೇತ್ರ ಧರ್ಮಸ್ಥಳ ಹಿತರಕ್ಷಣಾ ಸಮಿತಿ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಸದಸ್ಯರು ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ನಗರದ ಹೇಮಾವತಿ ಪ್ರತಿಮೆ ಬಳಿಯಿಂದ ಮೆರವಣಿಗೆ ಆರಂಭಿಸಿದ ಸದಸ್ಯರು, ಧರ್ಮಸ್ಥಳ ಹಾಗೂ ವೀರೇಂದ್ರ ಹೆಗ್ಗಡೆ ಪರ ಘೋಷಣೆ ಕೂಗುತ್ತ ಎನ್.ಆರ್. ವೃತ್ತ ಹಾಗೂ ಜಿಲ್ಲಾ ಪಂಚಾಯಿತಿ ಕಚೇರಿ ಎದುರು ಮಾನವ ಸರಪಳಿ ನಿರ್ಮಿಸಿ ಕೆಲ ಕಾಲ ರಸ್ತೆ ತಡೆ ನಡೆಸಿದರು. ನಂತರ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ನಡೆಸಿದರು.

**ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ**

ಈ ವೇಳೆ ಮಾತನಾಡಿದ ಮಹಿಳಾ ಆಯೋಗದ ಮಾಜಿ ಅಧ್ಯಕ್ಷೆ ಸಿ. ಮಂಜುಳಾ, 'ರಾಜ್ಯದ ಜನತೆಯ ಧರ್ಮಸ್ಥಳದ ವಿಚಾರದಲ್ಲಿ ಕೈಕಟ್ಟಿ ಕೂತಿಲ್ಲ. ಈ ವಿಚಾರದಲ್ಲಿ ಕಾನೂನು, ಸುವ್ಯವಸ್ಥೆ ಹದಗೆಟ್ಟರೆ ಮುಖ್ಯಮಂತ್ರಿಯೇ ಕಾರಣರಾಗಲಿದ್ದು, ಕೂಡಲೇ ಇದಕ್ಕೆ ಇತಿಶ್ರೀ ಹಾಡಬೇಕು' ಎಂದು ಆಗ್ರಹಿಸಿದರು.

'ಧರ್ಮಸ್ಥಳ ಪುಣ್ಯಕ್ಷೇತ್ರವಾಗಿದ್ದು, ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆಯವರ ಹಿತೈಷಿಗಳು ಪ್ರತಿಭಟನೆ ಹಮ್ಮಿಕೊಂಡಿದ್ದೇವೆ. ಹೆಗ್ಗಡೆಯವರು ಇದುವರೆಗೂ ಅನೇಕ ಪರೀಕ್ಷೆ ಎದುರಿಸಿದ್ದಾರೆ. ಇದೀಗ ಅನಾಮಧೇಯ ವ್ಯಕ್ತಿಯ ಹೇಳಿಕೆ ಆಧರಿಸಿ ಧರ್ಮಸ್ಥಳದ ಸುತ್ತ ಉತ್ಖನನ ನಡೆಯುತ್ತಿದೆ. ಇದು ರಾಜ್ಯ ವ್ಯಾಪಿ ವಿಸ್ತರಿಸಿದರೂ ಅಚ್ಚರಿಯಿಲ್ಲ' ಎಂದು ದೂರಿದರು.

'ಹಾಸನ ಜಿಲ್ಲೆ ಸೇರಿದಂತೆ ರಾಜ್ಯದ ನಾನಾ ಕಡೆ ಮಹಿಳೆಯರು, ಮಕ್ಕಳ ಮೇಲೆ ಅತ್ಯಾಚಾರ ನಡೆಯುತ್ತಿದ್ದರೂ ಗಂಭೀರ ಕ್ರಮ ಕೈಗೊಳ್ಳದ ರಾಜ್ಯ ಸರ್ಕಾರ, ಧರ್ಮಸ್ಥಳ ಉತ್ಖನನ ವಿಚಾರದಲ್ಲಿ ಎಸ್‌ಐಟಿ ರಚಿಸಿರುವುದು ಎಷ್ಟು ಸರಿ' ಎಂದು ಪ್ರಶ್ನಿಸಿದ ಅವರು, ಹಾಸನದಲ್ಲಿ ಅಲ್ಪಸಂಖ್ಯಾತ ಮಹಿಳೆಯ ಮೇಲೆ ಅತ್ಯಾಚಾರವಾಗಿದೆ. ಸಂಬಂಧಪಟ್ಟ ಸಚಿವರು ಯಾಕೆ ಭೇಟಿ ನೀಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈಗಾಗಲೇ 16 ಕಡೆ ಗುಂಡಿ ತೆಗೆಯಲಾಗಿದೆ. ಯಾವುದೇ ಸಾಕ್ಷಿಗಳು ದೊರೆತಿಲ್ಲ. 40 ರಿಂದ 50 ವರ್ಷ ರಾಜಕಾರಣ ಮಾಡಿರುವ ಸಿದ್ದರಾಮಯ್ಯ ಅವರಿಗೆ ಧರ್ಮಸ್ಥಳ ಕ್ಷೇತ್ರದ ಕುರಿತು ಗೊತ್ತಿಲ್ಲವೇ 16 ವರ್ಷ ಹಿಂದೆ ನಡೆದಿರುವ ಸಂಸ್ಕಾರ ಮಾಡಿದ ಶವ ತೆಗೆದು ಪರೀಕ್ಷೆ ಮಾಡಲು ಹೊರಟಿದ್ದೀರಿ. ಆದರೆ ಹಾಸನ ಜಿಲ್ಲಾ ಕೇಂದ್ರದಲ್ಲೇ ಅತ್ಯಾಚಾರ ಆಗುತ್ತಿದೆ. ಏನು ಕ್ರಮ ಕೈಗೊಂಡಿದ್ದೀರಿ' ಎಂದು ಪ್ರಶ್ನಿಸಿದರು.

ಧರ್ಮದ ಉಳಿವಿಗೆ ಎಲ್ಲರೂ ಕೈಜೋಡಿಸಲಿದ್ದು ಮುಂದಿನ ದಿನಗಳಲ್ಲಿ ಲಕ್ಷಾಂತರ ಮಂದಿ ವಿಧಾನಸೌಧಕ್ಕೆ ಮುತ್ತಿಗೆ ಹಾಕುವ ಕಾಲವು ದೂರವಿಲ್ಲ ಎಂದು ಎಚ್ಚರಿಸಿ ಪ್ರಭಾರ ಹೆಚ್ಚುವರಿ ಜಿಲ್ಲಾಧಿಕಾರಿ ಮಂಜುನಾಥ್ ಅವರಿಗೆ ಮನವಿ ಪತ್ರ ಸಲ್ಲಿಸಿದರು.



ಉದಯವಾಹಿನಿ ಚಿತ್ರ

### ಮುಜರಾಯಿ ವ್ಯಾಪ್ತಿಗೆ ತರಲು ಹುನ್ನಾರ

ಧರ್ಮಸ್ಥಳದಲ್ಲಿ ಅನಾಮಧೇಯ ವ್ಯಕ್ತಿ ನೀಡಿದ ದೂರಿನ ಅನ್ವಯ ಗುಂಡಿ ತೆಗೆದರೂ ಯಾವುದೇ ಕುರುಹು ಸಿಕ್ಕಿಲ್ಲ. ಮುಂದೆ ಧರ್ಮಸ್ಥಳದ ಗರ್ಭಗುಡಿ ತಲುಪಿದರೂ ಅನುಮಾನವಿಲ್ಲ ಎಂದು ಬಿಜೆಪಿ ಮುಖಂಡ ವಕೀಲ ನವಿಲೇ ಅಣ್ಣಪ್ಪ ದೂರಿದರು. ಸರ್ಕಾರ ಪಾಪರ್ ಆಗಿದ್ದು ಶತಮಾನಗಳ ಇತಿಹಾಸ ಹೊಂದಿರುವ ಧಾರ್ಮಿಕ ಕ್ಷೇತ್ರದ ವಶಕ್ಕೆ ಹುನ್ನಾರ ನಡೆಯುತ್ತಿದೆ. ಈಗಾಗಲೇ ಬೆಂಗಳೂರಿನ ಆಂಜನೇಯ ದೇವಾಲಯವನ್ನು ಮುಜರಾಯಿ ವ್ಯಾಪ್ತಿಗೆ ತೆಗೆದುಕೊಂಡಿದ್ದಾರೆ ಎಂದು ಆರೋಪಿಸಿದರು. ಧರ್ಮಸ್ಥಳ ರಾಜ್ಯದಲ್ಲಿ ಅನೇಕ ಜನಪರ ಕೆಲಸವನ್ನು ಮಾಡುತ್ತಿದೆ. ಇಂಥ ಸಂದರ್ಭದಲ್ಲಿ ಎಡಪಂಥೀಯರ ಓಲೈಕೆಗೆ ಸರ್ಕಾರ ಹಿಂದೂ ಧರ್ಮದ ಬಲಿ ಕೊಡಲು ಹೊರಟಿದ್ದೀರಾ ಎಂದು ಆಕ್ರೋಶ ವ್ಯಕ್ತಪಡಿಸಿದರು.

### ಕ್ಷೇತ್ರದ ಜೊತೆ ವಕೀಲರ ಸಂಘ

'ಧರ್ಮಸ್ಥಳದ ವಿರುದ್ಧ ಅಪಪ್ರಚಾರ ಖಂಡಿಸಿ ಜಿಲ್ಲಾ ವಕೀಲರ ಸಂಘದ ಸದಸ್ಯರಿಂದ ಕಲಾಪದಿಂದ ದೂರ ಉಳಿದು ಪ್ರತಿಭಟನೆ ಮಾಡಲಾಗುತ್ತಿದೆ. ರಾಜ್ಯ ಸರ್ಕಾರದ ಎಸ್‌ಐಟಿ ರಚನೆಗೆ ನಮ್ಮ ವಿರೋಧವಿಲ್ಲ. ಆದರೆ ದೇವಾಲಯ ಮತ್ತು ವೀರೇಂದ್ರ ಹೆಗ್ಗಡೆಯವರ ಮೇಲೆ ಅವಹೇಳನಕಾರಿ ಹೇಳಿಕೆ ನೀಡುತ್ತಿರುವ ಕಿಡಿಗೇಡಿಗಳನ್ನು ಕೂಡಲೇ ಬಂಧಿಸಬೇಕು' ಎಂದು ವಕೀಲರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಕಾರ್ಲೆ ಮೊಗಣ್ಣಗೌಡ ಆಗ್ರಹಿಸಿದರು. ಧರ್ಮಸ್ಥಳದ ವಿಚಾರದಲ್ಲಿ ಹೋರಾಡಲು ನಾವು ಸಿದ್ಧರಿದ್ದೇವೆ. ದೇವಾಲಯದ ಹಾಗೂ ಅದರ ಪಾವಿತ್ರ್ಯಕ್ಕೆ ಧಕ್ಕೆ ತರುವವರ ನಡೆ ಖಂಡಿಸುತ್ತೇವೆ. ಕ್ಷೇತ್ರದ ಜೊತೆಗೆ ವಕೀಲರ ಸಂಘ ಇರಲಿದೆ' ಎಂದರು.

## ಶಾಸಕ ಬಸವನಗೌಡ ಪಾಟೀಲ ಯತ್ನಾಳ್ ವಿರುದ್ಧ ಪ್ರಕರಣ

• ಉದಯವಾಹಿನಿ ಕಲಬುರಗಿ

ವಿಜಯಪುರ ನಗರ ಶಾಸಕ ಬಸವನಗೌಡ ಪಾಟೀಲ ಯತ್ನಾಳ್ ಅವರ ವಿರುದ್ಧ ಇಲ್ಲಿನ ರೋಜಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಖಿದ್ಮತ್ ಎ ಮಿಲ್ಲತ್ ಕಮಿಟಿ ಅಧ್ಯಕ್ಷ ಖಮರ್ ಜುನೈದ್ ಖುರೇಶಿ ಅವರು ನೀಡಿದ ದೂರಿನ ಮೇರೆಗೆ ಯತ್ನಾಳ್ ವಿರುದ್ಧ ಪ್ರಕರಣ ದಾಖಲಾಗಿದೆ.

ಹಿಂದೂ ಹುಡುಗರು ಮುಸ್ಲಿಂ ಹುಡುಗಿಯರನ್ನು ಮದುವೆಯಾದರೆ 5 ಲಕ್ಷ ನಗದು ಪ್ರೋತ್ಸಾಹ ಧನ ನೀಡಲಾಗುವುದು ಎಂದು ವಿಜಯಪುರ ನಗರ ಶಾಸಕ ಬಸವನಗೌಡ ಪಾಟೀಲ ಯತ್ನಾಳ್ ಅವರು ಕೊಪ್ಪಳದಲ್ಲಿ ಬಹಿರಂಗ ಹೇಳಿಕೆ ನೀಡುವುದರ ಮೂಲಕ ಒಂದು ಸಮುದಾಯವನ್ನು ಗುರಿಯಾಗಿಸಲು ಮತ್ತು ಇನ್ನೊಂದು ಸಮುದಾಯವನ್ನು ಪ್ರಚೋದಿಸಲು ಉದ್ದೇಶಿಸಿದ್ದು ಸ್ಪಷ್ಟವಾಗಿದೆ. ಇದು ಹಲವಾರು ಕಡೆಗಳಲ್ಲಿ ಗಂಭೀರ ಕಾನೂನು ಸುವ್ಯವಸ್ಥೆಗೆ ಕಾರಣವಾಗಬಹುದಾಗಿದೆ. ಅಲ್ಲದೆ ಯತ್ನಾಳ್ ಅವರು ಈ ಹಿಂದೆಯೂ ಸಮುದಾಯಗಳನ್ನು ವಿಭಜಿಸುವ, ಒಂದು ನಿರ್ದಿಷ್ಟ ಧಾರ್ಮಿಕ ಗುಂಪನ್ನು ಗುರಿಯಾಗಿಸುವ ಮತ್ತು ಸಾರ್ವಜನಿಕ ಶಾಂತಿ ಮತ್ತು ಸೌಹಾರ್ದತೆಯನ್ನು ಕದಡುವ ಸಾರ್ವಜನಿಕ ಹೇಳಿಕೆಗಳು ಮತ್ತು ಭಾಷಣಗಳನ್ನು ಮಾಡುತ್ತ ಬಂದಿದ್ದಾರೆ. ಈ ಹೇಳಿಕೆಗಳು ದ್ವೇಷವನ್ನು ಉತ್ತೇಜಿಸುತ್ತವೆ ಮತ್ತು ಸಮಾಜದಲ್ಲಿ ವಿಭಜನೆಯನ್ನು ಸೃಷ್ಟಿಸುತ್ತವೆ ಎಂದು ಖಮರ್ ಜುನೈದ್ ಖುರೇಶಿ ಅವರು ದೂರಿನಲ್ಲಿ ತಿಳಿಸಿದ್ದಾರೆ.

## ಕಿಡಿಗೇಡಿಗಳಿಂದ ಸೋಲಾರ್ ಕಳವು

• ಉದಯವಾಹಿನಿ ಔರಾದ್

ಕಾಡು ಹಂದಿಗಳ ಕಾಟ ಹಾಗೂ ಜಿಂಕೆಗಳ ಕಾಟಕ್ಕೆ ಬೆಸತ್ತ ರೈತ ಅಲ್ಲಿ ಇಲ್ಲಿ ಹಣ ಕೊಡಿಸಿ ಬೆಳೆ ರಕ್ಷಣೆಗೆ ಸೋಲಾರ್ ಅಳವಡಿಸಿದ್ದು ಕೆಲ ಕಿಡಿಗೇಡಿಗಳು ಅದನ್ನು ಕದ್ದು ಪರಾರಿಯಾಗಿದ್ದಾರೆ. ತಾಲ್ಲೂಕಿನ ತೇಗಂಪೂರ ಗ್ರಾಮದ ರೈತರಾದ ಕಾಶಪ್ಪ ಮುಕ್ತೆದಾರ ಹಾಗೂ ಗುರುನಾಥ ಮುಕ್ತೆದಾರ ಅವರ ಜಮೀನಿನಲ್ಲಿ ಕಾಡು ಹಂದಿಗಳ ಕಾಟ ಹೆಚ್ಚಾಗಿದೆ ಎಂದು ಬೆಳೆ ರಕ್ಷಣೆಗೆ ಸೋಲಾರ್ ಅಳವಡಿಸಿದ್ದರು. ಆದರೆ ಕೆಲ ಕಿಡಿಗೇಡಿಗಳು ರಾತ್ರಿ ಜಮೀನಿಗೆ ನುಗ್ಗಿ ಸೊಲಾರ ಪ್ಲೇಟ್, ಬ್ಯಾಟರಿ, ಮಸಿನ್ ಕಳುವು ಮಾಡಿಕೊಂಡು ಪರಾರಿಯಾಗಿದ್ದಾರೆ.

ಈ ಕುರಿತು ಔರಾದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

## ಶೈಕ್ಷಣಿಕ ಜಿಲ್ಲೆಯ ಶಾಲೆಗಳಿಗೆ ಬೇಕಿದೆ ಕಾಂಪೌಂಡ್ ಭದ್ರತೆ

• ಉದಯವಾಹಿನಿ ಶಿರಸಿ

ಶೈಕ್ಷಣಿಕ ಜಿಲ್ಲೆಯ ನೂರಾರು ಸರ್ಕಾರಿ ಶಾಲೆಗಳ ಸುತ್ತ ಸೂಕ್ತ ಆವರಣ ಗೋಡೆ (ಕಾಂಪೌಂಡ್) ಇಲ್ಲ. ಹೀಗಾಗಿ ಮಕ್ಕಳ ಸುರಕ್ಷತೆಯ ಜತೆಗೆ ಶಾಲೆ ಆಸ್ತಿ ಬಗ್ಗೆ ಶಾಲಾ ಶಿಕ್ಷಕ ವೃಂದ, ಶಾಲಾಭಿವೃದ್ಧಿ ಸಮಿತಿಯ ಪದಾಧಿಕಾರಿಗಳು ಸದಾ ಜಾಗೃತರಾಗಿ ಇರಬೇಕಿದೆ.

ಶೈಕ್ಷಣಿಕ ಜಿಲ್ಲೆಯ 6 ತಾಲ್ಲೂಕುಗಳಲ್ಲಿ 1,183 ಸರ್ಕಾರಿ ಶಾಲೆಗಳಿವೆ. ನೂರಾರು ಶಾಲೆಗಳಿಗೆ ಭಾಗಶಃ ಆವರಣ ಗೋಡೆ ನಿರ್ಮಿಸಲಾಗಿದೆ. ಬೆರಳೆಣಿಕೆ ಶಾಲೆಗಳಲ್ಲಿ ಆವರಣ ಗೋಡೆ ನಿರ್ಮಾಣ ಕಾರ್ಯ ಪ್ರಗತಿಯಲ್ಲಿದೆ. 25ಕ್ಕೂ ಹೆಚ್ಚು ಶಾಲೆಗಳ ಆವರಣ ಗೋಡೆಗಳು ಕುಸಿದಿವೆ ಅಥವಾ ಮುರಿದಿವೆ. ಶಾಲೆಯ ಸುತ್ತಲೂ ಆವರಣ ಗೋಡೆಗಳಿಲ್ಲದ ಕಾರಣ ಹಂದಿಗಳು, ಜಾನುವಾರುಗಳು ಶಾಲೆಯ ಆವರಣವನ್ನು ಹಾಳು ಮಾಡುತ್ತಿವೆ.

ಅಲ್ಲದೇ, ಅನೇಕ ಕಡೆ ನಿರ್ಜನ ಪ್ರದೇಶಗಳಲ್ಲಿರುವ ಶಾಲೆಗಳ ಆವರಣವು ರಾತ್ರಿ ಅನೈತಿಕ ಚಟುವಟಿಕೆಗಳಿಗೆ ಬಳಕೆಯಾಗುತ್ತಿವೆ' ಎಂಬುದು ಶಿಕ್ಷಕರ ಆರೋಪವಾಗಿದೆ. ಹಲವು ಶಾಲೆಯ ಮುಂಭಾಗದಲ್ಲಿ ಮಾತ್ರ ಗೋಡೆಗಳಿದ್ದು, ಉಳಿದ ಮೂರು ದಿಕ್ಕುಗಳು ತೆರೆದುಕೊಂಡಿವೆ. ಹೀಗಾಗಿ ಮಕ್ಕಳ ಸುರಕ್ಷತೆ ಸವಾಲಾಗಿದೆ. ನಗರದಲ್ಲಿ ಹೆಚ್ಚಿನ ಸಮಸ್ಯೆ ಇಲ್ಲದಿದ್ದರೂ ಗ್ರಾಮೀಣ ಭಾಗದಲ್ಲಿ ಆವರಣ ಗೋಡೆಗಳಿಲ್ಲದೇ ಸಾಕಷ್ಟು ತೊಂದರೆ ಆಗುತ್ತಿದೆ. ಸೂಕ್ತ ಗೋಡೆಗಳಿದ್ದರೆ ಶಾಲೆಯ ಜಾಗ ಅತಿಕ್ರಮಣವನ್ನೂ ತಪ್ಪಿಸಬಹುದು ಎಂಬುದು ಶಿಕ್ಷಕ ವಲಯದ ಮಾತಾಗಿದೆ.

ಕೆಲವು ಶಾಲೆಗಳಿಗೆ ಉದ್ಯೋಗ ಖಾತ್ರಿ ಯೋಜನೆಯಡಿ ಆವರಣ ಗೋಡೆ ಕಟ್ಟಿಸಿಕೊಡಲಾಗಿದೆ. ಇನ್ನೂ ಕೆಲವು ಶಾಲೆಗಳಲ್ಲಿ ಪ್ರಸ್ತಾವ ಸಲ್ಲಿಸಿ ಹಲವು ವರ್ಷಗಳಿಂದ ಅನುದಾನಕ್ಕಾಗಿ ಕಾಯುತ್ತಿದ್ದಾರೆ. ಕೆಲವೆಡೆ ಅನುದಾನ ಮಂಜೂರಾಗಿದ್ದರೂ ಕಾಮಗಾರಿ ಮಾತ್ರ ನಿಂತ ನೀರಾಗಿದೆ ಎಂಬುದು ಪಾಲಕರ ದೂರಾಗಿದೆ. ಶಾಲೆಯ ಒಂದು ಕಡೆ ಆವರಣ ಇರುವ ಬದಲು ಸುತ್ತಲೂ ಆವರಣ ಗೋಡೆಗಳಿದ್ದಲ್ಲಿ ಗೇಟಿಗೆ ಬೀಗ ಹಾಕಿ ಶಾಲೆಯನ್ನು, ವಿದ್ಯಾರ್ಥಿಗಳನ್ನು ಸುರಕ್ಷಿತವಾಗಿ ಇಟ್ಟುಕೊಳ್ಳಬಹುದಾಗಿದೆ. ಹಾಗಾಗಿ ಆವರಣ ಗೋಡೆ ನಿರ್ಮಿಸುವ ಸಲುವಾಗಿಯೇ ಪ್ರತ್ಯೇಕ ಅನುದಾನ ಕೊಡಬೇಕು' ಎಂಬುದು ಶಾಲಾಭಿವೃದ್ಧಿ ಸಮಿತಿ ಪ್ರಮುಖರ ಆಗ್ರಹ.



ಉದಯವಾಹಿನಿ ಚಿತ್ರ

> ಶಾಲೆಗಳ ಸುರಕ್ಷತೆಯ ದೃಷ್ಟಿಯಿಂದ ಆವರಣ ಗೋಡೆಯ ಅಗತ್ಯತೆಯ ಕುರಿತು ಅನೇಕ ಬಾರಿ ಅಭಿವೃದ್ಧಿ ಪರಿಶೀಲನಾ ಸಭೆಗಳಲ್ಲಿ ವರದಿ ನೀಡಲಾಗಿದೆ. ಉದ್ಯೋಗ ಖಾತ್ರಿ ಯೋಜನೆಯಡಿ ಆದ್ಯತೆಯ ಮೇರೆಗೆ ಶಾಲೆಗಳಿಗೆ ಆವರಣ ಗೋಡೆ ನಿರ್ಮಿಸಲಾಗುತ್ತಿದೆ. - ಶಿಕ್ಷಣ ಇಲಾಖೆ ಅಧಿಕಾರಿ

## ಮನೆ ಮನೆಗೆ ರಾಷ್ಟ್ರಧ್ವಜ ವಿತರಣೆ

• ಉದಯವಾಹಿನಿ ಬಳ್ಳಾರಿ

ಸ್ವಾತಂತ್ರ್ಯೋತ್ಸವದ ಅಂಗವಾಗಿ ಹರ್ ಗರ್ ತಿರಂಗ ಯಾತ್ರೆ ಅಭಿಯಾನದ ಅಂಗವಾಗಿ ಬಿಜೆಪಿಯಿಂದ ಅನೇಕ ಮನೆಗಳಿಗೆ ಹೋಗಿ ರಾಷ್ಟ್ರ ಧ್ವಜ ನೀಡಲಾಯ್ತು. ಜೊತೆಗೆ ಆ.15ರಂದು ಮನೆಯ ಮೇಲೆ ರಾಷ್ಟ್ರಧ್ವಜಾರೋಹಣ ಮಾಡಲು ಮನವಿ ಮಾಡಲಾಯ್ತು. ಈ ವೇಳೆ ಬಿಜೆಪಿ ಜಿಲ್ಲಾ ಅಧ್ಯಕ್ಷ ಸನಿಲ್ ನಾಯ್ಡು, ಪಕ್ಷದ ವಕ್ತಾರ ಪ್ರಮೋದ್ ಕಾರಕೂನ್, ಜಿಲ್ಲಾ ವಕ್ತಾರ ಡಾಬಿ.ಕೆ.ಸುಂದರ್, ಶಂಕ್ರಪ್ಪ, ಕೆ.ಆರ್.ಮಲ್ಲೇಶ್ ಮೊದಲಾದವರು ಇದ್ದರು.

ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಕನಿಷ್ಟ ಐದು ಸಾವಿರ ಮನೆಗಳ ಮೇಲೆ ರಾಷ್ಟ್ರ ಧ್ವಜ ಹಾರಿಸುವ ಉದ್ದೇಶದಿಂದ ಪಕ್ಷದ ಕಾರ್ಯಕರ್ತರು, ದೇಶ ಭಕ್ತರ ಮನೆಗಳಿಗೆ ರಾಷ್ಟ್ರ ಧ್ವಜ ನೀಡುತ್ತಿದೆಂದು ಈ ವೇಳೆ ಅನಿಲ್ ನಾಯ್ಡು ತಿಳಿಸಿದರು.

## ನ್ಯಾ.ನಾಗಮೋಹನದಾಸ್ ವರದಿ ಅವೈಜ್ಞಾನಿಕ: ಕಟ್ಟಿಮನಿ

• ಉದಯವಾಹಿನಿ,ಚಿಂಚೋಳಿ

ನ್ಯಾ.ನಾಗಮೋಹನ್ ದಾಸ್ ವರದಿಯು ರಾಜ್ಯ ಸರ್ಕಾರಕ್ಕೆ ಸಲ್ಲಿಸಿದ ವರದಿ ಅವೈಜ್ಞಾನಿಕದಿಂದ ಕೂಡಿದ್ದು ಇದರಿಂದ ಬಲ ಸಮುದಾಯಕ್ಕೆ ಅನ್ಯಾಯವಾಗುತ್ತಿದೆ ಈ ವರದಿ ರದ್ದುಪಡಿಸಿ ಮತ್ತೊಮ್ಮೆ ಜಾತಿಜನಗಣತಿ ಸಮೀಕ್ಷೆ ನಡೆಸುವವರೆಗೆ ಒಳಮೀಸಲಾತಿ ಜಾರಿಗೆ ಮಾಡಬಾರದು ಎಂದು ಬಲ ಸಮೂದಾಯದ ಹಿರಿಯ ಮುಖಂಡ ಶ್ರೀಮಂತ ಕಟ್ಟಿಮನಿ ಆಗ್ರಹಿಸಿದರು.

ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು,ಬಲ ಸಮೂದಾಯದ ಜನಸಂಖ್ಯೆ ಕರ್ನಾಟಕದಲ್ಲಿ ಒಟ್ಟಾರೆ ಅಂದಾಜು ಆದಿ ಆಂದ್ರ 7,114 ಆದಿ ಕರ್ನಾಟಕ 3,20,641 ಆದಿ ಕರ್ನಾಟಕ 1,47,199 ಹೀಗೆ ಬಲ ಸಮೂದಾಯದ ಒಳಪಂಗಡಗಳು ಸೇರಿ 47,4,954 ಒಟ್ಟು 7,51,946 ಜನಸಂಖ್ಯೆ ಬಲ ಸಮಾಜದ ಜನಸಂಖ್ಯೆವಿದ್ದು ಬಲ ಸಮಾಜದ ಜನಸಂಖ್ಯೆ ಒಟ್ಟಾರೆ 37,60,579 ಜನಸಂಖ್ಯೆ ಇರುತ್ತದೆ ಈ ಆಧಾರದ ಮೇಲೆ ಒಳಮೀಸಲಾತಿ ನಿಗದಿ ಪಡಿಸಬೇಕು.

ನ್ಯಾ.ನಾಗಮೋಹನ್ ದಾಸ್ ವರದಿಯಲ್ಲಿ ಅತ್ಯಂತ ಕಡಿಮೆ ಜನಸಂಖ್ಯೆವಿದೆ ಎಂದು ಮಾಹಿತಿ ನೀಡಿದ್ದಾರೆ, ನಮ್ಮ ಅಂಕಿಅಂಶಗಳ ಮೇಲೆ ಒಳಮೀಸಲಾತಿ ಜಾರಿ ಮಾಡಿದರೆ ನಾವೆಲ್ಲರೂ ಒಪ್ಪಿಕೊಳ್ಳುತ್ತೇವೆ ಇಲ್ಲಾದಿದ್ದರೆ ಬರುವ ದಿನಗಳಲ್ಲಿ ಬಲ ಸಮಾಜದಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದರು.



**ಬಲ ಸಮೂದಾಯಕ್ಕೆ ಅನ್ಯಾಯ**

## ಹೆಸರು ಬೆಳೆ ಹಾನಿ: ಕಟಾವಿಗೆ ಅವಕಾಶ ನೀಡದ ಮಳೆ

• ಉದಯವಾಹಿನಿ ನರಗುಂದ

ತಾಲ್ಲೂಕಿನಲ್ಲಿ ನಿರಂತರ ಮಳೆಯಿಂದ ರೈತರ ತೊಂದರೆಯಾಗಿದೆ. ಅದರಲ್ಲೂ ಮುಂಗಾರು ಹಂಗಾಮಿನ ವಾಣಿಜ್ಯ ಬೆಳೆಯಾದ ಹೆಸರು ಬೆಳೆದ ರೈತರ ಪಾಡಂತೂ ಹೇಳತೀರದಾಗಿದೆ.

ಸಕಾಲಕ್ಕೆ ಮಳೆಯಾಗದೇ ಸಮರ್ಪಕವಾಗಿ ಇಳುವರಿ ಬರದ ರೀತಿಯಲ್ಲಿ ಹೆಸರು ಬೆಳೆದು ಕಟಾವು ಹಂತಕ್ಕೆ ಬಂದು ನಿಂತಿವೆ. ಆದರೆ, ಕಟಾವಿನ ಸಂದರ್ಭದಲ್ಲಿ ಮಳೆ ನಿರಂತರ ಸುರಿಯುತ್ತಿದ್ದು, ಇದರಿಂದ ಹೆಸರು ರಾಶಿ ಮಾಡದಂತಾಗಿದೆ. ಅತಿಯಾದ ಮಳೆ ಹೊಲಕ್ಕೆ ಕಾಲಿಡದಂತೆ ಮಾಡಿದೆ. ಕಟಾವು ಯಂತ್ರಗಳು ಪಟ್ಟಣ ಹಾಗೂ ವಿವಿಧ ಗ್ರಾಮಗಳಲ್ಲಿ ಬೀಡು ಬಿಟ್ಟಿವೆ. ಮಳೆನಿಂತರೂ ಕಟಾವು ಮಾಡಲು ಅವಕಾಶ ಸಿಗದಂತಾಗಿದೆ. ಕಟಾವು ಯಂತ್ರ ಹೊಲ ಪ್ರವೇಶಿಸಿದರೆ ಹೆಸರು ಕಾಳು ಸಿಡಿದು ಅರ್ಧ ನೆಲದ ಪಾಲು ಆಗುವ ಭೀತಿ ಹೆಚ್ಚಾಗಿದೆ. ಇನ್ನು ಕೂಲಿಕಾರರಿಂದ ಹೆಸರು ಬಿಡಿಸಬೇಕೆಂದರೆ ಸಾಧ್ಯವಾಗುತ್ತಿಲ್ಲ. ಹೆಸರು ಬೆಳೆ ಜಲಾವೃತಗೊಂಡು ಒಣಗಿದ ಹೆಸರು ಮಳೆಯ ಪರಿಣಾಮ ಮೊಳಕೆ ಒಡೆಯುವ ಹಂತಕ್ಕೆ ತಲುಪಿವೆ.



ಉದಯವಾಹಿನಿ ಚಿತ್ರ

### ಅತಿವೃಷ್ಟಿಯಿಂದ ರೈತ ಕಂಗಾಲು

ಪ್ರಸ್ತುತ ಹೆಸರು ಬೆಳೆ ಕ್ವಿಂಟಲ್‌ಗೆ 9 ಸಾವಿರದಿಂದ 10 ಸಾವಿರಕ್ಕೆ ಮಾರಾಟವಾಗುತ್ತಿದೆ. ಸರ್ಕಾರದ ಬೆಂಬಲ ಬೆಲೆಯೇ 8 ಸಾವಿರದಷ್ಟಿದೆ. ಇಷ್ಟು ಲಾಭ ನೀಡುವ ಬೆಳೆ ಅತಿವೃಷ್ಟಿಯಿಂದ ಹಾನಿಗೊಳಗಾಗುತ್ತಿದೆ. ಸುಮಾರು 18 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಹೆಸರು ಬಿತ್ತನೆಯಾಗಿದೆ.

## ನಕಲಿ ದಾಖಲೆ ಸೃಷ್ಟಿಸಿ 16 ಕೋಟಿ ಜಿಎಸ್‌ಟಿ ವಂಚನೆ: ಬಂಧನ

• ಉದಯವಾಹಿನಿ ಬೆಳಗಾವಿ

ಬಳ್ಳಾರಿಯಲ್ಲಿ ನಕಲಿ ದಾಖಲೆ ಸೃಷ್ಟಿಸಿ 16 ಕೋಟಿ ಜಿಎಸ್‌ಟಿ ವಂಚಿಸಿದ ಆರೋಪಿಯನ್ನು ಕೇಂದ್ರ ಜಿಎಸ್‌ಟಿ ಗುಪ್ತಚರ ನಿರ್ದೇಶನಾಲಯದ ಅಧಿಕಾರಿಗಳು ಬಂಧಿಸಿದ್ದಾರೆ.

ಯಾವುದೇ ಅಧಿಕೃತ ವ್ಯವಹಾರ ಮಾಡದೇ ಕೋಟ್ಯಂತರ ರೂಪಾಯಿ ವ್ಯವಹಾರದ ಇನ್‌ವಾಯ್ಸ್‌ಗಳನ್ನು ಸೃಷ್ಟಿ ಮಾಡಿದ್ದು ಅಧಿಕಾರಿಗಳ ಗಮನಕ್ಕೆ ಬಂದಿತ್ತು. ಕಂಪನಿಗಳು ಇವೆ ಎಂದು ನಮೂದಾಗಿದ್ದ ಬಳ್ಳಾರಿಯ ಮೂರು ಸ್ಥಳಗಳಿಗೆ ಅಧಿಕಾರಿಗಳು ಭೇಟಿ ನೀಡಿದಾಗ ಪ್ರಕರಣ ಬೆಳಕಿಗೆ ಬಂದಿತು.

ಈ ಆರೋಪಿ ವಿವಿಧ ಹೆಸರುಗಳಲ್ಲಿ ನಕಲಿ ಕಂಪನಿಗಳ ದಾಖಲೆ ಸೃಷ್ಟಿಸಿ, ವ್ಯವಹಾರ ನಡೆಸಿದ ಹಾಗೆ ಇನ್‌ವಾಯ್ಸ್‌ಗಳನ್ನು ಸಿದ್ಧಪಡಿಸಿ, ನಕಲಿ ಒಪ್ಪಂದ, ನಕಲಿ ಬಿಲ್‌ಗಳನ್ನು ಸೃಷ್ಟಿಸಿದ್ದಾನೆ. ಇದಕ್ಕಾಗಿ ತನ್ನ ಕಚೇರಿಯ ನೌಕರರ ಆಧಾರ್ ಕಾರ್ಡ್, ಪಾನ್ ಕಾರ್ಡ್‌ಗಳನ್ನು ಬಳಸಿಕೊಂಡಿದ್ದಾನೆ. ಒಟ್ಟು 16 ಕೋಟಿ ಮೌಲ್ಯದ ಇನ್‌ಪುಟ್ ಟ್ಯಾಕ್ಸ್ ಕ್ರೆಡಿಟ್ ಪಡೆದಿದ್ದಾನೆ. ಸದ್ಯ ಬಂಧಿಸಲಾದ ಆರೋಪಿ ಈ ಪ್ರಕರಣದ ಪ್ರಮುಖ ಸೂತ್ರಧಾರ ಆಗಿದ್ದು. ಇನ್ನುಳಿದ ಆರೋಪಿಗಳನ್ನೂ ಬಂಧಿಸಲಾಗುವುದು. ಈ ಬಗ್ಗೆ ತನಿಖೆ ಮುಂದುವರಿದಿದೆ ಎಂದು ಜಿಎಸ್‌ಟಿ ಕಚೇರಿಯ ಪ್ರಕಟಣೆ ತಿಳಿಸಿದೆ.

## ಕಾಂಗ್ರೇಸ್‌ನಲ್ಲಿ ಸತ್ಯ ಹೇಳಲು ಅವಕಾಶವಿಲ್ಲ: ಈರಣ್ಣ ಕಡಾಡಿ

• ಉದಯವಾಹಿನಿ, ಗೋಕಾಕ

ಕಾಂಗ್ರೆಸ್ ಪಕ್ಷದಲ್ಲಿ ಸತ್ಯ ಹೇಳಲಿಕ್ಕೆ ಅವಕಾಶವಿರುವುದಿಲ್ಲ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸತ್ಯ ಹೇಳಲಿಕ್ಕೆ ಅವಕಾಶ ನೀಡಬೇಕು. ಸಹಕಾರ ಸಚಿವ ರಾಜಣ್ಣನವರನ್ನು ಯಾವುದೇ ಕಾರಣ ನೀಡದೆ ರಾಜನಾಮೆಗೂ ಅವಕಾಶ ಕೊಡದೇ ಸಂಪುಟದಿಂದ ವಜಾಗೊಳಿಸಿರುವುದು ಪರಿಶಿಷ್ಟ ಸಮುದಾಯಕ್ಕೆ ಮಾಡಿದ ಅವಮಾನವಾಗಿದೆ ಎಂದು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಖೇದ ವ್ಯಕ್ತಪಡಿಸಿದರು.

ಇಲ್ಲಿನ ರಾಘವೇಂದ್ರ ಸ್ವಾಮಿಗಳ ಮಠದ ಆವರಣದಲ್ಲಿ ಸಂಸದರ ಸ್ಥಳೀಯ ನಗರಾಭಿವೃದ್ಧಿ ಯೋಜನೆ ಅಡಿ ನಿರ್ಮಿಸಲಾದ ಸಾಂಸ್ಕೃತಿಕ ಭವನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಈ ಹಿಂದೆಯೂ ನಾಗೇಂದ್ರ ಅವರನ್ನು ಪರಿಶಿಷ್ಟ ಸಮುದಾಯದ ಹಣ ಲೂಟಿ ಮಾಡಿದ್ದಾರೆಂದು ಸಂಪುಟದಿಂದ ಕೈ ಬಿಡಲಾಗಿತ್ತು. ಆದರೆ ಲೂಟಿ ಮಾಡಿದ ಹಣವನ್ನು ಕಾಂಗ್ರೆಸ್ ಪಕ್ಷ ಚುನಾವಣೆಗೆ ಬಳಸಿಕೊಂಡು ಹಿಂದುಳಿದ ವರ್ಗದ ಸಚಿವರನ್ನು ಕೈ ಬಿಟ್ಟು ಎಸ್.ಟಿ. ಸಮುದಾಯಕ್ಕೆ ಅನ್ಯಾಯ ಮಾಡಿದೆ ಎಂದು ಆರೋಪಿಸಿದರು.

ಮುಖ್ಯವಾಗಿ ತೆರೆಯ ಹಿಂದೆ ಯಾರು ನಿಂತು ಇದೆಲ್ಲವನ್ನು ರಾಜಣ್ಣನವರಿಂದ ಹೇಳಿಸಿದ್ದರೋ ಅವರೆ ಇಂದು ರಾಜಣ್ಣನವರ ಬೆನ್ನಿಗೆ ನಿಲ್ಲದಿರುವುದು ಆ ಸಮುದಾಯದ ದುರ್ದೈವ' ಎಂದು ಪರೋಕ್ಷವಾಗಿ ಸಚಿವ ಸತೀಶ ಜಾರಕಿಹೊಳಿಯವರಿಗೆ ಚುಚ್ಚಿದರು. ಶ್ರೀಕಾಂತ ಕುಲಕರ್ಣಿ, ಪರಶುರಾಮ ಕಲಕುಟಗಿ, ಅರುಣ ದೇಶಪಾಂಡೆ, ಮಹಾದೇವ ದೇಶಪಾಂಡೆ, ಮುರಳಿದರ ಜತ್ತಕರ್, ಶ್ರೀಕಾಂತ ಮಹಾಜನ, ಸಂತೋಷ ಇದ್ದರು.



ಉದಯವಾಹಿನಿ ಚಿತ್ರ

## ಬೃಹತ್ ಗಾತ್ರದ ಮರ ನೆಲಕುರುಳಿ ,ರಸ್ತೆ ಸಂಚಾರ ಕಡಿತ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಗಾರಂಪಳ್ಳಿ ಮತ್ತು ಕನಕಪುರ ಮಧ್ಯೆ ಚಿಂಚೋಳಿ ಭಾಲ್ಕಿ ರಾಜ್ಯ ಹೆದ್ದಾರಿ ಸಂಖ್ಯೆ 75ರಲ್ಲಿ ಬೆಳಿಗ್ಗೆ ಧಾರಾಕಾರ ಮಳೆ ಗಾಳಿಗೆ ಬೃಹತ್ ಗಾತ್ರದ ಮರವೊಂದು ರಸ್ತೆಗೆ ಉರುಳಿ ಬಿದ್ದಿರುವುದರಿಂದ ಕೆಲಹೊತ್ತು ರಸ್ತೆ ಸಂಚಾರ ದಟ್ಟಣೆಯಾಗಿ ಕಡಿತಗೊಂಡಿತ್ತು ತದನಂತರ ಅರಣ್ಯ ಇಲಾಖೆ ಅಧಿಕಾರಿಗಳು ಆಗಮಿಸಿ ಮರವನ್ನು ತೆರವುಗೊಳಿಸಿ ಜನರಿಗೆ ಸಂಚಾರಕ್ಕೆ ಅನುವು ಮಾಡಿಕೊಟ್ಟರು. ಗಿಡಮರಗಳು ರಸ್ತೆಗೆ ಉರುಳುತ್ತಿರುವುದರಿಂದ ತುರ್ತಾಗಿ ಹೊಗಬೇಕಾಗಿದ ಶಾಲಾಮಕ್ಕಳಿಗೆ ಹಾಗೂ ಆಸ್ಪತ್ರೆಗಳಿಗೆ ಮತ್ತು ಕೆಲವರಿಗೆ ದಿನನಿತ್ಯದ ಚಟುವಟಿಕೆಗೆ ಹೋಗಲು ಜನರು ಬಹಳಷ್ಟು ತೊಂದರೆ ಅನಭವಿಸುತ್ತಿದ್ದಾರೆ. ಚಿಂಚೋಳಿ ಪಟ್ಟಣದಿಂದ ಹೋಗುವ ಎಲ್ಲಾ ರಾಜ್ಯ ಹೆದ್ದಾರಿಯಲ್ಲಿ ಬರುವ ಬೃಹತ್ ಆಕಾರದ ಹಳೆಯ ಗಿಡಮರಗಳು ಅರಣ್ಯ ಇಲಾಖೆಯವರು ಪರಿಶೀಲಿಸಿ ಧಾರಾಕಾರ ಮಳೆ ಗಾಳಿಗೆ ಉರುಳುವ ಮರಗಳು ಕಟಾವು ಮಾಡಿ ಮುಂದೆ ಆಗುವ ಅನಾಹುತ ತಗೆಗಟ್ಟಬೇಕು ಎಂದು ಪ್ರಯಾಣಿಕ ಶ್ರೀಧರ ವಗ್ಗಿ ಆಗ್ರಹಿಸಿದರು.



ಉದಯವಾಹಿನಿ ಚಿತ್ರ

## ಕಾಡಾನೆ ಉಪಟಳ ಬೆಳೆ ಹಾನಿ: ಆತಂಕದಲ್ಲಿ ಜನ

• ಉದಯವಾಹಿನಿ ಆಲ್ಲೂರು

ಇತ್ತೀಚೆಗೆ ಮಲೆನಾಡಿನಲ್ಲಿ ಕಾಡಾನೆಗಳ ಉಪಟಳ ಹೆಚ್ಚಾಗಿದ್ದು, ರೈತರು ಮತ್ತು ಸ್ಥಳೀಯರಿಗೆ ತಲೆನೋವಾಗಿ ಪರಿಣಮಿಸಿದೆ. ಕಾಡಾನೆಗಳ ದಾಳಿ ನಿಯಂತ್ರಣ ಅರಣ್ಯ ಇಲಾಖೆಗೆ ಸವಾಲಾಗಿ ಕಾಡುತ್ತಿದೆ. ಆವತಿ ಹೋಬಳಿಯ ಐದಳ್ಳಿ, ಬೆರಣಗೋಡು, ಕಣತಿ, ನರೋಡಿ, ಹಕ್ಕಿಮಕ್ಕಿ, ಅರೇನೂರು ಗ್ರಾಮಗಳಲ್ಲಿ ಕಾಡಾನೆಗಳು ನಿರಂತರವಾಗಿ ಓಡಾಡುತ್ತಿದ್ದು, ಕೆಲವು ಗ್ರಾಮಗಳ ವ್ಯಾಪ್ತಿಯಲ್ಲಿ ಗುಂಪಾಗಿ ಕಾಣಿಸಿಕೊಳ್ಳುತ್ತಿವೆ. ರಾತ್ರಿ ಬೆಟ್ಟದಹಳ್ಳಿ ಗ್ರಾಮದ ನಿಂಗೇಗೌಡ ಎಂಬುವರ ತೋಟಕ್ಕೆ ಆನೆಗಳ ಗುಂಪು ದಾಳಿ ಮಾಡಿದ್ದು, ಅಡಿಕೆ, ಬಾಳೆ, ಕಾಫಿ ಬೆಳೆಯನ್ನು ನಾಶಪಡಿಸಿದೆ. ಬಳಿಕ ತೋಟದ ಒಳಗಿದ್ದ ಕೆರೆಯಲ್ಲಿ ಈಜಿ ಸಮೀಪದ ಅರಣ್ಯದ ಪ್ರದೇಶಕ್ಕೆ ತೆರಳಿದೆ.

ವನ್ಯ ಮೃಗ-ಮಾನವನ ನಡುವಿನ ಸಂಘರ್ಷ ದಿನೇ ದಿನೇ ಹೆಚ್ಚಾಗುತ್ತಿದೆ. ಮಲೆನಾಡು ಭಾಗದಲ್ಲಿ ಆನೆಗಳಿಂದ ಭಾರಿ ಪ್ರಮಾಣದ ಬೆಳೆ ನಾಶವಾಗುತ್ತಿದ್ದು, ಜೀವ ಹಾನಿಯೂ ಸಂಭವಿಸಿದೆ. ಆನೆಗಳ ಉಪಟಳದಿಂದ ಜನ ಹೈರಾಣಾಗಿದ್ದಾರೆ. ಸಂಜೆ ವಾಪಸಾಗುವ ಸಾರ್ವಜನಿಕರು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಆನೆಗಳ ಭಯದಿಂದಲೇ ಓಡಾಡುವಂತಾಗಿದೆ. ಸಮಸ್ಯೆಗೆ ಕೂಡಲೇ ಶಾಶ್ವತ ಪರಿಹಾರ ಕೈಗೊಳ್ಳಬೇಕು ಎಂದು ಅವತಿ ಹೋಬಳಿ ಕಾಫಿ ಬೆಳೆಗಾರರ ಸಂಘದ ಗೌರವಾಧ್ಯಕ್ಷ ಮಹೇಶ್ ಕೆರೆಮಕ್ಕಿ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ.



ಉದಯವಾಹಿನಿ ಚಿತ್ರ

# ನಿರ್ವಹಣೆ ಇಲ್ಲದೆ ಕುಸಿಯುತ್ತಿದೆ ಗ್ರಾ.ಪಂ.ವಸತಿಗೃಹ

● ಗ್ರಾ.ಪಂ ಆಡಳಿತದ ಇಚ್ಛಾಶಕ್ತಿಯ ಕೊರತೆಯಿಂದ ಸಾರ್ವಜನಿಕ ಆಸ್ತಿಯೊಂದು ಧರೆಗುರುಳುವ ದಿನಗಳನ್ನು ಎದುರು ನೋಡುತ್ತಿದೆ

• ಉದಯವಾಹಿನಿ ಉಪ್ಪಿನಂಗಡಿ

ಇಲ್ಲಿನ ಆದರ್ಶ ನಗರದ ನೆಕ್ಕಿಲಾಡಿ ಗ್ರಾಮ ಪಂಚಾಯಿತಿ ವಸತಿಗೃಹವು ನಿರ್ವಹಣೆ ಕೊರತೆಯಿಂದ ಕುಸಿದು ಬೀಳುವ ಸ್ಥಿತಿಗೆ ತಲುಪಿದೆ. ಗ್ರಾಮ ಪಂಚಾಯಿತಿ ಆಡಳಿತದ ಇಚ್ಛಾಶಕ್ತಿಯ ಕೊರತೆಯಿಂದ ಸಾರ್ವಜನಿಕ ಆಸ್ತಿಯೊಂದು ಧರೆಗುರುಳುವ ದಿನಗಳನ್ನು ಎದುರು ನೋಡುತ್ತಿದೆ.

ಸುಮಾರು 25 ವರ್ಷದ ಹಿಂದೆ ಗ್ರಾಮ ಪಂಚಾಯಿತಿಗೆ ಸಂಪನ್ಮೂಲ ಭರಿಸುವ ಉದ್ದೇಶದೊಂದಿಗೆ ಈ ವಸತಿ ಗೃಹ ನಿರ್ಮಿಸಲಾಗಿತ್ತು. ಒಂದೇ ಹಾಲ್‌ನಂತಿರುವ ಈ ಹೆಂಚಿನ ಕಟ್ಟಡದಲ್ಲಿ ವಸತಿಗೆ ಯೋಗ್ಯವಾದ ಐದು ಮನೆಗಳಿದ್ದವು. ಮೂಲ ಸೌಕರ್ಯ ಹೊಂದಿದ್ದ ಹಾಗೂ ಕಡಿಮೆ ಬಾಡಿಗೆಯ ಕಾರಣಕ್ಕೆ ಇಲ್ಲಿ ಸರ್ಕಾರಿ ನೌಕರರು, ಶಿಕ್ಷಕರು, ಮನೆಯಿಲ್ಲದವರು ಬಾಡಿಗೆ ಇದ್ದರು. ದಿನ ಕಳೆದಂತೆ ಗ್ರಾಮ ಪಂಚಾಯಿತಿ ಇದರ ನಿರ್ವಹಣೆಗೆ ಮುಂದಾಗದ ಕಾರಣ ಕಟ್ಟಡದ ಚಾವಣಿ ಶಿಥಿಲಾವಸ್ಥೆ ತಲುಪಿ ರೀಪುಗಳು ಮುರಿದು ಹೆಂಚುಗಳು ಬೀಳತೊಡಗಿದವು. ಬಳಿಕ ಇಲ್ಲಿ ಬಾಡಿಗೆಗೆ ಇದ್ದ ಬಹುತೇಕರು ಆ ಕಟ್ಟಡ ತೊರೆದಿದ್ದು, ಒಂದು ಕುಟುಂಬ ಮಾತ್ರ ಈ ಅಪಾಯಕಾರಿಯಾದ ಈ ಕಟ್ಟಡದಲ್ಲೇ ವಾಸವಿದೆ.'ಇದೀಗ ಕಟ್ಟಡದ ಚಾವಣಿ ಮುಕ್ಕಾಲು ಭಾಗ ಕುಸಿದಿದ್ದು, ಮಳೆ ನೀರೆಲ್ಲಾ ಕಟ್ಟಡದೊಳಗೆ ಬೀಳುತ್ತಿದೆ. ಮಳೆ-ಗಾಳಿ-ಬಿಸಿಲಿಗೆ ಈ ಕಟ್ಟಡ ಮೈದೆರೆದು ನಿಂತಿದ್ದರಿಂದ ಇದರ ಗೋಡೆಗಳಿಗೂ ಹಾನಿಯಾಗಿ ಕಟ್ಟಡವೇ ಸಂಪೂರ್ಣ ಕುಸಿಯುವ ಹಂತದಲ್ಲಿದೆ. ಗ್ರಾಮ ಪಂಚಾಯಿತಿ ಗಮನಹರಿಸಿ ಈ ಕಟ್ಟಡವನ್ನು ಉಳಿಸುವ ಕೆಲಸ ಮಾಡಬೇಕು. ಇದು ಸುಸ್ಥಿತಿಯಲ್ಲಿದ್ದರೆ ಗ್ರಾಮ ಪಂಚಾಯಿತಿಗೂ ಆದಾಯದ ಜತೆಗೆ ಮಧ್ಯಮ ವರ್ಗದ ಮಂದಿಗೆ ಬಾಡಿಗೆಗೆ ವಸತಿ ಸಿಕ್ಕಿದಂತಾಗುತ್ತದೆ' ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಅಪಾಯಕಾರಿ ಕಟ್ಟಡದಲ್ಲಿ ಕುಟುಂಬವೊಂದು ವಾಸ್ತವ್ಯ ಇರುವುದು ಗಮನಕ್ಕೆ ಬಂದ ಬಳಿಕ ಸ್ಥಳಕ್ಕೆ ತೆರಳಿ ಮನೆ ಖಾಲಿ ಮಾಡುವಂತೆ ಮೌಖಿಕವಾಗಿ ಸೂಚಿಸಿದ್ದೇನೆ. ಮುಂದೆ ನೋಟೀಸ್ ನೀಡಿ ತೆರವಿಗೆ ಕ್ರಮ ಕೈಗೊಳ್ಳಲಾಗುವುದು' ಎಂದು ನೆಕ್ಕಿಲಾಡಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪ್ರವೀಣ್ ಕುಮಾರ್ 'ತಿಳಿಸಿದರು.





ಉದಯವಾಹಿನಿ ಚಿತ್ರ

**ಆಡಳಿತದ ಇಚ್ಛಾಶಕ್ತಿಯ ಕೊರತೆ**

### ಆಟಿಕೆಗಳು, ಪೀಠೋಪಕರಣ ಏನಾದವು?

ಕಟ್ಟಡ ಅಪಾಯಕಾರಿಯಾಗಿದ್ದರೂ ಇದರ ಒಂದು ಕೋಣೆಯ ಚಾವಣಿಯನ್ನು ಗ್ರಾಮ ಪಂಚಾಯಿತಿ ದುರಸ್ತಿ ಮಾಡಿ ಕೂಸಿನ ಮನೆಗಾಗಿ ಬಳಕೆ ಮಾಡಿತ್ತು. 2024ರ ಜನವರಿ ತಿಂಗಳಲ್ಲಿ ಕೂಸಿನ ಮನೆಯೂ ಉದ್ಘಾಟನೆಗೊಂಡಿತು. ಕೂಸಿನ ಮನೆಗೆ ಬರುವ ಮಕ್ಕಳಿಗೆ ಆಡಲೆಂದು ಸರ್ಕಾರದ ಅನುದಾನದಲ್ಲಿ ಆಟಿಕೆಗಳನ್ನು ಖರೀದಿಸಲಾಗಿತ್ತು. ಕೆಲ ದಾನಿಗಳು ಕಪಾಟು, ಕುರ್ಚಿ, ಫ್ಯಾನ್ ಹೀಗೆಲ್ಲಾ ಕೊಡುಗೆಗಳನ್ನು ನೀಡಿದ್ದರು. ಆದರೆ ಒಂದೆರಡು ತಿಂಗಳಲ್ಲೇ ಕೂಸಿನ ಮನೆ ಬಂದ್ ಮಾಡಿ ಬೀಗ ಹಾಕಲಾಗಿದೆ. ಅಲ್ಲಿಗೆ ನೀಡಲಾದ ಸಾವಿರಾರು ರೂಪಾಯಿಯ ಆಟಿಕೆಗಳು, ದಾನಿಗಳು ಕೊಟ್ಟ ಕೊಡುಗೆಗಳು ಏನಾದವೂ ಎಂಬ ಪ್ರಶ್ನೆ ಸಾರ್ವಜನಿಕರಿಂದ ಕೇಳಿ ಬರಲಾರಂಭಿಸಿದೆ.

> ವಸತಿಗೃಹ ಕಟ್ಟಡ ಅಪಾಯಕಾರಿ ಸ್ಥಿತಿಯಲ್ಲಿದೆ. ಈ ಬಗ್ಗೆ ತಾಲ್ಲೂಕು ಪಂಚಾಯಿತಿ ಇಒ ಗಮನಕ್ಕೆ ತಂದು ದುರಸ್ತಿಗೆ ಅನುದಾನ ನೀಡುವಂತೆ ಕೇಳಿದ್ದೇನೆ. ಅನುದಾನ ನೀಡುವ ಭರವಸೆ ನೀಡಿದ್ದಾರೆ. ಅನುದಾನ ಬಂದ ಕೂಡಲೇ ದುರಸ್ತಿಗೆ ಕ್ರಮ ಕೈಕೊಳ್ಳಲಾಗುವುದು.
> - ಸುಜಾತ ರೈ ಅಲಿಮಾರ್, ನೆಕ್ಕಿಲಾಡಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ

### ಸಿಂಧೂ ನದಿಯ ಹನಿ ನೀರಿಗಾಗಿ ಹಿಂದೂಸ್ತಾನದ ರಕ್ತ ಹರಿಸಬಲ್ಲೆವು; ಶೆಹಬಾಜ್ ಷರೀಫ್ ಯುದ್ಧೋನ್ಮಾದ ಗುಟ್ಟು

# ಸಿಂಧೂ ನದಿಯ ಒಂದು ಹನಿ ನೀರಿಗಾಗಿ ಭಾರತದೊಂದಿಗೆ ಯುದ್ಧಕ್ಕೆ ಸಿದ್ಧ

**ಜಗತ್ತನ್ನು ನಾಶ ಮಾಡುವ ಬೆದರಿಕೆ**

**ಇಸ್ಲಾಮಾಬಾದ್:** ಪಾಕಿಸ್ತಾನದ ಮಿಲಿಟರಿ ಮತ್ತು ರಾಜಕೀಯ ನಾಯಕತ್ವ ಈಗ ಭಾರತದೊಂದಿಗೆ ಯುದ್ಧ ಮಾಡುವ ತವಕದಲ್ಲಿರುವಂತೆ ಕಾಣುತ್ತಿದೆ. ಒಬ್ಬರಾದ ಮೇಲೊಬ್ಬರು ಭಾರತವನ್ನು ಯುದ್ಧರಂಗಕ್ಕೆ ಬರುವಂತೆ ಆಹ್ವಾನ ನೀಡುತ್ತಿದ್ದಾರೆ. ಎಲ್ಲರದ್ದೂ ಒಂದೇ ಹೇಳಿಕೆ, ಈ ಬಾರಿ ಭಾರತಕ್ಕೆ ಹೊಡೆತ ನೀಡುತ್ತೇವೆ. ಆದರೆ ಎಲ್ಲರದ್ದೂ ಒಂದೇ ಕಾಯಕ, ಭಾರತ ಹೊಡೆದಾಗ ಹೊಡೆಸಿಕೊಳ್ಳುವುದು. ಪಾಕಿಸ್ತಾನ ಸೇನಾಧ್ಯಕ್ಷ ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್ ಅಮೆರಿಕದ ನೆಲದಲ್ಲಿ ನಿಂತು, ಅರ್ಧ ಜಗತ್ತನ್ನು ನಾಶ ಮಾಡುವ ಬೆದರಿಕೆ ಹಾಕಿದ್ದಾರೆ. ಅಲ್ಲದೇ ಭಾರತ ಸಿಂಧೂ ನದಿಗೆ ಅಣೆಕಟ್ಟು ಕಟ್ಟಿದರೆ 10 ಕ್ಷಿಪಣಿ ಬಳಸಿ ಉಡಾಯಿಸುತ್ತೇವೆ ಎಂದು ಎಚ್ಚರಿಕೆ ಕೂಡ ನೀಡಿದ್ದಾರೆ. ಅದೇ ರೀತಿ ಪಾಕಿಸ್ತಾನದ ಮಾಜಿ ವಿದೇಶಾಂಗ ಸಚಿವ ಬಿಲಾವಲ್ ಭುಟ್ಟೋ, ಸಿಂಧೂ ನದಿ ನೀರು ಬಿಡದಿದ್ದರೆ, ಭಾರತದೊಂದಿಗೆ ಯುದ್ಧವೊಂದೇ ನಮ್ಮ ಆಯ್ಕೆ ಎಂದು ಘೋಷಿಸಿದ್ದಾರೆ. ಇವರಿಬ್ಬರ ಈ ಯುದ್ಧೋನ್ಮದ ಕಂಡ ಪಾಕಿಸ್ತಾನದ ಪ್ರಧಾನಮಂತ್ರಿ, ಶೆಹಬಾಜ್ ಷರೀಫ್,



ಹೌದೌದು ಭಾರತದೊಂದಿಗೆ ನಾವು ಯುದ್ಧಕ್ಕೆ ಸಿದ್ಧ ಎಂದು ಹೂಂಕರಿಸಿದ್ದಾರೆ.

**ಸಿಂಧೂಗಾಗಿ ಯುದ್ಧಕ್ಕೆ ಸಿದ್ಧ ಎಂದ ಷರೀಫ್:** ಇಸ್ಲಾಮಾಬಾದ್‌ನಲ್ಲಿ ನಡೆದ ಅಂತಾರಾಷ್ಟ್ರೀಯ ಯುವ ದಿನಾಚರಣೆ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಶೆಹಬಾಜ್ ಷರೀಫ್, ಸಿಂಧೂ ನದಿ ಒಪ್ಪಂದವನ್ನು ರದ್ದಗೊಳಿಸಿರುವ ಭಾರತದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ಪಾಕಿಸ್ತಾನದ ಒಂದು ಹನಿ ನೀರನ್ನೂ ಭಾರತ ಕಸಿದುಕೊಳ್ಳಲು ಬಿಡುವುದಿಲ್ಲ ಎಂದು ಪಾಕ್ ಪ್ರಧಾನಿ ಗುಡುಗಿದರು. ಮೇ ತಿಂಗಳಿನಿಂದ ಭಾರತವು ಸ್ಥಗಿತಗೊಳಿಸಿರುವ ಸಿಂಧೂ ಜಲ ಒಪ್ಪಂದದ ಸಾಮಾನ್ಯ ಕಾರ್ಯನಿರ್ವಹಣೆಯನ್ನು ಪುನರಾರಂಭಿಸುವಂತೆ, ಪಾಕಿಸ್ತಾನ ನಿರಂತರವಾಗಿ ಒತ್ತಾಯ ಮಾಡುತ್ತಲೇ ಇದೆ. ಆದರೆ ಇದಕ್ಕೆ ಭಾರತ ಕ್ಯಾರೆ ಎನ್ನದೇ, ಒಪ್ಪಂದವನ್ನು ಅಮಾನತಿಲ್ಲಿಟ್ಟಿದೆ. ಇದೇ ಕಾರಣಕ್ಕೆ ನಮ್ಮ ನೀರನ್ನು ಹಿಡಿದಿಟ್ಟುಕೊಳ್ಳುವುದಾಗಿ ನೀವು ಬೆದರಿಕೆ ಹಾಕಿದರೆ, ಪಾಕಿಸ್ತಾನದಿಂದ ಒಂದು ಹನಿಯನ್ನೂ ಕಸಿದುಕೊಳ್ಳಲು ನಿಮ್ಮಿಂದ ಸಾಧ್ಯವಿಲ್ಲ ಎಂಬುದನ್ನು ನೆನಪಿನಲ್ಲಿಡಿ ಎಂದು ಷರೀಫ್ ಎಚ್ಚರಿಸಿದ್ದಾರೆ. ನೀವು ನಮ್ಮ ನೀರನ್ನು ನಿಲ್ಲಿಸುವುದಾಗಿ ಬೆದರಿಕೆ ಹಾಕುತ್ತಿದ್ದೀರಿ. ನೀವು ಅಂತಹ ಕ್ರಮಕ್ಕೆ ಪ್ರಯತ್ನಿಸಿದರೆ, ಪಾಕಿಸ್ತಾನವು ನಿಮಗೆ ಎಂದಿಗೂ ಮರೆಯಲಾಗದ ಪಾಠವನ್ನು ಕಲಿಸುತ್ತದೆ ಎಂಬ ಶೆಹಬಾಜ್ ಷರೀಫ್ ಅವರ ಎಚ್ಚರಿಕೆ ಭಾರತದಲ್ಲಿ ನಗೆಪಾಟಲಿಗೆ ಗುರಿಯಾಗಿದೆ. ಸಿಂಧೂ ನೀರನ್ನು ಪಾಕಿಸ್ತಾನದ ಜೀವಾಳ ಎಂದು ಕರೆದಿರುವ ಶೆಹಬಾಜ್ ಷರೀಫ್, ಅಂತರಾರಾಷ್ಟ್ರೀಯ ಒಪ್ಪಂದಗಳ ಅಡಿಯಲ್ಲಿ ಪಾಕಿಸ್ತಾನದ ಹಕ್ಕುಗಳ ಬಗ್ಗೆ ಯಾವುದೇ ರಾಜಿಗೆ ಸಿದ್ಧವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಪಾಕಿಸ್ತಾನದ ವಿದೇಶಾಂಗ ಕಚೇರಿಯು ಭಾರತವನ್ನು ಸಿಂಧೂ ಜಲಒಪ್ಪಂದದ ಸಾಮಾನ್ಯ ಕಾರ್ಯನಿರ್ವಹಣೆಯನ್ನು ತಕ್ಷಣ ಪುನರಾರಂಭಿಸುವಂತೆ ವಿನಂತಿ ಮಾಡಿದ ಕೆಲವೇ ದಿನಗಳಲ್ಲಿ, ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಭಾರತಕ್ಕೆ ಯುದ್ಧ ಬೆದರಿಕೆ ಹಾಕಿದ್ದಾರೆ.

ಸಿಂಧೂ ಜಲ ಒಪ್ಪಂದದ ಸಾಮಾನ್ಯ ಕಾರ್ಯನಿರ್ವಹಣೆಯನ್ನು ತಕ್ಷಣ ಪುನರಾರಂಭಿಸುವಂತೆ, ಅದರ ಒಪ್ಪಂದದ ಬಾಧ್ಯತೆಗಳನ್ನು ಸಂಪೂರ್ಣವಾಗಿ, ನಿಷ್ಠೆಯಿಂದ ಪೂರೈಸುವಂತೆ ನಾವು ಭಾರತವನ್ನು ಒತ್ತಾಯಿಸುತ್ತೇವೆ ಎಂದು ಪಾಕಿಸ್ತಾನದ ವಿದೇಶಾಂಗ ಕಚೇರಿ ತನ್ನ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಪೋಸ್ಟ್ ಮಾಡಿದೆ.

**ಭಾರತ ತಿರುಗೇಟು**

**ಪಾಕಿಸ್ತಾದ ಮಿಲಿಟರಿ, ರಾಜಕೀಯ ನಾಯಕತ್ವದ ಈ ನಿರಂತರ ಯುದ್ಧ ಬೆದರಿಕೆಗಳಿಗೆ ತಿರುಗೇಟು ನೀಡಿರುವ ಭಾರತ, ಯಾವುದೇ ಕಾರಣಕ್ಕೂ ಪರಮಾಣು ಬೆದರಿಕೆಗಳಿಗೆ ಮಣಿಯುವುದಿಲ್ಲ ಎಂದು ಸ್ಪಷ್ಟಪಡಿಸಿದೆ. ಅಲ್ಲದೇ ಅಂತಾರಾಷ್ಟ್ರೀಯ ಸಮುದಾಯವು ಪಾಕಿಸ್ತಾನದ ಪರಮಾಣು ಖಡ್ಗಗಳನ್ನು ಝುಳಪಿಸುವ ಕಾಯಕ ಖಂಡಿಸಬೇಕು ಎಂದು ಒತ್ತಾಯಿಸಿದೆ.**

**ಪಾಕಿಸ್ತಾನದ ಯುದ್ಧ ಬೆದರಿಕೆಗಳು**

**ದಶಕಗಳಷ್ಟು ಹಳೆಯದಾದ ಸಿಂಧೂ ಜಲ ಒಪ್ಪಂದವನ್ನು ಅಮಾನತುಗೊಳಿಸಿದ್ದಕ್ಕಾಗಿ, ಪಾಕಿಸ್ತಾನದ ಮಾಜಿ ವಿದೇಶಾಂಗ ಸಚಿವ ಮತ್ತು ರಾಜಕಾರಣಿ ಬಿಲಾವಲ್ ಭುಟ್ಟೋ ಭಾರತಕ್ಕೆ ಯುದ್ಧ ಬೆದರಿಕೆ ಹಾಕಿದ್ದರು. ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಭಾರತ ಸರ್ಕಾರ ಪಾಕಿಸ್ತಾನಕ್ಕೆ ಭಾರೀ ಹಾನಿ ಮಾಡುತ್ತಿದ್ದು, ಪಾಕಿಸ್ತಾನಿಯರು ಒಗ್ಗಟ್ಟಾಗಿ ಭಾರತದ ವಿರುದ್ಧ ಹೋರಾಡಬೇಕು ಎಂದು ಬಿಲಾವಲ್ ಭುಟ್ಟೋ ಕರೆ ನೀಡಿದ್ದರು.**

---

## ಉತ್ತರ ಪ್ರದೇಶದಲ್ಲಿ ಮಹಿಳೆಯನ್ನು ಕಚ್ಚಿ ಕೊಂದ ಬೀದಿ ನಾಯಿಗಳು


**ಕುಶಿನಗರ:** ಉತ್ತರ ಪ್ರದೇಶದ ಕುಶಿನಗರ ಜಿಲ್ಲೆಯಲ್ಲಿ 30 ವರ್ಷದ ಮಾನಸಿಕ ಅಸ್ವಸ್ಥ ಮಹಿಳೆಯನ್ನು ಬೀದಿ ನಾಯಿಗಳು ಕಚ್ಚಿ ಕೊಂದು ಹಾಕಿವೆ. ಅರ್ಜುನ್ ದುಮ್ರಿ ಗ್ರಾಮದಲ್ಲಿ ತಡರಾತ್ರಿ ಈ ಘಟನೆ ನಡೆದಿದೆ. ಸಂಜೆ 7 ಗಂಟೆ ಸುಮಾರಿಗೆ ಮಾಧುರಿಯ ಗ್ರಾಮ ಪಂಚಾಯತ್ ಕಟ್ಟಡದ ಬಳಿಯ ಭತ್ತದ ಗದ್ದೆಯಲ್ಲಿ ಬಿದ್ದಿದ್ದು, ಬೀದಿ ನಾಯಿಗಳು ಮಹಿಳೆಯೊಬ್ಬರ ಮೇಲೆ ದಾಳಿ ಮಾಡುತ್ತಿವೆ ಎಂದು ಕರೆ ಬಂದಿತು ಹೋಗಿ ನೋಡಿದಾಗ ನಾಯಿಗಳ ಹಿಂಡು ಮಹಿಳೆಯ ಕಚ್ಚಿ ಕೊಂದು ಹಾಕಿದ್ದವು ಎಂದು ಎಸ್‌ಎಚ್‌ಒ ರಾಮ್ ಸಹಾಯ್ ಚೌಹಾಣ್ ತಿಳಿಸಿದ್ದಾರೆ. ಪೊಲೀಸ್ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ, ಕೋಲುಗಳಿಂದ ನಾಯಿಗಳನ್ನು ಓಡಿಸಿ, ಶವವನ್ನು ವಶಕ್ಕೆ ಪಡೆದರು. ಮಹಿಳೆ ಮಾನಸಿಕ ಅಸ್ವಸ್ಥಳಾಗಿದ್ದು, ಯಾವುದೋ ಕಾರಣಕ್ಕಾಗಿ ಪಂಚಾಯತ್ ಕಟ್ಟಡದ ಹಿಂದೆ ಹೋಗಿದ್ದರು ಆ ಸಂದರ್ಭದಲ್ಲಿ ನಾಯಿಗಳ ಹಿಂಡು ದಾಳಿ ಮಾಡಿರಬಹುದು ಎಂದು ಶಂಕಿಸಲಾಗಿದೆ. ಒಂದು ವೇಳೆ ಮಹಿಳೆ ಅನ್ಯಕಾರಣಗಳಿಗಾಗಿ ಸಾವನ್ನಪ್ಪಿ ನಂತರ ನಾಯಿಗಳ ಹಿಂಡು ಶವವನ್ನು ಕಿತ್ತುತಿಂದಿರುವ ಸಾಧ್ಯತೆಗಳು ಇವೆ ಎಂದು ಪೊಲೀಸರು ಶಂಕಿಸಿದ್ದಾರೆ. ಗ್ರಾಮಸ್ಥರ ಪ್ರಕಾರ, ಮಹಿಳೆ ಆಗಾಗ್ಗೆ ಗ್ರಾಮದಲ್ಲಿ ಸುತ್ತಾಡುತ್ತಿದ್ದಳು ಮತ್ತು ಸೋಮವಾರದಿಂದ ನಾಪತ್ತೆಯಾಗಿದ್ದಳು. ಆಕೆಯ ಕುಟುಂಬವು ಆಕೆಗಾಗಿ ಹುಡುಕಾಟ ನಡೆಸಿತು ಆದರೆ ಆಕೆಯನ್ನು ಪತ್ತೆಹಚ್ಚಲು ಸಾಧ್ಯವಾಗಲಿಲ್ಲ.ನಿನ್ನೆ ಆಕೆಯ ಶವ ಭತ್ತದ ಗದ್ದೆಯಲ್ಲಿ ಪತ್ತೆಯಾಗಿದ್ದು, ಅದರ ಭಾಗಗಳನ್ನು ನಾಯಿಗಳು ತಿಂದು ಹಾಕಿವೆ ಎಂದು ಅವರು ಹೇಳಿದರು. ಈ ಪ್ರದೇಶದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು, ಒಂದು ವರ್ಷದ ಹಿಂದೆ ಹಸು ಮತ್ತು ಎಂಟು ತಿಂಗಳ ಹಿಂದೆ ಮೇಕೆಯನ್ನು ಕೊಂದ ಘಟನೆಗಳು ಸೇರಿದಂತೆ ಹಿಂದಿನ ಘಟನೆಗಳನ್ನು ಗ್ರಾಮಸ್ಥರು ಉಲ್ಲೇಖಿಸಿದ್ದಾರೆ.ಪೊಲೀಸರು ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದಾರೆ ಮತ್ತು ವರದಿಯ ನಂತರ ಸಾವಿಗೆ ನಿಖರವಾದ ಕಾರಣ ತಿಳಿಯಲಿದೆ ಎಂದು ವೃತ್ತ ಅಧಿಕಾರಿ ಕಸ್ಯ ಕುಂದನ್ ಸಿಂಗ್ ಹೇಳಿದ್ದಾರೆ.

---

## ಬೀದಿನಾಯಿಗಳನ್ನು ಸ್ಥಳಾಂತರಿಸಿ ಆದೇಶಕ್ಕೆ ವಿರೋಧ

**ಹೊಸದಿಲ್ಲಿ:** ರಾಜಧಾನಿಯ ಸುತ್ತಮುತ್ತ ಇರುವ ಬೀದಿನಾಯಿಗಳನ್ನು ಸ್ಥಳಾಂತರಿಸಿ ಎಂದು ಕೆಲ ದಿನಗಳ ಹಿಂದೆ ಸುಪ್ರೀಂಕೋರ್ಟ್ ಹೇಳಿತ್ತು. ಈ ತೀರ್ಪು ಪ್ರಾಣಿ ಪ್ರಿಯರು, ಎನ್‌ಜಿಒಗಳ ವಿರೋಧಕ್ಕೆ ಕಾರಣವಾಗಿದೆ. ಇದಕ್ಕೆ ಸಂಬಂಧಿಸಿಲಾದ ಅರ್ಜಿ ವಿಚಾರಣೆಯಲ್ಲಿ ಭಾರತದ ಮುಖ್ಯ ನ್ಯಾಯಮೂರ್ತಿಗಳು ಬೀದಿ ನಾಯಿಗಳ ಸಮಸ್ಯೆಯನ್ನು ಪರಿಶೀಲಿಸುವುದಾಗಿ ಹೇಳಿದ್ದಾರೆ. ನಾಯಿಗಳಿಗೆ ನಿಯಮಿತವಾಗಿ ಸಂತಾನಶಕ್ತಿಹರಣ, ಲಸಿಕೆ ಹಾಕುವಂತೆ ಕೋರಿ ಸಲ್ಲಿಸಲಾದ ಅರ್ಜಿಯನ್ನು ನ್ಯಾಯಾಲಯದಲ್ಲಿ ಬುಧವಾರ ವಿಚಾರಣೆಗೆ ಎತ್ತಿಕೊಳ್ಳಲಾಗಿದೆ. ಬುಧವಾರ 2024ರ ಅರ್ಜಿಯನ್ನು ನ್ಯಾಯಾಲಯದ ಮುಂದೆ ಪ್ರಸ್ತಾಪಿಸಲಾಯಿತು. ದೆಹಲಿಯ ನಾಗರಿಕ ಅಧಿಕಾರಿಗಳು ನಿಯಮಿತವಾಗಿ ಸಂತಾನಶಕ್ತಿಹರಣ ಕಾರ್ಯಕ್ರಮಗಳನ್ನು ನಡೆಸುತ್ತಿಲ್ಲ. ಇದರಿಂದ ನಾಯಿ ಕಡಿತ ಪ್ರಕರಣಗಳು ಹೆಚ್ಚಾಗುತ್ತಿವೆ ಎಂದು ಅರ್ಜಿಯಲ್ಲಿ ಹೇಳಲಾಗಿದೆ.

ಜುಲೈ 2024 ರಲ್ಲಿ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನೋಟಿಸ್ ಜಾರಿ ಮಾಡಲಾಗಿತ್ತು. ಇದಕ್ಕೆ ಪ್ರತಿಕ್ರಿಯಿಸಿದ ಸಿಜೆಐ ಬಿ.ಆರ್. ಗವಾಯಿ, ಈಗಾಗಲೇ ಈ ವಿಷಯದ ಬಗ್ಗೆ ಆದೇಶ ಹೊರಡಿಸಲಾಗಿದೆ ಎಂದು ಹೇಳಿದರು. ಇತ್ತೀಚಿನ ತೀರ್ಪಿನಲ್ಲಿ ಸುಪ್ರೀಂ ಕೋರ್ಟ್, ದೆಹಲಿ- ಎನ್‌ಸಿಆರ್ ವ್ಯಾಪ್ತಿಯಲ್ಲಿರುವ ಎಲ್ಲಾ ಬೀದಿ ನಾಯಿಗಳನ್ನು ಎಂಟು



**ಈ ತೀರ್ಪಿಗೆ ಪ್ರಾಣಿಪ್ರಿಯರ ಆಕ್ರೋಶ**

ವಾರಗಳಲ್ಲಿ ಹಿಡಿದು ಆಶ್ರಯ ತಾಣಗಳಿಗೆ ಕಳುಹಿಸುವಂತೆ ನಾಗರಿಕ ಸಂಸ್ಥೆಗಳಿಗೆ ನಿರ್ದೇಶನ ನೀಡಿತ್ತು. ಮುಖ್ಯ ನ್ಯಾಯಮೂರ್ತಿಗಳು ಈ ವಿಷಯವನ್ನು ಪರಿಶೀಲಿಸುವುದಾಗಿ ತಿಳಿಸಿದ್ದಾರೆ. ಆದರೆ, ಸುಪ್ರೀಂ ಕೋರ್ಟ್ ಇನ್ನೂ ವಿಚಾರಣೆಗೆ ಪಟ್ಟಿ ಮಾಡಿಲ್ಲ.

**ಸುಪ್ರೀಂ ಕೋರ್ಟ್ ಬೀದಿ ನಾಯಿಗಳ ಬಗ್ಗೆ ಏನು ಹೇಳಿದೆ?:** ನ್ಯಾಯಮೂರ್ತಿಗಳಾದ ಜೆಬಿ ಪರ್ದಿವಾಲಾ ಮತ್ತು ಆರ್. ಮಹದೇವನ್ ಅವರ ಪೀಠವು ಸೋಮವಾರ ದೆಹಲಿ- ಎನ್‌ಸಿಆರ್‌ನಲ್ಲಿ ಬೀದಿ ನಾಯಿಗಳ ಹಾವಳಿ ಭಯಾನಕವಾಗಿದೆ. ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಹೇಳಿದೆ. ನಾಯಿ ಕಡಿತದಿಂದ ರೇಬೀಸ್ ಹರಡುತ್ತಿರುವ ವರದಿಗಳನ್ನು ಗಂಭೀರವಾಗಿ ಪರಿಗಣಿಸಿದ ನಂತರ ನ್ಯಾಯಾಲಯ ಈ ಆದೇಶ ಹೊರಡಿಸಿದೆ.

**ಪ್ರಾಣಿಪ್ರಿಯರ ವಿರೋಧ**

**ಎಬಿಸಿ ನಿಯಮಗಳ ಪ್ರಕಾರ, ಸಂತಾನಶಕ್ತಿಹರಣ ಮತ್ತು ಲಸಿಕೆ ಹಾಕಿದ ಬೀದಿ ನಾಯಿಗಳನ್ನು ಶಾಶ್ವತವಾಗಿ ಸ್ಥಳಾಂತರಿಸುವಂತಿಲ್ಲ. ಅವುಗಳನ್ನು ಹಿಡಿದ ಸ್ಥಳಕ್ಕೆ ಬಿಡಬೇಕು. ಈ ಆದೇಶವು ಸಾಮಾಜಿಕ ಮಾಧ್ಯಮದಲ್ಲಿ ದೊಡ್ಡ ಚರ್ಚೆಗೆ ಕಾರಣವಾಗಿದೆ. ಪ್ರಾಣಿ ಹಕ್ಕುಗಳ ಕಾರ್ಯಕರ್ತರು ಪ್ರತಿಭಟನೆ ನಡೆಸುತ್ತಿದ್ದಾರೆ. ದೆಹಲಿಯ ಇಂಡಿಯಾ ಗೇಟ್ ಬಳಿ ಪ್ರತಿಭಟನೆ ನಡೆಸುತ್ತಿದ್ದ 40-50 ಪ್ರತಿಭಟನಾಕಾರರನ್ನು ಪೊಲೀಸರು ವಶಕ್ಕೆ ಪಡೆದರು.**

ನೀವು ಬಲವಾಗಿ ಕಾರ್ಯಾಚರಣೆ ಪ್ರಾರಂಭಿಸಬೇಕು. ಸಂತಾನಶಕ್ತಿಹರಣ ಮಾಡಲಾಗಿದೆಯೋ ಇಲ್ಲವೋ, ಎಲ್ಲಾ ಬೀದಿ ನಾಯಿಗಳನ್ನು ಹಿಡಿಯಬೇಕು ಸಮಾಜವು ಬೀದಿ ನಾಯಿಗಳಿಂದ ಮುಕ್ತವಾಗಿರಬೇಕು ಎಂದಿದೆ. ಆದರೆ, ನ್ಯಾಯಾಲಯದ ಈ ಆದೇಶವು ಪ್ರಾಣಿ ಪ್ರಿಯರ ಕೋಪಕ್ಕೆ ಕಾರಣವಾಗಿದೆ. ಈ ತೀರ್ಪು ಅಮಾನವೀಯ ಎಂದು ಟೀಕಿಸಿದ್ದಾರೆ. ಇದು ಪ್ರಾಣಿ ಜನ್ಮ ನಿಯಂತ್ರಣ ನಿಯಮಗಳಿಗೆ ವಿರುದ್ಧವಾಗಿದೆ ಎಂದು ಹೇಳಿದ್ದಾರೆ.


---

## ಭಾರತ, ಪಾಕ್‌ನೊಂದಿಗಿನ ಬಾಂಧವ್ಯ ಉತ್ತಮ

**ನ್ಯೂಯಾರ್ಕ್:** ಭಾರತ, ಪಾಕಿಸ್ತಾನ ಎರಡರೊಂದಿಗಿನ ಅಮೆರಿಕದ ಸಂಬಂಧವು ಉತ್ತಮವಾಗಿದೆ ಎಂದು ಅಮೆರಿಕದ ವಿದೇಶಾಂಗ ಇಲಾಖೆ ಹೇಳಿದೆ, ರಾಜತಾಂತ್ರಿಕರು ಎರಡೂ ರಾಷ್ಟ್ರಗಳಿಗೆ ಬದ್ಧರಾಗಿದ್ದಾರೆ ಎಂದು ಪ್ರತಿಪಾದಿಸಿದೆ. ಬ್ರಿಫಿಂಗ್‌ನಲ್ಲಿ ಮಾತನಾಡಿದ ವಿದೇಶಾಂಗ ಇಲಾಖೆಯ ವಕ್ತಾರ ಟ್ಯಾಮಿ ಬ್ರೂಸ್, ಎರಡೂ ರಾಷ್ಟ್ರಗಳೊಂದಿಗೆ ಕೆಲಸ ಮಾಡುವ ಅಮೆರಿಕವು ಪ್ರದೇಶ ಮತ್ತು ಜಗತ್ತಿಗೆ ಒಳ್ಳೆಯ ಸುದ್ದಿಯಾಗಿದ್ದು, ಇದು ಪ್ರಯೋಜನಕಾರಿ ಭವಿಷ್ಯವನ್ನು ಉತ್ತೇಜಿಸುತ್ತದೆ ಎಂದು ಹೇಳಿದರು.

ಎರಡೂ ರಾಷ್ಟ್ರಗಳೊಂದಿಗಿನ ನಮ್ಮ ಸಂಬಂಧವು ಮೊದಲಿನಂತೆಯೇ ಇದೆ ಎಂದು ನಾನು ಹೇಳುತ್ತೇನೆ, ಅದು ಒಳ್ಳೆಯದು. ಎಲ್ಲರನ್ನೂ ತಿಳಿದಿರುವ, ಎಲ್ಲರೊಂದಿಗೂ ಮಾತನಾಡುವ ಅಧ್ಯಕ್ಷರನ್ನು ಹೊಂದುವ ಪ್ರಯೋಜನ ಅದು, ಈ ಸಂದರ್ಭದಲ್ಲಿ ನಾವು ಭಿನ್ನಾಭಿಪ್ರಾಯಗಳನ್ನು ಹೇಗೆ ಒಟ್ಟಿಗೆ ತರಬಹುದು. ಇಲ್ಲಿನ ರಾಜತಾಂತ್ರಿಕರು ಎರಡೂ ರಾಷ್ಟ್ರಗಳಿಗೆ ಬದ್ಧರಾಗಿದ್ದಾರೆ ಎಂಬುದು ಸ್ಪಷ್ಟವಾಗಿದೆ ಎಂದು ಬ್ರೂಸ್ ಹೇಳಿದರು.

ಪಾಕಿಸ್ತಾನ ಸೇನಾ ಮುಖ್ಯಸ್ಥ ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್ ಟ್ರಂಪ್ ಅವರನ್ನು ಭೇಟಿಯಾದ ನಂತರ ಶಸ್ತ್ರಾಸ್ತ್ರ ಮಾರಾಟದ ವಿಷಯದಲ್ಲಿ ಇಸ್ಲಾಮಾಬಾದ್‌ಗೆ ಅಮೆರಿಕದ ನೆರವು ಹೆಚ್ಚಾಗುವ ಸಾಧ್ಯತೆ, ಇದು



ಪ್ರಧಾನಿ ನರೇಂದ್ರ ಮೋದಿ ಅವರೊಂದಿಗಿನ ಟ್ರಂಪ್ ಅವರ ಸಂಬಂಧದ ವೆಚ್ಚದಲ್ಲಿ ಬರುತ್ತಿದೆಯೇ ಎಂಬ ಪ್ರಶ್ನೆಗೆ ಅವರು ಉತ್ತರಿಸುತ್ತಿದ್ದರು.

ಭಾರತ ಮತ್ತು ಪಾಕಿಸ್ತಾನದ ನಡುವಿನ ಮೇ ತಿಂಗಳ ಸಂಘರ್ಷವನ್ನು ಉಲ್ಲೇಖಿಸುತ್ತಾ ಬ್ರೂಸ್, ಖಂಡಿತವಾಗಿಯೂ, ಪಾಕಿಸ್ತಾನ, ಭಾರತದೊಂದಿಗೆ ನಮಗೆ ಸಂಘರ್ಷ ಉಂಟಾದಾಗ ಒಂದು ಅನುಭವವಿತ್ತು, ಅದು ತುಂಬಾ ಭಯಾನಕವಾಗಿ ಬೆಳೆಯಬಹುದಿತ್ತು ಎಂದು ಹೇಳಿದರು.

ಅಮೆರಿಕದ ಉನ್ನತ ನಾಯಕರು ಆ ಸಂಭಾವ್ಯ ದುರಂತವನ್ನು ನಿಲ್ಲಿಸುವಲ್ಲಿ ಭಾಗಿಯಾಗಿದ್ದಾರೆ ಎಂದು ಅವರು ಹೇಳಿಕೊಂಡಿದ್ದಾರೆ.ಅಮೆರಿಕದ ಯಾವುದೇ ಮಧ್ಯಸ್ಥಿಕೆ ಇಲ್ಲದೆ ತಮ್ಮ ಮಿಲಿಟರಿಗಳ ನಡುವಿನ ನೇರ ಮಾತುಕತೆಯ ನಂತರ ಭಾರತ ಮತ್ತು ಪಾಕಿಸ್ತಾನ ತಮ್ಮ ಮಿಲಿಟರಿ ಕ್ರಮಗಳನ್ನು ನಿಲ್ಲಿಸಿವೆ ಎಂದು ನವದೆಹಲಿ ಹೇಳಿಕೊಂಡಿದೆ.

**ಉಪಾಧ್ಯಕ್ಷ ಜೆ ಡಿ ವ್ಯಾನ್ಸ್, ಅಧ್ಯಕ್ಷ ಟ್ರಂಪ್ ಮತ್ತು ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಅವರೊಂದಿಗೆ ಏನಾಗುತ್ತಿದೆ ಎಂಬುದರ ಸ್ವರೂಪವನ್ನು ತಿಳಿಸುವಲ್ಲಿ. ನಾವು ಫೋನ್ ಕರೆಗಳ ಸ್ವರೂಪ, ದಾಳಿಗಳನ್ನು ನಿಲ್ಲಿಸಲು ಮತ್ತು ನಂತರ ಪಕ್ಷಗಳನ್ನು ಒಟ್ಟು ಗೂಡಿಸಲು ನಾವು ಮಾಡಿದ ಕೆಲಸವನ್ನು ವಿವರಿಸಿದ್ದೇವೆ, ಇದರಿಂದ ನಾವು ಶಾಶ್ವತವಾದದ್ದನ್ನು ಹೊಂದಬಹುದು ಎಂದು ಅವರು ಹೇಳಿದರು.**

ಅರ್ಮೇನಿಯಾ ಮತ್ತು ಅಜೆರ್ಬೈಜಾನ್ ನಡುವಿನ ಇತ್ತೀಚಿನ ಶಾಂತಿ ಒಪ್ಪಂದವು ಕಾಂಬೋಡಿಯಾ ಮತ್ತು ಥೈಲ್ಯಾಂಡ್, ಇಸ್ರೇಲ್, ಇರಾನ್, ರುವಾಂಡಾ ಮತ್ತು ಕಾಂಗೋ ಪ್ರಜಾಸತ್ತಾತ್ಮಕ ಗಣರಾಜ್ಯ, ಭಾರತ ಮತ್ತು ಪಾಕಿಸ್ತಾನ, ಈಜಿಪ್ಟ್ ಮತ್ತು ಇಥಿಯೋಪಿಯಾ ಮತ್ತು ಸೆರ್ಬಿಯಾ ಮತ್ತು ಕೊಸೊವೊ ನಡುವಿನ ಮಾತುಕತೆಯ ಶಾಂತಿ ಒಪ್ಪಂದಗಳನ್ನು ಅನುಸರಿಸುತ್ತದೆ ಎಂದು ಬ್ರೂಸ್ ಹೇಳಿದರು.

---

## ಗಡಿಯಲ್ಲಿ ಒಳನುಸುಳುವಿಕೆ ಪ್ರಯತ್ನ ವಿಫಲಗೊಳಿಸಿದ ಸೇನೆ

**ಶ್ರೀನಗರ:** ಜಮ್ಮು, ಕಾಶ್ಮೀರದ ಉರಿ ಸೆಕ್ಟರ್‌ನ ನಿಯಂತ್ರಣ ರೇಖೆಯ ಉದ್ದಕ್ಕೂ ಒಳನುಸುಳುವಿಕೆ ಪ್ರಯತ್ನವನ್ನು ಭಾರತೀಯ ಸೇನೆ ವಿಫಲಗೊಳಿಸಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಬಾರಾಮುಲ್ಲಾ ಜಿಲ್ಲೆಯ ಉರಿ ಸೆಕ್ಟರ್‌ನಲ್ಲಿ ಸ್ವಾತಂತ್ರ್ಯ ದಿನಾಚರಣೆಗೂ ಮುನ್ನ ಭಾರತೀಯ ಸೇನಾ ಯೋಧರು ನಿಯಂತ್ರಣ ರೇಖೆಯ ಬಳಿ ಕಾವಲು ಕಾಯುತ್ತಿದ್ದಾಗ ಇಂದು ಬೆಳಿಗ್ಗೆ ಗುಂಡಿನ ಚಕಮಕಿ ನಡೆಯುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ, ಹೆಚ್ಚಿನ ವಿವರಗಳನ್ನು ನಿರೀಕ್ಷಿಸಲಾಗುತ್ತಿದೆ. ಉತ್ತರ ಕಾಶ್ಮೀರದ ಬಾರಾಮುಲ್ಲಾ ಜಿಲ್ಲೆಯ ಉರಿಯ ಚುರುಂಡಾ ಪ್ರದೇಶದಲ್ಲಿ ಪಡೆಗಳು ಒಳನುಸುಳುವಿಕೆ ಪ್ರಯತ್ನವನ್ನು ವಿಫಲಗೊಳಿಸಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಎಂದು ಸುದ್ದಿ ಸಂಸ್ಥೆಯ ವರದಿ ತಿಳಿಸಿದೆ.

ಬಾರಾಮುಲ್ಲಾ ಜಿಲ್ಲೆಯ ನಿಯಂತ್ರಣ ರೇಖೆಯಲ್ಲಿ ಕಾರ್ಯಾಚರಣೆಯ ಕರ್ತವ್ಯದಲ್ಲಿದ್ದಾಗ ಮತ್ತೊಬ್ಬ ಸೈನಿಕ ಸಿಪಾಯಿ ಬಾನೋತ್ ಅನಿಲ್ ಕುಮಾರ್ ಸಾವನ್ನಪ್ಪಿದ ಒಂದು ದಿನದ ನಂತರ ಇದು ಸಂಭವಿಸಿದೆ. ಸಿಪಾಯಿ ಬಾನೋತ್ ಅನಿಲ್ ಕುಮಾರ್ ಅವರ ನಷ್ಟಕ್ಕೆ ಶೋಕ ವ್ಯಕ್ತಪಡಿಸಿದ ಭಾರತೀಯ ಸೇನೆಯ ಚಿನಾರ್ ಕಾರ್ಪ್ಸ್ ಎಕ್ಸ್‌ನಲ್ಲಿ ಪೋಸ್ಟ್‌ನಲ್ಲಿ, ಬಾರಾಮುಲ್ಲಾ ಜಿಲ್ಲೆಯ ನಿಯಂತ್ರಣ ರೇಖೆಯಲ್ಲಿ ಕಾರ್ಯಾಚರಣೆಯ ಕರ್ತವ್ಯ ನಿರ್ವಹಿಸುತ್ತಿದ್ದಾಗ ಬ್ರೇವ್‌ಹಾರ್ಟ್ ಸಿಪಾಯಿ ಬಾನೋತ್ ಅನಿಲ್ ಕುಮಾರ್ ಅವರ ಅಮೂಲ್ಯ ಜೀವವನ್ನು ಕಳೆದುಕೊಂಡಿದ್ದಕ್ಕೆ ವಿಷಾದಿಸಿದೆ. ಚಿನಾರ್ ವಾರಿಯರ್ಸ್ ಅವರ ಅಪಾರ ಶೌರ್ಯ



ಮತ್ತು ತ್ಯಾಗಕ್ಕೆ ವಂದಿಸುತ್ತದೆ, ಆಳವಾದ ಸಂತಾಪ ವ್ಯಕ್ತಪಡಿಸುತ್ತದೆ ಮತ್ತು ದುಃಖಿತ ಕುಟುಂಬದೊಂದಿಗೆ ಒಗ್ಗಟ್ಟಿನಲ್ಲಿ ನಿಲ್ಲುತ್ತದೆ ಎಂದು ಹೇಳಿದೆ. ಏತನ್ಮಧ್ಯೆ, ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್, ದಕ್ಷಿಣ ಕಾಶ್ಮೀರದ ಕುಲ್ಗಮ್ ಜಿಲ್ಲೆಯಲ್ಲಿ ನಡೆಯುತ್ತಿರುವ ಭಯೋತ್ಪಾದನಾ ವಿರೋಧಿ ಕಾರ್ಯಾಚರಣೆಯ ಸಮಯದಲ್ಲಿ ಆಪರೇಷನ್ ಕುಲ್ಗಮ್‌ನಲ್ಲಿ ಸಾವನ್ನಪ್ಪಿದ ಇಬ್ಬರು ಜವಾನರಾದ ಲ್ಯಾನ್ಸ್ ನಾಯಕ್ ಪ್ರೀತ್ಪಾಲ್ ಸಿಂಗ್ ಮತ್ತು ಸಿಪಾಯಿ ಹರ್ಮಿಂದರ್ ಸಿಂಗ್ ಅವರ ಸಾವಿಗೆ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಸಂತಾಪ ಸೂಚಿಸಿದ್ದಾರೆ. ಕಾಶ್ಮೀರದಲ್ಲಿ ಕರ್ತವ್ಯದ ಸಾಲಿನಲ್ಲಿ ತಮ್ಮ ಪ್ರಾಣವನ್ನೇ ಅರ್ಪಿಸಿದ ಲ್ಯಾನ್ಸ್ ನಾಯಕ್ ಪ್ರೀತ್ಪಾಲ್ ಸಿಂಗ್, ಸಿಪಾಯಿ ಹರ್ಮಿಂದರ್ ಸಿಂಗ್ ಅವರ ಅತ್ಯುನ್ನತ ತ್ಯಾಗಕ್ಕೆ ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್, ಭಾರತೀಯ ಸಶಸ್ತ್ರ ಪಡೆಗಳ ಎಲ್ಲಾ ಶ್ರೇಣಿಗಳು ನಮಿಸುತ್ತವೆ ಎಂದು ಪ್ರಧಾನ ಕಚೇರಿ ಇಂಟಿಗ್ರೇಟೆಡ್ ಡಿಫೆನ್ಸ್ ಸ್ಟಾಫ್ ನಲ್ಲಿ ಪೋಸ್ಟ್ ಮಾಡಿದೆ.

---

## ಒಡಿಶಾದಲ್ಲಿ ಹರಿಜನ ಪದ ಬಳಕೆ ಮಾಡಂಗಿಲ್ಲ

**ಭುವನೇಶ್ವರ:** ಒಡಿಶಾ ಸರ್ಕಾರವು ತನ್ನ ಎಲ್ಲಾ ಇಲಾಖೆಗಳು, ಸಾರ್ವಜನಿಕ, ಶಿಕ್ಷಣ ಸಂಸ್ಥೆಗಳು, ಇತರರನ್ನು ಸಂವಹನದಲ್ಲಿ ಹರಿಜನ್ ಎಂಬ ಪದ ಬಳಸಬಾರದು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದೆ. ಸಂವಿಧಾನದ 341ನೇ ವಿಧಿಯ ಅಡಿಯಲ್ಲಿ ಸೂಚಿಸಲಾದ ಪರಿಶಿಷ್ಟ ಜಾತಿಗಳಿಗೆ ಸೇರಿದ ವ್ಯಕ್ತಿಗಳನ್ನು ಸೂಚಿಸಲು ಇಂಗ್ಲಿಷ್‌ನಲ್ಲಿ ಪರಿಶಿಷ್ಟ ಜಾತಿ, ಒಡಿಯಾ, ಇತರ ರಾಷ್ಟ್ರೀಯ ಭಾಷೆಗಳಲ್ಲಿ ಅನುಸೂಚಿತ ಜಾತಿಯಂತಹ ಪದಗಳನ್ನು ಬಳಸಬೇಕೆಂದು ಸರ್ಕಾರ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದೆ.

ಎಸ್‌ಟಿ ಮತ್ತು ಎಸ್‌ಸಿ ಅಭಿವೃದ್ಧಿ, ಅಲ್ಪಸಂಖ್ಯಾತರು ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತ-ಕಾರ್ಯದರ್ಶಿ ಹೊರಡಿಸಿದ ಪತ್ರದಲ್ಲಿ ಈ ಕಟ್ಟುನಿಟ್ಟಿನ ಆದೇಶ ಹೊರಡಿಸಲಾಗಿದೆ.

ಯಾವುದೇ ಅಧಿಕೃತ ಸಂವಹನ, ದಾಖಲೆಗಳು, ವಹಿವಾಟುಗಳು, ಜಾತಿ ಪ್ರಮಾಣಪತ್ರಗಳು, ಪ್ರಕಟಣೆಗಳು, ಇಲಾಖಾ ಹೆಸರುಗಳು, ಯಾವುದೇ ಇತರ ರೀತಿಯ ಬಳಕೆಯಲ್ಲಿ ಹರಿಜನ ಎಂಬ ಪದವು ಕಾಣಿಸಿಕೊಳ್ಳದಂತೆ ನೋಡಿಕೊಳ್ಳಲು ಅವರಿಗೆ ಸೂಚಿಸಲಾಗಿದೆ ಎಂದು ಅಧಿಕಾರಿಗಳಲ್ಲಿ ಒಬ್ಬರು ಹೇಳಿದರು. ಸಂಬಂಧಪಟ್ಟ ಅಧಿಕಾರಿಗಳು ತಮ್ಮ ಸಿಬ್ಬಂದಿಗೆ ಶಿಕ್ಷಣ ನೀಡಬೇಕು, ಅಸ್ತಿತ್ವದಲ್ಲಿರುವ ದಾಖಲೆಗಳು, ದಾಖಲೆಗಳನ್ನು ಅದಕ್ಕೆ ಅನುಗುಣವಾಗಿ ನವೀಕರಿಸಬೇಕು ಎಂದು ಅವರು ಹೇಳಿದರು.

ಈ ವಿಷಯದ ಬಗ್ಗೆ ತೆಗೆದುಕೊಂಡ ಕ್ರಮಗಳ ಕುರಿತು ಅನುಸರಣಾ ವರದಿಯನ್ನು ಸಲ್ಲಿಸಲು ಸಹ ಅವರಿಗೆ ಸೂಚಿಸಲಾಗಿದೆ ಎಂದು ಮತ್ತೊಬ್ಬ ಅಧಿಕಾರಿ ಹೇಳಿದರು.

---

## ಪುರುಷನ ವೇಷದಲ್ಲಿ ಬಂದು 1.5 ಕೋಟಿ ರೂ. ಆಭರಣ ದೋಚಿದ ಮಹಿಳೆ

**ಪಾಲ್ಘರ್:** ತನ್ನ ಸಹೋದರಿಯ ಮಾವನ ಮನೆಗೆ ಪುರುಷನಂತೆ ವೇಷ ಧರಿಸಿ ನುಗ್ಗಿದ ಮಹಿಳೆ 1.5 ಕೋಟಿ ರೂ ಗೂ ಹೆಚ್ಚು ಮೌಲ್ಯದ ಆಭರಣಗಳನ್ನು ದೋಚಿರುವ ಘಟನೆ ಇಲ್ಲಿ ನಡೆದಿದೆ. ಪಾಲ್ಘರ್‌ನ ವಸಾಯಿ ಪ್ರದೇಶದ ಮಾಣಿಕ್ ಪುರದಲ್ಲಿ ಈ ಘಟನೆ ನಡೆದಿದ್ದು, ಅದೇ ರಾತ್ರಿ ಗುಜರಾತ್‌ಗೆ ಪರಾರಿಯಾಗಿದ್ದ ಜ್ಯೋತಿ ಮೋಹನ್ ಭಾನುಶಾಲಿ(22) ಎಂಬ ಆರೋಪಿಯನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಆರೋಪಿ ಮಹಿಳೆ ಪುರುಷನಂತೆ ವೇಷ ಧರಿಸಿ, ಒಂಟಿಯಾಗಿ ವಾಸಿಸುತ್ತಿದ್ದ ತನ್ನ ಸಹೋದರಿಯ ಮಾವನ ಮನೆಗೆ ಬಂದಿದ್ದರು,ಯಾವುದೋ ವ್ಯವಹಾರದ ಬಗ್ಗೆ ಮಾತನಾಡಬೇಕೆಂದು ವೃದ್ಧ ವ್ಯಕ್ತಿಯನ್ನು ಶೌಚಾಲಯಕ್ಕೆ ಕರೆದೊಯ್ದು, ಪರಿಶೀಲಿಸುವ ನೆಪದಲ್ಲಿ, ಒಳಗೆ ತಳ್ಳಿ ಬೀಗ ಹಾಕಲಾಗಿತ್ತು. ನಂತರ ಮನೆಯಲ್ಲಾ ಜಾಲಾಡಿ ಕೈಗೆ ಸಿಕ್ಕ 1.4 ಕೆಜಿ ಚಿನ್ನಾಭರಣಗಳು ಮತ್ತು 2.3 ಕೆಜಿ ಬೆಳ್ಳಿ ವಸ್ತುಗಳೊಂದಿಗೆ



ಜ್ಯೋತಿ ಪರಾರಿಯಾಗಿದ್ದಳು ಎಂದು ಸಹಾಯಕ ಪೊಲೀಸ್ ಆಯುಕ್ತ ಮದನ್ ಬಲ್ಲಾಳ್ ತಿಳಿಸಿದ್ದಾರೆ. ಒಟ್ಟು ಇದರ ಮೌಲ್ಯ 1,50 ಕೋಟಿಗೂ ಹೆಚ್ಚು ಹೇಳಿದರು.

ದೂರಿನ ಆಧಾರದ ಮೇಲೆ, ಅದೇ ದಿನ ಕಳ್ಳತನ, ದರೋಡೆ, ಅಕ್ರಮ ಬಂಧನ ಕಾಯ್ದೆಯಡಿ ಪ್ರಕರಣ ದಾಖಲಿಸಿದ ಪೊಲೀಸರು ಪೊಲೀಸರು ಸುಮಾರು 75 ರಿಂದ 80 ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿದ್ದಾರೆ ಎಂದು ಅವರು ಹೇಳಿದರು. ಒಬ್ಬ ವ್ಯಕ್ತಿ ಕದ್ದ ವಸ್ತುಗಳನ್ನು ಒಯ್ಯುವ ನಂತರ ಒಬ್ಬ ಮಹಿಳೆ ಅವುಗಳನ್ನು ಸಂಗ್ರಹಿಸುವ ದೃಶ್ಯ ಪತ್ತೆಯಾಗಿತ್ತು. ತಾಂತ್ರಿಕ, ಗುಪ್ತಚರ ಮಾಹಿತಿಯ ಜೊತೆಗೆ, ಗುಜರಾತ್‌ನಲ್ಲಿರುವ ವೃದ್ಧನ ಸಂಬಂಧಿಯೊಬ್ಬರು ಅಪರಾಧದಲ್ಲಿ ಭಾಗಿಯಾಗಿರಬಹುದು ಎಂಬ ಸುಳಿವು ತನಿಖಾಧಿಕಾರಿಗಳಿಗೆ ಸಿಕ್ಕಿತ್ತು.

ತ್ವರಿತವಾಗಿ ಕಾರ್ಯಪ್ರವೃತ್ತರಾದ ಅಪರಾಧ ವಿಭಾಗದ ತಂಡ, ನವಸಾರಿ ಪೊಲೀಸರ ನೆರವಿನೊಂದಿಗೆ, ತಡರಾತ್ರಿ ಗುಜರಾತ್‌ನ ಜ್ಯೋತಿ ಮೋಹನ್ ಭಾನುಶಾಲಿಯನ್ನು ಬಂಧಿಸಿದೆ ಎಂದು ಬಲ್ಲಾಳ್ ಹೇಳಿದರು. ವಿಚಾರಣೆಯ ಸಮಯದಲ್ಲಿ, ಅವಳು ತಾನೇ ಈ ಯೋಜನೆ ರೂಪಿಸಿದ್ದಾಗಿ ಒಪ್ಪಿಕೊಂಡಳು. ಪುರುಷನ ವೇಷ ಧರಿಸಿ, ತನ್ನ ಸಹೋದರಿಯ ಮಾವ ಒಬ್ಬಂಟಿಯಾಗಿ ವಾಸಿಸುತ್ತಿದ್ದಾನೆಂದು ತಿಳಿದು ಅವರ ಮನೆಗೆ ನುಗ್ಗಿ ದರೋಡೆ ಮಾಡಿದ್ದಾಳೆ ಎಂದು ಅಧಿಕಾರಿ ಹೇಳಿದರು. ಪೊಲೀಸರು ಕದ್ದ ಎಲ್ಲಾ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ, ಪ್ರಕರಣದ ಕುರಿತು ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ಅವರು ಹೇಳಿದರು.

---

# ವಿಶ್ವಸಂಸ್ಥೆ ವಾರ್ಷಿಕ ಅಧಿವೇಶನದಲ್ಲಿ ಭಾಷಣ ಮಾಡಲಿದ್ದಾರೆ ಪ್ರಧಾನಿ ಮೋದಿ

### ಶ್ವೇತಭವನದಲ್ಲಿ ತಮ್ಮ ಎರಡನೇ ಅವಧಿಯಲ್ಲಿ ವಿಶ್ವಸಂಸ್ಥೆಯ ಅಧಿವೇಶನವನ್ನು ಉದ್ದೇಶಿಸಿ ಅವರು ಮಾಡುವ ಮೊದಲ ಭಾಷಣ

**ವಿಶ್ವಸಂಸ್ಥೆ:** ಸೆಪ್ಟೆಂಬರ್‌ನಲ್ಲಿ ನಡೆಯಲಿರುವ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ವಾರ್ಷಿಕ ಉನ್ನತ ಮಟ್ಟದ ಅಧಿವೇಶನವನ್ನು ಪ್ರಧಾನಿ ನರೇಂದ್ರ ಮೋದಿ ಉದ್ದೇಶಿಸಿ ಮಾತನಾಡುವ ಸಾಧ್ಯತೆ ಇದೆ ಎಂದು ವಿಶ್ವಸಂಸ್ಥೆ ಇಲ್ಲಿ ಬಿಡುಗಡೆ ಮಾಡಿದ ಭಾಷಣಕಾರರ ತಾತ್ಕಾಲಿಕ ಪಟ್ಟಿ ತಿಳಿಸಿದೆ. ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ 80ನೇ ಅಧಿವೇಶನವು ಸೆಪ್ಟೆಂಬರ್ 9ರಂದು ಆರಂಭವಾಗಲಿದೆ. ಉನ್ನತ ಮಟ್ಟದ ಸಾಮಾನ್ಯ ಚರ್ಚೆಯು ಸೆಪ್ಟೆಂಬರ್ 23 ರಿಂದ 29 ರವರೆಗೆ ನಡೆಯಲಿದ್ದು, ಬ್ರೆಜಿಲ್ ಅಧಿವೇಶನದ ಸಾಂಪ್ರದಾಯಿಕ ಮೊದಲ ಭಾಷಣಕಾರರಾಗಿದ್ದು, ನಂತರ ಅಮೆರಿಕ ನಡೆಯಲಿದೆ.ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸೆಪ್ಟೆಂಬರ್ 23ರಂದು ವಿಶ್ವ ನಾಯಕರನ್ನು ಐಕಾನಿಕ್ ಯುಎನ್‌ಜಿಎ ವೇದಿಕೆಯಿಂದ ಉದ್ದೇಶಿಸಿ ಮಾತನಾಡಲಿದ್ದಾರೆ, ಇದು ಶ್ವೇತಭವನದಲ್ಲಿ ತಮ್ಮ ಎರಡನೇ ಅವಧಿಯಲ್ಲಿ ವಿಶ್ವಸಂಸ್ಥೆಯ ಅಧಿವೇಶನವನ್ನು ಉದ್ದೇಶಿಸಿ ಅವರು ಮಾಡುವ ಮೊದಲ ಭಾಷಣವಾಗಿದೆ. ಸಾಮಾನ್ಯ ಸಭೆಯ 80ನೇ ಅಧಿವೇಶನದ ಉನ್ನತ ಮಟ್ಟದ ಚರ್ಚೆಗೆ ಭಾರತದ ಸರ್ಕಾರದ



ಮುಖ್ಯಸ್ಥರು ಸೆಪ್ಟೆಂಬರ್ 26ರ ಬೆಳಿಗ್ಗೆ ಅಧಿವೇಶನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಇಸ್ರೇಲ್, ಚೀನಾ, ಪಾಕಿಸ್ತಾನ, ಬಾಂಗ್ಲಾದೇಶದ ಸರ್ಕಾರದ ಮುಖ್ಯಸ್ಥರು ಸಹ ಅದೇ ದಿನ ಯುಎನ್‌ಜಿಎ ಸಾಮಾನ್ಯ ಚರ್ಚೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಈ ವರ್ಷದ ಫೆಬ್ರವರಿಯಲ್ಲಿ ವಾಷಿಂಗ್ಟನ್, ಡಿಸಿಯ ಶ್ವೇತಭವನದಲ್ಲಿ ಟ್ರಂಪ್ ಅವರೊಂದಿಗಿನ ದ್ವಿಪಕ್ಷೀಯ ಸಭೆಗಾಗಿ ಮೋದಿ ಅಮೆರಿಕಕ್ಕೆ ಪ್ರಯಾಣ ಬೆಳೆಸಿದ್ದರು. ತಮ್ಮ ಭೇಟಿಯ ನಂತರ ಬಿಡುಗಡೆ ಮಾಡಿದ ಜಂಟಿ ಹೇಳಿಕೆಯಲ್ಲಿ, ಮೋದಿ, ಟ್ರಂಪ್ 2025ರ ಶರತ್ಕಾಲದ ವೇಳೆಗೆ ಪರಸ್ಪರ ಪ್ರಯೋಜನಕಾರಿ, ಬಹು-ವಲಯ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಮೊದಲ ಹಂತದ ಮಾತುಕತೆ ನಡೆಸುವ ಯೋಜನೆಯನ್ನು ಘೋಷಿಸಿದ್ದರು.

**ವ್ಯಾಪಾರ ಮಾತುಕತೆಗಳು ನಡೆಯುತ್ತಿರುವಾಗಲೂ, ಆಗಸ್ಟ್ 27 ರಿಂದ ಜಾರಿಗೆ ಬರಲಿರುವ ನವದೆಹಲಿಯ ರಷ್ಯಾದ ತೈಲ ಖರೀದಿಗೆ ಶೇ. 25 ಸೇರಿದಂತೆ ಭಾರತದ ಮೇಲೆ ಒಟ್ಟು ಶೇ. 50 ರಷ್ಟು ಸುಂಕಗಳನ್ನು ಟ್ರಂಪ್ ವಿಧಿಸಿದರು. ಸುಂಕಗಳಿಗೆ ಪ್ರತಿಕ್ರಿಯಿಸಿದ ಭಾರತದ ವಿದೇಶಾಂಗ ಸಚಿವಾಲಯವು, ದೇಶದ ಮೇಲೆ ಗುರಿ ಇಡುವುದು ನ್ಯಾಯಸಮ್ಮತವಲ್ಲ, ಅಸಮಂಜಸವಾಗಿದೆ ಎಂದು ಹೇಳಿದೆ.ಯಾವುದೇ ಪ್ರಮುಖ ಆರ್ಥಿಕತೆಯಂತೆ, ಭಾರತವು ತನ್ನ ರಾಷ್ಟ್ರೀಯ ಹಿತಾಸಕ್ತಿಗಳು ಮತ್ತು ಆರ್ಥಿಕ ಭದ್ರತೆಯನ್ನು ಕಾಪಾಡಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುತ್ತದೆ ಎಂದು ಅದು ಹೇಳಿದೆ.**

ಪ್ರಸ್ತಾವಿತ ದ್ವಿಪಕ್ಷೀಯ ವ್ಯಾಪಾರ ಒಪ್ಪಂದಕ್ಕಾಗಿ ಆರನೇ ಸುತ್ತಿನ ಮಾತುಕತೆಗಾಗಿ ಆಗಸ್ಟ್ 25 ರಿಂದ ಅಮೆರಿಕ ತಂಡವು ಭಾರತಕ್ಕೆ ಭೇಟಿ ನೀಡಲಿರುವ ಸಮಯದಲ್ಲಿ ಕಳೆದ ವಾರ ಹೆಚ್ಚುವರಿ ಶೇ. 25 ರಷ್ಟು ಸುಂಕವನ್ನು ವಿಧಿಸುವ ಟ್ರಂಪ್ ಅವರ ಕಾರ್ಯಕಾರಿ ಆದೇಶದ ಘೋಷಣೆ ಬಂದಿತು.ಈ ವರ್ಷದ ಶರತ್ಕಾಲದ ವೇಳೆಗೆ ಒಪ್ಪಂದದ ಮೊದಲ ಹಂತವನ್ನು ಮುಕ್ತಾಯಗೊಳಿಸಲು ಎರಡೂ ದೇಶಗಳು ಗುರಿಯನ್ನು ಹೊಂದಿವೆ.

**ಭಾಷಣಕಾರರಲ್ಲಿ ಬದಲಾವಣೆಗಳ ಸಾಧ್ಯತೆ**

**ಯುಎನ್‌ಜಿಎ ಸಾಮಾನ್ಯ ಚರ್ಚೆಗೆ ಭಾಷಣಕಾರರ ಪಟ್ಟಿ ತಾತ್ಕಾಲಿಕವಾಗಿದ್ದು, ಮುಂದಿನ ಕೆಲವು ವಾರಗಳಲ್ಲಿ ವೇಳಾಪಟ್ಟಿಗಳು ಮತ್ತು ಭಾಷಣಕಾರರಲ್ಲಿ ಬದಲಾವಣೆಗಳ ಸಾಧ್ಯತೆಯಿದೆ. ಪಟ್ಟಿಯನ್ನು ಅದಕ್ಕೆ ಅನುಗುಣವಾಗಿ ನವೀಕರಿಸಲಾಗುತ್ತದೆ.ವಿಶ್ವಸಂಸ್ಥೆಯ ಪ್ರಧಾನ ಕಚೇರಿಯಲ್ಲಿ ವರ್ಷದ ಅತ್ಯಂತ ಜನನಿಬಿಡ ರಾಜತಾಂತ್ರಿಕ ಋತು ಎಂದು ಪರಿಗಣಿಸಲಾದ ಉನ್ನತ ಮಟ್ಟದ ಅಧಿವೇಶನವು ವಾರ್ಷಿಕವಾಗಿ ಸೆಪ್ಟೆಂಬರ್‌ನಲ್ಲಿ ಪ್ರಾರಂಭವಾಗುತ್ತದೆ.**

---

## ಮಿನಿ ನ್ಯೂಸ್

### ಪತಂಜಲಿ ಸಂಸ್ಥೆಗೆ ಸುಪ್ರೀಂ ರಿಲೀಫ್

**ನವದೆಹಲಿ:** ಜನರನ್ನು ದಾರಿ ತಪ್ಪಿಸುವ ಜಾಹೀರಾತು ಪ್ರಕರಣಕ್ಕೆ ಸಂಬಂಧಿಸಿದಂತೆ ರಾಮ್‌ದೇವ್ ಒಡೆತನದ ಪತಂಜಲಿ ಸಂಸ್ಥೆಗೆ ಸುಪ್ರೀಂ ಬಿಗ್ ರಿಲೀಫ್ ನೀಡಿದೆ. ಸಾಂಪ್ರದಾಯಿಕ ಔಷಧಕ್ಕೆ ಸಂಬಂಧಿಸಿದ ಜಾಹೀರಾತುಗಳು ದಾರಿತಪ್ಪಿಸುವಂತಿವೆ. ಇದರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಭಾರತೀಯ ವೈದ್ಯಕೀಯ ಸಂಘ ನ್ಯಾಯಾಲಯದ ಮೊರೆ ಹೋಗಿತ್ತು. ಇದಕ್ಕೂ ಮುನ್ನ ನ್ಯಾಯಾಲಯವು ಪತಂಜಲಿಯ ಜಾಹೀರಾತುಗಳ ಮೇಲೆ ತಾತ್ಕಾಲಿಕ ನಿಷೇಧ ಹೇರಿತ್ತು. ಪತಂಜಲಿಯ ಬಾಬಾ ರಾಮದೇವ್, ಆಚಾರ್ಯ ಬಾಲಕೃಷ್ಣ ವಿರುದ್ಧ ನ್ಯಾಯಾಂಗ ನಿಂದನೆ ಪ್ರಕರಣವನ್ನು ಆರಂಭಿಸಲಾಗಿತ್ತು. ಜು. 1, 2024 ರಂದು, ಕೇಂದ್ರ ಆಯುಷ್ ಸಚಿವಾಲಯವು ಔಷಧಗಳು, ಸೌಂದರ್ಯವರ್ಧಕ ನಿಯಮಗಳು 1945 ರ ನಿಯಮ 170 ಅನ್ನು ತೆಗೆದುಹಾಕಲು ಅಧಿಸೂಚನೆಯನ್ನು ಹೊರಡಿಸಿತ್ತು. ಮಾಧ್ಯಮ ವರದಿಗಳು ನಿಯಮ 170ರ ಅಡಿಯಲ್ಲಿ, ಕಂಪನಿಗಳು ಆಯುರ್ವೇದ, ಸಿದ್ಧ, ಯುನಾನಿ ಔಷಧಿಗಳನ್ನು ಜಾಹೀರಾತು ಮಾಡಲು ರಾಜ್ಯ ಪರವಾನಗಿ ಅಧಿಕಾರಿಗಳಿಂದ ಅನುಮತಿ ಪಡೆಯುವುದು ಅಗತ್ಯವಾಗಿತ್ತು ಎಂದು ಹೇಳಿವೆ. ನ್ಯಾಯಾಂಗ ನಿಂದನೆ ಕುರಿತು ಮೇ 14ರಂದು ಸುಪ್ರೀಂಕೋರ್ಟ್ ಪೀಠದ ಜಸ್ಟೀಸ್ ಹಿಮಾ ಕೊಹ್ಲಿ ಮತ್ತು ಜಸ್ಟೀಸ್ ಅಸಾದುದ್ದೀನ್ ಅಮಾನುಲ್ಲಾ ಆದೇಶವನ್ನು ಕಾಯ್ದಿರಿಸಿದ್ದರು. ಆಧುನಿಕ ವೈದ್ಯ ಪದ್ಧತಿ ಮತ್ತು ಕೋವಿಡ್ ಲಸಿಕೆ ವಿರುದ್ಧ ಪತಂಜಲಿ ಆಕ್ಷೇಪಾರ್ಹ ಪ್ರಚಾರ ಕೈಗೊಂಡಿತ್ತು. ಇದರ ವಿರುದ್ಧ ಐಎಂಎ ಸುಪ್ರೀಂಕೋರ್ಟ್ ಮೆಟ್ಟಿಲೇರಿತ್ತು.

### ರಾಜಸ್ಥಾನದ ಜೈಸಲೇರ್‌ನಲ್ಲಿ ಶಂಕಿತ ಗೂಢಚಾರಿ ಅರೆಸ್ಟ್

**ಜೈಪುರ:** ಪಾಕಿಸ್ತಾನದ ಗುಪ್ತಚರ ವಿಭಾಗದ ಅಧಿಕಾರಿಯೊಂದಿಗೆ ನಿರಂತರ ಸಂಪರ್ಕದಲ್ಲಿದ್ದ ಹಾಗೂ ಭಾರತದ ರಕ್ಷಣಾ ಚಟುವಟಿಕೆಗಳ ಬಗ್ಗೆ ಸೂಕ್ಷ್ಮ ಮಾಹಿತಿಯನ್ನು ಸೋರಿಕೆ ಮಾಡುತ್ತಿದ್ದ ಆರೋಪದ ಮೇಲೆ ರಾಜಸ್ಥಾನದ ಜೈಸಲೇರ್‌ನಲ್ಲಿ ಶಂಕಿತ ಗೂಢಚಾರನನ್ನು ಪೊಲೀಸ್ ಸಿಐಡಿ ಗುಪ್ತಚರ ದಳದ ಅಧಿಕಾರಿಗಳು ಬಂಧಿಸಿದ್ದಾರೆ. ಆರೋಪಿ ಮಹೇಂದ್ರಪ್ರಸಾದ್(32) ಚಂದನ್ ಫೀಲ್ಡ್ ಫೈರಿಂಗ್ ರೇಂಜ್‌ನಲ್ಲಿರುವ ಡಿಆರ್‌ಡಿಒ ಅತಿಥಿಗೃಹದ ವ್ಯವಸ್ಥಾಪಕನಾಗಿ ಕೆಲಸ ಮಾಡುತ್ತಿದ್ದ. ಈಗ ಪಾಕಿಸ್ತಾನದ ಗುಪ್ತಚರ ವಿಭಾಗದ ಅಧಿಕಾರಿಯೊಂದಿಗೆ ಸಂಪರ್ಕದಲ್ಲಿದ್ದನೆಂದು, ಭಾರತದ ರಕ್ಷಣಾ ಚಟುವಟಿಕೆಗಳ ಬಗ್ಗೆ ಸೂಕ್ಷ್ಮ ಮಾಹಿತಿ ಸೋರಿಕೆ ಮಾಡುತ್ತಿದ್ದನೆಂದು ಆರೋಪಿಸಲಾಗಿದೆ. ಸ್ವಾತಂತ್ರ್ಯ ದಿನಾಚರಣೆಯ ಹಿನ್ನೆಲೆಯಲ್ಲಿ ರಾಜಸ್ಥಾನ ಸಿಐಡಿ ಗುಪ್ತಚರ ಇಲಾಖೆಯು ರಾಷ್ಟ್ರವಿರೋಧಿ, ವಿಧ್ವಂಸಕ ಚಟುವಟಿಕೆಗಳ ಮೇಲೆ ಹೆಚ್ಚಿನ ಕಣ್ಗಾವಲು ಇರಿಸಿದೆ.ಮೇಲ್ವಿಚಾರಣೆಯ ಸಮಯದಲ್ಲಿ, ಡಿಆರ್‌ಡಿಒ ಅತಿಥಿ ಗೃಹದಲ್ಲಿ ಗುತ್ತಿಗೆ ಕೆಲಸಗಾರ ಮಹೇಂದ್ರ ಪ್ರಸಾದ್ ಬಗ್ಗೆ ಮಾಹಿತಿ ಹೊರಬಂದಿತು.

ಉತ್ತರಾಖಂಡದ ಅಲೋರಾದ ಪಲ್ಯುನ್ ನಿವಾಸಿಯಾಗಿದ್ದ ಈತ ಬೇಹುಗಾರಿಕೆಯಲ್ಲಿ ತೊಡಗಿದ್ದಾನೆಂದು ಶಂಕಿಸಲಾಗಿತ್ತು. ತನಿಖೆಯ ವೇಳೆ ಪ್ರಸಾದ್ ಸಾಮಾಜಿಕ ಮಾಧ್ಯಮದ ಮೂಲಕ ಪಾಕಿಸ್ತಾನದ ಗುಪ್ತಚರ ಸಂಸ್ಥೆಯೊಂದಿಗೆ ಸಂಪರ್ಕದಲ್ಲಿದ್ದರು ಎಂದು ತಿಳಿದುಬಂದಿದೆ. ಕ್ಷಿಪಣಿ, ಶಸ್ತ್ರಾಸ್ತ್ರ ಪ್ರಯೋಗಗಳಿಗಾಗಿ ಚಂದನ್ ಫೀಲ್ಡ್ ಫೈರಿಂಗ್ ರೇಂಜ್‌ಗೆ ಭೇಟಿ ನೀಡುವ ಡಿಆರ್‌ಡಿಒ ವಿಜ್ಞಾನಿಗಳು ಮತ್ತು ಭಾರತೀಯ ಸೇನಾ ಅಧಿಕಾರಿಗಳ ಚಲನವಲನಗಳ ಬಗ್ಗೆ ವಿವರಗಳನ್ನು ತನ್ನ ಹ್ಯಾಂಡ್ಲರ್‌ಗೆ ಒದಗಿಸುತ್ತಿದ್ದನೆಂದು ಆರೋಪಿಸಲಾಗಿದೆ. ಬಂಧನದ ನಂತರ, ಪ್ರಸಾದ್‌ನನ್ನು ಭದ್ರತಾ ಸಂಸ್ಥೆಗಳು ಜಂಟಿ ವಿಚಾರಣೆಗೊಳಪಡಿಸಿದ್ದು, ಮೊಬೈಲ್ ಫೋನ್ ಅನ್ನು ಸಂಪೂರ್ಣ ತಾಂತ್ರಿಕ ವಿಶ್ಲೇಷಣೆಗೆ ಒಳಪಡಿಸಲಾಗಿದೆ.

ಡಿಆರ್‌ಡಿಒ ಕಾರ್ಯಾಚರಣೆಗಳು ಮತ್ತು ಭಾರತೀಯ ಸೇನೆಯ ಚಟುವಟಿಕೆಗಳಿಗೆ ಸಂಬಂಧಿಸಿದ ಸೂಕ್ಷ್ಮ ಮಾಹಿತಿಯನ್ನು ಅವನು ತನ್ನ ಪಾಕಿಸ್ತಾನಿ ನಿರ್ವಾಹಕನೊಂದಿಗೆ ಹಂಚಿಕೊಂಡಿದ್ದಾನೆ ಎಂದು ತನಿಖೆಯು ದೃಢಪಡಿಸಿದೆ. ಸಾಕ್ಷ್ಯಗಳ ಆಧಾರದ ಮೇಲೆ ಸಿಐಡಿ ಗುಪ್ತಚರ ಇಲಾಖೆಯು ಮಹೇಂದ್ರ ಪ್ರಸಾದ್ ಅವರನ್ನು ಬೇಹುಗಾರಿಕೆ ಆರೋಪದ ಮೇಲೆ ಔಪಚಾರಿಕವಾಗಿ ಬಂಧಿಸಿದೆ. ಭದ್ರತಾ ಉಲ್ಲಂಘನೆಯ ಪ್ರಮಾಣ, ಮಾಹಿತಿ ಜಾಲದಲ್ಲಿ ಇತರರು ಭಾಗಿಯಾಗಿದ್ದಾರೆಯೇ ಎಂದು ಅಧಿಕಾರಿಗಳು ಈಗ ತನಿಖೆ ನಡೆಸುತ್ತಿದ್ದಾರೆ.

### ಹರ್‌ಘರ್ ತಿರಂಗ ಅಭಿಯಾನಕ್ಕೆ ಯೋಗಿ ಆದಿತ್ಯನಾಥ್ ಕರೆ



**ಲಕ್ನೋ:** ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು 79 ನೇ ಸ್ವಾತಂತ್ರ್ಯ ದಿನಾಚರಣೆಗೆ ಮುಂಚಿತವಾಗಿ ಲಕ್ನೋದಲ್ಲಿ ಹರ್ ಘರ್ ತಿರಂಗ ಅಭಿಯಾನಕ್ಕೆ ಚಾಲನೆ ನೀಡಿದ್ದಾರೆ. ಇದು ರಾಷ್ಟ್ರೀಯ ಹೆಮ್ಮೆ ಮತ್ತು ಸ್ವಾತಂತ್ರ್ಯ ಹೋರಾಟಗಾರರು, ಕ್ರಾಂತಿಕಾರಿಗಳು ಮತ್ತು ಸೈನಿಕರ ಮೇಲಿನ ಕೃತಜ್ಞತೆಯ ಸಂಕೇತವಾಗಿದೆ ಎಂದು ಅವರುಹೇಳಿದ್ದಾರೆ. ಡಿಸಿಎಂಗಳಾದ ಕೇಶವ್ ಪ್ರಸಾದ್ ಮೌರ್ಯ ಮತ್ತು ಬ್ರಜೇಶ್ ಪಾಠಕ್, ಹಲವಾರು ರಾಜ್ಯ ಗಣ್ಯರೊಂದಿಗೆ ಇಲ್ಲಿ ಸ್ವಾತಂತ್ರ್ಯ ದಿನಾಚರಣೆಗೆ ಎರಡು ದಿನಗಳ ಮೊದಲು ಪ್ರಾರಂಭಿಸಲಾದ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಸಭೆಯನ್ನುದ್ದೇಶಿಸಿ ಮಾತನಾಡಿದ ಆದಿತ್ಯನಾಥ್, ದೇಶಭಕ್ತಿಯ ಸಂದೇಶವನ್ನು ಪ್ರತಿ ಮನೆಗೂ ಕೊಂಡೊಯ್ಯಬೇಕೆಂಬ ಪ್ರಧಾನಿ ನರೇಂದ್ರ ಮೋದಿಯವರ ಕರೆಗೆ ಪ್ರತಿಕ್ರಿಯೆಯಾಗಿ ಈ ಅಭಿಯಾನವನ್ನು ಆಯೋಜಿಸಲಾಗುತ್ತಿದೆ ಎಂದು ಹೇಳಿದರು. ನಮ್ಮ ದೇಶವು ಸ್ವಾತಂತ್ರ್ಯದ 78 ವರ್ಷಗಳನ್ನು ಪೂರೈಸುತ್ತಿದೆ ಮತ್ತು ಅಮೃತ ಕಾಲವನ್ನು ಪ್ರವೇಶಿಸಿದೆ. ಪ್ರತಿಯೊಬ್ಬ ಭಾರತೀಯನು ಸಂವಿಧಾನ, ರಾಷ್ಟ್ರೀಯ ಚಿಹ್ನೆಗಳು, ಮಹಾನ್ ಕ್ರಾಂತಿಕಾರಿಗಳು ಮತ್ತು ಶ್ರೇಷ್ಠ ವ್ಯಕ್ತಿಗಳ ಬಗ್ಗೆ ಗೌರವ ಮತ್ತು ಭಕ್ತಿಯ ಭಾವನೆಯನ್ನು ಹೊಂದಿರಬೇಕು ಎಂದು ಅವರು ಹೇಳಿದರು.ಕಳೆದ 10 ವರ್ಷಗಳಲ್ಲಿ, ಪ್ರಧಾನ ಮಂತ್ರಿಯವರ ಕರೆಯ ಮೇರೆಗೆ, ಈ ರಾಷ್ಟ್ರೀಯತೆಯ ಮನೋಭಾವವು ಪ್ರತಿ ಮನೆಗೂ ತಲುಪುತ್ತಿದೆ ಮತ್ತು ಹರ್ ಘರ್ ತಿರಂಗ ಅಭಿಯಾನದ ಮೂಲಕ, ಅದು ಪ್ರವರ್ಧಮಾನಕ್ಕೆ ಬರುವುದನ್ನು ನಾವು ನೋಡುತ್ತಿದ್ದೇವೆ ಎಂದು ಸಿಎಂ ಹೇಳಿದರು.

ತಿರಂಗ ಯಾತ್ರೆ ಕೇವಲ ಮೆರವಣಿಗೆಯಲ್ಲ, ಬದಲಾಗಿ ಭಾರತ ಮಾತೆ, ಮಹಾನ್ ನಾಯಕರು, ಕ್ರಾಂತಿಕಾರಿಗಳು ಮತ್ತು ಧೈರ್ಯಶಾಲಿ ಸೈನಿಕರಿಗೆ ಕೃತಜ್ಞತೆಯ ಅಭಿವ್ಯಕ್ತಿಯಾಗಿದೆ ಎಂದು ಆದಿತ್ಯನಾಥ್ ಹೇಳಿದರು. ಸ್ವಾತಂತ್ರ್ಯ ದಿನಾಚರಣೆಯೊಂದಿಗೆ, ಪ್ರತಿ ಹಳ್ಳಿ, ಪಟ್ಟಣ ಮತ್ತು ಜಿಲ್ಲೆಯಲ್ಲಿ ಈ ಪ್ರಯಾಣವು ಎಲ್ಲರಿಗೂ ಮಾದರಿಯಾಗುತ್ತಿದೆ ಎಂದು ಅವರು ಹೇಳಿದರು. ಜನರು ಉತ್ಸಾಹದಿಂದ ಭಾಗವಹಿಸುವಂತೆ ಒತ್ತಾಯಿಸುತ್ತಾ, ದೇಶ ಮತ್ತು ನಮ್ಮ ಸೈನಿಕರ ಬಗ್ಗೆ ನಮ್ಮ ಹೆಮ್ಮೆ ಮತ್ತು ಗೌರವದ ಸಂಕೇತವಾಗಿ ಪ್ರತಿ ಭಾರತೀಯ ಮನೆಯಲ್ಲೂ ತಿರಂಗವನ್ನು ಹಾರಿಸಬೇಕು ಎಂದು ಆದಿತ್ಯನಾಥ್ ಹೇಳಿದರು.


# ಪವನ್ ಮಧ್ಯ ಪ್ರವೇಶಿಸಬೇಕೆಂದ ಸಿನಿಪ್ರಿಯರು

**ಕೂಲಿ ಸಿನಿಮಾ ಬಿಡುಗಡೆ**

ರಜನೀಕಾಂತ್ ನಟನೆಯ 'ಕೂಲಿ' ಸಿನಿಮಾ ಆಗಸ್ಟ್ 14 ಬಿಡುಗಡೆ ಆಗುತ್ತಿದೆ. ಭಾರತದ ಹಲವು ನಗರಗಳಲ್ಲಿ ಮೊದಲ ದಿನದ ಶೋಗಳು ಮುಂಗಡವಾಗಿ ಬುಕ್ ಆಗಿವೆ. ಆದರೆ ಆಂಧ್ರ ಪ್ರದೇಶದ ಸಿನಿಮಾ ಪ್ರೇಮಿಗಳು ತುಸು ಬೇಸರ ವ್ಯಕ್ತಪಡಿಸಿದ್ದಾರೆ.

ಮಾತ್ರವಲ್ಲದೆ ಪವನ್ ಕಲ್ಯಾಣ್ ಮಧ್ಯ ಪ್ರವೇಶಿಸಬೇಕು ಎಂದು ಮನವಿ ಮಾಡಿದ್ದಾರೆ. ರಜನೀಕಾಂತ್ ನಟನೆಯ 'ಕೂಲಿ' ಸಿನಿಮಾ ಬಿಡುಗಡೆಗೆ ಕೆಲವೇ ಗಂಟೆಗಳು ಮಾತ್ರವೇ ಬಾಕಿ ಇದೆ. ಸಿನಿಮಾ ಆಗಸ್ಟ್ 14 ರಂದು ಬಿಡುಗಡೆ ಆಗಲಿದ್ದು, ಬೆಳಿಗ್ಗೆ 5 ಗಂಟೆಯಿಂದಲೇ ಶೋಗಳು ಪ್ರಾರಂಭ ಆಗಲಿವೆ. 'ಕೂಲಿ' ಪ್ಯಾನ್ ಇಂಡಿಯಾ ಸಿನಿಮಾ ಆಗಿದ್ದು, ತಮಿಳು, ಕನ್ನಡ, ತೆಲುಗು, ಮಲಯಾಳಂ ಮತ್ತು ಹಿಂದಿ ಭಾಷೆಗಳಲ್ಲಿ ಈ ಸಿನಿಮಾ ಬಿಡುಗಡೆ ಆಗುತ್ತಿದೆ. ಸಿನಿಮಾದ ಅಡ್ವಾನ್ಸ್ ಬುಕಿಂಗ್ ಜೋರಾಗಿ ನಡೆದಿದ್ದು ಹಲವು ಪ್ರಮುಖ ನಗರಗಳಲ್ಲಿ ಸಿನಿಮಾದ ಬಹುತೇಕ ಶೋಗಳು ಮುಂಚಿತವಾಗಿ ಸೋಲ್ಡ್ ಔಟ್ ಆಗಿವೆ.

ಆದರೆ ತೆಲುಗು ರಾಜ್ಯಗಳಲ್ಲಿ ಮಾತ್ರ 'ಕೂಲಿ' ಸಿನಿಮಾ ಬಿಡುಗಡೆ ಸಮಯದಲ್ಲಿ ಸಿನಿಮಾ ಪ್ರೇಮಿಗಳು ಪವನ್ ಕಲ್ಯಾಣ್ ಅವರನ್ನು ನೆನಪಿಸಿಕೊಳ್ಳುತ್ತಿದ್ದು, ಮನವಿಯೊಂದನ್ನು ಮಾಡುತ್ತಿದ್ದಾರೆ. 'ಕೂಲಿ' ಸಿನಿಮಾ ಆಂಧ್ರ ಮತ್ತು ತೆಲಂಗಾಣಗಳಲ್ಲಿಯೂ ದೊಡ್ಡ ಮಟ್ಟದಲ್ಲಿಯೇ ಬಿಡುಗಡೆ ಆಗುತ್ತಿದೆ. ಆಂಧ್ರ ಪ್ರದೇಶದಲ್ಲಿ ಸಿನಿಮಾದ ಟಿಕೆಟ್ ದರ ಹೆಚ್ಚಳಕ್ಕೆ ಅನುಮತಿಯೂ ಸಹ ದೊರೆತಿದೆ. ಇದೇ ಕಾರಣಕ್ಕೆ ಆಂಧ್ರ ಮತ್ತು ತೆಲಂಗಾಣಗಳಲ್ಲಿ 'ಕೂಲಿ' ಸಿನಿಮಾದ ಟಿಕೆಟ್ ದರ ಬಹಳ ಹೆಚ್ಚಾಗಿದೆ. ಸಿನಿಮಾದ ಸರಾಸರಿ ಟಿಕೆಟ್ ಬೆಲೆಯೇ 350 ರಿಂದ 400 ರೂಪಾಯಿಗಳಾಗಿವೆ.



# ಸುದೀಪ್ ಮೌಲ್ಯಯುತ ಸಲಹೆ


ಬೀದಿನಾಯಿಗಳನ್ನು ಸ್ಥಳಾಂತರಿಸುವ ಬಗ್ಗೆ ಸುಪ್ರೀಂಕೋರ್ಟ್ ನೀಡಿರುವ ಆದೇಶದ ಬಗ್ಗೆ ದೇಶದಾದ್ಯಂತ ಚರ್ಚೆ ಎದ್ದಿದೆ. ಪರ-ವಿರೋಧ ಚರ್ಚೆಗಳು ಚಾಲ್ತಿಯಲ್ಲಿವೆ. ಹಲವು ರಾಜಕಾರಣಿಗಳು, ನಟ-ನಟಿಯರು ಈ ಬಗ್ಗೆ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡಿದ್ದಾರೆ. ಇದೀಗ ನಟ ಸುದೀಪ್ ಬೀದಿ ಶ್ವಾನಗಳ ಕುರಿತು ಒಂದೊಳ್ಳೆ ಸಲಹೆ ನೀಡಿದ್ದಾರೆ.

ದೇಶದೆಲ್ಲೆಡೆ ಈಗ ನಾಯಿಗಳದ್ದೇ ಚರ್ಚೆ. ಆಗಸ್ಟ್ 11 ರಂದು ಸುಪ್ರೀಂಕೋರ್ಟ್ ನೀಡಿರುವ ಆದೇಶ ಹಲವು ರೀತಿಯ ಪರ-ವಿರೋಧ ಚರ್ಚೆಗಳನ್ನು ಹುಟ್ಟುಹಾಕಿದೆ. ದೆಹಲಿಯಲ್ಲಿ ಹೆಚ್ಚಾದ ನಾಯಿ ದಾಳಿ ಪ್ರಕರಣವನ್ನು ಗಮನಿಸಿ ಸುಮೋಟೊ ಪ್ರಕರಣ ದಾಖಲಿಸಿಕೊಂಡಿದ್ದು ಸುಪ್ರೀಂಕೋರ್ಟ್, ಆಗಸ್ಟ್ 11 ರಂದು ಆದೇಶವೊಂದನ್ನು ಪ್ರಕಟಿಸಿದೆ.

ದೆಹಲಿ ಸರ್ಕಾರವು, ದೆಹಲಿಯಲ್ಲಿರುವ ಎಲ್ಲಾ ಬೀದಿನಾಯಿಗಳನ್ನು ಸ್ಥಳಾಂತರಗೊಳಿಸಿ ಅವುಗಳಿಗೆ ನೆಲೆ ಕಲ್ಪಿಸಬೇಕು ಎಂದಿದೆ

ಸಿಎಂ ರೇಖಾ ಗುಪ್ತಾ ಅವರು, ಸುಪ್ರೀಂ ಆದೇಶವನ್ನು ಪಾಲಿಸುವುದಾಗಿ ಹೇಳಿದ್ದಾರೆ. ಸುಪ್ರೀಂಕೋರ್ಟ್ ಆದೇಶದ ಬಗ್ಗೆ ಪರ-ವಿರೋಧ ಚರ್ಚೆಗಳು ನಡೆಯುತ್ತಿವೆ. ಶ್ವಾನಪ್ರಿಯರು ಸುಪ್ರೀಂಕೋರ್ಟ್ ಆದೇಶವನ್ನು ಅರ್ಥಹೀನ, ಮಾನವೀಯತೆ ರಹಿತ, ಅವಸರದ ತೀರ್ಪು ಎಂದು ಟೀಕಿಸಿದ್ದಾರೆ. ಇನ್ನು ಕೆಲವರು ಸುಪ್ರೀಂ ಆದೇಶವನ್ನು ಸ್ವಾಗತಿಸಿದ್ದಾರೆ.

ಕರ್ನಾಟಕದಲ್ಲಿಯೂ ಸುಪ್ರೀಂಕೋರ್ಟ್ ಆದೇಶದ ಬಗ್ಗೆ ಜೋರಾದ ಚರ್ಚೆಗಳು ಸಾಮಾಜಿಕ ಜಾಲತಾಣ, ಮಾಧ್ಯಮಗಳಲ್ಲಿ ನಡೆಯುತ್ತಿವೆ.



# ಒಟ್ಟಿಗೆ ನಟಿಸಲಿದ್ದಾರೆ ರಾಜ್, ರಕ್ಷಿತ್, ರಿಷಬ್

ರಾಜ್ ಬಿ ಶೆಟ್ಟಿ, ರಿಷಬ್ ಶೆಟ್ಟಿ ಮತ್ತು ರಕ್ಷಿತ್ ಶೆಟ್ಟಿ ಒಟ್ಟಿಗೆ ಸಿನಿಮಾ ಮಾಡುವ ಬಗ್ಗೆ ಅಭಿಮಾನಿಗಳಲ್ಲಿ ಬಹಳ ನಿರೀಕ್ಷೆ ಇದೆ. ಆದರೆ, ರಾಜ್ ಬಿ ಶೆಟ್ಟಿ ಇತ್ತೀಚೆಗೆ ನೀಡಿದ ಸಂದರ್ಶನದಲ್ಲಿ, ಈ ಮೂವರೂ ಒಟ್ಟಿಗೆ ಸಿನಿಮಾ ಮಾಡುವುದು ಸದ್ಯಕ್ಕೆ ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ರಿಷಬ್ ಮತ್ತು ರಕ್ಷಿತ್ ಇಬ್ಬರೂ ತಮ್ಮದೇ ಆದ ಚಿತ್ರಗಳಲ್ಲಿ ಬ್ಯುಸಿ ಇದ್ದಾರೆ ಎಂದು ಅವರು ತಿಳಿಸಿದ್ದಾರೆ. ರಾಜ್ ಬಿ. ಶೆಟ್ಟಿ ಅವರು 'ಸು ಫ್ರಮ್ ಸೋ' ಸಿನಿಮಾದ ಯಶಸ್ಸಿನ ಅಲೆಯಲ್ಲಿ ತೇಲುತ್ತಿದ್ದಾರೆ. ಈ ಸಿನಿಮಾ ಪರಭಾಷೆಯಲ್ಲೂ ಮೆಚ್ಚುಗೆ ಪಡೆದಿದೆ. ಅವರು ಹೋದಲ್ಲಿ, ಬಂದಲ್ಲಿ 'ಆರ್‌ಆರ್‌ಆರ್' ಬಗ್ಗೆ ಕೇಳಲಾಗುತ್ತಿದೆ. ಹಾಗಂತ ರಾಜಮೌಳಿ ಸಿನಿಮಾ ಬಗ್ಗೆ ಅಲ್ಲ. ರಕ್ಷಿತ್, ರಿಷಬ್ ಹಾಗೂ ರಾಜ್ ಬಿ ಶೆಟ್ಟಿ ಕಾಂಬಿನೇಷನ್ ಬಗ್ಗೆ. ಮೂವರು ಒಟ್ಟಾಗಿ ಸಿನಿಮಾ ಮಾಡೋದು ಯಾವಾಗ ಎಂದು ಕೇಳಲಾಯಿತು. ಇದಕ್ಕೆ ಅವರು ಉತ್ತರ ನೀಡಿದ್ದಾರೆ. ರಾಜ್ ಬಿ ಶೆಟ್ಟಿ ಅವರು ರಿಷಬ್ ಜೊತೆ 'ಗರುಡ ಗಮನ ವೃಷಭ ವಾಹನ' ಸಿನಿಮಾ ಮಾಡಿದ್ದಾರೆ. ರಿಷಬ್ ಹಾಗೂ ರಕ್ಷಿತ್ 'ಕಿರಿಕ್ ಪಾರ್ಟಿ' ಮೊದಲಾದ ಚಿತ್ರಗಳಲ್ಲಿ ಒಟ್ಟಾಗಿ ಕೆಲಸ ಮಾಡಿದ್ದಾರೆ. ಇನ್ನು ರಕ್ಷಿತ್ ಹಾಗೂ ರಾಜ್ ಕೂಡ ಒಟ್ಟಾಗಿ ನಟಿಸಿದ್ದಾರೆ. ಆದರೆ, ಈ ಮೂವರು ಒಂದೇ ಸಿನಿಮಾದಲ್ಲಿ ಕೆಲಸ ಮಾಡಿಲ್ಲ. ಇದು ಯಾವಾಗ ಎನ್ನುವ ಪ್ರಶ್ನೆ ಅಭಿಮಾನಿಗಳಿಗೆ ಮೂಡಿತ್ತು. ಇದಕ್ಕೆ ರಾಜ್ ಉತ್ತರಿಸಿದ್ದಾರೆ. ಆದರೆ, ಇದು ಸದ್ಯಕ್ಕಂತೂ ಸೆಟ್ಟೇರಲ್ಲ ಎಂದಿದ್ದಾರೆ. ಸಂದರ್ಶನ ಒಂದರಲ್ಲಿ ರಾಜ್ ಅವರಿಗೆ ಈ ಬಗ್ಗೆ ಪ್ರಶ್ನೆ ಮಾಡಲಾಯಿತು.





# ಕೌನ್ ಬನೇಗಾ ಕರೋಡ್‌ಪತಿಯಲ್ಲಿ ಸಿಂಧೂರ ಅಧಿಕಾರಿಗಳು

ಕೌನ್ ಬನೇಗಾ ಕರೋಡ್‌ಪತಿಯ 17ನೇ ಆವೃತ್ತಿಯಲ್ಲಿ, ಭಾರತೀಯ ಸೇನೆಯ ಮೂವರು ಮಹಿಳಾ ಅಧಿಕಾರಿಗಳು ಭಾಗವಹಿಸಿದ್ದರು. ಅಧಿಕಾರಿಗಳು ಆಪರೇಷನ್ ಸಿಂಧೂರ್ ಬಗ್ಗೆ ಮಾಹಿತಿ ನೀಡಿದ್ದಾರೆ. ಪಾಕಿಸ್ತಾನದ ಭಯೋತ್ಪಾದಕ ದಾಳಿಗೆ ಪ್ರತ್ಯುತ್ತರವಾಗಿ ನಡೆದ ಈ ಕಾರ್ಯಾಚರಣೆಯಲ್ಲಿ ಪಾಕಿಸ್ತಾನವು ಭಾರಿ ನಷ್ಟ ಅನುಭವಿಸಿತು ಎಂದು ಅವರು ಹೇಳಿದ್ದಾರೆ. ಈ ಮಹಿಳಾ ಅಧಿಕಾರಿಗಳು ಕಾರ್ಯಾಚರಣೆಯ ವಿವರಗಳನ್ನು ಹಂಚಿಕೊಂಡಿದ್ದಾರೆ.

'ಕೌನ್ ಬನೇಗಾ ಕರೋಡ್ ಪತಿ 17 ಕಾರ್ಯಕ್ರಮ ಮತ್ತೆ ವೀಕ್ಷಕರ ಮುಂದೆ ಬಂದಿದೆ. ಸ್ವಾತಂತ್ರ್ಯ ದಿನದಂದು ವಿಶೇಷ ಸಂಚಿಕೆ ಪ್ರಸಾರವಾಗಲಿದೆ. ಇದರಲ್ಲಿ ಭಾರತೀಯ ಸಶಸ್ತ್ರ ಪಡೆಗಳ ಮೂವರು ಮಹಿಳಾ ಅಧಿಕಾರಿಗಳು ಬರಲಿದ್ದಾರೆ. ಅವರಲ್ಲಿ ಇಬ್ಬರು ಪಾಕಿಸ್ತಾನದ ವಿರುದ್ಧದ ಆಪರೇಷನ್ ಸಿಂಧೂರ್‌ನ ನೇತೃತ್ವ ವಹಿಸಿದ ಅಧಿಕಾರಿಗಳಾಗಿದ್ದಾರೆ. ಆಗಸ್ಟ್ 15 ರಂದು ಪ್ರಸಾರವಾಗಲಿರುವ ಸಂಚಿಕೆಯಲ್ಲಿ, ಕರ್ನಲ್ ಸೋಫಿಯಾ ಖುರೇಷಿ, ವ್ಯೋಮಿಕಾ ಸಿಂಗ್ ಮತ್ತು ಕಮಾಂಡರ್ ಪ್ರೇರಣಾ ದೇವಸ್ಥಲಿ ಆಪರೇಷನ್ ಸಿಂಧೂರ್ ಬಗ್ಗೆ ಮಾತನಾಡಲಿದ್ದಾರೆ. ಆಗಸ್ಟ್ 15 ರಂದು ಪ್ರಸಾರವಾಗಲಿರುವ ಈ ಸಂಚಿಕೆಯ ಪ್ರೋಮೋ ಬಿಡುಗಡೆಯಾಗಿದೆ.



# ಪೂಜಾ ಹೆಗ್ಡೆ ಆಯ್ಕೆ ಯಾವುದು

**ಬಾಲಿವುಡ್ V/S ದಕ್ಷಿಣ ಚಿತ್ರರಂಗ**

ಪೂಜಾ ಹೆಗ್ಡೆ ಕರ್ನಾಟಕ ಮೂಲದವರಾದರೂ ಬೆಳೆದಿದ್ದೆಲ್ಲ ಮುಂಬೈನಲ್ಲಿ. ಬಾಲಿವುಡ್‌ನ ಹಲವು ಸಿನಿಮಾಗಳಲ್ಲಿ ನಟಿಸಿದ್ದರು ನಟಿ ಹೆಚ್ಚು ಜನಪ್ರಿಯವಾಗಿರುವುದು ದಕ್ಷಿಣ ಭಾರತದ ಸಿನಿಮಾಗಳಲ್ಲಿಯೇ. ಕೆಲವು ಅದ್ಭುತ ಸಿನಿಮಾಗಳಲ್ಲಿ ಪೂಜಾ ನಟಿಸಿದ್ದಾರೆ. ಇದೀಗ ಬಾಲಿವುಡ್ v/s ದಕ್ಷಿಣ ಭಾರತ ಚರ್ಚೆಯಲ್ಲಿ ಪೂಜಾ ಹೆಗ್ಡೆ ಸ್ಪಷ್ಟ ನಿಲುವು ವ್ಯಕ್ತಪಡಿಸಿದ್ದಾರೆ. ಬಾಲಿವುಡ್ ಮತ್ತು ದಕ್ಷಿಣ ಭಾರತ ಚಿತ್ರರಂಗದ ನಡುವೆ ಯಾವುದು ಉತ್ತಮ ಎಂಬ ಬಗ್ಗೆ ಚರ್ಚೆ ಕಳೆದ ಕೆಲ ವರ್ಷಗಳಿಂದ ಚಾಲ್ತಿಯಲ್ಲಿದೆ. ಮೊದಲೆಲ್ಲ ಭಾರತೀಯ ಚಿತ್ರರಂಗ ಎಂದರೆ ಬಾಲಿವುಡ್ ಎಂಬ ಮಾತು ಕೇಳಿ ಬರುತ್ತಿತ್ತು, ಆದರೆ ಇದೀಗ ದಕ್ಷಿಣ ಭಾರತ ಚಿತ್ರರಂಗ, ಬಾಲಿವುಡ್ ಅನ್ನು ಹಿಂದೆ ತಳ್ಳಿದೆ. ಚಿತ್ರರಂಗ ಹಾಗೂ ಬಾಲಿವುಡ್ ಎರಡೂ ಕಡೆ ಬ್ಯುಸಿ ಆಗಿರುವ ನಟ ಮತ್ತು ನಟಿಯರು, ಬಾಲಿವುಡ್ v/s ದಕ್ಷಿಣ ಭಾರತ ಚಿತ್ರರಂಗದ ಚರ್ಚೆ ಬಂದಾಗ ಜಾರು ಹೇಳಿಕೆಗಳನ್ನು ನೀಡುವುದು ಸಾಮಾನ್ಯ. ಆದರೆ ನಟಿ ಪೂಜಾ ಹೆಗ್ಡೆ ಹಾಗೆ ಮಾಡಿಲ್ಲ. ಬಾಲಿವುಡ್ v/s ದಕ್ಷಿಣ ಚಿತ್ರರಂಗದ ಚರ್ಚೆಯಲ್ಲಿ ಅವರ ಉತ್ತರ ಸ್ಪಷ್ಟ.

ತಮಿಳು ಸಿನಿಮಾ ಮೂಲಕ ಎಂಟ್ರಿ ಕೊಟ್ಟ ಹೆಚ್ಚು ಸುದ್ದಿಯಾಗಿದ್ದು ಹೃತಿಕ್ ರೋಷನ್ ಜೊತೆ ನಟಿಸಿದ 'ಮೊಹಂಜೊಧಾರೊ' ಸಿನಿಮಾ ಮೂಲಕ. ಕರ್ನಾಟಕ ಮೂಲದ ಈ ನಟಿ, ಬೆಳೆದಿದ್ದೆಲ್ಲ ಬಾಂಬೆಯಲ್ಲಿಯೇ ಆದರೆ ಪೂಜಾ ಹೆಗ್ಡೆ ಹೆಚ್ಚು ಜನಪ್ರಿಯವಾಗಿರುವುದು ದಕ್ಷಿಣ ಭಾರತ ಚಿತ್ರರಂಗದಲ್ಲೇ. ಅದರಲ್ಲೂ ತೆಲುಗು ಹಾಗೂ ತಮಿಳು ಚಿತ್ರರಂಗದವರ ಬಲು ಮೆಚ್ಚಿನ ನಟಿ. ಹಾಗೆಂದು ಅವರು ಬಾಲಿವುಡ್ ಸಿನಿಮಾಗಳಲ್ಲಿ ನಟಿಸಿಯೇ ಇಲ್ಲವೆಂದೇನಿಲ್ಲ. ದಕ್ಷಿಣ ಭಾರತ ಚಿತ್ರರಂಗಗಳಲ್ಲಿ ನಟಿಸುವ ಜೊತೆ-ಜೊತೆಗೆ ಹಲವು ಬಾಲಿವುಡ್ ಸಿನಿಮಾಗಳಲ್ಲಿಯೂ ನಟಿಸಿದ್ದಾರೆ ಪೂಜಾ.

# ಗಿಲ್‌ಗೆ ಅಗ್ರಸ್ಥಾನ ಜಾರಿದ ಬಾಬರ್

**ಟಾಪ್ 10 ರಲ್ಲಿ ಭಾರತದ ನಾಲ್ವರು**

ವೆಸ್ಟ್ ಇಂಡೀಸ್ ವಿರುದ್ಧದ ಏಕದಿನ ಸರಣಿಯ ನಂತರ ಬಿಡುಗಡೆಯಾದ ಐಸಿಸಿ ಏಕದಿನ ಶ್ರೇಯಾಂಕದಲ್ಲಿ ಗಮನಾರ್ಹ ಬದಲಾವಣೆಗಳಾಗಿವೆ. ಬಾಬರ್ ಆಝಂ ಅವರ ಕಳಪೆ ಪ್ರದರ್ಶನದಿಂದಾಗಿ ಅವರು ಮೂರನೇ ಸ್ಥಾನಕ್ಕೆ ಕುಸಿದಿದ್ದಾರೆ. ರೋಹಿತ್ ಶರ್ಮಾ ಎರಡನೇ ಸ್ಥಾನಕ್ಕೆ ಏರಿದ್ದಾರೆ, ಶುಭ್ಮನ್ ಗಿಲ್ ಅಗ್ರಸ್ಥಾನದಲ್ಲಿದ್ದಾರೆ.

**ಭಾರತದ ನಾಲ್ವರು ಆಟಗಾರರು.**

ವೆಸ್ಟ್ ಇಂಡೀಸ್ ಹಾಗೂ ಪಾಕಿಸ್ತಾನ ನಡುವಿನ ಏಕದಿನ ಸರಣಿಯ ನಂತರ ಇದೀಗ ಬಿಡುಗಡೆಯಾಗಿರುವ ಐಸಿಸಿ ನೂತನ ಏಕದಿನ ರ್ಯಾಂಕಿಂಗ್ ಪಟ್ಟಿಯಲ್ಲಿ ಸಾಕಷ್ಟು ಬದಲಾವಣೆಗಳಾಗಿವೆ. ಇತ್ತೀಚೆಗೆ ಮುಕ್ತಾಯಗೊಂಡ ವೆಸ್ಟ್ ಇಂಡೀಸ್ ವಿರುದ್ಧದ ಮೂರು ಪಂದ್ಯಗಳ ಏಕದಿನ ಸರಣಿಯಲ್ಲಿ ಪಾಕಿಸ್ತಾನದ ಅನುಭವಿ ಬ್ಯಾಟ್ಸ್‌ಮನ್ ಬಾಬರ್ ಆಝಂ ಅವರ ಪ್ರದರ್ಶನವು ತುಂಬಾ ಕಳಪೆಯಾಗಿತ್ತು. ಆಡಿದ ಮೂರು ಪಂದ್ಯಗಳಲ್ಲಿ ಕೇವಲ 56 ರನ್‌ಗಳನ್ನು ಕಲೆಹಾಕಿದ್ದ ಬಾಬರ್ ಒಂದು ಸ್ಥಾನವನ್ನು ಕಳೆದುಕೊಂಡಿದ್ದರೆ, ಇತ್ತ ಯಾವುದೇ ಪಂದ್ಯವನ್ನಾಡದ ಕಳಪೆ ಭಾರತ ಏಕದಿನ ತಂಡದ ನಾಯಕ ರೋಹಿತ್ ಶರ್ಮಾ ಮುಂಬಡ್ತಿ ಪಡೆದುಕೊಂಡಿದ್ದಾರೆ. ಅಂದರೆ ಐಸಿಸಿ ಏಕದಿನ ಶ್ರೇಯಾಂಕದಲ್ಲಿ ರೋಹಿತ್ ಶರ್ಮಾ ಎರಡನೇ ಸ್ಥಾನಕ್ಕೆ ತಲುಪಿದ್ದರೆ, ಬಾಬರ್ ಮೂರನೇ ಸ್ಥಾನಕ್ಕೆ ಕುಸಿದಿದ್ದಾರೆ. ಭಾರತ ಟೆಸ್ಟ್ ತಂಡದ ನಾಯಕ ಶುಭ್‌ಮನ್ ಗಿಲ್, ಏಕದಿನ ರ್ಯಾಂಕಿಂಗ್‌ನಲ್ಲಿ 784 ರೇಟಿಂಗ್‌ನೊಂದಿಗೆ ಅಗ್ರಸ್ಥಾನದಲ್ಲಿದ್ದರೆ, ನಾಯಕ ರೋಹಿತ್ ಶರ್ಮಾ 756 ರೇಟಿಂಗ್‌ನೊಂದಿಗೆ ಇದೀಗ ಎರಡನೇ ಸ್ಥಾನವನ್ನು ಪಡೆದುಕೊಂಡಿದ್ದಾರೆ.

ವಾಸ್ತವವಾಗಿ ಚಾಂಪಿಯನ್ಸ್ ಟ್ರೋಫಿ ಬಳಿಕ ಶುಭ್‌ಮನ್ ಗಿಲ್ ಆಗಲಿ ರೋಹಿತ್ ಆಗಲಿ ಯಾವುದೇ ಏಕದಿನ ಪಂದ್ಯವನ್ನಾಡಿಲ್ಲ.

ಆದಾಗ್ಯೂ 2025 ರ ಚಾಂಪಿಯನ್ಸ್ ಟ್ರೋಫಿಯಲ್ಲಿ ಗಮನಾರ್ಹ ಪ್ರದರ್ಶನ ನೀಡಿದ್ದ ಶುಭ್‌ಮನ್ ಗಿಲ್ 5 ಪಂದ್ಯಗಳಲ್ಲಿ 47 ರ ಸರಾಸರಿಯಲ್ಲಿ 188 ರನ್ ಗಳಿಸಿದರೆ, ರೋಹಿತ್ ಶರ್ಮಾ ಐದು ಪಂದ್ಯಗಳಲ್ಲಿ 36 ರ ಸರಾಸರಿಯಲ್ಲಿ 180 ರನ್ ಗಳಿಸಿದ್ದರು. ವಾಸ್ತವವಾಗಿ ಬಾಬರ್ ಆಝಂ ಈ ಹಿಂದಿನ ಶ್ರೇಯಾಂಕದಲ್ಲಿ ಎರಡನೇ ಸ್ಥಾನದಲ್ಲಿದ್ದರು, ಆದರೆ ವೆಸ್ಟ್ ಇಂಡೀಸ್ ವಿರುದ್ಧದ ಏಕದಿನ ಸರಣಿಯಲ್ಲಿ ಅವರ ಪ್ರದರ್ಶನ ತುಂಬಾ ಕಳಪೆಯಾಗಿತ್ತು.

ಹೀಗಾಗಿ ಬಾಬರ್ ಅವರ ಸರಾಸರಿ ಕುಸಿದಿರುವುದು ಮಾತ್ರವಲ್ಲದೆ, ಶ್ರೇಯಾಂಕದಲ್ಲಿಯೂ ಕುಸಿದಿದ್ದಾರೆ.

ಬಾಬರ್ ಅವರ ರೇಟಿಂಗ್ ಈಗ 751 ಕ್ಕೆ ಇಳಿದಿದೆ. ಬಾಬರ್ ಇದೇ ರೀತಿಯ ಪ್ರದರ್ಶನವನ್ನು ಮುಂದುವರಿಸಿದರೆ, ವಿರಾಟ್ ಕೊಹ್ಲಿ ಕೂಡ ಅವರನ್ನು ಹಿಂದಿಕ್ಕುತ್ತಾರೆ. ಇದೀಗ ಶ್ರೇಯಾಂಕದಲ್ಲಿ ಮೂರನೇ ಸ್ಥಾನಕ್ಕೆ ಕುಸಿದಿರುವ ಪಾಕಿಸ್ತಾನದ ಬಾಬರ್ ಆಝಂ 751 ರೇಟಿಂಗ್ ಪಾಯಿಂಟ್ಸ್ ಪಡೆದಿದ್ದರೆ, ನಾಲ್ಕನೇ ಸ್ಥಾನದಲ್ಲಿರುವ ವಿರಾಟ್ ಕೊಹ್ಲಿ 736 ರೇಟಿಂಗ್ ಪಾಯಿಂಟ್ಸ್ ಹೊಂದಿದ್ದಾರೆ.



# ಮಾಜಿ ಕ್ರಿಕೆಟಿಗ ರೈನಾಗೆ ಸಂಕಷ್ಟ

**ಜಾರಿ ನಿರ್ದೇಶನಾಲಯ ಸಮನ್ಸ್ ಜಾರಿ**

ಅಕ್ರಮ ಬೆಟ್ಟಿಂಗ್ ವೇದಿಕೆಗಳ ಕುರಿತು ನಡೆಯುತ್ತಿರುವ ತನಿಖೆಗೆ ಸಂಬಂಧಿಸಿದಂತೆ ಭಾರತದ ಮಾಜಿ ಕ್ರಿಕೆಟಿಗ ಸುರೇಶ್ ರೈನಾ ಅವರನ್ನು ಬುಧವಾರ ದೆಹಲಿಯ ಕಚೇರಿಗೆ ವಿಚಾರಣೆಗೆ ಒಳಪಡಿಸಲು ಜಾರಿ ನಿರ್ದೇಶನಾಲಯ ಸಮನ್ಸ್ ಜಾರಿ ಮಾಡಿದೆ. 1ಥಃಜಣ ಹೆಸರಿನ ಅಪ್ಲಿಕೇಶನ್‌ಗೆ ಸಂಬಂಧಿಸಿದ ಅಕ್ರಮ ಬೆಟ್ಟಿಂಗ್ ಪ್ರಕರಣದಲ್ಲಿ ಆಗಸ್ಟ್ 13 ರಂದು ಏಜೆನ್ಸಿಯ ಮುಂದೆ ಹಾಜರಾಗಲು ರೈನಾ ಅವರನ್ನು ಕೇಳಲಾಗಿದೆ.

ಮಾಜಿ ಭಾರತೀಯ ಕ್ರಿಕೆಟ್ ತಂಡದ ಆಟಗಾರ ಸುರೇಶ್ ರೈನಾ ಅವರಿಗೆ ಜಾರಿ ನಿರ್ದೇಶನಾಲಯ ಸಮನ್ಸ್ ಜಾರಿ ಮಾಡಿದೆ. ರೈನಾ ವಿಚಾರಣೆಗಾಗಿ ಇಡಿ ಮುಂದೆ ಹಾಜರಾಗಬೇಕಾಗುತ್ತದೆ. ಬೆಟ್ಟಿಂಗ್ ಆಯಪ್ ಪ್ರಕರಣದಲ್ಲಿ ಸುರೇಶ್ ರೈನಾ ಅವರ ಈ ವಿಚಾರಣೆ ನಡೆಯಬೇಕಿದೆ. ಹೀಗಾಗಿ ರೈನಾ ಇಂದು ಬುಧವಾರ ಏಜೆನ್ಸಿಯ ಮುಂದೆ ಹಾಜರಾಗುವ ನಿರೀಕ್ಷೆಯಿದೆ.

ಅಕ್ರಮ ಬೆಟ್ಟಿಂಗ್ ಆಯಪ್‌ಗಳು ಮತ್ತು ಪ್ಲಾಟ್‌ಫಾರ್ಮ್‌ಗಳ ಮೇಲಿನ ಕ್ರಮದ ಭಾಗವಾಗಿ ರೈನಾಗೆ ಈ ಸಮನ್ಸ್ ಬಂದಿದೆ. ಆನ್‌ಲೈನ್ ವೇದಿಕೆಗಳು ಬಳಕೆದಾರರನ್ನು ವಂಚಿಸುವ ಮತ್ತು ಹಣ ಅಕ್ರಮವಾಗಿ ವರ್ಗಾವಣೆ ಮಾಡುವ ಬಗ್ಗೆ ವ್ಯಾಪಕ ತನಿಖೆಯ ಭಾಗವಾಗಿ ಇಡಿ ಅನೇಕ ನಗರಗಳಲ್ಲಿ ವಿವಿಧ ಪ್ರಕರಣಗಳನ್ನು ಅನುಸರಿಸುತ್ತಿದೆ. 1ಥಃಜಣ ಹೆಸರಿನ ಅಪ್ಲಿಕೇಶನ್‌ಗೆ ಸಂಬಂಧಿಸಿದ ಅಕ್ರಮ ಬೆಟ್ಟಿಂಗ್ ಪ್ರಕರಣದಲ್ಲಿ ಆಗಸ್ಟ್ 13 ರಂದು ಏಜೆನ್ಸಿಯ ಮುಂದೆ ಹಾಜರಾಗಲು ರೈನಾ ಅವರನ್ನು ಕೇಳಲಾಗಿದೆ. ಅನೇಕ ಮಾಜಿ ಕ್ರಿಕೆಟಿಗರು ಬೆಟ್ಟಿಂಗ್ ಆ್ಯಪ್‌ಗಳಲ್ಲಿ ಜಾಹೀರಾತು ನೀಡುತ್ತಿರುವುದು ಕಂಡುಬಂದಿದೆ, ಅವರಲ್ಲಿ ಸುರೇಶ್ ರೈನಾ ಕೂಡ ಇದ್ದಾರೆ. ಇದೇ ಕಾರಣಕ್ಕೆ ಅವರಿಗೆ ಸಮನ್ಸ್ ನೀಡಲಾಗಿದೆ. ಮೇ ತಿಂಗಳಲ್ಲಿ ತೆಲಂಗಾಣ ಪೊಲೀಸರು ರಾಣಾ ದಗ್ಗುಬಾಟಿ ಮತ್ತು ಪ್ರಕಾಶ್ ರಾಜ್ ಸೇರಿದಂತೆ 25 ನಟರ ವಿರುದ್ಧ ಪ್ರಕರಣಗಳನ್ನು ದಾಖಲಿಸಿದ್ದಾರೆ.

ರನ್ ಸರದಾರರ ಪಟ್ಟಿಯಲ್ಲಿ ಕೊಹ್ಲಿಯನ್ನೇ ಹಿಂದಿಕ್ಕಿದ ಡೇವಿಡ್ ವಾರ್ನರ್ ವಿಚಾರಣೆಯ ಸಮಯದಲ್ಲಿ, ಇಬ್ಬರೂ ನಟರು ತಪ್ಪನ್ನು ಒಪ್ಪಿ ಇನ್ನು ಮುಂದೆ ಅಂತಹ ಪ್ಲಾಟ್‌ಫಾರ್ಮ್‌ಗಳನ್ನು ಬೆಂಬಲಿಸುವುದಿಲ್ಲ ಮತ್ತು ಪ್ರಚಾರ ಮಾಡುವುದಿಲ್ಲ ಎಂದು ಹೇಳಿದ್ದಾರೆ. ಆನ್‌ಲೈನ್ ಬೆಟ್ಟಿಂಗ್ ಪ್ಲಾಟ್‌ಫಾರ್ಮ್‌ಗಳ ಅಕ್ರಮ ಪ್ರಚಾರದ ಆರೋಪದ ಕುರಿತು ನಡೆಯುತ್ತಿರುವ ತನಿಖೆಗೆ ಸಂಬಂಧಿಸಿದಂತೆ ಸೋಮವಾರ, ರಾಣಾ ದಗ್ಗುಬಾಟಿ ಹೈದರಾಬಾದ್‌ನಲ್ಲಿರುವ ಜಾರಿ ನಿರ್ದೇಶನಾಲಯದ ಮುಂದೆ ಹಾಜರಾದರು. ಜುಲೈ 23 ರಂದು ಅವರಿಗೆ ಈ ಹಿಂದೆ ಸಮನ್ಸ್ ನೀಡಲಾಗಿತ್ತು, ಆದರೆ ಅವರು ಚಲನಚಿತ್ರ ಬದ್ಧತೆಗಳನ್ನು ಉಲ್ಲೇಖಿಸಿ ಹೆಚ್ಚಿನ ಸಮಯವನ್ನು ಕೋರಿದರು, ನಂತರ ಅವರ ಹಾಜರಾತಿಯನ್ನು ಆಗಸ್ಟ್ 11 ಕ್ಕೆ ನಿಗದಿಪಡಿಸಲಾಯಿತು. ಇಡಿ ದಾಖಲಿಸಿರುವ ಎಫ್ ಐಆರ್‌ನಲ್ಲಿ ಸೆಲೆಬ್ರಿಟಿಗಳ ಹಣಕಾಸು ವಹಿವಾಟು ಮತ್ತು ಡಿಜಿಟಲ್ ಜಾಡುಗಳ ಬಗ್ಗೆಯೂ ತನಿಖೆ ನಡೆಯುತ್ತಿದೆ.






# ವೆಸ್ಟ್ ಇಂಡೀಸ್‌ಗೆ ಏಕದಿನ ಸರಣಿ

**202 ರನ್‌ಗಳಿಂದ ಸೋತ ಪಾಕಿಸ್ತಾನ**

ವೆಸ್ಟ್ ಇಂಡೀಸ್ ತಂಡವು ಪಾಕಿಸ್ತಾನ ವಿರುದ್ಧದ ಮೂರು ಪಂದ್ಯಗಳ ಏಕದಿನ ಸರಣಿಯನ್ನು 2-1 ಅಂತರದಿಂದ ಗೆದ್ದುಕೊಂಡಿದೆ. ಶಾಯ್ ಹೋಪ್ ಅವರ ಅಜೇಯ ಶತಕದ ನೆರವಿನಿಂದ ಮೂರನೇ ಪಂದ್ಯದಲ್ಲಿ 202 ರನ್‌ಗಳ ಭರ್ಜರಿ ಜಯ ಸಾಧಿಸಿತು. ಪಾಕಿಸ್ತಾನದ ಬ್ಯಾಟಿಂಗ್ ಕುಸಿದು ಬಿದ್ದಿದ್ದು, ಐದು ಆಟಗಾರರು ಖಾತೆ ತೆರೆಯದೆ ಔಟ್ ಆದರು. ಜೇಡೆನ್ ಸೀಲ್ಸ್ ಸರಣಿ ಶ್ರೇಷ್ಠ ಪ್ರಶಸ್ತಿ ಪಡೆದರು. ಮೂರು ಪಂದ್ಯಗಳ ಟಿ20 ಹಾಗೂ ಮೂರು ಪಂದ್ಯಗಳ ಏಕದಿನ ಸರಣಿಗಾಗಿ ವೆಸ್ಟ್ ಇಂಡೀಸ್ ಪ್ರವಾಸ ಮಾಡಿದ್ದ ಪಾಕಿಸ್ತಾನ ತಂಡ ಟಿ20 ಸರಣಿಯನ್ನು 2-1 ಅಂತರದಿಂದ ವಶಪಡಿಸಿಕೊಂಡರೆ, ಏಕದಿನ ಸರಣಿಯನ್ನು 2-1 ಅಂತರದಿಂದ ಕಳೆದುಕೊಂಡಿದೆ. ಟ್ರಿನಿಡಾಡ್‌ನ ಬ್ರಿಯಾನ್ ಲಾರಾ ಕ್ರೀಡಾಂಗಣದಲ್ಲಿ ನಡೆದ ಮೂರನೇ ಮತ್ತು ನಿರ್ಣಾಯಕ ಏಕದಿನ ಪಂದ್ಯದಲ್ಲಿ ವೆಸ್ಟ್ ಇಂಡೀಸ್, ಪಾಕಿಸ್ತಾನವನ್ನು ಬರೋಬ್ಬರಿ 202 ರನ್‌ಗಳಿಂದ ಸೋಲಿಸಿ ಸರಣಿಯನ್ನು 2-1 ಅಂತರದಿಂದ ಗೆದ್ದುಕೊಂಡಿತು. ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ವೆಸ್ಟ್ ಇಂಡೀಸ್, ನಾಯಕ ಶಾಯ್ ಹೋಪ್ ಅವರ ಅಜೇಯ ಶತಕದ ಆಧಾರದ ಮೇಲೆ 50 ಓವರ್‌ಗಳಲ್ಲಿ ಆರು ವಿಕೆಟ್‌ಗಳಿಗೆ 294 ರನ್ ಗಳಿಸಿತು. ಇದಕ್ಕೆ ಉತ್ತರವಾಗಿ, ಮೊಹಮ್ಮದ್ ರಿಜ್ವಾನ್ ನೇತೃತ್ವದ ಪಾಕಿಸ್ತಾನ ತಂಡವು 29.2 ಓವರ್‌ಗಳಲ್ಲಿ ಕೇವಲ 92 ರನ್‌ಗಳಿಗೆ ಆಲೌಟ್ ಆಯಿತು. ಮೂರು ಪಂದ್ಯಗಳ ಏಕದಿನ ಸರಣಿಯ ಮೊದಲ ಪಂದ್ಯವನ್ನು ಪಾಕಿಸ್ತಾನ ಐದು ವಿಕೆಟ್‌ಗಳಿಂದ ಗೆದ್ದುಕೊಂಡಿತು. ಇದಾದ ನಂತರ, ವೆಸ್ಟ್ ಇಂಡೀಸ್ ಎರಡನೇ ಏಕದಿನ ಪಂದ್ಯದಲ್ಲಿ ಡಕ್‌ವರ್ತ್ ಲೂಯಿಸ್ ನಿಯಮದಡಿಯಲ್ಲಿ ಐದು ವಿಕೆಟ್‌ಗಳ ಗೆಲುವು ಸಾಧಿಸಿತ್ತು. ಇದೀಗ ಮೂರನೇ ಏಕದಿನ ಪಂದ್ಯ ಗೆದ್ದಿರುವ ವೆಸ್ಟ್ ಇಂಡೀಸ್, ಪಾಕಿಸ್ತಾನ ವಿರುದ್ಧದ ಟಿ20 ಸರಣಿಯಲ್ಲಿನ ಸೋಲಿಗೆ ಸೇಡು ತೀರಿಸಿಕೊಂಡಿದೆ.



# ಆಸೀಸ್ ವಿರುದ್ಧ ಬೇಬಿ ಎಬಿ ಸಿಡಿಲಬ್ಬರದ ಶತಕ

**ಟೀಂ ಇಂಡಿಯಾದ ವಿಶ್ವ ದಾಖಲೆ ಸೇಫ್**

ಆಸ್ಟ್ರೇಲಿಯಾ ಪ್ರವಾಸದಲ್ಲಿರುವ ದಕ್ಷಿಣ ಆಫ್ರಿಕಾ ತಂಡವು ಎರಡನೇ ಟಿ20 ಪಂದ್ಯದಲ್ಲಿ ಆಸ್ಟ್ರೇಲಿಯಾವನ್ನು 53 ರನ್‌ಗಳಿಂದ ಸೋಲಿಸಿದೆ. ಡೆವಾಲ್ಡ್ ಬ್ರೆವಿಸ್ ಅವರ ಅದ್ಭುತ 125 ರನ್‌ಗಳ ಅಜೇಯ ಶತಕದಿಂದ ದಕ್ಷಿಣ ಆಫ್ರಿಕಾ 218 ರನ್ ಗಳಿಸಿತು. ಬಾಷ್-ಎಂಫಾಕಾ ಅವರ ಅದ್ಭುತ ಬೌಲಿಂಗ್‌ನಿಂದ ಆಸ್ಟ್ರೇಲಿಯಾ 165 ರನ್‌ಗಳಿಗೆ ಆಲೌಟ್ ಆಯಿತು. ಈ ಗೆಲುವಿನೊಂದಿಗೆ ಮೂರು ಪಂದ್ಯಗಳ ಟಿ20 ಸರಣಿ 1-1ರಲ್ಲಿ ಸಮಬಲ ಸಾಧಿಸಿದೆ. ಟಿ20 ಹಾಗೂ ಏಕದಿನ ಸರಣಿಗಾಗಿ ದಕ್ಷಿಣ ಆಫ್ರಿಕಾ ತಂಡ ಪ್ರಸ್ತುತ ಆಸ್ಟ್ರೇಲಿಯಾ ಪ್ರವಾಸದಲ್ಲಿದೆ. ಉಭಯ ತಂಡಗಳ ನಡುವೆ ಮೂರು ಪಂದ್ಯಗಳ ಟಿ20 ಸರಣಿ ನಡೆಯುತ್ತಿದ್ದು, ಮೊದಲ ಪಂದ್ಯದಲ್ಲಿ ಆತಿಥೇಯ ಆಸ್ಟ್ರೇಲಿಯಾ ಗೆಲುವು ಸಾಧಿಸಿತ್ತು. ಇದೀಗ ಎರಡನೇ ಟಿ20 ಪಂದ್ಯದಲ್ಲಿ ಅದ್ಭುತ ಪುನರಾಗಮನ ಮಾಡಿದ ದಕ್ಷಿಣ ಆಫ್ರಿಕಾ, ಆಸ್ಟ್ರೇಲಿಯಾವನ್ನು ಬರೋಬ್ಬರಿ 53 ರನ್‌ಗಳಿಂದ ಸೋಲಿಸಿದೆ. ಇದರೊಂದಿಗೆ ಮೂರು ಪಂದ್ಯಗಳ ಟಿ20 ಸರಣಿ 1-1 ರಲ್ಲಿ ಸಮಬಲ ಸಾಧಿಸಿದೆ. ಆಫ್ರಿಕಾ ಪರ ಅಬ್ಬರಿಸಿದ 22 ವರ್ಷದ ಡೆವಾಲ್ಡ್ ಬ್ರೆವಿಸ್ ಬಿರುಗಾಳಿಯ ಶತಕ ಸಿಡಿಸಿದರು. ಇದರಿಂದಾಗಿ ಮೊದಲು ಬ್ಯಾಟ್ ಮಾಡಿದ ಆಫ್ರಿಕಾ 218 ರನ್ ಕಲೆಹಾಕಿತು. ಈ ಗುರಿ ಬೆನ್ನಟ್ಟಿದ ಆಸ್ಟ್ರೇಲಿಯಾ 165 ರನ್‌ಗಳಿಗೆ ಆಲೌಟ್ ಆಗುವ ಮೂಲಕ ಹೀನಾಯ ಸೋಲು ಅನುಭವಿಸಿತು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966